ಸಂಪುಟ: 22, ಸಂಚಿಕೆ: 24, ಪುಟಗಳು: 8, ಶನಿವಾರ, 2 ನವೆಂಬರ್ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ವೇಣು ಸಾರಥ್ಯದಲ್ಲಿ...

ಕನ್ನಡವೇ ಸತ್ಯ, ಕನ್ನವೇ ನಿತ್ಯ
ಕರುನಾಡ ಜನತೆಗೆ ಕನ್ನಡ ರಾಜ್ಯೋತ್ಸವ,
ದೀಪಾವಳಿ ಹಬ್ಬದ ಶುಭಾಷಯಗಳು...



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines



**ಸುಭಾಷಿತ**

ಕೂರಬೇಡಿ, ನಿಲ್ಲಬೇಡಿ, ಇಳಿಯಬೇಡಿ, ಏರುತ್ತಾಇರಿ.

। ಮಾಸ್ತಿ ವೆಂಕಟೇಶ ಅಯ್ಯಂಗಾರ್

**ಪಂಚಾಂಗ**

(ಶನಿವಾರ 2, ನವೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಶರದೃತು,
- ಆಶ್ವಯುಜ ಮಾಸ, ಕೃಷ್ಣ ಪಕ್ಷ,
- ಅಮಾವಾಸ್ಯೆ ನಂತರ ಪ್ರಥಮಿ,
- ಶುಕ್ರವಾರ, ಸ್ವಾತಿ ನಕ್ಷತ್ರ.
- ರಾಹುಕಾಲ 10:39 ರಿಂದ 12:07
- ಗುಳಿಕಕಾಲ 07:43 ರಿಂದ 09:11
- ಯಮಗಂಡಕಾಲ 03:02 ರಿಂದ 04:30

## ಸಂಕ್ಷಿಪ್ತ ಸುದ್ದಿ

### ಕೆಆರ್ಎಸ್ ಡ್ಯಾಂನ ಹಳೆಯ ಕ್ರಸ್ಟ್ ಗೇಟ್ ಮಾರಾಟ ಮಾಡಲು ಹುನ್ನಾರ



**ಮಂಡ್ಯ:** ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದಲ್ಲಿ ನಿರ್ಮಾಣವಾಗಿರುವ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೆಆರ್ಎಸ್ ಡ್ಯಾಂನ 150 ಕ್ರಸ್ಟ್ ಗೇಟ್ ಗಳನ್ನು ಬದಲು ಮಾಡಲಾಗಿದೆ. ಇದೀಗ ಈ ಹಳೆಯ ಗೇಟ್‌ಗಳನ್ನು ತೂಕದ ಲೆಕ್ಕದಲ್ಲಿ ಮಾರಾಟ ಮಾಡುವ ಹುನ್ನಾರ ಸದ್ದಿಲ್ಲದೆ ನಡೆಯುತ್ತಿದೆ.ಈ 150 ಕ್ರಸ್ಟ್ ಗೇಟ್‌ಗಳ ಪೈಕಿ ಒಂದೊಂದು ಗೇಟ್‌ಗಳು ಸುಮಾರು 650 ಟನ್ ತೂಕ ಬರುತ್ತವೆ. ಇದೀಗ ಒಂದು ಕೆಜಿಗೆ 6 ರೂ.ನಂತೆ 36 ಗೇಟ್‌ಗಳನ್ನು 36 ಲಕ್ಷ ರೂ.ಗೆ ಮಾರಾಟ ಮಾಡುವ ಪ್ರಯತ್ನ ನಡೆದಿದೆ. ಆದ್ರೆ ಈ 36 ಗೇಟ್‌ಗಳ ಮೌಲ್ಯ ಸುಮಾರು 3 ಕೋಟಿ ರೂ.ಗಳಷ್ಟಾಗಲಿದೆ ಎಂದು ಅಂದಾಜಿಸಲಾಗಿದೆ. ಹಾಗಾಗಿ 90 ವರ್ಷದ ಹಳೆಯ ಗೇಟ್‌ಗಳನ್ನು ಮಾರಿ ಕೋಟ್ಯಂತರ ರೂ.ಗಳನ್ನ ಗುಳುಂ ಮಾಡಲು ಅಧಿಕಾರಿಗಳು ಮುಂದಾಗಿದ್ದಾರೆ ಎಂಬ ಸ್ಥಳೀಯರು ಹಾಗೂ ರೈತರಿಂದ ಆಕ್ರೋಶ ವ್ಯಕ್ತವಾಗಿದೆ. ಪುಟ 2

### ಇಸ್ಪೀಟ್ ಅಡ್ಡೆ ಮೇಲೆ ದಾಳಿ ನಡೆಸಿದ ಪೊಲೀಸರ ಮೇಲೆ ಪೆಪ್ಪರ್ ಸ್ಪ್ರೇ



**ಬೆಂಗಳೂರು:** ಇಸ್ಪೀಟ್ ಅಡ್ಡೆ ಮೇಲೆ ದಾಳಿ ನಡೆಸಿದ ಪೊಲೀಸರ ಮೇಲೆಯೇ ಪೆಪ್ಪರ್ ಸ್ಪ್ರೇ ದಾಳಿ ಮಾಡಿರುವ ಘಟನೆ ನಗರದ ಬ್ಯಾಡರಹಳ್ಳಿ ಠಾಣಾ ವ್ಯಾಪ್ತಿಯ ನವಿಲುನಗರದ ಇಟ್ಟಿಗೆ ಗೂಡಿನಲ್ಲಿ ನಡೆದಿದೆ. ರೌಡಿಶೀಟರ್ ಕ್ಯಾಟ್ ರಾಜನ ಸಹಚರರು ಇಸ್ಪೀಟ್ ಅಡ್ಡೆ ನಡೆಸುತ್ತಿದ್ದ ಆರೋಪ ಕೇಳಿಬಂದಿತ್ತು. ಮಾಹಿತಿ ಮೇರೆಗೆ ಇಂದು ಸಂಜೆ ಎಸಿಪಿ ಚಂದನ್ ಟೀಂ ದಾಳಿ ನಡೆಸಿತು. ಸುಮಾರು 30 ಜನ ಲಕ್ಷ ಲಕ್ಷ ಹಣ ಬಾಜಿ ಕಟ್ಟಿ ಇಸ್ಪೀಟ್ ಆಡುತ್ತಿದ್ದರು ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಇಸ್ಪೀಟ್ ಅಡ್ಡೆ ಮೇಲಿನ ದಾಳಿ ವೇಳೆ ಪೊಲೀಸರ ಮೇಲೆ ಆರೋಪಿಗಳು ಪೆಪರ್ ಸ್ಪ್ರೇ ಹೊಡೆದಿದ್ದಾರೆ. ಪುಟ 2

ಹಾಸನಾಂಬೆ ಜಾತ್ರಾ ಮಹೋತ್ಸವಕ್ಕೆ ನಾಳೆ ತೆರೆ

# ಇಂದು ಸಾರ್ವಜನಿಕ ದರ್ಶನ ಅಂತ್ಯ



**ಹಾಸನ:** ವರ್ಷಕ್ಕೊಮ್ಮೆ ಮಾತ್ರ ದರ್ಶನ ಕರುಣಿಸುವ ಅಧಿದೇವತೆ ಹಾಸನಾಂಬೆ ಜಾತ್ರಾ ಮಹೋತ್ಸವಕ್ಕೆ ಇನ್ನೊಂದು ದಿನ ಬಾಕಿಯಿದ್ದು, ನಾಳೆ (ನ.3) ತೆರೆ ಬೀಳಲಿದೆ. ಇಂದು (ನ.2) ಸಾರ್ವಜನಿಕ ದರ್ಶನ ಅಂತ್ಯವಾಗಲಿದೆ.

ಕಳೆದ ಹತ್ತು ದಿನಗಳ ಕಾಲ ನಡೆದ ಹಾಸನಾಂಬೆ ದೇವಿ ಜಾತ್ರಾ ಮಹೋತ್ಸವ ಯಶಸ್ಸು ಕಂಡಿದ್ದು, ಹಲವು ಇಲಾಖೆಗಳು ಶ್ರಮಿಸಿವೆ. ಅ.24ರಿಂದ ಆರಂಭವಾದ ಜಾತ್ರಾ ಮಹೋತ್ಸವದಲ್ಲಿ ಸುಮಾರು 11 ಲಕ್ಷಕ್ಕೂ ಅಧಿಕ ಭಕ್ತರು ದೇವಿ ದರ್ಶನ ಪಡೆದಿದ್ದಾರೆ. ಹದಿಮೂರು ದಿನಗಳ ಜಾತ್ರಾ ಮಹೋತ್ಸವ ಯಶಸ್ವಿಯಾಗಲು ಪೊಲೀಸ್, ಕಂದಾಯ ಇಲಾಖೆ ಸೇರಿದಂತೆ ಹಲವು ಇಲಾಖೆಗಳು ಶ್ರಮಿಸಿವೆ. ಪ್ರಮುಖವಾಗಿ ಪೌರ ಕಾರ್ಮಿಕರು, ಸ್ಕೌಟ್ಸ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳು ಹಗಲಿರುಳು ಎನ್ನದೇ ನಿರಂತರವಾಗಿ ಸೇವೆ ಸಲ್ಲಿಸಿದ್ದಾರೆ.

ಇಡೀ ದೇವಾಲಯದ ಸುತ್ತಮುತ್ತ ಹಾಗೂ ಇಡೀ ನಗರ ಸ್ವಚ್ಛವಾಗಿ ಕಾಣಲು ಪ್ರಮುಖ ಕಾರಣ ಪೌರಕಾರ್ಮಿಕರು. ಮೂರು ಪಾಳಿಯಲ್ಲಿ 400 ಮಂದಿ ಬೆಳಗ್ಗೆ 4 ಗಂಟೆಯಿಂದ ಮಧ್ಯರಾತ್ರಿ 3 ಗಂಟೆಯವರೆಗೆ ಸ್ವಚ್ಛತೆ ಕಾರ್ಯ ಮಾಡಿದ್ದಾರೆ. ಒಂದೆಡೆ ಪೌರಕಾರ್ಮಿಕರ ಸೇವೆಯಾದರೆ, ಇನ್ನೊಂದೆಡೆ ಯಾವುದೇ ಫಲಾಪೇಕ್ಷೆಯಿಲ್ಲದೆ ಸ್ಕೌಟ್ಸ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳು ಜಾತ್ರಾ ಮಹೋತ್ಸವದ ಯಶಸ್ವಿಗೆ ದುಡಿದಿದ್ದಾರೆ. ಕುಡಿಯುವ ನೀರು, ವಯೋವೃದ್ಧರು, ವಿಶೇಷಚೇತನರನ್ನು ವ್ಹೀಲ್ ಚೇರ್‌ನಲ್ಲಿ ದೇವಾಲಯಕ್ಕೆ ಕರೆದುಕೊಂಡು ಹೋಗಿ ದೇವಿ ದರ್ಶನ ಮಾಡಿಸಿ ವಾಪಾಸ್ ಕಳುಹಿಸುತ್ತಿದ್ದಾರೆ. ಮಕ್ಕಳ ಸೇವೆಗೂ ಅಪಾರ ಮೆಚ್ಚುಗೆ ವ್ಯಕ್ತವಾಗಿದೆ.

ಇನ್ನೂ ಈ ಬಾರಿ ಹಾಸನ ನಗರ, ಪ್ರಮುಖ ರಸ್ತೆಯಲ್ಲಿರುವ ಸರ್ಕಾರಿ ಕಚೇರಿಗಳು ಮೈಸೂರು ದಸರಾ ಮಾದರಿಯಂತೆ ದೀಪಾಲಂಕಾರದಿಂದ ಮಿಂಚಿದವು. ಮುಖ್ಯರಸ್ತೆಗಳು ವರ್ಣರಂಜಿತ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿದೆ. ಈ ಹಿಂದೆ ದೇವಾಲಯದ ಬಳಿ ಮತ್ತು ಪ್ರಮುಖ ವೃತ್ತಗಳಲ್ಲಿ ಮಾತ್ರ ಲೈಟಿಂಗ್ಸ್ ಅಳವಡಿಸಲಾಗುತ್ತಿತ್ತು. ಆದರೆ, ಕಳೆದ ಬಾರಿಯಿಂದ ಪ್ರಮುಖ ವೃತ್ತಗಳು ಸೇರಿ ಪ್ರಮುಖ ರಸ್ತೆಯುದ್ದಕ್ಕೂ ದೀಪಾಲಂಕಾರ ಮಾಡುವ ಮೂಲಕ ಇನ್ನಷ್ಟು ವರ್ಣರಂಜಿತಗೊಳಿಸಲಾಗಿದೆ. ಇದರ ಜೊತೆಗೆ ಹಾಸನ ನಗರದ ಮಹಾರಾಜ ಪಾರ್ಕ್ ಮುಂಭಾಗವಿರುವ ಹೇಮಾವತಿ ಪ್ರತಿಮೆ ಅದರ ಸುತ್ತಲೂ ಇರುವ ನೀರಿನ ಕಾರಂಜಿ ಪ್ರವಾಸಿಗರನ್ನು ರಂಜಿಸುತ್ತಿದೆ. ಬಣ್ಣದ ಬಣ್ಣದ ಕಾರಂಜಿ ನೋಡಿ ಭಕ್ತರು ಸಂತಸಪಡುತ್ತಿದ್ದಾರೆ.

ಭಾನುವಾರ ವಿಶ್ವರೂಪ ದರ್ಶನದ ನಂತರ ಗರ್ಭಗುಡಿ ಬಾಗಿಲು ಶಾಸ್ತ್ರೋಕ್ತವಾಗಿ ಮುಚ್ಚಲಿದೆ. ಆದರೆ ಇಡೀ ಜಾತ್ರಾ ಮಹೋತ್ಸವದ ಯಶಸ್ವಿಗೆ ಪೌರಕಾರ್ಮಿಕರು ಹಾಗೂ ಸ್ಕೌಟ್ಸ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳ ಕೊಡುಗೆ ಮಾತ್ರ ಅಪಾರವಾದದ್ದು. ಇನ್ನು ಹಾಸನಾಂಬೆ ಜಾತ್ರಾ ಮಹೋತ್ಸವ ದೀಪಾಲಂಕಾರ ಕಂಡು ಹೊರ ಜಿಲ್ಲೆ, ಹೊರ ರಾಜ್ಯಗಳಿಂದ ಬರುವ ಲಕ್ಷಾಂತರ ಭಕ್ತರು ದೀಪಲಂಕಾರ ಕಂಡು ನಿಬ್ಬೆರಗಾಗಿದ್ದಾರೆ.

## ಸುಳ್ಳು, ವಂಚನೆ ಮತ್ತು ಪ್ರಚಾರ ನಿಮ್ಮ ಸರ್ಕಾರದ ಮೂಲಮಂತ್ರ

# ಮೋದಿ ವಿರುದ್ಧ ಖರ್ಗೆ ವಾಗ್ದಾಳಿ

**ದೆಹಲಿ:** ಸುಳ್ಳು, ವಂಚನೆ, ನಕಲಿ, ಲೂಟಿ ಮತ್ತು ಪ್ರಚಾರ ನಿಮ್ಮ ಸರ್ಕಾರದ ಮೂಲಮಂತ್ರಗಳು ಎಂದು ಪ್ರಧಾನಿ ಮೋದಿ ಸರ್ಕಾರದ ವಿರುದ್ಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿರುಗೇಟು ನೀಡಿದ್ದಾರೆ. ನಿಮ್ಮ ಸರ್ಕಾರದ 100 ದಿನಗಳ ಯೋಜನೆ ಅನ್ನೋದು ಬಿಟ್ಟಿ ಪ್ರಚಾರ. ಬಿಜೆಪಿ ಎಂದರೆ ದ್ರೋಹ ಮತ್ತು ಸುಳ್ಳು ಭರವಸೆ ನೀಡುವ ಪಕ್ಷ ಎಂದು ವಾಗ್ದಾಳಿ ಮಾಡಿದ್ದಾರೆ.



ಕಾಂಗ್ರೆಸ್ ಆಡಳಿತದಲ್ಲಿರುವ ಸರ್ಕಾರಗಳ ವಿರುದ್ಧ ಮೋದಿ ವಾಗ್ದಾಳಿ ವಿಚಾರವಾಗಿ ಮಲ್ಲಿಕಾರ್ಜುನ ಖರ್ಗೆ ಟ್ವೀಟ್ ಮಾಡಿದ್ದು, ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಯ ನಿಮ್ಮ ಭರವಸೆ ಏನಾಯ್ತು ಭಾರತದ ನಿರುದ್ಯೋಗ ದರವು 45 ವರ್ಷಗಳ ಗರಿಷ್ಠ ಮಟ್ಟದಲ್ಲಿದೆ ಯಾಕೆ ಜನರ ಉಳಿತಾಯದ ಮಟ್ಟ ಕನಿಷ್ಟ ಮಟ್ಟಕ್ಕೆ ಏಕೆ ಕುಸಿದಿದೆ. ನಿಮ್ಮ ಅಚ್ಛೇ ದಿನದ ಭರವಸೆ ಏನಾಯ್ತು ಎಂದು ಪ್ರಧಾನಿ ಮೋದಿಗೆ ಪ್ರಶ್ನೆ ಮಾಡಿದ್ದಾರೆ.

ಮಹಾರಾಷ್ಟ್ರದಲ್ಲಿ ನೀವು ಉದ್ಘಾಟಿಸಿದ್ದ ಶಿವಾಜಿ ಪ್ರತಿಮೆ ಕುಸಿದು ಬಿದ್ದಿದೆ. ದೆಹಲಿ ಏರ್ ಪೋರ್ಟ್ ನ ಮೇಲ್ಛಾವಣಿ ಹಾರಿಹೋಗಿದೆ. ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ರಾಮಮಂದಿರ ಸೋರುತ್ತಿದೆ. ಅಟಲ್ ಸೇತು ಬಿರುಕು ಬಿಟ್ಟಿದೆ, ಗುಜರಾತ್ ನ ಮೊರ್ಬಿ ಸೇತುವೆ ಕುಸಿದಿದೆ. ಬಿಹಾರದಲ್ಲಿ ಹೊಸ ಸೇತುವೆಗಳು ಕುಸಿದು ಬೀಳುವುದು ಸಾಮಾನ್ಯವಾಗಿದೆ. ದೇಶದ ಹಲವೆಡೆ ಲೆಕ್ಕವಿಲ್ಲದಷ್ಟು ರೈಲು ಅಪಘಾತಗಳು ಸಂಭವಿಸಿವೆ, ಆದರೆ ಸಚಿವರು ರೀಲ್ಸ್ ಪ್ರಚಾರದಲ್ಲಿ ತೊಡಗಿದ್ದಾರೆ ಎಂದು ಕಿಡಿಕಾರಿದ್ದಾರೆ. ಪುಟ 2



## ಚನ್ನಪಟ್ಟಣದಲ್ಲಿ ಕುಮಾರಸ್ವಾಮಿ ಮೆಗಾ ಆಪರೇಷನ್!

# ಸಿದ್ದರಾಮಯ್ಯಗೆ ಬಿಗ್ ಶಾಕ್!

**ರಾಮನಗರ:** ಚನ್ನಪಟ್ಟಣದಲ್ಲಿ ಮೆಗಾ ಆಪರೇಷನ್ ಮಾಡುವ ಮೂಲಕ ಸಿಎಂ ಸಿದ್ದರಾಮಯ್ಯಗೆ ಎಚ್‌ಡಿ ಕುಮಾರಸ್ವಾಮಿ ಶಾಕ್ ಕೊಟ್ಟಿದ್ದಾರೆ. ಸಿದ್ದರಾಮಯ್ಯ ಆಪ್ತೆ ಮಾಜಿ ನಗರಸಭೆ ಸದಸ್ಯೆ ಗೀತಾ ಶಿವರಾಮ್‌ರನ್ನ ಎಚ್‌ಡಿಕೆ ಜೆಡಿಎಸ್‌ಗೆ ಸೇರ್ಪಡೆ ಮಾಡಿಕೊಂಡಿದ್ದಾರೆ. ಚನ್ನಪಟ್ಟಣದ ತಮ್ಮ ನಿವಾಸದಲ್ಲಿ ಗೀತಾ ಶಿವರಾಮ್ ಪಕ್ಷ ಸೇರ್ಪಡೆ ಆಗಿದ್ದು, ಗೀತಾ ಅವರೊಂದಿಗೆ ಕುರುಬ ಸಮುದಾಯದ ನೂರಾರು ಜನ ಜೆಡಿಎಸ್ ಸೇರ್ಪಡೆಯಾಗಿದ್ದಾರೆ. ಎಚ್‌ಡಿ ಕುಮಾರಸ್ವಾಮಿ ಅವರೇ ಗೀತಾ ಅವರ ನಿವಾಸಕ್ಕೆ ಭೇಟಿ ನೀಡಿ ಪಕ್ಷಕ್ಕೆ ಸ್ವಾಗತ ಮಾಡಿದ್ದಾರೆ. ವಿಶೇಷ ಎಂದರೇ ಈ ವೇಳೆಯೂ ಸಿಎಂ ಸಿದ್ದರಾಮಯ್ಯ ಅವರ ಬೃಹತ್ ಫೋಟೋ ಗೀತಾ ಅವರ ಮನೆಯಲ್ಲಿ ಅಳವಡಿಸಲಾಗಿದ್ದು, ಸಿದ್ದರಾಮಯ್ಯ ಅವರ ಬೃಹತ್ ಫೋಟೋ ಎದುರೇ ಗೀತಾ ಅವರು ಜೆಡಿಎಸ್‌ಗೆ ಸೇರ್ಪಡೆಯಾಗಿದ್ದಾರೆ. ಪುಟ 2



## ಪಟಾಕಿ ಕಿಡಿ ತಗುಲಿ ಅಂಗಡಿಗೆ ಬೆಂಕಿ ಅಂಗಡಿಯಲ್ಲಿದ್ದ ವಸ್ತುಗಳು ಭಸ್ಮ

**ರಾಯಚೂರು:** ಪಟಾಕಿ ಕಿಡಿ ತಗುಲಿ ಅಂಗಡಿಗೆ ಬೆಂಕಿ ಹೊತ್ತಿಕೊಂಡ ಪರಿಣಾಮ ಅಂಗಡಿಯಲ್ಲಿದ್ದ ವಸ್ತುಗಳು ಸುಟ್ಟು ಭಸ್ಮವಾದ ಘಟನೆ ರಾಯಚೂರು ನಗರದ ಸದರಬಜಾರ್ ಪೊಲೀಸ್ ಠಾಣೆ ಎದುರು ನಡೆದಿದೆ.



ರಾಯಚೂರು ನಗರದ ಎಂ.ಜಿ ರೋಡ್ ಬಳಿ ಇರುವ ಬಟ್ಟೆ ತಯಾರಿಸುವ ಉಲ್ಲನ್ ದಾರದ ಅಂಗಡಿಗೆ ಪಟಾಕಿ ಕಿಡಿ ತಗುಲಿ ಬೆಂಕಿ ಬಿದ್ದಿದೆ. ಬೆಂಕಿ ನಂದಿಸಲು ಸ್ಥಳೀಯರು ಹರಸಾಹಸಪಟ್ಟಿದ್ದು, ಅಗ್ನಿಶಾಮಕ ದಳ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಪುಟ 2

## ದೀಪಾವಳಿ ಬಳಿಕ ಜೋರಾಗಲಿದೆ ಶಿಗ್ಗಾಂವಿ ಉಪಸಂಗ್ರಾಮ

# ನ.5ಕ್ಕೆ ಭರತ್ ಬೊಮ್ಮಾಯಿ ಪರ ವಿಜಯೇಂದ್ರ ಪ್ರಚಾರ

**ಹಾವೇರಿ:** ದೀಪಾವಳಿ ಬಳಿಕ ಹಾವೇರಿ, ಚನ್ನಪಟ್ಟಣದಲ್ಲಿ ಉಪಚುನಾವಣೆ ಕಾವು ಹೆಚ್ಚಾಗಲಿದೆ. ಹಾವೇರಿಯ ಶಿಗ್ಗಾಂವಿಯಲ್ಲಿ ಬಿಜೆಪಿ ಅಭ್ಯರ್ಥಿ ಪರ ವಿಜಯೇಂದ್ರ, ಯಡಿಯೂರಪ್ಪ ಪ್ರಚಾರಕ್ಕೆ ಪ್ಲ್ಯಾನ್ ನಡೆಸಿದ್ದಾರೆ. ಅತ್ತ ಕಾಂಗ್ರೆಸ್ ಅಭ್ಯರ್ಥಿ ಯಾಸಿನ್ ಪರ ಸಿಎಂ, ಡಿಸಿಎಂ ಪ್ರಚಾರ ನಡೆಸಲಿದ್ದಾರೆ.

ದೀಪಾವಳಿ ಬಳಿಕ ಶಿಗ್ಗಾಂವಿ ಉಪಚುನಾವಣೆಯಲ್ಲಿ ಪ್ರಚಾರ ಭರಾಟೆ ಜೋರಾಗಲಿದೆ. ದೊಡ್ಡ ದೊಡ್ಡ ರಾಜಕೀಯ ಘಟಾನುಘಟಿಗಳು ಪ್ರಚಾರದ ಅಖಾಡಕ್ಕೆ ಧುಮುಕಲಿದ್ದಾರೆ. ನವೆಂಬರ್ 5 ರಂದು ಭರತ್ ಬೊಮ್ಮಾಯಿ ಪರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಪ್ರಚಾರ ನಡೆಸಲಿದ್ದಾರೆ. ಇನ್ನು ನವೆಂಬರ್ 11 ರಂದು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಪ್ರಚಾರ ನಡೆಸಲಿದ್ದಾರೆ. ಈಗಾಗಲೇ ಬಿಎಸ್‌ವೈ ನೇತೃತ್ವದಲ್ಲಿ ಬೃಹತ್ ಸಮಾವೇಶ, ರೋಡ್ ಶೋಗೆ ಸಿದ್ಧತೆ ನಡೆಸಲಾಗಿದೆ. ಇತ್ತ ನವೆಂಬರ್ 6ರಂದು ಕೈ ಅಭ್ಯರ್ಥಿ ಯಾಸೀರ್ ಖಾನ್ ಪಠಾಣ್ ಪರ ಸಿಎಂ ಸಿದ್ದರಾಮಯ್ಯ, ಡಿಕೆಶಿ ಎರಡನೇ ಸುತ್ತಿನ ಅದ್ದೂರಿ ಪ್ರಚಾರ ನಡೆಸಲಿದ್ದಾರೆ. ಅಲ್ಲದೇ ಶಿಗ್ಗಾಂವಿಯಲ್ಲೇ ಕಾಂಗ್ರೆಸ್ ಸಚಿವರು, ಶಾಸಕರ ದಂಡು ಮೊಕ್ಕಾಂ ಹೂಡಲಿದ್ದಾರೆ.



# ರಾಜ್ಯದಲ್ಲಿ ನಿಲ್ಲದ ವಕ್ಫ್ ಅವಾಂತರ

## ಹಿಂದೂ ಅಷ್ಟೇ ಅಲ್ಲ, ಮುಸ್ಲಿಮರ ಪಹಣಿಯಲ್ಲೂ ವಕ್ಫ್!

**ಬೆಂಗಳೂರು:** ಸದ್ಯ ರಾಜ್ಯದಲ್ಲಿ ರೈತರ ಜಮೀನುಗಳ ಪಹಣಿಯಲ್ಲಿ ವಕ್ಫ್ ಬೋರ್ಡ್ ಹೆಸರು ದಾಖಲಾಗಿರುವುದೇ ಸುದ್ದಿ. ಇಲ್ಲಿಯವರೆಗೂ ಇದು ಕೇವಲ ಹಿಂದೂಗಳ ಜಮೀನಿನ ಸಮಸ್ಯೆ ಅಂದುಕೊಳ್ಳಲಾಗಿತ್ತು. ಆದರೆ ಈ ವಕ್ಫ್ ಮುಸ್ಲಿಂರ ಪಹಣಿಯಲ್ಲೂ ಸದ್ದು ಮಾಡುತ್ತಿದೆ.

ಧಾರವಾಡ ಜಿಲ್ಲೆಯಲ್ಲಿ ಹಿಂದೂ-ಮುಸ್ಲಿಂ ಎನ್ನದೇ ಸಣ್ಣಪುಟ್ಟ ರೈತರ ಜಮೀನುಗಳನ್ನು ಕಸಿದುಕೊಳ್ಳುವ ಹುನ್ನಾರ ನಡೆದಿದೆ ಎನ್ನುವ ಆರೋಪಗಳು ಕೇಳಿ ಬಂದಿವೆ. ಇನ್ನೂ ಹಾವೇರಿ ಜಿಲ್ಲೆಯ ಕಡಕೋಳ ಗ್ರಾಮದ ವಕ್ಫ್ ಗಲಾಟೆ ಪ್ರಕರಣಕ್ಕೆ ಹೊಸ ಟ್ವಿಸ್ಟ್ ಸಿಕ್ಕಿದ್ದು, ಕುಂದಾನಗರಿಗೂ ವಕ್ಫ್ ಕಾಲಿಟ್ಟಿದೆ.



ಧಾರವಾಡ ಜಿಲ್ಲೆಯ ನವಲಗುಂದ ಪಟ್ಟಣದ ಮುಸ್ಲಿಂ ಸಮುದಾಯದ ರೈತರ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಇದಕ್ಕೂ ಮೊದಲು ಉಪ್ಪಿನಬೆಟಗೇರಿ ಹಾಗೂ ಗರಗ ಗ್ರಾಮಗಳಲ್ಲಿನ 20ಕ್ಕೂ ಹೆಚ್ಚು ರೈತರ ಜಮೀನುಗಳಲ್ಲಿನ ಪಹಣಿ ಪತ್ರದಲ್ಲಿ ವಕ್ಫ್ ಬೋರ್ಡ್ ಹೆಸರು ದಾಖಲಾಗಿರುವುದು ಬಯಲಿಗೆ ಬಂದಿತ್ತು. ಈ ಸಂಬಂಧ ರೈತರು ಪ್ರತಿಭಟನೆ ಮಾಡಿದ ಪರಿಣಾಮ ನ.5ರಂದು ಜಿಲ್ಲೆಯ ತಹಶೀಲ್ದಾರ, ವಕ್ಫ್ ಅಧಿಕಾರಿಗಳು ಮತ್ತು ರೈತರು ಒಟ್ಟಾಗಿ ಸಭೆ ನಡೆಸಲು ಮುಂದಾಗಿದ್ದಾರೆ.

ಇನ್ನೂ ನವಲಗುಂದ ತಾಲೂಕಿನ ಮುಸ್ಲಿಂ ಸಮುದಾಯದ ಹುನಗುಂದ ಎಂಬ ಕುಟುಂಬವು 1961ರಲ್ಲಿಯೇ ಖರೀದಿ ಮಾಡಿದ ಜಮೀನಿನ ವಿಚಾರವಾಗಿ ಸಹೋದರರ ಮಧ್ಯೆ ಇತ್ತೀಚೆಗೆ ವ್ಯಾಜ್ಯ ಉಂಟಾಗಿತ್ತು. ಅದರಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿರುವುದು ಮಾಲೀಕರಿಗೆ ತಿಳಿದು ಬಂದಿದೆ. ಇದರಿಂದಾಗಿ ಆಘಾತಗೊಂಡಿರುವ ಮಾಲೀಕರು ನ್ಯಾಯಾಲಯದಲ್ಲಿ ದಾವೆ ಹೂಡಲು ನಿರ್ಧರಿಸಿದ್ದಾರೆ.

ಹಾವೇರಿ ಜಿಲ್ಲೆ ಸವಣೂರು ತಾಲೂಕು ಕಡಕೋಳ ಗ್ರಾಮ ಈಗಲೂ ಬೂದಿ ಮುಚ್ಚಿದ ಕೆಂಡದಂತಿದೆ. ಬುಧವಾರ ರಾತ್ರಿ ಕಡಕೋಳ ಗ್ರಾಮದಲ್ಲಾದ ಗಲಾಟೆಗೆ ಗ್ರಾಮಸ್ಥರು ಸ್ಫೋಟಕ ಮಾಹಿತಿ ಬಹಿರಂಗಪಡಿಸಿದ್ದಾರೆ. ಪುಟ 2

# ದರ್ಶನ್ ಎಡಗಾಲಿಗೂ ಸಮಸ್ಯೆ

## ಫಿಜಿಯೋಥೆರಪಿನಾ? ಆಪರೇಷನ್‌ನಾ?

**ಬೆಂಗಳೂರು:** ಜಾಮೀನಿನ ಬಳಿಕ ಆಸ್ಪತ್ರೆಗೆ ದಾಖಲಾಗಿರುವ ನಟ ದರ್ಶನ್‌ಗೆ ಇದೀಗ ವೈದ್ಯಕೀಯ ಕ್ಷೇತ್ರದಲ್ಲಿ ಯಾವ ಚಿಕಿತ್ಸೆ ಕೊಡಬೇಕು ಎನ್ನುವುದೇ ಒಂದು ದೊಡ್ಡ ಚರ್ಚೆಯಾಗಿದೆ.

ರೇಣುಕಾಸಾಮಿ ಕೊಲೆ ಪ್ರಕರಣದ ಹಿನ್ನೆಲೆ ಬಳ್ಳಾರಿ ಜೈಲಿನಲ್ಲಿದ್ದ ನಟ ದರ್ಶನ್‌ಗೆ ಅ.3 ರಂದು ಮಧ್ಯಂತರ ಜಾಮೀನು ಸಿಕ್ಕಿತ್ತು. ಬಳಿಕ ಒಂದು ದಿನ ಸಂಪೂರ್ಣ ವಿಶ್ರಾಂತಿಯ ಬಳಿಕ ನ.1ರಂದು ದರ್ಶನ್ ಕೆಂಗೇರಿಯ ಬಿಜಿಎಸ್ ಆಸ್ಪತ್ರೆಗೆ ದಾಖಲಾಗಿದ್ದಾರೆ.

ಆಸ್ಪತ್ರೆಗೆ ದಾಖಲಾದ ಬಳಿಕ ದರ್ಶನ್‌ಗೆ ಫಿಜಿಯೋಥೆರಪಿನಾ? ಅಥವಾ ಆಪರೇಷನ್‌ನಾ? ಎಂದು ಚರ್ಚೆ ನಡೆಯುತ್ತಿದೆ. ಇತ್ತ ಕಾಣಿಸಿಕೊಂಡಿರುವ ನೋವಿಗೆ



ಎಕ್ಸಾಮಿನೇಷನ್ ಆಗುವ ತನಕ ಚಿಕಿತ್ಸೆ ಹೇಗೆ ಎಂದು ಹೇಳಲು ಸಾಧ್ಯವಿಲ್ಲ ಎಂದು ವೈದ್ಯರು ಕೂಡ ರಿಪೋರ್ಟ್‌ಗಳಿಗಾಗಿ ಕಾಯುತ್ತಿದ್ದಾರೆ.

ಈ ಹಿಂದೆ ಕೂಡ ಇದೇ ರೀತಿ ಬೆನ್ನು ನೋವಿಗೆ ಸಂಬಂಧಿಸಿದಂತೆ ಆಪರೇಷನ್ ಮಾಡಿ ಚಿಕಿತ್ಸೆ ನೀಡಲಾಗಿತ್ತು. ಈಗ ಮತ್ತೆ ಬೆನ್ನಿನಲ್ಲೇ ಸಮಸ್ಯೆ ಉಲ್ಬಣ ಆಗಿದ್ದು, ಆಪರೇಷನ್ ಬದಲು ವೈದ್ಯರು ಫಿಜಿಯೋಥೆರಪಿಗೆ ಹೆಚ್ಚು ಮನ್ನಣೆ ಕೊಡುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಅಲ್ಲದೇ ಕುಟುಂಬದವರು ಸಹ ಶಸ್ತ್ರಚಿಕಿತ್ಸೆಯನ್ನು ಕೊನೆಯ ಆಯ್ಕೆಯಾಗಿ ಪರಿಗಣಿಸುವಂತೆ ಮನವಿ ಮಾಡಿದ್ದಾರೆ. ದರ್ಶನ್‌ಗೆ ಉಂಟಾಗಿರುವ ಬೆನ್ನು ನೋವಿನಿಂದಾಗಿ ಎಡಗಾಲಿಗೂ ಕೂಡ ದೊಡ್ಡಮಟ್ಟದ ಸಮಸ್ಯೆಯಾಗಿ ಕಾಡುತ್ತಿದೆ. ಜೈಲಿಂದ ರಿಲೀಸ್ ಆದ ದಿನಕ್ಕೂ ನಿನ್ನೆ ಆಸ್ಪತ್ರೆಗೆ ಬಂದ ದಿನಕ್ಕೂ ನೋವು ಕೊಂಚ ಹೆಚ್ಚಾದಂತೆ ಕಾಣುತ್ತಿದೆ. ಪುಟ 2

# ಒಂದೇ ಕುಟುಂಬದ ಮೂವರು ಬಲಿ




**ಅಮರಾವತಿ:** ಆಂಧ್ರಪ್ರದೇಶದ ಕಾಕಿನಾಡ ಜಿಲ್ಲೆಯಲ್ಲಿ ಗುರುವಾರ ದೀಪಾವಳಿ ಆಚರಣೆ ವೇಳೆ ಎರಡು ಗುಂಪುಗಳ ನಡುವಿನ ಘರ್ಷಣೆಯಲ್ಲಿ ಒಂದೇ ಕುಟುಂಬದ ಮೂವರು ಸಾವನ್ನಪ್ಪಿದ್ದಾರೆ. ಹತ್ಯೆಗೊಳಗಾದವರನ್ನು ಬತ್ತುಲ ರಮೇಶ್, ಬತ್ತುಲ ಚಿನ್ನಿ (ಮಗ), ಬತ್ತುಲ ರಾಜು (ಮೊಮ್ಮಗ) ಎಂದು ಗುರುತಿಸಲಾಗಿದೆ. ಪ್ರಾಥಮಿಕ ತನಿಖೆಯಲ್ಲಿ ಹಳೇ ದ್ವೇಷಕ್ಕೆ ಹತ್ಯೆ ಮಾಡಿರುವುದಾಗಿ ತಿಳಿದುಬಂದಿದೆ. ಹತ್ಯೆಗೊಳಾದವರು ಈ ಹಿಂದೆ ಆರೋಪಿಗಳ ವಿರುದ್ಧ ಅವಹೇಳನಕಾರಿ ಮಾತುಗಳನ್ನಾಡಿದ್ದರು. ಇದರಿಂದ ಸೇಡಿಗಾಗಿ ಕಾದಿದ್ದ ಆರೋಪಿಗಳು ದೀಪಾವಳಿ ಸಂದರ್ಭದಲ್ಲಿ ಘರ್ಷಣೆಗಿಳಿದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

» **ದೀಪಾವಳಿ ಆಚರಣೆ ವೇಳೆ ಎರಡು ಗುಂಪಿನ ನಡುವೆ ಘರ್ಷಣೆ**

ಘಟನೆ ಕುರಿತು ಮಾತನಾಡಿರುವ ಹಿರಿಯ ಪೊಲೀಸ್ ಅಧಿಕಾರಿ ರಾಮಕೃಷ್ಣ ರಾವ್, ನಾವು ಘಟನೆಯನ್ನು ಎಲ್ಲಾ ಆಯಾಮಗಳಿಂದ ತನಿಖೆ ನಡೆಸುತ್ತಿದ್ದೇವೆ. ಪ್ರಾಥಮಿಕ ಸಾಕ್ಷ್ಯಗಳು ಕುಟುಂಬಗಳ ನಡುವೆ ಹಿಂದಿನ ದ್ವೇಷ ಕಾರಣ ಎಂದು ತಿಳಿಸುತ್ತದೆ. ಆರೋಪಿಗಳನ್ನು ಶೀಘ್ರದಲ್ಲೇ ಬಂಧಿಸುತ್ತೇವೆ ಎಂದು ಹೇಳಿದ್ದಾರೆ.

# ಪಟಾಕಿಯಿಂದ ಬೆಂಗಳೂರಿನಲ್ಲಿ ವಾಯುಮಾಲಿನ್ಯ ಹೆಚ್ಚಳ

**ಬೆಂಗಳೂರು:** ಬೆಂಗಳೂರು ನಗರದಲ್ಲಿ ದೀಪಾವಳಿ ಹಬ್ಬದ ಸಡಗರ ಮನೆ ಮಾಡಿದೆ. ಜನರು ಬಹಳ ವಿಜೃಂಭಣೆಯಿಂದ ದೀಪಾವಳಿ ಹಬ್ಬವನ್ನು ಆಚರಿಸುತ್ತಿದ್ದಾರೆ. ಮಕ್ಕಳು, ದೊಡ್ಡವರು ಎಲ್ಲರು ಒಂದುಗೂಡಿ ದೀಪ ಹಚ್ಚಿ, ಪಟಾಕಿ ಸಿಡಿಸಿ ಸಂಭ್ರಮಿಸುತ್ತಿದ್ದಾರೆ. ನಗರದಲ್ಲಿ ಪಟಾಕಿ ಸದ್ದು ಜೋರಾಗಿದೆ. ಆದರೆ, ಪಟಾಕಿಯಿಂದ ನಗರದಲ್ಲಿ ವಾಯುಮಾಲಿನ್ಯ ಹೆಚ್ಚಳವಾಗಿದೆ. ಕಳೆದ ಒಂದು ವಾರಕ್ಕೆ ಹೋಲಿಕೆ ಮಾಡಿದರೆ, ಈ ವಾರ ವಾಯುಮಾಲಿನ್ಯ ಬಹಳಷ್ಟು ಹೆಚ್ಚಳವಾಗಿದೆ ಎಂದು ಮಾಲಿನ್ಯ ನಿಯಂತ್ರಣ ಮಂಡಳಿ ತಿಳಿಸಿದೆ. ಕಳೆದ ವಾರ 50ರ ಆಸುಪಾಸಿನಲ್ಲಿದ್ದಂತಹ ವಾಯು ಪ್ರಮಾಣ ಎರಡು–ಮೂರು ದಿನದಲ್ಲಿ 100ರ ಗಡಿ ದಾಟಿದ್ದು, ಕಳಪೆ ಗುಣಮಟ್ಟದ ಗಾಳಿಯನ್ನ ಹೊಂದಿದೆ. ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಕಾರ 50 ಎಕ್ಯೂ ಇದ್ದರೆ ಉತ್ತಮ ಗಾಳಿ ಎಂದರ್ಥ. 60 ರಿಂದ 80 ರ ಗಡಿಯಲ್ಲಿದ್ದರೆ ಸಾಧಾರಣ ಗುಣಮಟ್ಟದಲ್ಲಿದೆ. 100 ರಿಂದ 150ರ ಆಸುಪಾಸಿನಲ್ಲಿದ್ದರೆ ಉಸಿರಾಡಲು ಯೋಗ್ಯವಲ್ಲದ ಗಾಳಿ ಎಂದು ಹೇಳಲಾಗುತ್ತದೆ. ಸದ್ಯ ಬೆಂಗಳೂರಿನಲ್ಲಿ ಗಾಳಿಯ ಗುಣಮಟ್ಟ 130ರ ಗಡಿ ದಾಟಿದೆ.

**ವಾಹನಗಳ ಸಂಖ್ಯೆ ಹೆಚ್ಚಳ:** ನಗರದಲ್ಲಿ ವಾಹನಗಳ ಸಂಖ್ಯೆ ಹೆಚ್ಚಳವಾಗುತ್ತಿದೆ. ಸಾರಿಗೆ ಇಲಾಖೆಯ ಅಧಿಕೃತ ಮಾಹಿತಿಯ ಪ್ರಕಾರ, ಇಡೀ ರಾಜ್ಯದಲ್ಲಿ ಪ್ರತಿನಿತ್ಯ ಕನಿಷ್ಟ ಬರೋಬ್ಬರಿ 5 ಸಾವಿರ ನೂತನ ವಾಹನಗಳು ನೋಂದಣಿಯಾಗ್ತಿದ್ದಾವೆ. ಅಂದರೆ, ತಿಂಗಳಿಗೆ ಒಂದೂವರೆ ಲಕ್ಷ ಹಾಗೂ ವರ್ಷಕ್ಕೆ 18 ಲಕ್ಷ ವಾಹನಗಳು ಹೊಸದಾಗಿ ರಾಜ್ಯದ ರಸ್ತೆಗೆ ಇಳಿಯುತ್ತಿವೆ.

## ಪ್ರಧಾನಿ ಮೋದಿ ಅಂಗಳ ತಲುಪಿದ ವಕ್ಫ್ ಆಸ್ತಿ ಸಮರ!

# ಸಿಡಿದೆದ್ದ ಯತ್ನಾಳ್



**ಬೆಂಗಳೂರು:** ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಜಿಲ್ಲೆ ಜಿಲ್ಲೆಯಲ್ಲೂ ವಕ್ಫ್ ಆಸ್ತಿ ಸಮರ ತಾರಕಕ್ಕೇರಿದೆ. ರೈತರ ಜಮೀನಿನ ಪಹಣಿಯಲ್ಲಿ ಏಕಾಏಕಿ ವಕ್ಫ್ ಬೋರ್ಡ್ ಆಸ್ತಿ ಎಂದು ನಮೂದಾಗುತ್ತಿರುವುದು ಆತಂಕ ಸೃಷ್ಟಿಸಿದೆ. ಈ ಹಿನ್ನೆಲೆಯಲ್ಲಿ ವಕ್ಫ್ ಬೋರ್ಡ್ ವಿರುದ್ಧ ರೈತರ ಆಕ್ರೋಶಗೊಂಡಿದ್ದು, ಹೋರಾಟಕ್ಕಿಳಿದಿದ್ದಾರೆ. ಇದಕ್ಕೆ ಬಿಜೆಪಿ ಸಾಥ್ ನೀಡಿದ್ದು, ಇದೇ ಸೋಮವಾರ ರಾಜ್ಯಾದ್ಯಂತ ಪ್ರತಿಭಟನೆಗೆ ಕರೆ ಕೊಟ್ಟಿದೆ. ಹೀಗಿರುವಾಗ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ವಕ್ಫ್ ಬೋರ್ಡ್ ವಿರುದ್ಧ ಪ್ರಧಾನಿ ಮೋದಿಗೆ ಪತ್ರ ಬರೆದಿದ್ದಾರೆ. ವಕ್ಫ್ ಆಸ್ತಿಗಳನ್ನ ರಾಷ್ಟ್ರೀಕರಣ ಮಾಡಬೇಕು ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

**ಪ್ರಧಾನಿ ಮೋದಿ ಅಂಗಳಕ್ಕೆ ತಲುಪಿದ ವಕ್ಫ್ ಸಮರ:** ವಕ್ಫ್ ಬೋರ್ಡ್‌ನಿಂದ ಭೂಮಾಲೀಕರು ಮತ್ತು ರೈತರಿಗೆ ಸಮಸ್ಯೆಯಾಗುತ್ತಿದೆ. ಧಾರ್ಮಿಕ ಸಂಸ್ಥೆಗಳು ಮಠ ಮಾನ್ಯಗಳ ಜಮೀನನ್ನ ವಕ್ಫ್ ಆಕ್ರಮಿಸಿಕೊಳ್ಳುತ್ತಿದೆ. ವಕ್ಫ್‌ನ ಈ ನಡೆ ಕಾನೂನು ಅಸಮಾನತೆ ಮತ್ತು ಕ್ರೂರತೆಯನ್ನ ಒಳಗೊಂಡಿದೆ. ವಕ್ಫ್‌ಗೆ ಅಪರಿಮಿತಿ ಅಧಿಕಾರ ನೀಡಲಾಗಿದ್ದು, ಇದರಿಂದ ಭಾರತೀಯರಿಗೆ ಅನ್ಯಾಯವಾಗುತ್ತಿದೆ. ಹೀಗಾಗಿ ವಕ್ಫ್ ಆಸ್ತಿಯನ್ನ ರಾಷ್ಟ್ರೀಕರಣ ಮಾಡಿ ಸಮಾಜಕ್ಕೆ ಉಪಯೋಗಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಮತ್ತೊಂದು ಪಾಕಿಸ್ತಾನ ಆಗಲು ಬಿಡಬಾರದು. ಹೀಗಾಗಿ ಪತ್ರ ಬರೆದಿದ್ದೇನೆ ಎಂದು ಯತ್ನಾಳ್ ಹೇಳಿದ್ದಾರೆ. ಯತ್ನಾಳ್ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯಿಸಿದ ಡಿಸಿಎಂ ಡಿಕೆ ಶಿವಕುಮಾರ್, ಮ್ಯಾಡ್, ಮೆಂಟಲ್‌ಗಳ ಬಗ್ಗೆ ಮಾತನಾಡಲ್ಲ ಎಂದು ಟಾಂಗ್ ಕೊಟ್ಟಿದ್ದಾರೆ.

ಇನ್ನೂ ಕಂಡ ಕಂಡ ಜಮೀನಿಗೆ ವಕ್ಫ್ ಆಸ್ತಿ ಅಂತಾ ನೋಟಿಸ್ ನೀಡಲಾಗ್ತಿದೆ. ಇದು ಸರ್ಕಾರದಿಂದ ರೈತರ ಜಮೀನನ್ನ ವಶಪಡಿಸಿಕೊಳ್ಳೋ ಹುನ್ನಾರ ಎಂದು ವಾಗ್ದಾಳಿ ನಡೆಸಿದ ಶಾಸಕ ಅಶ್ವತ್ಥ್ ನಾರಾಯಣ, ಅಧಿಕಾರ ದುರ್ಬಳಕೆ ಮಾಡ್ತಿರೋ ಜಮೀರ್‌ನನ್ನ ವಜಾ ಮಾಡಿ ಎಂದು ಆಗ್ರಹಿಸಿದ್ದಾರೆ.

**ವಕ್ಫ್ ವಿಚಾರದಲ್ಲಿ ಕಾಂಗ್ರೆಸ್‌ನಿಂದ ಎಚ್ಚರಿಕೆಯ ಹೆಜ್ಜೆ!:** ವಕ್ಫ್ ವಿಚಾರವನ್ನ ಬಿಜೆಪಿ ಅಸ್ತ್ರ ಮಾಡಿಕೊಳ್ತಿದ್ದಂತೆ ಇತ್ತ ಕಾಂಗ್ರೆಸ್ ಎಚ್ಚರಿಕೆ ಹೆಜ್ಜೆ ಇಡಲು ನಿರ್ಧರಿಸಿದೆ. ಯಾಕಂದ್ರೆ ಉಪಚುನಾವಣೆ ಮೇಲೆ ಪರಿಣಾಮ ಬೀರೋ ಆತಂಕವಿದ್ದು, ದೀಪಾವಳಿ ಮುಗಿದ ಬಳಿಕ ರಾಜ್ಯ ಸರ್ಕಾರ ಈ ಬಗ್ಗೆ ಸ್ಪಷ್ಟನೆ ನೀಡಲಿದೆ. ಈ ಬಗ್ಗೆ ಪ್ರತಿಕ್ರಿಯಿಸಿರೋ ಸಚಿವ ಕೆ.ಜೆ ಜಾರ್ಜ್, ಕೆಲವು ತಪ್ಪುಗಳಿಂದಾಗಿ ಗೊಂದಲ ಉಂಟಾಗಿದೆ ಅಷ್ಟೇ ಎಂದಿದ್ದಾರೆ.

**ಮುಸ್ಲಿಂ ರೈತರ ಜಮೀನಿನ ಮೇಲೂ ವಕ್ಫ್ ಕಣ್ಣು!:** ಸರ್ಕಾರ ಎಚ್ಚರಿಕೆ ಹೆಜ್ಜೆ ಇಡೋದಕ್ಕೂ ಕಾರಣವಿದೆ. ಯಾಕಂದ್ರೆ, ಜಿಲ್ಲೆ ಜಿಲ್ಲೆಗೂ, ದೇವಸ್ಥಾನ, ಮಠ ಮಾನ್ಯಗಳಿಗೂ ವಕ್ಫ್ ಟ್ರಬಲ್ ಶುರುವಾಗಿದೆ. ಇದೀಗ ಮುಸ್ಲಿಂ ರೈತರ ಜಮೀನಿನ ಮೇಲೂ ವಕ್ಫ್ ಕಣ್ಣು ಬಿದ್ದಿದ್ದು, ಧಾರವಾಡದ ನವಲಗುಂದದಲ್ಲಿ 20ಕ್ಕೂ ಹೆಚ್ಚು ಮುಸ್ಲಿಂ ರೈತರ ಪಹಣಿಯಲ್ಲಿ ವಕ್ಫ್ ಹೆಸರು ಬಂದಿದೆ. ಈ ಬಗ್ಗೆ ಪ್ರತಿಕ್ರಿಯಿಸಿರೋ ಸಚಿವ ಸಂತೋಷ್ ಲಾಡ್, ವಕ್ಫ್ ಮಾತ್ರವಲ್ಲ, ಮುಜರಾಯಿ, ಕಂದಾಯ, ಬಿಡಿಎ ಸೈಟ್‌ಗಳೂ ಕಬಳಿಕೆಯಾಗಿವೆ. ಹೀಗಾಗಿ ನೋಟಿಸ್ ಕೊಟ್ಟಿರುತ್ತಾರೆ ಅಂತಾ ಹೇಳಿದ್ದಾರೆ.

**ರೈತರ ಜಮೀನು ಬಳಿಕ ದೇಗುಲದ ಮೇಲೂ ವಕ್ಫ್ ಕಣ್ಣು:** ಇತ್ತ ಮಂಡ್ಯ ಜಿಲ್ಲೆ ಶ್ರೀರಂಗ ಪಟ್ಟಣದ ಮಹದೇವಪುರದ ಗ್ರಾಮದ ದೇಗುಲಕ್ಕೂ ವಕ್ಫ್ ತಕರಾರು ಹಾಕಿದೆ. ದೇಗುಲದ ಭೂಮಿ ವಕ್ಫ್‌ಗೆ ಸೇರಿದೆ ಎಂದು ನಮೂದಾಗಿದ್ದು, ಆಸ್ತಿ ದಾಖಲೆ ನೋಡಿ ಗ್ರಾಮಸ್ಥರು ಶಾಕ್ ಆಗಿದ್ದಾರೆ. ಸರ್ವೆ ನಂಬರ್ 74ರಲ್ಲಿರುವ ದೇಗುಲದ 6 ಗುಂಟೆ ಜಾಗ ಇಷ್ಟು ದಿನ ಚಿಕ್ಕಮ್ಮ ಚಿಕ್ಕದೇವಿ ಹೆಸರಲ್ಲಿತ್ತು. ಆದ್ರೀಗ ದಿಢೀರ್ ವಕ್ಫ್ ಆಸ್ತಿ ಎಂದು ನಮೂದಾಗಿದೆ.

# ಮಹಿಳೆಯನ್ನ ಕೊಲೆ ಮಾಡಿ ಪೆಟ್ರೋಲ್ ಸುರಿದು ಸುಟ್ಟು ಹಾಕಿದ ದುಷ್ಕರ್ಮಿಗಳು

**ಕಲಬುರಗಿ:** ಮಹಿಳೆಯೋರ್ವಳನ್ನು ಕೊಲೆ ಮಾಡಿ ಬಳಿಕ ಪೆಟ್ರೋಲ್ ಸುರಿದು ಸುಟ್ಟು ಹಾಕಿರುವ ದಾರುಣ ಘಟನೆ ಕಲಬುರಗಿ ತಾಲೂಕಿನ ಇಟಗಾ ಗ್ರಾಮದ ಬಳಿ ನಡೆದಿದೆ.

ಜ್ಯೋತಿ (29) ಹತ್ಯೆಯಾದ ಮಹಿಳೆ. ಕಲಬುರಗಿ ನಗರದ ಸಂಗಮೇಶ್ವರ ಕಾಲೋನಿ ನಿವಾಸಿ ಆಗಿರುವ ಜ್ಯೋತಿಗೆ ಕಳೆದ 10 ವರ್ಷದ ಹಿಂದೆ ಮದುವೆ ಆಗಿತ್ತು. ಈಕೆ 5 ವರ್ಷದಿಂದ ಗಂಡನ ಮನೆ ಬಿಟ್ಟು ತವರು ಮನೆಯಲ್ಲಿ ವಾಸಿಸುತ್ತಿದ್ದಳು ಎನ್ನಲಾಗಿದೆ.



ಗುರುವಾರ ಬೆಳಗ್ಗೆ ಮನೆಯಿಂದ ಹೊರ ಹೋಗಿದ್ದ ಜ್ಯೋತಿ, ಮಧ್ಯಾಹ್ನ ಸುಟ್ಟ ಸ್ಥಿತಿಯಲ್ಲಿ ಶವವಾಗಿ ಪತ್ತೆಯಾಗಿದ್ದಾಳೆ. ಪೊಲೀಸರು ಕೌಟುಂಬಿಕ ಕಲಹದ ಹಿನ್ನೆಲೆ ಕೊಲೆಯಾಗಿರುವ ಶಂಕೆ ವ್ಯಕ್ತಪಡಿಸಿದ್ದಾರೆ. ಈ ಕುರಿತು ಫರಹತಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಜ್ಯ ಸರ್ಕಾರದ ತೊಳಲಾಟವನ್ನು ಬಹಿರಂಗವಾಗಿ ಹೇಳಿದ ಡಿಕೆಶಿಗೆ ಅಭಿನಂದನೆ

**ನವದೆಹಲಿ:** ಚುನಾವಣೆಗಾಗಿ ಮಾಡುವ ಘೋಷಣೆ ಎಷ್ಟರ ಮಟ್ಟಿಗೆ ತೊಂದರೆ ಕೊಡುತ್ತವೆ ಎನ್ನುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರದ ಗ್ಯಾರಂಟಿಗಳೇ ಸಾಕ್ಷಿ. ರಾಜ್ಯ ಸರ್ಕಾರದ ಈ ತೊಳಲಾಟವನ್ನು ಬಹಿರಂಗವಾಗಿ ಹೇಳಿರುವ ಡಿಸಿಎಂ ಡಿ.ಕೆ ಶಿವಕುಮಾರ್ ಅವರನ್ನು ನಾನು ಅಭಿನಂದಿಸುತ್ತೇನೆ ಎಂದು ಕೇಂದ್ರ ರೈಲ್ವೆ, ಜಲಶಕ್ತಿ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಹೇಳಿದ್ದಾರೆ.



ದೆಹಲಿಯಲ್ಲಿ ಮಾಧ್ಯಮದವರೊಂದಿಗೆ ಶಕ್ತಿ ಯೋಜನೆ ಪರಿಷ್ಕರಣೆ ಬಗ್ಗೆ ಡಿಸಿಎಂ ಡಿಕೆಶಿ ನೀಡಿದ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಕಾಸಿಲ್ಲದೇ ಕರಿಮಣಿ ಹೊಲಿಸಿಕೊಂಡಿದ್ದಾರೆ. ಕೂಸು ಹುಟ್ಟುವ ಮುನ್ನ ಕುಲಾಯಿ ಹೊಲಿಸಿಕೊಂಡ ಹಾಗೇ ಈ ಗ್ಯಾರಂಟಿ ಯೋಜನೆಗಳು. ಚುನಾವಣೆಗಾಗಿ ಗ್ಯಾರಂಟಿ ನೀಡಿ ಈಗ ಪರಿತಪಿಸುತ್ತಿದ್ದಾರೆ. ದೇಶದ ವ್ಯವಸ್ಥೆಯಲ್ಲಿ, ರಾಜ್ಯದ ಪಾಲುದಾರಿಕೆಯಲ್ಲಿ ಇತಿಮಿತಿಯಲ್ಲಿ ಸರ್ಕಾರ ನಡೆಸಬೇಕು. ಸಿಎಂ ಸಿದ್ದರಾಮಯ್ಯ, ಎಲ್ಲ ಮಂತ್ರಿಗಳು ಮತ್ತು ಕಾಂಗ್ರೆಸ್ ಎಲ್ಲ ನಾಯಕರ ಭಾವನೆಯೂ ಇದೆ ಆಗಿದೆ. ಹೊಟ್ಟೆಯಲ್ಲಿರುವ ನೋವನ್ನು ಡಿಕೆಶಿ ಹೇಳಿಕೊಂಡಿದ್ದಾರೆ. ಹೀಗಾಗಿ ನಾನು ಅವರನ್ನು ಅಭಿನಂದಿಸುತ್ತೇನೆ ಎಂದರು.

ನವೆಂಬರ್ ಬಳಿಕ ಗ್ಯಾರಂಟಿಗಳಿಗೆ ಜನ ಗಣ ಮನ ಹಾಡುತ್ತಾರೆ. ರಾಜ್ಯ ಕಾಂಗ್ರೆಸ್ ನಾಯಕರ ಬಣ, ರಾಜಕೀಯ ಹಿನ್ನೆಲೆ ಕುರಿತು ಕಾಂಗ್ರೆಸ್ ನಾಯಕರ ವಿರುದ್ಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬಹಿರಂಗ ಟೀಕೆ ಮಾಡಿದ್ದರು. ಇದಕ್ಕೆ ಸಂಬಂಧಿಸಿದಂತೆ ಮಾತನಾಡಿ, ಖರ್ಗೆ ಅವರು ಹಿರಿಯ ರಾಜಕಾರಣಿ, ಅವರ ಅನುಭವ ಹಂಚಿಕೊಂಡಿದ್ದಾರೆ. ಆದರೆ ಇಂದಿರಾ ಗಾಂಧಿ, ರಾಜೀವ್ ಗಾಂಧಿ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಕೈಯಿಂದ ಆಗದ ಕೆಲಸ ಖರ್ಗೆ ಅವರಿಂದ ಆಗುತ್ತಾ? ಇದನ್ನು ನೀವೇ ಯೋಚನೆ ಮಾಡಬೇಕು. ಖರ್ಗೆ ಅವರು ಏನೇ ಹೇಳಿದರೂ ನಾಯಿ ಬಾಲ ಡೊಂಕು ಎಂದು ವ್ಯಂಗ್ಯವಾಡಿದರು.

ಕಾಂಗ್ರೆಸ್ ಸರ್ಕಾರ ಪತನವಾಗುವ ಬಗ್ಗೆ ಹೆಚ್‌ಡಿಕೆ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ಹೆಚ್‌ಡಿ ಕುಮಾರಸ್ವಾಮಿ ಅವರ ಅನುಭವ ಹಂಚಿಕೊಂಡಿದ್ದಾರೆ. ಎರಡು ಬಾರಿ ಸಿಎಂ ಆಗಿದ್ದವರು, ಮಾಜಿ ಪ್ರಧಾನಿ ದೇವೇಗೌಡರ ಗರಡಿಯಲ್ಲಿ ಬೆಳೆದವರು, ಅವರಿಗೆ ಯಾವ ರೀತಿಯ ಮಾಹಿತಿ ಇದೆ ಗೊತ್ತಿಲ್ಲ. ಅವರು ಹೇಳಿದ್ದು ಆಗಬಹುದು, ಆಗದಿರಬಹುದು. ಕಾಂಗ್ರೆಸ್ ಡೋಲಾಮಾನಯ ಸ್ಥಿತಿಯಲ್ಲಿದೆ. ಕಾಂಗ್ರೆಸ್ ಸರ್ಕಾರದಲ್ಲಿ ಏನಾದರೂ ಕೆಲಸ ಆಗುತ್ತಿದೆಯೇ? ಮಳೆ ಬಂದು ಪ್ರವಾಹ ಆದರೂ ಯಾರಾದರೂ ಮಂತ್ರಿ ಹೋಗಿ ಪರಿಶೀಲನೆ ಮಾಡಿದ್ದಾರಾ? ಸರ್ಕಾರದಲ್ಲಿ ಹೊಂದಾಣಿಕೆ ಇಲ್ಲ, ನಾನು ದೊಡ್ಡವನು ಎನ್ನುವ ಮನಸ್ಥಿತಿ ಬಂದಿದೆ. ಕಾಂಗ್ರೆಸ್ ಸರ್ಕಾರ ಇದೆ ಎನ್ನುವುದಕ್ಕಿಂತ, ವ್ಯಕ್ತಿಗತ ಸರ್ಕಾರ ಇದೆ ಎನ್ನುವ ಭಾವನೆ ಇದೆ. ಎಷ್ಟು ವರ್ಷ ಇರುತ್ತಾರೋ ಗೊತ್ತಿಲ್ಲ. ಪಾಪದ ವ್ಯವಸ್ಥೆ ಆದಾಗ ಇಂತಹ ಪರಿಸ್ಥಿತಿ ಬರುತ್ತದೆ ಎಂದು ವಾಗ್ದಾಳಿ ನಡೆಸಿದರು.

# ಸಿದ್ದಗಂಗಾ ಶ್ರೀಗಳ ಗದ್ದುಗೆಗೆ ಪೂಜೆ ಸಲ್ಲಿಸಿದ ಹೆಚ್‌ಡಿಕೆ

**ತುಮಕೂರು:** ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿಯವರು ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ, ಶಿವಕುಮಾರ ಶ್ರೀಗಳ ಗದ್ದುಗೆಗೆ ಪೂಜೆ ಸಲ್ಲಿಸಿದ್ದಾರೆ. ಬಳಿಕ ಸಿದಲಿಂಗಸ್ವಾಮಿಗಳ ಆಶೀರ್ವಾದ ಪಡೆದಿದ್ದಾರೆ.



ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಅಭಿವೃದ್ಧಿ ಹೆಸರಿನಲ್ಲಿ ಚುನಾವಣೆ ಮಾಡಿರುವುದು. ಚನ್ನಪಟ್ಟಣದಲ್ಲಿ ಸೀರೆ ಪಂಚೆ ಹಂಚಿರುವುದಕ್ಕೂ, ನಮ್ಮ ಪಕ್ಷಕ್ಕೂ ಯಾವುದೇ ಸಂಬಂಧವಿಲ್ಲ. ಆ ಕೆಲಸ ಮಾಡುತ್ತಿರುವುದು ಕಾಂಗ್ರೆಸ್‌ನವರು ಎಂದು ಆರೋಪಿಸಿದ್ದಾರೆ.

ಕಳೆದ ಬಾರಿ ಕಾಂಗ್ರೆಸ್ ಕಾರ್ಡ್‌ಗಳನ್ನು ನೀಡಿದ್ದು ನೋಡಿಲ್ವಾ? ಈಗಲೂ ಕಾಂಗ್ರೆಸ್‌ನವರು ನಕಲಿ ಆಫರ್ ಕಾರ್ಡ್ ಹಂಚುವ ಪ್ರಯೋಗ ಮಾಡುತ್ತಿದ್ದಾರೆ. ಹೊಸದೊಡ್ಡಿ ಬಳಿ ಸೀರೆ ಶರ್ಟ್ ಗಳು ಸೀಜ್ ಆಗಿದ್ದು ನಮಗೆ ಸಂಬಂಧಿಸಿದ್ದಲ್ಲ. ನಿಖಿಲ್ ಮದುವೆ ಸಂದರ್ಭದಲ್ಲಿ ಉಡುಗೊರೆ ನೀಡಬೇಕಿತ್ತು. ಕೋವಿಡ್ ಕಾರಣದಿಂದ ಕೊಡಲು ಆಗಿರಲಿಲ್ಲ. ನಿಖಿಲ್ ಆರ್ಡರ್ ಮಾಡಿದ್ದೆಲ್ಲಾ ಮಾರ್ಕೆಟ್‌ಗೆ ವಾಪಸ್ ಮಾಡಲಾಗಿದೆ ಎಂದು ಸ್ಪಷ್ಟನೆ ನೀಡಿದ್ದಾರೆ.

ಮೂರು ಉಪಚುನಾವಣೆ ಇದ್ದರೂ ಚನ್ನಪಟ್ಟಣ ಉಪಚುನಾವಣೆ ಬಗ್ಗೆ ಹೆಚ್ಚು ಕಾತರ ಇದೆ. ಎಷ್ಟೇ ಅಪಪ್ರಚಾರ ಮಾಡಿದರೂ, ಚನ್ನಪಟ್ಟಣದ ಜನರ ಆಶೀರ್ವಾದ ನಮ್ಮ ಮೇಲಿದೆ. ಎನ್‌ಡಿಎ ಅಭ್ಯರ್ಥಿ ಗೆಲ್ಲಲಿದ್ದಾರೆ. ನೀರಾವರಿ ಬಗ್ಗೆ, ಅಭಿವೃದ್ಧಿ ಬಗ್ಗೆ ಇಂದಿನ ಪತ್ರಿಕೆಯಲ್ಲಿ ಪುಟಗಟ್ಟಲೇ ಗಮನಿಸಿದ್ದೇನೆ. ಅಲ್ಲದೇ ಟೀಕೆ ಟಿಪ್ಪಣಿ ಬಗ್ಗೆ ನೋಡಿದ್ದೇನೆ. ಇದಕ್ಕೆ ಚನ್ನಪಟ್ಟಣದ ಮತದಾರರು ಉತ್ತರ ನೀಡುತ್ತಾರೆ ಎಂದಿದ್ದಾರೆ.

ನಿಖಿಲ್ ಸೋಲಿಗೆ ಅವರ ಅಪ್ಪ, ಅಮ್ಮ ಮಾಡಿದ ಪಾಪಗಳೇ ಕಾರಣ ಎಂದು ಡಿ.ಕೆ ಸುರೇಶ್ ಹೇಳಿಕೆ ವಿಚಾರವಾಗಿ, ಏನ್ ಪಾಪ ಮಾಡಿದ್ದಾರೆ, ಯಾರು ಏನ್ ಮಾಡಿದ್ದಾರೆ ಎಂದು ಗೊತ್ತಿದೆ. ಕಲ್ಲು ಗಣಿಗಾರಿಕೆಯಿಂದ ಇವರು ಎಷ್ಟು ಕುಟುಂಬ ಹಾಳು ಮಾಡಿದ್ದಾರೆ ಎಂದು ಗೊತ್ತಿದೆ. ಪಾಪದ ಕೆಲಸ ಮಾಡಿದವರು ಅವರು, ಅವರ ಪಾಪದ ಕೆಲಸದ ವಿರುದ್ಧ ಹೋರಾಟ ಮಾಡುತ್ತಿರುವವರು ನಾವು ಎಂದು ಟಾಂಗ್ ಕೊಟ್ಟಿದ್ದಾರೆ.

ಶಕ್ತಿ ಯೋಜನೆ ವಿಚಾರವಾಗಿ, ಕಾಂಗ್ರೆಸ್ ಆಡಳಿತ ಹೇಗೆ ನಡೆಯುತ್ತಿದೆ ಎಂದು ಖರ್ಗೆ ಹೇಳಿದ್ದಾರೆ. ಖರ್ಗೆಯವರು ಅಕ್ಕ ಪಕ್ಕ ಕೂರಿಸಿಕೊಂಡು ಹೇಳಿದ್ದಾರೆ. ಇದು ಆರಂಭದ ಹಂತ, ಗ್ಯಾರಂಟಿ ಒಂದೊಂದೆ ವಾಪಸ್ ಪಡೆಯುವ ಪ್ರಯತ್ನ ಆಗುತ್ತದೆ ಎಂದು ಭವಿಷ್ಯ ನುಡಿದಿದ್ದಾರೆ.

ದೇವಸ್ಥಾನದ ಆಸ್ತಿಯ ದಾಖಲೆಯಲ್ಲಿ ವಕ್ಫ್ ಬೋರ್ಡ್ ಹೆಸರಿನ ವಿಚಾರವಾಗಿ, ಇದು ಯಾಕೆ ಆರಂಭವಾಗಿದೆ ಎಂದರೆ, ಇಲ್ಲಿ ಕಾಂಗ್ರೆಸ್‌ನ ದುರಾಡಳಿತ ಪ್ರಾರಂಭವಾಗಿದೆ. ಕಾಂಗ್ರೆಸ್‌ನ ಅಕ್ರಮ ಮುಚ್ಚಿಕೊಳ್ಳುವ ಪ್ರಯತ್ನ ಇದು. ನ್ಯಾಯಾಂಗದಲ್ಲಿ ಚರ್ಚೆಗಳು ಆರಂಭವಾಗಿವೆ ಇದಕ್ಕೆ ಉತ್ತರ ಸಿಗಲಿದೆ ಎಂದಿದ್ದಾರೆ.

## ಖರ್ಗೆ ವಾಗ್ದಾಳಿ

ನರೇಂದ್ರ ಮೋದಿಯೇ ಗ್ಯಾರಂಟಿ ಎನ್ನುವುದು ಬಿಜೆಪಿಯ ಕ್ರೂರ ಜೋಕ್: ಖರ್ಗೆ

ಉದ್ಯಮಿ ಅದಾನಿ ಹಗರಣ, ಸೆಬಿ ಹಗರಣ ಹಾಗೂ ಎಲೆಕ್ಟೋರಲ್ ಬಾಂಡ್ ಹಗರಣ ಇವೆಲ್ಲ ಏನು ನೀರವ್, ಮಲ್ಯ, ಚೋಕ್ಸಿ ದೇಶ ಬಿಟ್ಟು ಹೋಗಲು ಅವಕಾಶ ಮಾಡಿಕೊಟ್ಟಿದ್ದಾರು ನಿಮ್ಮ ಆಡಳಿತದಲ್ಲಿ ಎಸ್‌ಸಿಗಳ ವಿರುದ್ಧದ ಅಪರಾಧಗಳಲ್ಲಿ 46% ಹೆಚ್ಚಳವಾಗಿದೆ. ಎಸ್‌ಟಿಗಳ ವಿರುದ್ಧದ ಅಪರಾಧಗಳಲ್ಲಿ 48% ಹೆಚ್ಚಳವಾಗಿದೆ. ಎಸ್ ಸಿ/ಎಸ್ ಟಿ ಮಹಿಳೆಯರು ಮತ್ತು ಮಕ್ಕಳ ವಿರುದ್ಧದ ಅಪರಾಧಗಳು ಹೆಚ್ಚಳವಾಗಿದೆ. 2014ಕ್ಕೆ ಹೋಲಿಸಿದರೆ 2022ರಲ್ಲಿ 1.7 ಪಟ್ಟು ಹೆಚ್ಚಾಗಿದೆ. ನರೇಂದ್ರ ಮೋದಿಯೇ ಗ್ಯಾರಂಟಿ ಎನ್ನುವುದು ಬಿಜೆಪಿಯ ಕ್ರೂರ ಜೋಕ್ ಎಂದು ತೀವ್ರ ಹರಿಹಾಯ್ದಿದ್ದಾರೆ.

**ಬಿಜೆಪಿ ಇವುಗಳಲ್ಲಿ 50% ಜಾರಿಗೆ ತಂದಿಲ್ಲ: ಸುರ್ಜೇವಾಲ :** ಇನ್ನು ರಣದೀಪ್ ಸುರ್ಜೇವಾಲ ಕೂಡ ಟ್ವೀಟ್ ಮಾಡಿದ್ದು, ಸಾರ್ವಜನಿಕ ಜೀವನದಲ್ಲಿ ಹುದ್ದೆಯ ಜವಾಬ್ದಾರಿಯು ಅತ್ಯುನ್ನತವಾಗಿರುತ್ತದೆ. ಆ ಹುದ್ದೆಗೆ ಯಾವುದೇ ಬಾಧ್ಯತೆ ಬರಬಾರದು. ಕರ್ನಾಟಕದ ಜನಕಲ್ಯಾಣ ಯೋಜನೆಗಳನ್ನು ಪ್ರಧಾನಿ ಮೋದಿ ಶ್ಲಾಘಿಸಬೇಕು ಎಂದಿದ್ದಾರೆ.

ಗ್ಯಾರಂಟಿಗಳ ಯೋಜನೆಗಳಿಗೆ ಕರ್ನಾಟಕವೇ ಮಾದರಿ. ಜವಾಬ್ದಾರಿಯುತ ಆಡಳಿತಕ್ಕೆ ಕರ್ನಾಟಕ ಅಧ್ಯಯನದ ವಸ್ತುವಾಗಿದೆ. ಬಿಜೆಪಿ ಆಡಳಿತವಿರುವ ರಾಜ್ಯದಲ್ಲಿ ಇವುಗಳಲ್ಲಿ 50% ಅನ್ನು ಜಾರಿಗೆ ತಂದಿಲ್ಲ ಎಂದು ಕಿಡಿಕಾರಿದ್ದಾರೆ.

## ಸಿದ್ದರಾಮಯ್ಯಗೆ ಬಿಗ್ ಶಾಕ್!

ಗೀತಾ ಶಿವರಾಮ್ ಜೆಡಿಎಸ್ ಸೇರ್ಪಡೆ ಬಳಿಕ ಮಾತನಾಡಿದ ಕುಮಾರಸ್ವಾಮಿ, ಗೀತಾ ಶಿವರಾಮ್ ಕುರುಬ ಸಮಾಜದವರು. ಈ ಹಿಂದೆ ನಮ್ಮ ಪಕ್ಷದಲ್ಲಿಯೇ ಇದ್ದರು. ಈಗ ದೀಪಾವಳಿ ದಿನ ತಂಗಿ ಮರಳಿ ಮನೆಗೆ ಬಂದಿದ್ದಾರೆ. ತುಂಬು ಹೃದಯದಿಂದ ಸ್ವಾಗತ ಮಾಡಿದ್ದೇನೆ. ಚನ್ನಪಟ್ಟಣದಲ್ಲಿ ಜೆಡಿಎಸ್ ಪರವಾದ ಟ್ರೆಂಡ್ ಇದೆ, ನಿಖಿಲ್ ಕುಮಾರಸ್ವಾಮಿ ಪರವಾಗಿ ಜನರಿದ್ದಾರೆ. ಕಾಂಗ್ರೆಸ್ ನವರು ಮೊದಲು ಗೆದ್ದಾಯ್ತು ಎಂಬ ಭಾವನೆಯಲ್ಲಿದ್ದರು, ಈಗ ಆ ವಾತಾವರಣ ಕ್ಷೇತ್ರದಲ್ಲಿ ಇಲ್ಲ. ಚನ್ನಪಟ್ಟಣಕ್ಕೆ ನಾನೇನು ಕೆಲಸ ಮಾಡಿಲ್ಲ ಅಂತಾರೆ, ನಾನು ಮಾಡಿರುವ ಕೆಲಸ ಜನರಿಗೆ ಗೊತ್ತಿದೆ, ಕಾಂಗ್ರೆಸ್ ನವರಿಂದ ನನಗೆ ಸರ್ಟಿಫಿಕೇಟ್ ಬೇಕಿಲ್ಲ ಎಂದು ತಿರುಗೇಟು ನೀಡಿದ್ದಾರೆ.

ಚನ್ನಪಟ್ಟಣದ ನೀರಾವರಿ ಅಭಿವೃದ್ಧಿಗೆ ಬಿಜೆಪಿ ಸರ್ಕಾರ 150 ಕೋಟಿ ಹಣ ಕೊಟ್ಟಿದೆ, ಕಾಂಗ್ರೆಸ್ ನಿಂದ ಯಾವುದೇ ಅನುದಾನ ಕೊಟ್ಟಿಲ್ಲ, ಅಂದು ಸದಾನಂದಗೌಡರು ನಿರ್ಧಾರ ಮಾಡಿದರು, 17 ಕೆರೆ ತುಂಬಿಸಿದರು ಅಂತಾರೆ. ದೇವೇಗೌಡರು ಇಗ್ಗಲೂರು ಬ್ಯಾರೇಜ್ ಕಟ್ಟದಿದ್ದರೆ ನೀರು ಎಲ್ಲಿಂದ ಬರುತ್ತಿತ್ತು. ನಾನು 14 ತಿಂಗಳು ಸಿಎಂ ಆಗಿದ್ದಾಗ 107 ಕೆರೆ ತುಂಬಿಸಿದ್ದೇವೆ. 17 ಕೆರೆ ತುಂಬಿಸಿದಕ್ಕೆ ಭಗೀರಥ ಅಂದರೆ, ನಾವು ನೀರೇ ತುಂಬಿಸಿಲ್ವಾ. ಸರ್ಕಾರದ ಕಡತದಲ್ಲಿ ದಾಖಲೆ ಇದೇ ತೆಗೆಯಲಿ ಎಂದು ಸವಾಲು ಹಾಕಿದರು.

ಚನ್ನಪಟ್ಟಣಕ್ಕೆ ಡಿ.ಕೆ ಸುರೇಶ್ ಕೊಡುಗೆ ಏನಿದೆ? ಪ್ರತಿದಿನ ಮತ್ತಿಕೆರೆ ಬಳಿ 5–10 ಲೋಡ್ ಕಲ್ಲಿನ ಬರ್ತಿದೆ, ಹೊರದೇಶಕ್ಕೆ ಹೋಗ್ತಿದೆ ಅದೇನಾ ಕೊಡುಗೆ? ಕಾಂಗ್ರೆಸ್ ನಾಯಕರು ಯಾರು ಕಣ್ಣೀರು ಹಾಕಿಲ್ವಾ? ಅವರಿಗೆ ಕಣ್ಣೀರು ಬರದಿದ್ದರೆ ಅವರು ಮನುಷ್ಯರೇ ಅಲ್ಲ, ಮನುಷ್ಯತ್ವವೂ ಇಲ್ಲ. ಸೋಲು – ಗೆಲುವು ಪ್ರತಿಯೊಬ್ಬ ರಾಜಕಾರಣಿಯ ಬದುಕಲ್ಲಿ ನಡೆಯುವ ಘಟನೆ, ಕರ್ನಾಟಕ ಇದು, ಕನ್ನಡಿಗನಾಗಿ ಎಲ್ಲಿ ಬೇಕಾದರೂ ಚುನಾವಣೆಗೆ ನಿಲ್ಲಬಹುದು. ಉತ್ತರ ಪ್ರದೇಶದಲ್ಲಿ ಸೋತಿದ್ದಾರೆ, ರಾಹುಲ್ ಗಾಂಧಿ, ಅವರ ತಂಗಿ ಈಗ ವೈನಾಡಿಗೆ ಯಾಕೆ ಬಂದಿದ್ದಾರೆ? ಅವರು ಅಲ್ಲೇ ಹುಡುಕಬೇಕಿತ್ತು ಅಲ್ವಾ? ಮೊದಲು ನಿಮ್ಮದನ್ನ ನೋಡಿಕೊಳ್ಳಿ, ನಂತರ ನಮ್ಮದು ಹೇಳಿ ಎಂದು ಟಾಂಗ್ ಕೊಟ್ಟಿದ್ದಾರೆ.

## ಮೊದಲನೇ ಪುಟದಿಂದ...

ಜೆಡಿಎಸ್ ಸೇರ್ಪಡೆ ಬಳಿಕ ಮಾತನಾಡಿದ ಗೀತಾ ಶಿವರಾಮ್, ನಾನು ದಾಸರಹಳ್ಳಿಯ ಟಿಕೆಟ್ ಆಕಾಂಕ್ಷಿಯಾಗಿದ್ದೆ. ನನ್ನನ್ನ ನಂಬಿಸಿ ಮೋಸ ಮಾಡಿದರು, ಮನೆ ಹಾಳು ಮಾಡಿದರು. ಎಂಪಿ ಎಲೆಕ್ಷನ್ ನಲ್ಲಿಯೂ ನಮ್ಮನ್ನ ನಿರ್ಲಕ್ಷ್ಯ ಮಾಡಿದರು. ನಮ್ಮನ್ನ ಕಡೆಗಣಿಸಿದ್ದಕ್ಕೆ ಜೆಡಿಎಸ್ ಸೇರಿದ್ದೇನೆ, ನಮ್ಮನ್ನ ಜೆಡಿಎಸ್ ನವರು ವಿಶ್ವಾಸಕ್ಕೆ ತೆಗೆದುಕೊಂಡು ಕರೆದಿದ್ದಾರೆ. ನಾವು ಪಕ್ಷ ಸೇರಿದ್ದೇವೆ, ಎನ್‌ಡಿಎ ಅಭ್ಯರ್ಥಿ ನಿಖಿಲ್ ಪರ ಕೆಲಸ ಮಾಡ್ತೇವೆ. ನಮ್ಮ ಕುರುಬ ಸಮಾಜದ ಮತಗಳನ್ನು ಹಾಕಿಸುತ್ತೇವೆ. ಆದರೆ, ಸಿದ್ದರಾಮಯ್ಯ ನವರ ಮೇಲಿನ ಅಭಿಮಾನ ಇರಲಿದೆ, ಅವರು ಹೇಳಿಕೆ ಮಾತು ಕೇಳಿ ನಮ್ಮನ್ನ ಕಡೆಗಣಿಸಿದ್ದರು ಎಂದು ಬೇಸರ ಹೊರ ಹಾಕಿದ್ದಾರೆ.

## ವಿಜಯೇಂದ್ರ ಪ್ರಚಾರ

ಅತ್ತ ರಾಮನಗರದಲ್ಲೂ ಉಪಚುನಾವಣೆ ಪ್ರಚಾರ ಭರಾಟೆ ಜೋರಾಗಿದೆ. ಚನ್ನಪಟ್ಟಣದಲ್ಲಿ ಮೈತ್ರಿ ಅಭ್ಯರ್ಥಿ ಗೆಲುವಿಗೆ ಕುಮಾರಸ್ವಾಮಿ ತಂತ್ರ ರೂಪಿಸಿದ್ದಾರೆ. ಹೇಗಾದರೂ ದಲಿತ ಹಾಗೂ ಹಿಂದುಳಿದ ವರ್ಗಗಳ ಮತ ಕ್ರೂಡೀಕರಣಕ್ಕೆ ಪ್ಲ್ಯಾನ್ ಮಾಡುತ್ತಿದ್ದಾರೆ. ಚನ್ನಪಟ್ಟಣದಲ್ಲಿ ಮಾಜಿ ಶಾಸಕ ಅನ್ನದಾನಿ ನೇತೃತ್ವದಲ್ಲಿ ದಲಿತ ಮುಖಂಡರು ಹಾಗೂ ಕಾರ್ಯಕರ್ತರ ಸಭೆ ನಡೆಸಲಾಯಿತು. ಈ ವೇಳೆ ಎಸ್ಸಿ–ಎಸ್ಟಿ ಸಮುದಾಯ ನಿಖಿಲ್ ಕುಮಾರಸ್ವಾಮಿಗೆ ಬೆಂಬಲ ನೀಡುವಂತೆ ಕರೆ ಕೊಡಲಾಗಿದ್ದು, ಯೋಗೇಶ್ವರ್ ಪದೇಪದೇ ಪಕ್ಷ ಬದಲಿಸುವ ವ್ಯಕ್ತಿ. ಅಧಿಕಾರಕ್ಕಾಗಿ ಪಕ್ಷಾಂತರ ಮಾಡುವ ಯೋಗೇಶ್ವರ್ ನಂಬಬೇಡಿ. ಈ ಬಾರಿ ನಿಖಿಲ್ ಕುಮಾರಸ್ವಾಮಿಗೆ ಅವಕಾಶ ಕೊಡಿ ಎಂದು ಮನವಿ ಮಾಡಿದ್ದಾರೆ.

ಇನ್ನು ನಿಖಿಲ್ ವಿರುದ್ಧ ಕುಟುಂಬ ರಾಜಕಾರಣ ಆರೋಪ ಮಾಡುತ್ತಿರುವ ಕಾಂಗ್ರೆಸ್ ನಾಯಕರಿಗೂ ಮಾಜಿ ಶಾಸಕ ಅನ್ನದಾನಿ ಟಾಂಗ್ ಕೊಟ್ಟಿದ್ದಾರೆ. ಪ್ರಿಯಾಂಕ ಗಾಂಧಿ, ರಾಹುಲ್ ಗಾಂಧಿ ಕೂಡ ಕುಟುಂಬ ರಾಜಕಾರಣದಿಂದ ಬಂದವರು. ಉತ್ತರ ಪ್ರದೇಶದಲ್ಲಿ ಹುಟ್ಟಿದ್ದರೂ ಕೇರಳದ ವಯನಾಡಿನಲ್ಲಿ ಬಂದು ಸ್ಪರ್ಧೆ ಮಾಡುತ್ತಿದ್ದಾರೆ. ಆದರೆ ಈ ಭಾಗದಲ್ಲಿ ಅಭಿವೃದ್ಧಿ ಮಾಡಿರೋ ನಾಯಕರ ಮಗ ಇಲ್ಲಿ ಸ್ಪರ್ಧೆ ಮಾಡೋದು ತಪ್ಪಾ ಎಂದು ಪ್ರಶ್ನೆ ಮಾಡಿ ಕಾಂಗ್ರೆಸ್ ವಿರುದ್ಧ ಮಳವಳ್ಳಿ ಮಾಜಿ ಶಾಸಕ ಅನ್ನದಾನಿ ವಾಗ್ದಾಳಿ ನಡೆಸಿದರು.

ಒಟ್ಟಾರೆ ಶಿಗ್ಗಾಂವಿಯಲ್ಲಿ ಘಟಾನುಘಟಿಗಳ ಅಭ್ಯರ್ಥಿಗಳ ಪರ ಪ್ರಚಾರ ಮಾಡೋದು ಒಂದೆಡೆ ಆದರೆ ಚನ್ನಪಟ್ಟಣದಲ್ಲಿ ನಿಖಿಲ್ ಗೆಲ್ಲಿಸಲು ಜೆಡಿಎಸ್ ಸಭೆ ಮೇಲೆ ಸಭೆ ನಡೆಸುತ್ತಿದೆ. ಗೆಲುವು ಯಾರಿಗೆ ಎಂಬುದು ಚುನಾವಣಾ ಫಲಿತಾಂಶದ ದಿನ ತಿಳಿಯಬೇಕಿದೆ.

## ವಸ್ತುಗಳು ಭಸ್ಮ

ಘಟನೆ ನಡೆದ ವೇಳೆ ಅದೇ ಮಾರ್ಗವಾಗಿ ತಾಯಿ ಭುವನೇಶ್ವರಿ ಮೆರವಣಿಗೆ ಸಾಗುತ್ತಿತ್ತು. ಬೆಂಕಿ ಅವಘಡ ಹಿನ್ನೆಲೆ ಕನ್ನಡಾಂಬೆ ಮೆರವಣಿಗೆಗೆ ಅಡ್ಡಿಯುಂಟಾಗಿದೆ. ಬೆಂಕಿ ಹೊತ್ತಿ ಉರಿದಿದ್ದರಿಂದ ಕೆಲ ಕಾಲ ಕನ್ನಡಾಂಬೆ ಮೆರವಣಿಗೆ ಸ್ಥಗಿತಗೊಂಡಿದೆ.

## ದರ್ಶನ್ ಎಡಗಾಲಿಗೂ ಸಮಸ್ಯೆ

ಸ್ಪೈನಲ್ ಕಾರ್ಡ್ ಸಮಸ್ಯೆಯಿಂದ ಆರಂಭವಾದ ಬೆನ್ನುನೋವು, ಈಗ ಕಾಲುಗಳಿಗೂ ಸಮಸ್ಯೆ ಉಂಟುಮಾಡುತ್ತಿದೆ. ಹಾಗಾಗಿ ಬೆನ್ನು ನೋವು ಜೊತೆಗೆ ಎಡಗಾಲೂ ನೋವಿದ್ದರೆ ರೋಗಿಯ ಆರೋಗ್ಯದ ಮೇಲೆ ಯಾವ ಪರಿಣಾಮ ಬೀರಲಿದೆ? ಅದರಿಂದ ದೇಹದ ಮೇಲಾಗುವ ಪರಿಣಾಮ ಏನು? ಎನ್ನುವುದನ್ನು ವೈದ್ಯರು ತಿಳಿಸಬೇಕಾಗಿದೆ.

**ವೈದ್ಯರು ಹೇಳೋದೇನು?:** ವೈದ್ಯರ ಮಾಹಿತಿಯ ಪ್ರಕಾರ, ಮೊದಲಿಗೆ ಬೆನ್ನು ನೋವು ಹೆಚ್ಚಾಗುತ್ತಿದ್ದಂತೆ ಕಾಲುಗಳಲ್ಲಿ ನೋವು ಕಾಣಿಸಿಕೊಳ್ಳಲಿದೆ. ಬಳಿಕ ನಡೆಯಲು ಸಮಸ್ಯೆ ಎದುರಾಗಿ ಹಂತ ಹಂತವಾಗಿ ಸಮಸ್ಯೆ ಇರುವ ಕಾಲಿನಲ್ಲಿ ಮರಗಟ್ಟುವಿಗೆ ಶುರುವಾಗುತ್ತದೆ. ಆಗ ಕಾಲು ಬೆರಳಿನಿಂದ ಆರಂಭವಾಗಿ ಇಡೀ ಕಾಲಿಗೆ ವೇಗವಾಗಿ ಮರಗಟ್ಟುವಿಕೆ ಹರಡುವ ಸಾಧ್ಯತೆ ಹೆಚ್ಚಾಗಿರುತ್ತದೆ. ಇದರಿಂದ ಕಾಲಿನ ಚಲನೆಗೆ ಕೂಡ ಕಷ್ಟವಾಗಿ ಕಾಲು ಸಂಪೂರ್ಣ ನಿಶಕ್ತಿಗೆ ಒಳಗಾಗುತ್ತದೆ. ನಡೆಯಲು ಕಷ್ಟವಾದಾಗ, ಪಾರ್ಶ್ವವಾಯು ಆಗುವ ಸಾಧ್ಯತೆ ಹೆಚ್ಚಾಗುತ್ತದೆ. ಹಾಗಾಗಿ ಶೀಘ್ರದಲ್ಲಿ ಅಗತ್ಯ ಚಿಕಿತ್ಸೆ ನೀಡಬೇಕು ಎನ್ನುತ್ತಾರೆ ವೈದ್ಯರು.

## ವಕ್ಫ್ ಅವಾಂತರ

ಕಡಕೋಳದಲ್ಲಿರುವ ಆಂಜನೇಯ ದೇವಸ್ಥಾನವೂ ಸಹ ಮಸೀದಿ ಜಾಗದಲ್ಲಿದೆ ಎಂದು ಮುಸಲ್ಮಾನ ಮುಖಂಡರು ಗ್ರಾಮಸ್ಥರ ಜೊತೆ ವಾಗ್ವಾದಕ್ಕಿಳಿದಿದ್ದಾರೆ. ಇದರಿಂದ ಗಲಾಟೆಗೆ ಆಗಿದ್ದು, ಗ್ರಾಮಸ್ಥರು ರೊಚ್ಚಿಗೆದ್ದು ಮುಖಂಡರ ಮನೆಗಳ ಮೇಲೆ ದಾಳಿ ಮಾಡಿದ್ದಾರೆ.

ಇನ್ನು ಮಸೀದಿಗೂ ಮೊದಲು ಅಲ್ಲಿ ದೇವಸ್ಥಾನ ಇತ್ತು. ಅದಕ್ಕೆ ಪುರಾವೆಯಾಗಿ ಚತುರ್ಮುಖ ಬ್ರಹ್ಮನ ವಿಗ್ರಹ ಸಿಕ್ಕಿದೆ ಎಂದು ಮುಖಂಡರು ಪ್ರತಿಪಾದಿಸಿದರು. ಇತ್ತ ಶಾಸಕ ರುದ್ರಪ್ಪ ಲಮಾಣಿ ಕಡಕೋಳಕ್ಕೆ ಭೇಟಿ ನೀಡಿದ್ದು, ಪೊಲೀಸರು 32 ಜನರನ್ನು ಬಂಧಿಸುವಾಗ ಎಲ್ಲಿ ಹೋಗಿದ್ರಿ? ಎಂದು ಶಾಸಕನನ್ನು ಗ್ರಾಮಸ್ಥರು ತರಾಟೆಗೆ ತೆಗೆದುಕೊಂಡರು.

ಬೆಳಗಾವಿ ಜಿಲ್ಲೆಯ ರೈತರಿಗೂ ವಕ್ಫ್ ಬೋರ್ಡ್ ಶಾಕ್ ತಗುಲಿದೆ. 30 ರೈತರ ಜಮೀನಿನ ಪಹಣಿ ಪತ್ರದಲ್ಲಿ ವಕ್ಫ್ ಆಸ್ತಿ ಎಂದು ಉಲ್ಲೇಖಿಸಲಾಗಿದೆ. ವಕ್ಫ್ ಬೋರ್ಡ್ ಹೊಡೆತಕ್ಕೆ ದಂಗಾದ ಬೆಳಗಾವಿ ಜಿಲ್ಲೆ ಕಾಗವಾಡ ತಾಲೂಕಿನ ಶೇಡಬಾಳ ಗ್ರಾಮದ 10 ರೈತ ಕುಟುಂಬಗಳು ಹಾಗೂ ಮೂಡಲಗಿ ತಾಲೂಕಿನ 20 ರೈತರ ಜಮೀನಿನ ಪಹಣಿ ಪತ್ರದಲ್ಲಿ ವಕ್ಫ್ ಆಸ್ತಿ ಎಂದು ನಮೂದು ಮಾಡಲಾಗಿದೆ.

ಒಟ್ಟಿನಲ್ಲಿ ವಕ್ಫ್ ವಿವಾದ ದಿನೇ ದಿನೇ ರಾಜ್ಯದ ಜಿಲ್ಲೆಗಳಿಗೆ ವ್ಯಾಪಿಸುತ್ತಿದ್ದು, ಇನ್ನಾದರೂ ಸರ್ಕಾರ ಗಮನಹರಿಸಿ ರೈತರ ಸಮಸ್ಯೆಗೆ ಪರಿಹಾರ ಸೂಚಿಸಬೇಕಿದೆ.

## ಹುನ್ನಾರ

ಹಲವು ಕಡೆ ಮೊದಲು ಡ್ಯಾಂನ ಗೇಟ್‌ಗಳು ಸೋರಿಕೆಯಾಗುತ್ತಿದ್ದ ಕಾರಣ ಕಳೆದ ಬಿಜೆಪಿ ಸರ್ಕಾರ ಸಂಪೂರ್ಣವಾಗಿ 150 ಕ್ರಸ್ಟ್ ಗೇಟ್‌ಗಳನ್ನು ಬದಲು ಮಾಡಲು ಮುಂದಾಗಿತ್ತು. ಸದ್ಯ ಹೀಗಾಗಲೇ ಈ ಕಾಮಗಾರಿ ಮುಕ್ತಾಯದ ಅಂಚಿನಲ್ಲಿ ಇದ್ದು, ಹಳೆಯ ಗೇಟ್‌ಗಳನ್ನು ಮಾರುವ ಹುನ್ನಾರ ಮಾಡಲಾಗುತ್ತಿದೆ. ಇದಕ್ಕೆ ರೈತರು ಹಾಗೂ ಪ್ರಗತಿಪರರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

ಹಳೆಯ ಗೇಟ್‌ಗಳನ್ನು ಮಾರಾಟ ಮಾಡುವ ಬದಲು ಬೃಂದಾವನದ ವ್ಯಾಪ್ತಿಯಲ್ಲಿ ಒಂದು ಮ್ಯೂಸಿಯಂ ಮಾಡಬೇಕು. ಆ ಮ್ಯೂಸಿಯಂನಲ್ಲಿ ಕನ್ನಂಬಾಡಿ ಕಟ್ಟೆ ಕಟ್ಟಿದ ಬಗೆ ಹಾಗೂ ಆ ಸಂದರ್ಭದಲ್ಲಿ ನಡೆದ ಘಟನಾವಳಿಗಳನ್ನು ವಿವರಿಸಬೇಕು. ಜೊತೆಗೆ ಈ 150 ಕ್ರಸ್ಟ್‌ಗಳನ್ನು ಅಲ್ಲಿಟ್ಟು, ಇಷ್ಟೊಂದು ಬೃಹತ್ ಗೇಟ್‌ಗಳನ್ನು ಯಂತ್ರಗಳ ಸಹಾಯವಿಲ್ಲದೇ ಹೇಗೆ ನಿರ್ಮಾಣ ಮಾಡಿದರು ಎಂಬುದನ್ನು ಜನರಿಗೆ ತೋರಿಸಬೇಕು. ಒಂದು ವೇಳೆ ವಿರೋಧದ ನಡೆವೆಯೇ ಗೇಟ್‌ಗಳನ್ನು ಮಾರಾಟ ಮಾಡಲು ಮುಂದಾದರೆ ರೈತ ಸಂಘ ಹೋರಾಟ ಮಾಡುವುದಾಗಿ ರೈತ ಸಂಘದ ಕೆಂಪೂಗೌಡ ಎಚ್ಚರಿಕೆ ನೀಡಿದ್ದಾರೆ.

## ಪೆಪ್ಪರ್ ಸ್ಪ್ರೇ

ಆ ಬಳಿಕ ಮಚ್ಚಿನಿಂದ ಹಲ್ಲೆಗೆ ಮುಂದಾಗಿದ್ದಾರೆ. ಇನ್ನೂ ಕೆಲವರು ಸ್ಥಳದಲ್ಲಿ ಹಣದ ಸಮೇತ ಎಸ್ಕೇಪ್ ಆಗಿದ್ದಾರೆ. ಸದ್ಯ ಇಸ್ಪೀಟ್ ಆಡುತ್ತಿದ್ದ 13 ಆರೋಪಿಗಳನ್ನು ಬಂಧಿಸಲಾಗಿದೆ.

3.80 ಲಕ್ಷ ನಗದನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬ್ಯಾಡರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದೀಪಾವಳಿಗೆ ಕೇಂದ್ರ ಸರ್ಕಾರದ ಉಡುಗೊರೆ

# 34 ರೂ.ಗೆ ಅಕ್ಕಿ ಮಾರಾಟ ಆರಂಭ

**ಬೆಂಗಳೂರು:** ಬಡ ಮತ್ತು ಮಧ್ಯಮ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಎಂಆರ್‌ಪಿ ದರದಲ್ಲಿ ಆಹಾರ ಧಾನ್ಯಗಳನ್ನು ವಿತರಿಸಲು ಕೇಂದ್ರ ಸರ್ಕಾರ ಮುಂದಾಗಿದೆ. ಕಡಿಮೆ ಬೆಲೆಯಲ್ಲಿ ಭಾರತ್ ಉತ್ಪನ್ನಗಳಾದ ಅಕ್ಕಿ, ಬೇಳೆ ಕಾಳುಗಳ ಪೂರೈಕೆಗೆ ಸರ್ಕಾರ ಕ್ರಮ ಕೈಗೊಂಡಿದೆ. ಇದೀಗ ಬೆಂಗಳೂರಿನಲ್ಲಿ ಈ ಉತ್ಪನ್ನಗಳ ಮಾರಾಟ ಮತ್ತೆ ಶುರುವಾಗಿದೆ. ಈ ಮೂಲಕ ದೀಪಾವಳಿಗೆ ಬೆಂಗಳೂರಿಗರಿಗೆ ಕೇಂದ್ರ ಸರ್ಕಾರ ಶುಭ ಸುದ್ದಿ ನೀಡಿದೆ.



ಭಾರತ್ ಉತ್ಪನ್ನಗಳ ಹಂತ 2ರಲ್ಲಿ ಬೆಂಗಳೂರಿನಲ್ಲಿ ಈ ಉತ್ಪನ್ನಗಳು ಕಡಿಮೆ ದರದಲ್ಲಿ ಸಿಗುವಂತೆ ಮಾಡಲಾಗಿದೆ. ಕೇಂದ್ರ ಗ್ರಾಹಕ ವ್ಯವಹಾರ ಮತ್ತು ನಾಗರಿಕ ಪೂರೈಕೆ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯದಿಂದ ಈ ಯೋಜನೆಯಡಿ ಬೆಂಗಳೂರಿನಲ್ಲಿ 34 ರೂ.ಗೆ ಅಕ್ಕಿ, 30 ರೂ.ಗೆ ಗೋಧಿ ಹಿಟ್ಟು, 70 ರೂ.ಗೆ ಕಡಲೆಬೇಳೆ, 107 ರೂ.ಗೆ ಹೆಸರುಬೇಳೆ ಲಭ್ಯವಾಗಲಿದೆ. ಮಾರುಕಟ್ಟೆಯಲ್ಲಿ ಅಕ್ಕಿ 55–60 ರೂ, ಗೋಧಿ 45–50 ರೂ, ಕಡಲೆಬೇಳೆ 90–100 ರೂ, ಹೆಸರುಬೇಳೆ 120–130 ರೂ.ಗೆ ಮಾರಾಟವಾಗುತ್ತಿದೆ. ದಿನೇ ದಿನೇ ಬೆಲೆ ಏರಿಕೆಯಿಂದ ಹೈರಾಣಾಗಿರುವ ಜನಸಾಮಾನ್ಯರಿಗೆ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಖುಷಿ ಸುದ್ದಿ ನೀಡಿದೆ. ದೀಪಾವಳಿ ಹಬ್ಬದ ಅಂಗವಾಗಿ ಎರಡನೇ ಹಂತದ ಭಾರತ್ ಬ್ರಾಂಡ್ ಯೋಜನೆಯನ್ನು ಅಕ್ಟೋಬರ್ 23ರಿಂದ ಪ್ರಾರಂಭಿಸಿದೆ. ಈಗ ಬೆಂಗಳೂರಿನಲ್ಲಿ ಈ ಯೋಜನೆಯ ಉತ್ಪನ್ನಗಳು ಲಭ್ಯ ಇವೆ.

ಗ್ರಾಹಕರಿಗೆ ಕೈಗೆಟುಕುವ ಬೆಲೆಯಲ್ಲಿ ಭಾರತ್ ಅಕ್ಕಿ, ಬೇಳೆ ಕಾಳುಗಳನ್ನು ವಾಹನಗಳ ಮೂಲಕ ವಿತರಿಸುವ ಕಾರ್ಯಕ್ಕೆ ಕೇಂದ್ರ ಸರ್ಕಾರ ಚಾಲನೆ ನೀಡಿತ್ತು. ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾಗಿರುವ ಪ್ರಲ್ಹಾದ್ ಜೋಶಿ ಅವರು ಆಹಾರ ಧಾನ್ಯ ಪೂರೈಕೆ ವಾಹನಕ್ಕೆ ನವದೆಹಲಿಯ ಕೃಷಿ ಭವನದಲ್ಲಿ ಚಾಲನೆ ನೀಡಿದ್ದರು.

ಚುನಾವಣೆಗೂ ಮೊದಲು ಕರ್ನಾಟಕದ ಹಲವೆಡೆ ಭಾರತ್ ಉತ್ಪನ್ನಗಳ ಮಾರಾಟವಾಗುತ್ತಿತ್ತು. ಆದರೆ, ಚುನಾವಣೆಯ ಬಳಿಕ ಈ ಯೋಜನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು. ಆ ವೇಳೆ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಈ ಯೋಜನೆ ಕೇಂದ್ರ ಸರ್ಕಾರದ ಕಣ್ಣೊರೆಸುವ ತಂತ್ರ, ಈ ಯೋಜನೆ ಮತ್ತೆ ಪುನರಾರಂಭ ಆಗುವುದಿಲ್ಲ ಎಂದು ಟೀಕಾಪ್ರಹಾರ ನಡೆಸಿದ್ದರು. ಇದೀಗ ಕೇಂದ್ರ ಸರ್ಕಾರದ ಈ ಮಹತ್ವಾಕಾಂಕ್ಷೆಯ ಯೋಜನೆ ಬೆಂಗಳೂರಿನಲ್ಲಿ ಮತ್ತೆ ಆರಂಭವಾಗಿದೆ.

## ಕಾಂಗ್ರೆಸ್ ಸರ್ಕಾರದ ಹಗರಣಗಳ ಬಗ್ಗೆ ಸಿನಿಮಾ ಮಾಡಿದ್ರೆ

# ಬಾಕ್ಸ್‌ಆಫೀಸ್ ಹಿಟ್ ಆಗುತ್ತೆ

**ಗದಗ:** ಕಾಂಗ್ರೆಸ್ ಸರ್ಕಾರದ ಹಗರಣಗಳ ಬಗ್ಗೆ ಸಿನೆಮಾ ಮಾಡಿದ್ರೆ ಬಾಕ್ಸ್‌ಆಫೀಸ್ ಹಿಟ್ ಆಗುತ್ತದೆ ಎಂದು ಮಾಜಿ ಸಚಿವ ಹಾಗೂ ಬಿಜೆಪಿ ನರಗುಂದ ಶಾಸಕ ಸಿ.ಸಿ ಪಾಟೀಲ್ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.



ನಗರದ ಕಚೇರಿಯಲ್ಲಿ ಮಾತನಾಡಿದ ಅವರು, ಹಗರಣಗಳ ಸುಳಿಯಲ್ಲಿ ಸರ್ಕಾರ ಸಿಲುಕಿದೆ. ತನ್ನ ಹಗರಣಗಳು ಬೆಳಕಿಗೆ ಬರಬಾರದೆಂದು ಒಂದಲ್ಲ ಒಂದು ಕಥೆ ಬಿಡುತ್ತಿದೆ. ಮೊದಲು ಹುಲಿ ಉಗುರಿನದು ಬಿಟ್ಟರು. ವಾಲ್ಮೀಕಿ ಹಗರಣ ಬಂದಾಗ ದರ್ಶನ್ ವಿಚಾರ ಬಂತು. ಈಗ ಮುಡಾ ಹಗರಣ ಬಂದಾಗ ವಕ್ಫ್ ಬೋರ್ಡ್ ಬಂದಿದೆ. ಹಗರಣಗಳನ್ನ ಮುಚ್ಚಿಹಾಕಲು ಒಂದಿಲ್ಲೊಂದು ದಂತಕಥೆಗಳನ್ನು ತೇಲಿಬಿಡುತ್ತಾರೆ. ಆಡಳಿತದ ವೈಫಲ್ಯತೆ ಕಡೆಗೆ ರಾಜ್ಯದ ಜನರ ಗಮನ ಹೋಗದ ಹಾಗೆ ನೋಡುತ್ತಿದ್ದಾರೆ. ಸಿಎಂ ಅವರು ಗಾಳಿ ಸುದ್ದಿ ಬಿಡುವುದರಲ್ಲಿ ನಿರತರಾಗಿದ್ದಾರೆ ಎಂದು ಆರೋಪಿಸಿದರು.

ನಿಮ್ಮ ಆಡಳಿತ ನಿಮಗೆ ತೃಪ್ತಿ ತರುತ್ತಿದೆಯಾ ಎಂದು ಆತ್ಮಸಾಕ್ಷಿಯಾಗಿ ಸಿಎಂ ಹೇಳಿ. 2 ವರ್ಷದಲ್ಲಿ ರಾಜ್ಯ ಏನು ಅಭಿವೃದ್ಧಿ ಆಗಿದೆ. ಗ್ಯಾರಂಟಿ ಕೊಟ್ಟಿದ್ದೇನೆ ಅಂತೀರಾ ಅದಕ್ಕೆ ವಿರೋಧ ಇಲ್ಲ. ಅಭಿವೃದ್ಧಿ ಏನು ಮಾಡಿದ್ದೀರಿ? ಕಾಂಗ್ರೆಸ್ ಪಕ್ಷದ ಶಾಸಕಾಂಗ ಸಭೆ ಕರೆದು ಶಾಸಕರ ಅಭಿಪ್ರಾಯ ಕೇಳಿ. ಆಗ ನಿಮ್ಮ ನೈಜ ಬಣ್ಣ ಗೊತ್ತಾಗುತ್ತೆ. ಸಿಎಂ ಡಿಸಿಎಂಗೆ ಹೇಳೋಕೆ ಇಚ್ಛೆ ಪಡುತ್ತೇನೆ. ಕನ್ನಡ ರಾಜ್ಯೋತ್ಸವದ ಬಗ್ಗೆ ಕೇವಲ ಡಿಸಿಎಂ ಜಾಹೀರಾತು ಬರುತ್ತದೆ. ಸಿಎಂದು ಹೆಚ್ಚು ಜಾಹಿರಾತು ಇಲ್ಲವೇ ಇಲ್ಲ. ಏನು ವಿಚಿತ್ರ ಸರ್ಕಾರ. ನಾನು 4ನೇ ಬಾರಿ ಶಾಸಕ, ನಾನಂತೂ ಇಂತಹ ಸರ್ಕಾರ ನೋಡಿದ್ದೇ ಇಲ್ಲ ಎಂದರು.

ಇನ್ನು ವಕ್ಫ್ ಆಸ್ತಿ ವಿಚಾರವಾಗಿ ಕಾಂಗ್ರೆಸ್ ವಿರುದ್ಧ ಮಾತನಾಡಿ, ಪಂಚಮಸಾಲಿ ಕೂಡಲಸಂಗಮ ಪೀಠ, ಹರಿಹರ ಪಂಚಮಸಾಲಿ ಪೀಠ ವಕ್ಫ್ ಬೋರ್ಡ್ ಅನ್ನುತ್ತಾರೋ ಏನೋ. ವಕ್ಫ್ ಬೋರ್ಡ್ ವಿಚಾರಕ್ಕೆ ಕಾಂಗ್ರೆಸ್‌ಗೆ ಮತ ಹಾಕಿದ ಹಿಂದೂಗಳು ವಿಚಾರ ಮಾಡಬೇಕು. ಇಂದು ಯಾರದೋ ಹೊಲಕ್ಕೆ ಬಂದಿದೆ, ನಾಳೆ ನನ್ನ ಮನೆಗೆ ಬರಲ್ಲ ಅನ್ನುವ ಗ್ಯಾರಂಟಿ ಏನು? ನಮ್ಮ ಮಠಕ್ಕೆ ಬರಲ್ಲ ಅನ್ನೋ ಗ್ಯಾರಂಟಿ ಏನಿದೆ? ಕೂಡಲಸಂಗಮ ಪಂಚಮಸಾಲಿ ಪೀಠಾನೂ ವಕ್ಫ್ ಬೋರ್ಡ್ ಅಂತಾರೋ ಏನೋ? ಕಾಂಗ್ರೆಸ್ ತುಷ್ಟೀಕರಣ ಓಲೈಕೆ ರಾಜಕಾರಣ ಮಾಡುತ್ತಿದ್ದಾರೆ. ವಿಜಯಪುರ ಜಿಲ್ಲೆಯಲ್ಲಿ ಸಾವಿರಾರು ಎಕರೆ ಜಮೀನು ಹಿಂದಿನ ದಿನ ರೈತರ ಹೆಸರಲ್ಲಿತ್ತು. ಮರುದಿನ ವಕ್ಫ್ ಬೋರ್ಡ್ ಹೆಸರಿನಲ್ಲಿ ಪಹಣಿ ಆಗಿದೆ. ಸಚಿವ ಜಮೀರ್ ಅಹ್ಮದ್ ವಿಜಯಪುರಕ್ಕೆ ಭೇಟಿ ಕೊಟ್ಟು ಬಂದ 24 ಗಂಟೆಯೊಳಗೆ ಸಾವಿರಾರು ಎಕರೆ ಜಮೀನನ್ನು ವಕ್ಫ್ ಬೋರ್ಡ್‌ಗೆ ವರ್ಗಾವಣೆ ಮಾಡಿದರು. ಇದಕ್ಕೆಲ್ಲಾ ಕಾರಣರಾದ ಅಲ್ಲಿನ ಜಿಲ್ಲಾಧಿಕಾರಿ ಬೂಬಾಲನ್ ಮೇಲೆ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

# ಗಡಿಜಿಲ್ಲೆಯಲ್ಲಿ ಕನ್ನಡವೇ ಸಾರ್ವಭೌಮ-ಶಾಸಕ ಕೃಷ್ಣಮೂರ್ತಿ

**ಯಳಂದೂರು:** ನಮ್ಮ ಚಾಮರಾಜನಗರ ಜಿಲ್ಲೆ ತಮಿಳುನಾಡು ಹಾಗೂ ಕೇರಳ ರಾಜ್ಯದ ಗಡಿಯನ್ನು ಹಂಚಿಕೊಂಡಿದೆ ಆದರೂ ಸಹ ಇಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಿದ್ದು ಇಲ್ಲಿನವರು ಕನ್ನಡಾಭಿಮಾನಿಗಳಾಗಿದ್ದಾರೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಬಣ್ಣಿಸಿದರು.

ಅವರು ಶುಕ್ರವಾರ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಬೆಂಗಳೂರಿನಂತಹ ಮಹಾನಗರದಲ್ಲಿ ಕನ್ನಡ ಭಾಷೆ ಮಾತನಾಡುವರ ಸಂಖ್ಯೆ ಕಡಿಮೆಯಾಗುತ್ತಿದೆ. ನಾವು ಕನ್ನಡದಲ್ಲೇ ವ್ಯವಹರಿಸುವ ಪರಿಪಾಠವನ್ನು ಬೆಳೆಸಿಕೊಳ್ಳಬೇಕು. ಭಾಷೆಯ ಬಗ್ಗೆ ಅಭಿಮಾನವನ್ನು ಮೂಡಿಸಿಕೊಳ್ಳಬೇಕು ಎಂದರು. ನಮ್ಮ ಜಿಲ್ಲೆಗೆ ಈ ಬಾರಿ ರಾಜ್ಯೋತ್ಸವ ಪ್ರಶಸ್ತಿಗೆ ಪುಟ್ಟೀರಮ್ಮ ಹಾಗೂ ಸುವರ್ಣ ಮಹೋತ್ಸವ ಸಾಧಕ ಪ್ರಶಸ್ತಿಗೆ ಎಂ.ಪಿ. ರಾಜು ಹಾಗೂ ಪ್ರೇಮಲತಾಪುಟ್ಟಸ್ವಾಮಿ ಎಂಬ ಮೂವರು ಆಯ್ಕೆಯಾಗಿರುವುದು ಅತೀವ ಸಂತಸ ತಂದಿದ್ದು ಇವರಿಗೆ ನಾನು ಅಭಿನಂದಿಸುತ್ತೇನೆ ಎಂದರು.

ಗ್ರಾಮೀಣ ಭಾಗದಲ್ಲಿ ಸಿಎಸ್ಆರ್ ಫಂಡ್‌ನಿಂದ ನನ್ನ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಂಗನೂರು, ಕೆಸ್ತೂರು, ಕುದೇರು ಗ್ರಾಮಗಳಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ನೂತನ



ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲಾಗುವುದು ಈ ಮೂಲಕ ಗ್ರಾಮೀಣ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಅನುವು ಮಾಡಿಕೊಡಲಾಗುವುದು. ತಾಲೂಕಿನಲ್ಲಿ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣಕ್ಕೆ ಜಾಗದ ಕೊರತೆ ಇದೆ. ಈಗಾಗಲೇ ಹೊನ್ನೂರು, ಮೆಳ್ಳಹಳ್ಳಿ, ವಡಗೆರೆ ಗ್ರಾಮಗಳಲ್ಲಿ ಜಾಗವನ್ನು ಗುರುತಿಸಲಾಗಿದ್ದು ಶೀಘ್ರದಲ್ಲೇ ಕ್ರೀಡಾಂಗಣ ನಿರ್ಮಾಣ ಮಾಡಲು ಕ್ರಮ ವಹಿಸಲಾಗುವುದು ಎಂದರು.

ಮುಖ್ಯ ಭಾಷಣಕಾರ ಟಿ. ನರಸೀಪುರ ಬಿಆರ್‌ಸಿ ಎನ್. ನಾಗೇಶ್ ಗಂಗವಾಡಿ ಮಾತನಾಡಿ, ನಮ್ಮ ಭಾಷೆಗೆ ಸಾವಿರಾರು ವರ್ಷಗಳ ಐತಿಹ್ಯವಿದೆ. ಇಲ್ಲಿನ ಜಾನಪದಲ್ಲಿ ಕನ್ನಡದ ಭಾಷಾ ಬಳಕೆ ಹಾಗೂ ಪದ ಬಳಕೆ ವೈವಿಧ್ಯತೆಯಿಂದ ಕೂಡಿದೆ. ಕದಂಬರಿಂದ ಹಿಡಿದು ಮೈಸೂರು ಅರಸರ ವರೆಗೂ ಎಲ್ಲಾ ರಾಜಮನೆತನಗಳು ಭಾಷೆ, ಸಂಸ್ಕೃತಿ, ಶಿಲ್ಪಕಲೆ, ಸಾಹಿತ್ಯ ಸೇರಿದಂತೆ ಎಲ್ಲಾ ಕ್ಷೇತ್ರಗಳಿಗೂ ಅಮೋಘ ಕೊಡುಗೆಯನ್ನು ನೀಡಿದ್ದಾರೆ. ಸ್ವತಂತ್ರ ನಂತರ ಭಾಷಾವಾರು ರಾಜ್ಯಗಳ ವಿಗಂಡಣೆ ನಂತರ ನಮ್ಮ ರಾಜ್ಯ ಉದಯವಾಗಿದ್ದು ಇದಕ್ಕೂ ಸುದೀರ್ಘ ಹೋರಾಟವೇ ನಡೆದಿದೆ ಇಂತಹ ಶ್ರೀಮಂತ ಭಾಷೆಗೆ ಇಂದು ಅನ್ಯ ಭಾಷೆ ಸವಾಲೊಡ್ಡುತ್ತಿದೆ. ಈ ನಿಟ್ಟಿನಲ್ಲಿ ನಾವು ಭಾಷೆಯನ್ನು ಮತ್ತಷ್ಟು ಶ್ರೀಮಂತಗೊಳಿಸಿ ಇದನ್ನು ಉಳಿಸಿ, ಬೆಳೆಸಿಕೊಳ್ಳುವತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಕನ್ನಡಾಂಬೆ ಫೋಟೊ ಮರೆತ ತಾಲೂಕು ಆಡಳಿತಕ್ಕೆ ಬಿಸಿ: ಇದಕ್ಕೂ ಮುಂಚೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲು ಕನ್ನಡಾಂಬೆಯ ಫೋಟೋವನ್ನೇ ಇಟ್ಟಿರಲಿಲ್ಲ. ಇದಕ್ಕೆ ಕನ್ನಡ ಪರ ಸಂಘಟನೆಯ ಸದಸ್ಯರು ಹಾಗೂ ಕೆಲ ಜನಪ್ರತಿನಿಧಿಗಳು ಆಕ್ರೋಶ ವ್ಯಕ್ತಪಡಿಸಿದರು. ಕೂಡಲೇ ಎಚ್ಚೆತ್ತುಕೊಂಡ ತಾಲೂಕು ಆಡಳಿತ ಫೋಟೋವನ್ನು ಇಟ್ಟು ಮೆರವಣಿಗೆಗೆ ಮುಂದಾಯಿತು. ಇದಲ್ಲದೆ ಪೂರ್ವಭಾವಿ ಸಭೆಯಲ್ಲಿ ವಿವಿಧ ಶಾಲೆಗಳಿಂದ ಟ್ಯಾಬ್ಲೋಗಳನ್ನು ಮಾಡಬೇಕೆಂದು ಹೇಳಲಾಗಿದ್ದರೂ ಇದನ್ನು ಮಾಡಿರಲಿಲ್ಲ. ಒಂದು ಮಂಗಳವಾದ್ಯವೂ ಇಲ್ಲದೆ ಮೆರವಣಿಗೆ ಕೇವಲ ಕಾಟಾಚಾರಕ್ಕೆ ನಡೆಯಿತು.

ಕನ್ನಡದಲ್ಲಿ ಹೆಚ್ಚು ಅಂಕಗಳಿದ ವಿದ್ಯಾರ್ಥಿಗಳಿಗೆ ಗೋಪಾಲಸ್ವಾಮಿ ಗ್ಯಾಸ್ ಏಜೆನ್ಸೀಸ್ ವತಿಯಿಂದ ನಗದು ಬಹುಮಾನ ಹಾಗೂ ಪ್ರಶಂಸನಾ ಪತ್ರವನ್ನು ವಿತರಣೆ ಮಾಡಲಾಯಿತು. ಶಾಲಾ ಮಕ್ಕಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆಯಿತು.

ಪಪಂ ಅಧ್ಯಕ್ಷೆ ಲಕ್ಷ್ಮಿಮಲ್ಲು, ಉಪಾಧ್ಯಕ್ಷೆ ಶಾಂತಮ್ಮ ನಿಂಗರಾಜು ಸದಸ್ಯರಾದ ಮಹೇಶ್, ವೈ.ಜಿ. ರಂಗನಾಥ, ಸವಿತಾ ಬಸವರಾಜು, ಬಿ. ರವಿ, ಸುಶೀಲಾ ಪ್ರಕಾಶ್ ನಾಮ ನಿರ್ದೇಶಿತ ಸದಸ್ಯರಾದ ಲಿಂಗರಾಜಮೂರ್ತಿ, ಮುನವ್ವರ್ ಬೇಗ್, ಶ್ರೀಕಂಠಸ್ವಾಮಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನದ ಅಧ್ಯಕ್ಷ ಎಚ್.ವಿ. ಚಂದ್ರು, ಜಿಪಂ ಮಾಜಿ ಉಪಾಧ್ಯಕ್ಷ ಜೆ. ಯೋಗೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್ ತಹಶೀಲ್ದಾರ್ ಜಯಪ್ರಕಾಶ್ ಮುಖ್ಯಾಧಿಕಾರಿ ಎಂಪಿ. ಮಹೇಶ್‌ಕುಮಾರ್, ಬಿಇಒ ಮಾರಯ್ಯ, ಉಪಪ್ರಾಂಶುಪಾಲ ನಂಜುಂಡಯ್ಯ ಕಸಾಪ ಅಧ್ಯಕ್ಷ ಯರಿಯೂರು ನಾಗೇಂದ್ರ, ಕರವೇ ಜಿಲ್ಲಾ ಉಪಾಧ್ಯಕ್ಷ ವೈ.ಕೆ. ಮೋಳೆ ನಾಗರಾಜು ಇದ್ದರು.

### ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಆಶಯ

# ಕರ್ನಾಟಕ ರಾಜ್ಯೋತ್ಸವ ನಮ್ಮೆಲ್ಲರ ನಿತ್ಯೋತ್ಸವವಾಗಲಿ

**ಚಾಮರಾಜನಗರ:** ಕರ್ನಾಟಕ ರಾಜ್ಯೋತ್ಸವ ಪ್ರತಿಯೊಬ್ಬ ಕನ್ನಡಿಗರ ನಿತ್ಯೋತ್ಸವವಾಗಬೇಕು ಎಂದು ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ತಿಳಿಸಿದರು.

ನಗರದ ಪೊಲೀಸ್ ಪರೇಡ್ ಮೈದಾನದಲ್ಲಿ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಕರ್ನಾಟಕ ರಾಜ್ಯೋತ್ಸವ ಆಚರಣೆ ಕಾರ್ಯಕ್ರಮದಲ್ಲಿ ರಾಜ್ಯೋತ್ಸವದ ಸಂದೇಶ ನೀಡಿ ಅವರು ಮಾತನಾಡಿದರು.

ಸ್ವಾತಂತ್ರ್ಯ ಪೂರ್ವ ಕಾಲದಲ್ಲಿ ವಿವಿಧ ಭಾಗಗಳಲ್ಲಿ ಹಂಚಿಹೋಗಿದ್ದ ಕನ್ನಡಿಗರ ವಿವಿಧ ಪ್ರದೇಶಗಳು ಒಂದುಗೂಡಿ ಕರ್ನಾಟಕ ರಾಜ್ಯವಾಗಿ ಉದಯವಾದ ಈ ಶುಭ ದಿನವನ್ನು ಪ್ರತಿ ವರ್ಷ ನಾಡಹಬ್ಬವನ್ನಾಗಿ ಆಚರಿಸುತ್ತಿದ್ದೇವೆ. ಕನ್ನಡ ರಾಜ್ಯೋತ್ಸವ ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಯ ಪ್ರಗತಿಗೆ ಪೂರಕ ಹಾಗೂ ಪ್ರೇರಕವಾಗಿದೆ. ನಾಡಿನ ಎಲ್ಲೆಡೆ ಕನ್ನಡ ಧ್ವಜವನ್ನು ಹಾರಿಸಿ ಸಹಬಾಳ್ವೆಯ ಸಂದೇಶ ನೀಡಿ ಸೌಹಾರ್ದತೆ ಪಸರಿಸುವ ಶುಭದಿನವೂ ಆಗಿದೆ ಎಂದು ಸಚಿವರು ತಿಳಿಸಿದರು.

ಕನ್ನಡ, ಕರ್ನಾಟಕ, ಕರುನಾಡು ಎಂಬುದು ನೆಲ ಮತ್ತು ಭಾಷೆಯಲ್ಲದೇ ಅದೊಂದು ಕನ್ನಡಿಗರ ಭಾವನೆ ಮತ್ತು ಬಾಂಧವ್ಯ ಎನಿಸಿಕೊಂಡಿದೆ. ಎಲ್ಲಾದರೂ ಇರು ಎಂತಾದರೂ ಇರು ಎಂದೆಂದಿಗೂ ನೀ ಕನ್ನಡವಾಗಿರು ಎಂಬಂತೆ ಕನ್ನಡ ನಾಡಲ್ಲಿ ಹುಟ್ಟಿರುವ ನಾವು ಎಲ್ಲೇ ಇದ್ದರೂ ಸಹ ಕನ್ನಡ ನಾಡು-ನುಡಿಯ ಘನತೆಯನ್ನು ಎತ್ತಿ ಹಿಡಿಯುವುದು ನಮ್ಮ ಹಿರಿಮೆ ಎನಿಸಿದೆ. ನಾಡಿನ ಏಕೀಕರಣಕ್ಕಾಗಿ ಶ್ರಮಿಸಿದ ಮಹನೀಯರ ಹೋರಾಟವನ್ನು ಸ್ಮರಿಸುವುದು ನಮ್ಮ ಆದ್ಯ ಕರ್ತವ್ಯವಾಗಿದೆ. ಆಡಳಿತಾತ್ಮಕ ಹಾಗೂ ಭಾವನಾತ್ಮಕ ಐಕ್ಯತೆಗಾಗಿ ಸಾವಿರಾರು ಕನ್ನಡಿಗರು ದುಡಿದಿದ್ದಾರೆ. ಈ ಎಲ್ಲಾ ಮಹಾನ್ ಚೇತನಗಳು ಸದಾ ಸ್ಮರಣೀಯರಾಗಿದ್ದಾರೆ ಎಂದರು.

ಕನ್ನಡ ಭಾಷೆ, ಸಾಹಿತ್ಯಕ್ಕೆ ಎರಡು ಸಾವಿರ ವರ್ಷಗಳ ಇತಿಹಾಸವಿದ್ದು, ವಿಶ್ವದಲ್ಲೇ ವಿಶೇಷಮನ್ನಣೆಗೆಪಾತ್ರವಾಗಿದೆ. ಕವಿಗಳು, ದಾಸಶ್ರೇಷ್ಠರು, ಬಸವಾದಿ ಶರಣರು ಕನ್ನಡ ನಾಡು ನುಡಿಯನ್ನು ಶ್ರೀಮಂತಗೊಳಿಸಿದ್ದಾರೆ. ಕನ್ನಡ ಭಾ?ಾ ಬೆಳಕನ್ನು ಮುಗಿಲೆತ್ತರಕ್ಕೆ ಬೆಳಗಿಸಿದ್ದಾರೆ. ಕೀರ್ತನೆ, ವಚನಗಳು, ಭಕ್ತಿಪಂಥ ಮೂಲಕ ಕನ್ನಡ ನಾಡಿನಲ್ಲಿ ನಾಡು ನುಡಿಯನ್ನು ಎತ್ತರಕ್ಕೆ ಕೊಂಡೊಯ್ದ ಕೀರ್ತಿ ರಾಜ್ಯಕ್ಕಿದೆ ಎಂದು ತಿಳಿಸಿದರು.

ಗಡಿ ಜಿಲ್ಲೆ ಚಾಮರಾಜನಗರ ಅನ್ಯಭಾಷೆಗಳ ನಡುವೆಯೂ ಭಾಷ ಸಾಮರಸ್ಯವನ್ನು ಕಾಪಾಡಿಕೊಂಡು



ಬಂದಿರುವುದು ಹೆಮ್ಮೆಯ ಸಂಗತಿಯಾಗಿದೆ. ಸಾಹಿತ್ಯಕ್ಕೆ ತನ್ನದೇ ಕೊಡುಗೆ ನೀಡಿರುವ ಇಲ್ಲಿನ ನೆಲದಲ್ಲಿ ಜಗತ್ತಿನ ಜಾನಪದ ಕಾವ್ಯದಲ್ಲೇ ಅತ್ಯುನ್ನತ ಎನಿಸಿರುವ ಮಲೆ ಮಹದೇಶ್ವರ, ಮಂಟೇಸ್ವಾಮಿ, ಬಿಳಿಗಿರಿರಂಗ, ಸಿದ್ದಪ್ಪಾಜಿ ಮಹಾ ಕಾವ್ಯಗಳು ಗಮನಾರ್ಹವಾಗಿವೆ. ಜಾನಪದ ಕಲೆಯ ತವರೂರು ಎಂದೇ ಕರೆಸಿಕೊಂಡಿರುವ ಜಿಲ್ಲೆಯು ಗೊರವರ ಕುಣಿತ, ಕಂಸಾಳೆ, ತಂಬೂರಿ, ನೀಲಗಾರರು, ವೀರಭದ್ರಕುಣಿತ, ಸೋಬಾನೆ ಪದಗಳು ಸೋಲಿಗರು, ಬುಡಕಟ್ಟು ಪರಂಪರೆಯ ದೇಸಿ ಸೊಬಗಿನಿಂದ ತನ್ನದೇ ಆದ ವೈಶಿಷ್ಟ್ಯ ಸ್ಥಾನವನ್ನು ಪಡೆದುಕೊಂಡಿದೆ ಎಂದರು.

ಚಾಮರಾಜನಗರ ಜಿಲ್ಲೆ ಶೇ. 50ಕ್ಕೂ ಹೆಚ್ಚು ಅರಣ್ಯ ಹೊಂದಿರುವ ಪ್ರಾಕೃತಿಕ ಸಂಪತ್ತು ಹೊಂದಿದ್ದು, ಜೊತೆಗೆ ಧಾರ್ಮಿಕ ಕ್ಷೇತ್ರಗಳು ಸಾಕಷ್ಟು ಇವೆ. ಬಂಡೀಪುರ, ಬಿಳಿಗಿರಿ ರಂಗನಾಥ ಸ್ವಾಮಿ, ಹುಲಿ ಸಂರಕ್ಷಿತ ಪ್ರದೇಶಗಳಿವೆ. ಮಲೆ ಮಹದೇಶ್ವರ ಬೆಟ್ಟ, ಬಿಳಿಗಿರಿ ರಂಗನ ಬೆಟ್ಟ, ಗೋಪಾಲಸ್ವಾಮಿ ಬೆಟ್ಟ ಸೇರಿದಂತೆ ಹಲವಾರು ಧಾರ್ಮಿಕ ಯಾತ್ರಾ ಸ್ಥಳಗಳು, ಭರಚುಕ್ಕಿ ಜಲಪಾತ ಸೇರಿದಂತೆ ಹಲವು ವೈವಿದ್ಯಮಯ ಪ್ರವಾಸೀ ತಾಣಗಳು ಜಿಲ್ಲೆಯಲ್ಲಿದ್ದು, ಪ್ರವಾಸೋದ್ಯಮಕ್ಕೆ ವಿಫುಲ ಅವಕಾಶಗಳನ್ನು ಹೊಂದಿದೆ. ಕಲೆ, ಸಾಹಿತ್ಯ, ಸಂಗೀತ, ಸಂಸ್ಕೃತಿ, ಪರಂಪರೆ, ಸಂಸ್ಕಾರ, ಜಾನಪದ ವೈದ್ಯ, ವಿಜ್ಞಾನ ಹೀಗೆ ನಾನಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಜಿಲ್ಲೆಯ ಕನ್ನಡಿಗರು ಸಾಕಷ್ಟು ಇದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ತಿಳಿಸಿದರು.

ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃ?ಣ್ಣಮೂರ್ತಿ, ಹೆಚ್.ಎಂ. ಗಣೇಶ್ ಪ್ರಸಾದ್, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ ಚಂದ್ರು, ಚಾಮರಾಜನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ), ನಗರಸಭಾ ಉಪಾಧ್ಯಕ್ಷರಾದ ಎಚ್.ಎಸ್. ಮಮತ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಕಾರ್ಯಕ್ರಮದಲ್ಲಿ ಇದ್ದರು.

**ನಗರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ಹಲ್ಮಿಡಿ ಶಾಸನದ ಪ್ರತಿಕೃತಿ ಅನಾವರಣ:** ಚಾಮರಾಜನಗರ, ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ನಗರದಲ್ಲಿಂದು ಕನ್ನಡದ ಮೊದಲ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಅನಾವರಣಗೊಳಿಸಿದರು. ಕರ್ನಾಟಕ ರಾಜ್ಯೋತ್ಸವ ಆಚರಣೆ ಕಾರ್ಯಕ್ರಮದ ಬಳಿಕ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ನಗರದ ಜಿಲ್ಲಾಡಳಿತ ಭವನದಲ್ಲಿರುವ ವರನಟ ಡಾ. ರಾಜ್ ಕುಮಾರ್ ಜಿಲ್ಲಾ ರಂಗಮಂದಿರ ಅವರಣದಲ್ಲಿಂದು ಕರ್ನಾಟಕ-ಸಂಭ್ರಮ-50ರ ಹಿನ್ನೆಲೆಯಲ್ಲಿ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಪರದೆ ಸರಿಸುವ ಮೂಲಕ ಉದ್ಘಾಟಿಸಿದರು.

## ಆಕರ್ಷಕ ಪಥಸಂಚಲನ

**ಚಾಮರಾಜನಗರ:** ನಗರದ ಪೊಲೀಸ್ ಪರೇಡ್ ಮೈದಾನದಲ್ಲಿ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಳಲಾಗಿದ್ದ ಸಂಭ್ರಮದ ಕರ್ನಾಟಕ ರಾಜ್ಯೋತ್ಸವ ಆಚರಣೆ ಕಾರ್ಯಕ್ರಮದಲ್ಲಿ ಪೊಲೀಸ್ ತುಕಡಿಗಳು ಹಾಗೂ ವಿವಿಧ ಶಾಲಾ ಮಕ್ಕಳಿಂದ ಆಕರ್ಷಕ ಪಥಸಂಚಲನ ನಡೆಯಿತು.

ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಕಾರ್ಯಕ್ರಮದ ಧ್ವಜಾರೋಹಣ ನೆರವೇರಿಸಿ, ತೆರೆದ ವಾಹನದಲ್ಲಿ ವಿವಿಧ ಪೊಲೀಸ್ ತುಕಡಿಗಳಿಂದ ಧ್ವಜ ವಂದನೆ ಸ್ವೀಕರಿಸಿದರು. ಬಳಿಕ ಜಿಲ್ಲಾ ಪೊಲೀಸ್ ಮೀಸಲು ಪಡೆ, ಸಿವಿಲ್ ಪೊಲೀಸ್ ಪಡೆ, ಗಸ್ತು ಅರಣ್ಯ ರಕ್ಷಕ ಪಡೆ, ಗೃಹರಕ್ಷಕ ದಳ, ಹಾಗೂ ಜೆ.ಎಸ್.ಎಸ್. ಬಾಲಕ, ಬಾಲಕಿಯರ ಶಾಲೆ, ಸಂತ ಜೋಸೆಫರ ಶಾಲೆ, ಸೇವಾ ಭಾರತಿ ಶಾಲೆ, ಸಂತ ಪೌಲರ ಶಾಲೆ, ಬಂಜಾರ ಇಂಡಿಯನ್ಸ್ ಶಾಲೆ, ಎಂ.ಸಿ.ಎಸ್. ಪಬ್ಲಿಕ್ ಶಾಲಾ ಮಕ್ಕಳು ನಡೆಸಿಕೊಟ್ಟ ಪಥಸಂಚಲನ ಆಕರ್ಷಣೀಯವಾಗಿತ್ತು. ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ರಾಜ್ಯೋತ್ಸವದ ಸಂದೇಶ ನೀಡಿ ಕವಿಗಳ ನೆಲೆವೀಡಾಗಿರುವ ಶಿಲ್ಪಕಲೆಗಳ ತವರೂರು ಎನಿಸಿರುವ ಕನ್ನಡ ನಾಡಿನಲ್ಲಿ ಕನ್ನಡಿಗರು ಶಾಂತಿಯಿಂದ ಸ್ವಾಭಿಮಾನಿಗಳಾಗಿ ಸಹಬಾಳ್ವೆ ನಡೆಸುವ ಮೂಲಕ ಎಲ್ಲರಿಗೂ ಮಾದರಿಯಾಗಿದ್ದಾರೆ. ಸಾಮರಸ್ಯ ಸಹೋದರತೆಗೆ ಮತ್ತೊಂದು ಹೆಸರೇ ಕರ್ನಾಟಕ ಎಂಬುದನ್ನು ಕನ್ನಡಿಗರು ಸಾರಿದ್ದಾರೆ ಎಂದರು. ಇದೇ ವೇಳೆ ಭುವನೇಶ್ವರಿ, ಮಹಾತ್ಮ ಗಾಂಧಿಜೀ, ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಗಣ್ಯರು. ಪುಷ್ಪಾರ್ಚನೆ ಸಲ್ಲಿಸಿದರು. ಬಳಿಕ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಜಿಲ್ಲೆಯ 21 ಸಾಧಕರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಅಲ್ಲದೆ ಗೃಹಭಾಗ್ಯ ಯೋಜನೆಯಡಿ ಖಾಯಂ ಪೌರಕಾರ್ಮಿಕರಿಗೆ ಉಚಿತ ನಿವೇಶನದ ಹಕ್ಕುಪತ್ರ ವಿತರಿಸಲಾಯಿತು. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ನಂತರ ವಿವಿಧ ಶಾಲಾ ಮಕ್ಕಳಿಂದ ನಾಡು-ನುಡಿ ಸ್ಮರಿಸುವ ಸಾಂಸ್ಕೃತಿಕ ಕಾರ್ಯಕ್ರಮ ಗಮನ ಸೆಳೆಯಿತು.

## ಬಾಡಿಗೆ ಕಟ್ಟಡಕ್ಕೆ ಮನವಿ

**ಮೈಸೂರು:** ಮೈಸೂರು ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಇಲಾಖೆಯ 100 ಕ್ಕಿಂತ ಹೆಚ್ಚು ಸಂಖ್ಯಾಬಲ ಹೊಂದಿರುವ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳ ಅವಶ್ಯಕವಿರುತ್ತದೆ. ಸಾಕಷ್ಟು ಗಾಳಿ ಬೆಳಕು, ನೀರಿನ ವ್ಯವಸ್ಥೆ, 10 ಸ್ನಾನದ ಗೃಹಗಳು, 10 ಶೌಚಾಲಯಗಳು ಹಾಗೂ ಮೂಲಭೂತ ಸೌಕರ್ಯವುಳ್ಳ ಸೂಕ್ತವಾದ ಬಾಡಿಗೆ ಕಟ್ಟಡ ಲಭ್ಯವಿರುವ ಆಸಕ್ತರು ಅಗತ್ಯ ದಾಖಲಾತಿಗಳೊಂದಿಗೆ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯ ದೂ.ಸಂ: 0821-2445447 ನ್ನು ಸಂಪರ್ಕಿಸಬಹುದು ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಟಾಕಿ ಮಾರಾಟ ಮಳಿಗೆಗಳಲಿ ಬಾಲ ಕಾರ್ಮಿಕರ ಬಳಕೆ ನಿಷೇಧ

**ಮೈಸೂರು:** ಮೈಸೂರು ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗಿದ್ದು, ಪಟಾಕಿ ತಯಾರಿಕೆ, ಪಟಾಕಿ ಮಾರಾಟ ಹಾಗೂ ಇತರೆ ಪ್ರಕ್ರಿಯೆಗಳು ಅಪಾಯಕಾರಿ ಉದ್ದಿಮೆಗಳ ವ್ಯಾಪ್ತಿಗೆ ಬರುವುದರಿಂದ ಅಂಗಡಿಗಳಲ್ಲಿ 18 ವರ್ಷದ ಒಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳುವುದನ್ನು ನಿಷೇಧಿಸಲಾಗಿದೆ. ಒಂದು ವೇಳೆ ಮಕ್ಕಳ ಬಳಕೆ ಕಂಡುಬಂದಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ ಕಾಯ್ದೆ) ಅನ್ವಯ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಮೈಸೂರು ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತರು ತಿಳಿಸಿದ್ದಾರೆ.

## ವಿದ್ಯುತ್ ನಿರ್ಮಾಣದ ಮಾರ್ಗಕ್ಕೆ ಚಾಲನೆ

**ಮೈಸೂರು:** ಹುಣಸೂರು ತಾಲ್ಲೂಕಿನ ಬೃಹತ್ ಕಾಮಗಾರಿ ವಿಭಾಗದ, ರತ್ನಪುರಿ (ಆಸ್ಪತ್ರೆಕಾವಲ್) ಗ್ರಾಮದಲ್ಲಿ ವಿದ್ಯುತ್ ಉಪಕೇಂದ್ರಕ್ಕೆ ಹಾಲಿ ಇರುವ ಜಿ.ವಿ.ಗುಡಿ ವಿ.ವಿ.ಕೇಂದ್ರದಿಂದ ಸುಮಾರು 6.955 ಕಿ.ಮೀ ವಿದ್ಯುತ್ ಏಕಮುಖ ಮಾರ್ಗ ನಿರ್ಮಾಣ ಮಾಡುತ್ತಿದ್ದು, ವಿದ್ಯುತ್ ಮಾರ್ಗಗಳನ್ನು ನವೆಂಬರ್ 04 ರಂದು ಅಥವಾ ನಂತರದ ಯಾವುದೇ ದಿನಾಂಕದಂದು ಚೇತನಗೊಳಿಸಲಾಗುವುದು(ವಿದ



'ೃತ್ ಹರಿಸಲಾಗುವುದು). ಮಾರ್ಗವು ಮೈಸೂರು ಜಿಲ್ಲೆಯ ಹುಣಸೂರು ತಾಲ್ಲೂಕಿನ ಆಸ್ಪತ್ರೆ ಕಾವಲ್, ಉದ್ದುರು ಕಾವಲ್, ತರಿಕಲ್ಲ ಕಾವಲ್, ತರಿಕಲ್, ತರಿಕಲ್ ನಾಲಾ ಹಳ್ಳದ ಕೊಪ್ಪಲು, ಧರ್ಮಾಪುರ, ಬಸ್ತಿಮಾದನಹಳ್ಳಿ, ಜಿ.ವಿ.ಗುಡಿ ಮತ್ತು ಕರಿಮುದ್ದನ ಹಳ್ಳಿ ಗ್ರಾಮಗಳಲ್ಲಿ ಹಾದು ಹೋಗುತ್ತದೆ. ಆದ್ದರಿಂದ ಸಾರ್ವಜನಿಕರು ಗೋಪುರಗಳಿಗೆ ದನಕರುಗಳನ್ನು ಕಟ್ಟುವುದು, ಲೋಹದ ಪಟ್ಟಿಯನ್ನು ತೆಗೆಯುವುದು, ಗೋಪುರಗಳನ್ನು ಹತ್ತುವುದು, ತಂತಿಗಳನ್ನು ಮುಟ್ಟುವುದು, ಗೋಪುರಗಳ ಕೆಳಗಡೆ ಮರಗಿಡಗಳನ್ನು ನೆಡುವುದು, ಗೋಪುರಗಳಿಗೆ ಬಳ್ಳಿ ಮತ್ತು ಹಗ್ಗ ಮುಂತಾದುವುಗಳನ್ನು ಎಸೆಯುವುದು, ಗಾಳಿಪಟವನ್ನು ಗೋಪುರದ ಹತ್ತಿರ ಹಾರಿಸುವುದನ್ನು ಮಾಡುವುದು ತುಂಬಾ ಅಪಾಯಕಾರಿ ಹಾಗೂ ಪ್ರಾಣ ಹಾನಿಯಾಗುವ ಸಂಭವವಿರುತ್ತದೆ. ಈ ಸೂಚನೆಯನ್ನು ಉಲ್ಲಂಘಿಸಿದಲ್ಲಿ ಉಂಟಾಗುವ ಯಾವುದೇ ತರಹದ ಅಪಘಾತ ಅಥವಾ ಪ್ರಾಣ ಹಾನಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಜವಾಬ್ದಾರರಲ್ಲ ಎಂದು ಕವಿಪ್ರನಿನಿ. ನ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನವೆಂಬರ್ 4 ರಿಂದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಗಳ ಸಮೀಕ್ಷೆ ಆರಂಭ

**ಮೈಸೂರು:** ಕೆ.ಆರ್.ನಗರ ಪುರಸಭೆ ವ್ಯಾಪ್ತಿಯಲ್ಲಿ ನವೆಂಬರ್ 04 ರಿಂದ 14 ರವರೆಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ಕೈಗೊಳ್ಳುತ್ತಿದ್ದು, ಈ ಹಿನ್ನೆಲೆ ಅರ್ಹ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳು ಕೆ.ಆರ್.ನಗರ ಪುರಸಭೆಯ ಆರೋಗ್ಯ ಶಾಖೆಯಲ್ಲಿ ಸದರಿ ಸಮೀಕ್ಷೆಗೆ ಸಂಬಂಧಿಸಿದ ವಿವರಗಳನ್ನು ನೀಡಬೇಕು ಎಂದು ನಗರ ಪುರಸಭೆಯ ಮುಖ್ಯ ಅಧಿಕಾರಿಗಳು ತಿಳಿಸಿದ್ದಾರೆ.

## ಪಟಾಕಿ ಸಿಡಿಸುವ ಬಳಕೆ ನಿಷೆಧ

**ಮೈಸೂರು:** ಮೈಸೂರು ನಗರದ ಕಮೀಷನರೇಟ್ ವ್ಯಾಪ್ತಿಯಲ್ಲಿರುವ ಶ್ರೀ ಚಾಮರಾಜೇಂದ್ರ ಮೃಗಾಲಯ, ಕುಕ್ಕರಹಳ್ಳಿ ಕೆರೆ ಪ್ರದೇಶ, ಕಾರಂಜಿ ಕೆರೆ ಪ್ರದೇಶ, ಲಿಂಗಾಬುದಿಕೆರೆ ಪ್ರದೇಶ, ಸಾರ್ವಜನಿಕ ಉದ್ಯಾನವನಗಳು, ಆಸ್ಪತ್ರೆ ಹಾಗೂ ನರ್ಸಿಂಗ್ ಹೋಂಗಳು, ಶೈಕ್ಷಣಿಕ ಸಂಸ್ಥೆಗಳು, ನ್ಯಾಯಾಲಯ ಹಾಗೂ ಧಾರ್ಮಿಕ ಸ್ಥಳಗಳ 100 ಮೀಟರ್ ಸುತ್ತಳತೆ ಪ್ರದೇಶವನ್ನು ಅಕ್ಟೋಬರ್ 30 ರಿಂದ ನವೆಂಬರ್ 02 ರ ಮಧ್ಯರಾತ್ರಿ 12.00 ಗಂಟೆಯ ವರೆಗೆ ನಿಶಬ್ದ ವಲಯ ಎಂದು ಘೋಷಿಸಲಾಗಿದೆ. ಈ ನಿಶಬ್ದ ವಲಯಗಳಲ್ಲಿ ಯಾವುದೇ ರೀತಿಯ ಪಟಾಕಿ ಸಿಡಿಸುವುದನ್ನು ನಿ?ೇಧಿಸಲಾಗಿದೆ ಎಂದು ಮೈಸೂರು ನಗರ ಪೋಲಿಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲ ಕಾರ್ಮಿಕ ಮಕ್ಕಳ ಬಳಕೆ ಬಗ್ಗೆ ಮಾಹಿತಿ ನೀಡಿ

**ಮೈಸೂರು:** ಮೈಸೂರು ದಸರಾ ಪ್ರದರ್ಶನದ ಆವರಣದಲ್ಲಿರುವ ಅಂಗಡಿಗಳಲ್ಲಿ ಹಾಗೂ ಮಳಿಗೆಗಳಲ್ಲಿ, ಹೋಟೆಲ್‌ಗಳಲ್ಲಿ, ಬಾಲ ಕಾರ್ಮಿಕರು ಹಾಗೂ ಕಿಶೋರ ಕಾರ್ಮಿಕರು ಮತ್ತು ಭಿಕ್ಷಾಟಣೆ ಮಾಡುವ ಮಕ್ಕಳು ಹಾಗೂ ಪೆನ್ನು ಪೆನ್ಸಿಲ್ ಮತ್ತು ಇತರೆ ವಸ್ತುಗಳನ್ನು ಮಾರಾಟ ಮಾಡುವ ಮಕ್ಕಳು ಕಂಡಬಂದಲ್ಲಿ ತಕ್ಷಣ ಮಕ್ಕಳ ಸಹಾಯವಾಣಿ 1098 ಗೆ ಸಂಪರ್ಕಿಸಿ ದೂರು ನೀಡಬಹುದು ಎಂದು ಮೈಸೂರು ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಗೆಳೆಯರ ಬಳಗದ ಸಂಭ್ರಮ

**ಮೈಸೂರು:** ನಗರದ ಕೆ.ಜಿ.ಕೊಪ್ಪಲಿನ ನ್ಯೂ ಕಾಂತರಾಜ ರಸ್ತೆಯ ಕನ್ನಡ ಗೆಳೆಯರ ಬಳಗದ ವತಿಯಿಂದ ಇಂದು ಕನ್ನಡ ರಾಜ್ಯೋತ್ಸವವನ್ನು ಸಂಭ್ರಮ, ಸಡಗರದಿಂದ ಆಚರಿಸಲಾಯಿತು. ಧ್ವಜಾರೋಹಣ ನೆರವೇರಿಸಿದ ಬಳಗದ ಅಧ್ಯಕ್ಷರಾದ ಬಿ.ಭೈರಪ್ಪರವರು ಮಾತನಾಡಿ, ಕನ್ನಡ ನುಡಿ, ನೆಲ, ಜಲ, ನೈಪುಣ್ಯತೆ ಇಂದು ನಶಿಸುತ್ತಿದೆ. ಇದನ್ನು ಉಳಿಸಿ, ಬೆಳೆಸಬೇಕಾಗಿದೆ. ಕನ್ನಡ ರಾಜ್ಯೋತ್ಸವ ನಿತ್ಯೋತ್ಸವವಾದರೆ, ಕನ್ನಡಕ್ಕೆ ಇನ್ನೂ ಹೆಚ್ಚಿನ ಗೌರವ, ಸ್ಥಾನಮಾನ ಲಭಿಸುತ್ತದೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಸಮಾಜ ಸೇವಕ ಚಾಮರಾಜು ಅವರು ಮಾತನಾಡಿ, ಕನ್ನಡ ಭಾಷೆ ಶಾಶ್ವತವಾಗಿ ಉಳಿಯಬೇಕಾದರೆ, ಸರ್ಕಾರಿ ಸಂಸ್ಥೆಗಳು ಹಾಗೂ ಶಾಲಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಕನ್ನಡವನ್ನು ಮಾತನಾಡಬೇಕು ಮತ್ತು ಬರೆಯಲು ಪ್ರೋತ್ಸಾಹಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಮಾತೃಭಾಷೆಯನ್ನು ಉಳಿಸುವುದೇ ಒಂದು ಸವಾಲಿನ ಕೆಲಸವಾಗುತ್ತದೆಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ, ಎಸ್.ನಿಂಗರಾಜು ನಗರತಳ್ಳಿ ಕನ್ನಡ ರಾಜ್ಯೋತ್ಸವ ಆಚರಿಸುತ್ತಿರುವುದು ತುಂಬಾ ಸಂತೋಷದ ಸಂಗತಿ. ಅದು ಒಂದು ದಿನಕ್ಕೆ ಸೀಮಿತವಾಗಬಾರದು. ಪ್ರತಿ ದಿನವೂ ಕನ್ನಡವನ್ನು ಬಳಸಬೇಕು. ಕನ್ನಡ ಮಾಧ್ಯಮದ ಶಾಲೆಗಳಿಗೆ ಹೆಚ್ಚಿನ ಪ್ರೋತ್ಸಾಹ ಪೋಷಕರು ನೀಡಬೇಕೆಂದು ತಿಳಿಸಿದರು. ವೇದಿಕೆಯಲ್ಲಿ ಕನ್ನಡ ಗೆಳೆಯರ ಬಳಗದ ಪದಾಧಿಕಾರಿಗಳು, ಬೇಡನ್ ಪೊವೆಲ್ ಶಾಲೆಯ ವರುಣ್, ನರ್ತನಂ ನೃತ್ಯ ಶಾಲೆಯ ಕನಸು, ಸಾತಗಳ್ಳಿ ಸೆಂಟ್ ಲಾರೆನ್ಸ್ ಶಾಲೆಯ ಮಾನಿಶಾ, ನೈಪುಣ್ಯ ನೃತ್ಯಶಾಲೆಯ ಪ್ರಣವ್, ಸಮಾಜ ಸೇವಕ ಮೋಹನ್ ಕುಮಾರ್ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ರಾಜ್ಯೋತ್ಸವ

**ಮೈಸೂರು:** ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ 69ನೇ ಕನ್ನಡ ರಾಜ್ಯೋತ್ಸವ ಮತ್ತು ಗಣ್ಯರನ್ನು ಅಭಿನಂದಿಸಲಾಯಿತು. ಚಿತ್ರದಲ್ಲಿ ಪೂಜ್ಯ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಮೈಸೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷರಾದ ಕೆ.ಬಿ.ಲಿಂಗರಾಜು, ಹಿರಿಯ ಸಮಾಜ ಸೇವಕರಾದ ಕೆ.ರಘುರಾಂ ವಾಜಪೇಯಿ, ಉದ್ಯಮಿ ನಾಗೇಶ್ ಕಾಡಯ್ಯ, ಶ್ರೀ ರಾಘವೇಂದ್ರ ಪ್ರತಿಷ್ಠಾನದ ಅಧ್ಯಕ್ಷರು, ಕಾರ್ಯಕ್ರಮದ ಸಂಯೋಜಕರಾದ ಎಸ್.ನಾಗರಾಜ ಹಾಗೂ ಸಮಾಜ ಸೇವಕ ರಾಜೇಂದ್ರರವರನ್ನು ಕಾಣಬಹುದು. ರಾಜ್ಯೋತ್ಸವದ ಅಂಗವಾಗಿ ಪೂಜ್ಯ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಹಾಗೂ ಶ್ರೀ ದತ್ತ ವಿಜಯಾನಂದತೀರ್ಥ ಸ್ವಾಮೀಜಿಯವರಿಗೆ ಗುರುವಂದನೆ ಮಾಡಲಾಯಿತು. ರಾಜ್ಯೋತ್ಸವದ ಅಂಗವಾಗಿ ಮೈಸೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷರಾದ ಕೆ.ಬಿ.ಲಿಂಗರಾಜುರವರನ್ನು



ಅಭಿನಂದಿಸಿ, ಸನ್ಮಾನಿಸಲಾಯಿತು.

ಶ್ರೀ ಗಣಪತಿ ಸ್ವಾಮೀಜಿಯವರ ಸಂದೇಶ: ಪೂಜ್ಯ ಸ್ವಾಮೀಜಿಯವರು ಮಾತನಾಡಿ, ಕನ್ನಡ ಭಾಷೆ ಅತ್ಯಂತ ಸುಲಭ ಭಾಷೆ. ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತಿದೆ. ರಾಜ್ಯೋತ್ಸವದ ಸಂದರ್ಭದಲ್ಲಿ ಕನ್ನಡ ಪುಸ್ತಕಗಳನ್ನು ಗಣ್ಯರಿಗೆ ನೀಡಬೇಕು. ಕನ್ನಡ ಪತ್ರಿಕೆಗಳನ್ನು ಹಾಗೂ ಕನ್ನಡ ಪುಸ್ತಕಗಳನ್ನು ಕನ್ನಡಿಗರು ಕೊಂಡು ಓದಬೇಕು. ಎಲ್ಲರಿಗೂ ಕನ್ನಡ ರಾಜ್ಯೋತ್ಸವದ ಶುಭಾಶಯಗಳು.

# ಕನ್ನಡ ಸಾಹಿತ್ಯ ಪರಿಷತ್ತಿನ ಕಚೇರಿ ಉದ್ಘಾಟಿಸಿದ ಶಾಸಕ

**ಯಳಂದೂರು:** ಪಟ್ಟಣದ ಸೊಸೈಟಿ ಬೀದಿಯಲ್ಲಿರುವ ಸರ್ಕಾರಿ ಪಬ್ಲಿಕ್ ಶಾಲೆಯ ಕಟ್ಟದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಕಚೇರಿಯನ್ನು ಶಾಸಕ ಎ.ಆರ್. ಕೃಷ್ಣಮೂರ್ತಿ ಶುಕ್ರವಾರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿಗೆ ನಿವೇಶನವನ್ನು ನೀಡುವಂತೆ ಅಧ್ಯಕ್ಷ ಯರಿಯೂರು ನಾಗೇಂದ್ರ ಹಲವಾರು ಬಾರಿ ಮನವಿ ಮಾಡಿದ್ದಾರೆ. ನಾನು ಕೂಡ ಪಟ್ಟಣ ಪಂಚಾಯಿತಿಯ ಸಾಮಾನ್ಯ ಸಭೆಯಲ್ಲಿ ಹಲವಾರು ಬಾರಿ ಈ ಬಗ್ಗೆ ಮಾತನಾಡಿದ್ದೇನೆ. ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಖಾಲಿ ನಿವೇಶನವನ್ನು ಗುರುತಿಸಿ ಶೀಘ್ರದಲ್ಲೇ ಕಸಾಪಗೆ ನೀಡಲಾಗುವುದು. ಅಲ್ಲದೆ ಈ ಪಟ್ಟಣದ ಅನೇಕ ಸಾಹಿತ್ಯ ರತ್ನಗಳಿಗೆ ಜನ್ಮ ನೀಡದ ಸ್ಥಳವಾಗಿದ್ದು ಇಲ್ಲಿನ ಬಡಾವಣೆ ಹಾಗೂ ಬೀದಿಗಳಿಗೆ ಇಲ್ಲಿನ ಸಾಹಿತಿಗಳ ಹೆಸರನ್ನು ಇಡುವಂತೆ ಹಾಗೂ ಪ್ರಥಮ ವಿಧಾನಸಭಾ ಚುನಾವಣೆಯಲ್ಲಿ ದ್ವಿಸದಸ್ಯ ಕ್ಷೇತ್ರವಾಗಿದ್ದ ಯಳಂದೂರಿನಲ್ಲಿ ಮೊದಲ ಬಾರಿಗೆ ಸ್ಪರ್ಧಿಸಿ ವಿಜೇತರಾಗಿದ್ದ ಬಿ. ರಾಚಯ್ಯ ಹಾಗೂ ರಾಜಶೇಖರಮೂರ್ತಿ ರವರ ಹೆಸರನ್ನು ಇಡುವಂತೆ ಕಸಾಪದ ಪದಾಧಿಕಾರಿಗಳು ಸಲಹೆ ನೀಡಿದ್ದಾರೆ. ಈ ಬಗ್ಗೆ ಪಪಂನಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು. ಪಟ್ಟಣದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಆಯೋಜನೆ ಮಾಡಲು ಸಹಕಾರ ನೀಡುವಂತೆ ಮನವಿ ಮಾಡಲಾಗಿದ್ದು ಈ ಬಗ್ಗೆ ಎಲ್ಲರ ಸಹಕಾರವನ್ನು ಪಡೆದುಕೊಂಡು ಸಮ್ಮೇಳನ ಆಯೋಜಿಸಲು ಎಲ್ಲಾ ರೀತಿಯ ಸಹಕಾರವನ್ನು ನೀಡಲಾಗುವುದು ಎಂದರು.

ಪಟ್ಟಣದ ಸರ್ಕಾರಿ ಪಬ್ಲಿಕ್ ಶಾಲೆಯಲ್ಲಿ ನೂತನವಾಗಿ ನಿರ್ಮಾಣವಾಗಿರುವ ಶಾಲಾ ಕಟ್ಟಡವನ್ನು ಶೀಘ್ರವಾಗಿ ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಲಾಗುವುದು. ಪಟ್ಟಣದಲ್ಲಿ ಸಾಹಿತ್ಯ ಚಟುವಟಿಕೆಗಳನ್ನು ನಡೆಸಲು ಸಂಪೂರ್ಣವಾಗಿ ನನ್ನ ಸಹಕಾರ ಇರುತ್ತದೆ. ಅಲ್ಲದೆ ಇಲ್ಲಿಗೆ ಪೀಠೋಪಕರಣ ಹಾಗೂ ಕಂಪ್ಯೂಟರ್ ನೀಡುವಂತೆ ಮನವಿ ಮಾಡಲಾಗಿದ್ದು ಇದನ್ನು ಕೊಡಿಸಿಕೊಡುವ ಭರವಸೆ ನೀಡಿದರು.

ಕಸಾಪ ಅಧ್ಯಕ್ಷ ಯರಿಯೂರು ನಾಗೇಂದ್ರ, ಮಾತನಾಡಿ, ಕಸಾಪ ಕಚೇರಿಗೆ ಕಟ್ಟಡ ನೀಡುವಂತೆ ಶಾಸಕರಿಗೆ ಮನವಿ ಮಾಡಲಾಗಿತ್ತು. ಇವರ ಸೂಚನೆ ಮೇರೆಗೆ ಬಿಇಒ ಹಾಗೂ ಕರ್ನಾಟಕ ಪಬ್ಲಿಕ್ ಶಾಲೆಯ ಉಪಪ್ರಾಂಶುಪಾಲ ನಂಜುಂಡಯ್ಯ ನಮಗೆ ಈ ಕಟ್ಟಡವನ್ನು ನೀಡಿದ್ದಾರೆ. ಇದಕ್ಕೆ ಕಸಾಪ ಚಿರಋಣಿಯಾಗಿದೆ. ಇದರಿಂದ ಮುಂದಿನ ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳಿಗೆ ಅನುಕೂಲವಾಗುತ್ತದೆ ಎಂದರು.

ಪಪಂ ಮುಖ್ಯಾಧಿಕಾರಿ ಎಂ.ಪಿ. ಮಹೇಶ್ ಕುಮಾರ್ ಕ್ಷೇತ್ರ ಶಿಕ್ಷಣಾಧಿಕಾರಿ ಮಾರಯ್ಯ ಮಾತನಾಡಿದರು. ಪಪಂ ಅಧ್ಯಕ್ಷೆ ಲಕ್ಷ್ಮಿಮಲ್ಲು, ಉಪಾಧ್ಯಕ್ಷೆ ಶಾಂತಮ್ಮ ನಿಂಗರಾಜು ಸದಸ್ಯರಾದ ಮಹೇಶ್, ವೈ.ಜಿ. ರಂಗನಾಥ, ಸವಿತಾ ಬಸವರಾಜು, ಬಿ. ರವಿ, ಸುಶೀಲಾ ಪ್ರಕಾಶ್ ನಾಮ ನಿರ್ದೇಶಿತ ಸದಸ್ಯರಾದ ಲಿಂಗರಾಜಮೂರ್ತಿ, ಮುನವ್ವರ್ ಬೇಗ್, ಶ್ರೀಕಂಠಸ್ವಾಮಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನದ ಅಧ್ಯಕ್ಷ ಎಚ್.ವಿ. ಚಂದ್ರು, ಜಿಪಂ ಮಾಜಿ ಉಪಾಧ್ಯಕ್ಷ ಜೆ. ಯೋಗೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್ ಪಪಂ ಮಾಜಿ ಸದಸ್ಯ ಜೆ. ಶ್ರೀನಿವಾಸ್, ಕರವೇ ಜಿಲ್ಲಾ ಉಪಾಧ್ಯಕ್ಷ ವೈ.ಕೆ. ಮೋಳೆ ನಾಗರಾಜು ಸೇರಿದಂತೆ ಅನೇಕರು ಇದ್ದರು.

# ನಾಡು ನುಡಿ ಜಲ ಸಂರಕ್ಷಣೆಗೆ ನಿರಂತರ ಹೋರಾಟ

**ಚನ್ನಪಟ್ಟಣ:** ನಾಡು ನುಡಿ ಜಲ ಸಂರಕ್ಷಣೆಗೆ ಹೋರಾಟ ಮಾಡುತ್ತಿದ್ದು ಮುಂದೆಯೂ ನಿತ್ಯ ನಿರಂತರ ಎಂದು ಕಸ್ತೂರಿ ಕರ್ನಾಟಕ ಜನಪರ ವೇದಿಕೆ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡ ಘೋಷಿಸಿದರು.

ಕಸ್ತೂರಿ ಕರ್ನಾಟಕ ಜನಪರ ವೇದಿಕೆಯಿಂದ ಪಟ್ಟಣದ ಕಾವೇರಿ ಸರ್ಕಲ್‌ನಲ್ಲಿ ಆಯೋಜಿಸಲಾಗಿದ್ದ 69ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ಕನ್ನಡ ಬಾವುಟ ವಿತರಣೆ, ಸಸಿ ವಿತರಣೆ, ಕನ್ನಡಕ್ಕಾಗಿ ಹೋರಾಡಿದ ಮಹನೀಯರು ಮತ್ತು ಜ್ಞಾನ ಪೀಠ ಪ್ರಶಸ್ತಿ ಪುರಸ್ಕೃತರಾದ ಕುವೆಂಪು, ಶಿವರಾಮ ಕಾರಂತ, ಮಾಸ್ತಿ ವೆಂಕಟೇಶ ಅಯ್ಯಂಗಾರ್, ವಿ.ಕೃ. ಗೋಕಾಕ್, ಗಿರೀಶ್ ಕಾರ್ನಾಡ್ ಹಾಗೂ ಕನ್ನಡಿಗರ ಹೃದಯ ಸಾಮ್ರಾಟ ಡಾ|| ರಾಜ್‌ಕುಮಾರ್ ಮುಂತಾದವರ ಭಾವಚಿತ್ರ ವಿತರಣೆ ಮತ್ತು ಆನೆ ಹಿಮ್ಮೆಟ್ಟಿಸಲು ಶ್ರಮಿಸಿದ ಐವರು ಅರಣ್ಯ ಇಲಾಖೆ ಸಿಬ್ಬಂದಿಗಳಿಗೆ ಅಭಿನಂದನಾ ಕಾರ್ಯಕ್ರಮದಲ್ಲಿ ಕನ್ನಡ ಧ್ವಜ ವಿತರಿಸಿ ಮಾತನಾಡುತ್ತಾ ಇಂದು ಕರ್ನಾಟಕದ ರಾಜಕಾರಣಿಗಳಿಗೆ ಇಚ್ಛಾಶಕ್ತಿಯಿಲ್ಲ. ನೂರಾರು ಜ್ವಲಂತ ಸಮಸ್ಯೆಗಳಿದ್ದರೂ ಗಮನ ಹರಿಸದೇ ತಮ್ಮ ಏಳಿಗೆಗೆ ಆಧ್ಯತೆ ನೀಡುತ್ತಿರುವುದು ಸರಿಯಾದ ಸಮಾಜ ಸೇವೆಯಲ್ಲ ಎಂದರು. ಕನ್ನಡ ನಾಡಿನ ಅಸ್ಮಿತೆಗಾಗಿ 1885ರಿಂದಲೂ ನೆಲದ ಸಹಸ್ರಾರು ವೀರ ಕನ್ನಡಿಗರ



ಅವಿರತ ಹೋರಾಟ ಮಾಡಿದ್ದರ ಪ್ರಯುಕ್ತ ಕನ್ನಡ ರಾಜ್ಯ ಅಸ್ತಿತ್ವ ಕಂಡಿದೆ. ಅದರಲ್ಲಿ ಕುವೆಂಪುರವರು, ಬಿ.ಎಂ.ಶ್ರೀಯವರ ಮೈ ನವಿರೇಳಿಸುವ ಕವನದ ಸಾಲುಗಳು ಕನ್ನಡಿಗರ ಮೈಮನದಲಿ ಹಾಸು ಹೊಕ್ಕಿದ್ದವು. ಆ ನಿಟ್ಟಿನಲ್ಲಿ ಡಿ. ದೇವರಾಜು ಅರಸು, ಜಯಚಾಮರಾಜ ಒಡೆಯರ್ ರವರ ಕಾರ್ಯ ಶ್ಲಾಘನೀಯ. ಕರ್ನಾಟಕದಲ್ಲಿ ಕನ್ನಡ ಆಡಳಿತದ ಭಾಷೆಯಾಗಬೇಕು ಎಂದು ಆಡಳಿತಾತ್ಮಕ ಆದೇಶ ನೀಡಿದ ರಾಮಕೃಷ್ಣ ಹೆಗ್ಗಡೆಯವರ ನಿರಂತರ ನೆನಪು ಸಹ ಅಗತ್ಯವೆಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವಿಶ್ರಾಂತ ಪ್ರಾಂಶುಪಾಲರಾದ ನಿಂಗೇಗೌಡರವರು ಮಾತನಾಡಿ ಕನ್ನಡ ರಾಜ್ಯೋತ್ಸವ ನಮ್ಮ ನಾಡ ಹಬ್ಬದ ಸಂದರ್ಭದಲ್ಲಿ ಕನ್ನಡ ನೆಲ ಜಲದ ಸಂರಕ್ಷಣೆ ಮತ್ತು ಉಳಿವಿಗೆ ಪ್ರತಿಜ್ಞೆ ಮಾಡಬೇಕು. ಆಳುವ ಸರ್ಕಾರಗಳು ಕನ್ನಡಿಗರ ಭಾವನೆಯನ್ನು ಅರಿಯಬೇಕು. ಈ ನಿಟ್ಟಿನಲ್ಲಿ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಕರ್ನಾಟಕ ರಾಜ್ಯದ ಸಕ್ರಿಯ ಸಂಘಟನೆ ಕಸ್ತೂರಿ ಕರ್ನಾಟಕ ಜನಪರ ವೇದಿಕೆ ವರ್ಷದಿಂದ ನಿರಂತರವಾಗಿ ಜಲ ರಕ್ಷಣೆ, ನುಡಿ ರಕ್ಷಣೆ ಕಾರ್ಯಕ್ರಮ ಆಯೋಜಿಸಿಕೊಂಡು ಸರ್ಕಾರಕ್ಕೆ ಚಾಟಿ ಬೀಸುತ್ತಾ ಬಂದಿರುವುದು ಶ್ಲಾಘನೀಯವೆಂದರು.

## 3ಫೇಸ್ ವಿದ್ಯುತ್ ಪೂರೈಕೆ

**ಕೋಲಾರ:** ಕೋಲಾರ ಕ.ವಿ.ಪ್ರ.ನಿ.ನಿ ಬೃಹತ್ ಕಾಮಗಾರಿ ವಿಭಾಗದವರು 66ಕೆವಿ ಕೋಲಾರ-ವೇಮಗಲ್ -ಕ್ಯಾಲನೂರು ಮಾರ್ಗಗಳಲ್ಲಿ ವಿವಿಧ ಕಾಮಗಾರಿಗಳನ್ನು ನಿರ್ವಹಿಸುತ್ತಿರುವುದರಿಂದ 66/11ಕೆವಿ ವೇಮಗಲ್, ಕ್ಯಾಲನೂರು, ತಲಗುಂದ ಮತ್ತು ತಳಗವಾರ ವಿದ್ಯುತ್ ಉಪಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಕೃಷಿ ವಿದ್ಯುತ್ ಮಾರ್ಗಗಳಿಗೆ 3ಫೇಸ್ ವಿದ್ಯುತ್‌ನ್ನು ನವೆಂಬರ್ 03 ರಿಂದ ನವೆಂಬರ್ 17 ರವರೆಗೆ ಸಂಜೆ 6.00 ಗಂಟೆಯಿಂದ ಬೆಳಗ್ಗೆ 10.00 ಗಂಟೆಯೊಳಗೆ ಪೂರೈಸಲಾಗುವುದು. ಈ ಉಪಕೇಂದ್ರಗಳ ಕೃಷಿ ಮಾರ್ಗಗಳ ಗ್ರಾಹಕರು ಬೆವಿಕಂ ಜೊತೆ ಸಹಕರಿಸಬೇಕೆಂದು ವಾಣಿಜ್ಯ, ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾಕ್ ಅದಾಲತ್

**ಕೋಲಾರ:** ಕೋಲಾರ ವಿಭಾಗದ ಹಿರಿಯ ಅಂಚೆ ಅಧೀಕ್ಷಕರ ಕಛೇರಿದಲ್ಲಿ ನವೆಂಬರ್ 05 ರಂದು ಬೆಳಿಗ್ಗೆ 11.00 ಗಂಟೆಗೆ ದಾಕ್ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ವ್ಯಾಪ್ತಿಯ ಸಾರ್ವಜನಿಕರು ಅಂಚೆ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸೌಲಭ್ಯಗಳು, ಉಳಿತಾಯ ಬ್ಯಾಂಕಿಂಗ್ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಕುಂದುಕೊರತೆಗಳು ಹಾಗೂ ಸಲಹೆಗಳು ಇದ್ದರೆ ನವೆಂಬರ್ 04 ರೊಳಗೆ ಹಿರಿಯ ಅಂಚೆ ಅಧೀಕ್ಷಕರು ಕಛೇರಿಗೆ ತಲಪುವಂತೆ ಕಳುಹಿಸಬೇಕು. ಅಲ್ಲದೇ ನವೆಂಬರ್ 05 ರಂದು ಬೆಳಿಗ್ಗೆ 11.00 ಗಂಟೆಗೆ ನಡೆಯುವ ದಾಕ್ ಅದಾಲತ್ ಕಾರ್ಯಕ್ರಮದಲ್ಲಿ ಖುದ್ದಾಗಿ ಭೇಟಿ ನೀಡಿ ಸಲ್ಲಿಸಬಹುದು ಎಂದು ಹಿರಿಯ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2025-26 ನೇ ಶೈಕ್ಷಣಿಕ ಸಾಲಿಗೆ ವಿವಿಧ ಸಂಯೋಜನೆಗಾಗಿ ಅರ್ಜಿ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ 2025-26ನೇ ಶೈಕ್ಷಣಿಕ ಸಾಲಿಗೆ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬೆಂಗಳೂರು ನಗರ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಾದ ಬಸವನಗುಡಿ, ಚಾಮರಾಜಪೇಟೆ, ಹೆಬ್ಬಾಳ, ಬಿ.ಟಿ.ಎಂ. ಲೇಔಟ್, ಬ್ಯಾಟರಾಯನಪುರ, ಚಿಕ್ಕಪೇಟೆ, ಗಾಂಧಿನಗರ, ಜಯನಗರ, ಮಲ್ಲೇಶ್ವರಂ, ರಾಜಾಜಿನಗರ, ಶಾಂತಿನಗರ, ಶಿವಾಜಿನಗರ ಮತ್ತು ಯಲಹಂಕ ವ್ಯಾಪ್ತಿಯಲ್ಲಿರುವ ಕಾಲೇಜುಗಳಿಂದ ಮತ್ತು ಶಿಕ್ಷಣ ಸಂಸ್ಥೆಗಳಿಂದ ವಿವಿಧ ರೀತಿಯ ಸಂಯೋಜನೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕಾಲೇಜುಗಳು ಮತ್ತು ಆಡಳಿತ ಮಂಡಳಿಗಳು ಸರ್ಕಾರದ ಯು.ಯು.ಸಿ.ಎಂ.ಎಸ್ ತಂತ್ರಾಂಶದ ವೆಬ್‌ಸೈಟ್ https://uucms.karnataka.gov.in/ ಮುಖಾಂತರ ಮಾತ್ರ ಸಂಯೋಜನಾ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಅರ್ಜಿಗಳನ್ನು ದಂಡ ಶುಲ್ಕ ರಹಿತವಾಗಿ ನವೆಂಬರ್ 21 ರೊಳಗೆ ಸಲ್ಲಿಸಬೇಕು. ರೂ. 12,500/- ದಂಡ ಶುಲ್ಕದೊಂದಿಗೆ ನವೆಂಬರ್ 26 ರವರೆಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್ ಸೈಟ್ www.bcu.ac.inನೋಡಬಹುದು ಎಂದು ಪ್ರಕಟಣೆ ತಿಳಿಸಿದೆ.

## ವಿವಿಧ ಯೋಜನೆಗಳಿಗೆ ಆಹ್ವಾನ

**ಮೈಸೂರು:** 2024-25 ನೇ ಸಾಲಿನ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ ಮೈಸೂರು ಜಿಲ್ಲೆಯಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಜನಾಂಗದವರಿಗಾಗಿ ವಿವಿಧ ಯೋಜನೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ. ಯೋಜನೆಯಡಿ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ (ನೊಂದಾಯಿತ ಸ್ವ-ಸಹಾಯ ಮಹಿಳಾ ಸಂಘಗಳಿಗೆ), ಗಂಗಾ ಕಲ್ಯಾಣ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಉದ್ಯಮ ಶೀಲತಾ ಯೋಜನೆಗೆ 50 ವರ್ಷ ಮೀರಿರಬಾರದು ಸ್ವಯಂ ಉದ್ಯೋಗ ಹಾಗೂ ಇನ್ನುಳಿದ ಯೋಜನೆಗೆ 60 ವರ್ಷದೊಳಗಿರಬೇಕು, ಫಲಾಪೇಕ್ಷಿಗಳ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದಲ್ಲಿ ವಾಸಿಸುವವರಿಗೆ ರೂ. 1.50 ಲಕ್ಷ, ಹಾಗೂ ನಗರ ಪ್ರದೇಶದಲ್ಲಿ ವಾಸಿಸುವವರಿಗೆ ರೂ. 2.00 ಲಕ್ಷ ಮಿತಿಯಲ್ಲಿರಬೇಕು, ಕುಟುಂಬದ ಸದಸ್ಯರು ಸರ್ಕಾರಿ, ಅರಿ ಸರ್ಕಾರಿ ನೌಕರರಾಗಿರಬಾರದು, ಕುಟುಂಬದವರು ಈ ಹಿಂದೆ ನಿಗಮದಿಂದ ಯಾವುದಾದರೂ ಸೌಲಭ್ಯ ಪಡೆದಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ, ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯ ಪಡೆಯಲು ಫಲಾಪೇಕ್ಷಿಯು ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು ಹಾಗೂ 2023-24 ನೇ ಸಾಲಿನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆಸಕ್ತ ಅರ್ಹ ಫಲಾಪೇಕ್ಷಿಗಳು ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ https://suvidha.karnataka.gov.in ವೆಬ್‌ಸೈಟ್ ಮೂಲಕ ನವೆಂಬರ್ 23 ರೊಳಗೆ ಸಲ್ಲಿಸಬಹುದು. ಹಾಗೂ ನಿಗಮದ ನಿರ್ದೇಶಕ ಮಂಡಳಿ, ವಿವೇಚನಾ ಕೋಟಾ ಅಥವಾ ಸರ್ಕಾರದ ಸಾಂಸ್ಥಿಕ ಕೋಟಾದಡಿ ಸ್ವೀಕರಿಸುವ ಅರ್ಜಿಗಳನ್ನು ಸಹ ಸೇವಾಸಿಂಧು ಪೋರ್ಟಲ್ ಮೂಲಕವೇ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯ ದೂ.ಸಂ: 0821-2430022 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾಷಾಭಿಮಾನ ರಾಜ್ಯೋತ್ಸವಕ್ಕೆ ಸೀಮಿತ ಬೇಡ

**ಹುಳಿಯಾರು:** ಭಾಷಾಭಿಮಾನವು ಬರೀ ರಾಜ್ಯೋತ್ಸವಕ್ಕೆ ಮಾತ್ರ ಸೀಮಿತವಾಗದೆ ಸದಾ ಬಳಸಿ ಬೆಳೆಸುವಂತಾಬೇಕು ಎಂದು ನಿವೃತ್ತ ಶಿಕ್ಷಕ ಟಿ.ಜಯಣ್ಣನವರು ತಿಳಿಸಿದರು.

ಹುಳಿಯಾರಿನ ಕೇಶವ ವಿದ್ಯಾ ಮಂದಿರದಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿ ಪರ ಭಾಷೆಗಳ ವ್ಯಾಮೋಹಕ್ಕೆ ಬಲಿಯಾಗಿ ನಮ್ಮತನವನ್ನು ಕಳೆದುಕೊಳ್ಳಬಾರದು. ಮೊದಲು ಮಾತೃಭಾಷೆಗೆ ಆದ್ಯತೆ ನೀಡಬೇಕು ಎಂದು ಕಿವಿಮಾತು ಹೇಳಿದರು.

ವಿದ್ಯಾ ಸಂಸ್ಥೆಯ ಕಾರ್ಯದರ್ಶಿಗಳಾದ ಎಚ್.ಡಿ.ದಾಸಪ್ಪ ಮಾತನಾಡಿ ಕನ್ನಡ ಪುರಾತನ ಪ್ರಿಯವಾದ ಭಾಷೆಯಾಗಿದೆ. ಕನ್ನಡಕ್ಕೆ 8 ಜ್ಞಾನ ಪೀಠ ಪ್ರಶಸ್ತಿಗಳು ಲಭಿಸಿದೆ. ಕನ್ನಡ ಆಡಳಿತ ಭಾಷೆಯಾಗಿ ಸಂಪೂರ್ಣವಾಗಿ ಜಾರಿಗೊಳಿಸಲು ಸರ್ಕಾರ ಪ್ರಯತ್ನಿಸಬೇಕು. ಕನ್ನಡ ನಾಡಿನ ಭಾಷೆ, ಕಲೆ, ಸಂಸ್ಕೃತಿಯನ್ನು ಪೋಷಿಸಬೇಕು. ಕನ್ನಡದಲ್ಲಿಯೇ ವ್ಯವಹಾರ ಮಾಡಬೇಕು ಎಂದರು.



ಶಾಲಾ ಮಕ್ಕಳಿಂದ ವಿವಿಧ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲಾಯಿತು. ಕಿತ್ತೂರು ರಾಣಿ ಚೆನ್ನಮ್ಮ, ಒನಕೆ ಓಬವ್ವ, ಕನ್ನಡ ಬಳಸಿ ನಾಡು ಉಳಿಸಿ ಕಿರು ನಾಟಕಗಳು ಹಾಗೂ ಕನ್ನಡ ನಾಡು ನುಡಿಗೆ ಸಂಬಂಧಪಟ್ಟ ಹಲವು ಗೀತೆಗಳಿಗೆ ನೃತ್ಯ ಪ್ರದರ್ಶನ ಹಾಗೂ ಭಾಷಣವನ್ನು ವಿದ್ಯಾರ್ಥಿಗಳು ಮಾಡಿದರು. ಹುಳಿಯಾರಿನ ಪ್ರಮುಖ ಬೀದಿಗಳಲ್ಲಿ ಕನ್ನಡ ನಾಡು ನುಡಿಗೆ ಹೋರಾಡಿದ ಮಹನೀಯರ ವೇಷಭೂಷಣಗಳನ್ನು ತೊಟ್ಟ ಮಕ್ಕಳೊಂದಿಗೆ ಜಾಗೃತಿ ಜಾಥ ಮಾಡಲಾಯಿತು.

ನಿರ್ದೇಶಕರುಗಳಾದ ರಾಮ್‌ಪ್ರಸಾದ್, ಚನ್ನಬಸಯ್ಯ, ಸತೀಶ್, ರಘುನಾಥ್, ಶ್ರೀಕಂಠ ಮೂರ್ತಿ, ಮುಖ್ಯೋಪಾಧ್ಯಾಯರಾದ ಎಚ್.ಬಿ.ಸನತ್ ಕುಮಾರ್ ಹಾಗೂ ಶಾಲಾ ಸಿಬ್ಬಂದಿ ವರ್ಗದವರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

# ಶಾಲೆಗಳಿಗೆ ಬ್ಯಾಂಡ್‌ಸೆಟ್ ಕೊಡುಗೆ

**ಹುಳಿಯಾರು:** ಹುಳಿಯಾರು ಹೋಬಳಿಯ ಕೆಂಕೆರೆ ಗ್ರಾಮ ಪಂಚಾಯ್ತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ಕೆಂಕೆರೆ ಗೊಲ್ಲರಹಟ್ಟಿ, ಕೆ.ಸಿ.ಪಾಳ್ಯ, ಕೆ.ಎಸ್.ಪಾಳ್ಯದ ಪ್ರಾಥಮಿಕ ಶಾಲೆ ಹಾಗೂ ಕೆಂಕೆರೆಯ ಶಿವಲಿಂಗಯ್ಯ ಪೌಢಶಾಲೆ ಬ್ಯಾಂಡ್ ಸೆಟ್ ವಿತರಿಸಲಾಯಿತು.

ಪಿಡಿಒ ತಿಪ್ಪೇಸ್ವಾಮಿ ಮಾತನಾಡಿ ಕರ್ನಾಟಕದಲ್ಲಿ ವೈವಿಧ್ಯಮಯ ಸಂಸ್ಕೃತಿ, ಜೀವನಪದ್ಧತಿ ನೆಲೆಸಿದೆ. ಇದು ಭಾವೈಕ್ಯತೆ ಸ್ವರ್ಗ ಹಾಗೂ ಸಾಮರಸ್ಯದ ಬೀಡಾಗಿದ್ದು, ಸರ್ವಧರ್ಮಗಳ ಸಮನ್ವಯತೆ, ಸೌಹಾರ್ದ ಮನೆ ಮಾಡಿದೆ. ಕನ್ನಡದ ಜಾನಪದ ಕಲೆಯೂ ಶ್ರೀಮಂತವಾಗಿದೆ. ಗ್ರಾಮೀಣ ಭಾಗದ ಮುಗ್ಧ ಜನಸಮುದಾಯದಿಂದಲೇ ಈ ಜನಪದ ಕಲೆ ಗಟ್ಟಿಯಾಗಿ ಬೇರೂರಿದೆ ಎಂಬುದು ವಿಶೇಷ ಎಂದು ಹೇಳಿದರು. ಅಧ್ಯಕ್ಷೆ ಗಂಗಮ್ಮ, ಸದಸ್ಯುಗಳಾದ ಮಂಜುನಾಥ್, ರಂಗಣ್ಣ, ಗೌಸ್ ಪೀರ್, ಭಾಗ್ಯಮ್ಮ, ಕಾರ್ಯದರ್ಶಿ ಇಂದ್ರಾಣಿ, ಮುಖ್ಯಶಿಕ್ಷಕ ಮಲ್ಲೇಶಪ್ಪ, ರಂಗಪ್ಪ, ಕೆ.ಸಿ.ಪಾಳ್ಯದ ಕೆ.ಆರ್.ಮಂಜುನಾಥ್ ಸೇರಿದಂತೆ ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



# ಕರ್ನಾಟಕಏಕೀಕರಣಕ್ಕಾಗಿ ಹೋರಾಡಿದ ಸ್ಮರಣೀಯರ ಸಂಖ್ಯೆ ಬಹುದೊಡ್ಡದು

**ರಾಮನಗರ:** ಜಿಲ್ಲಾಡಳಿತದ ವತಿಯಿಂದ ನಗರದಜಿಲ್ಲಾಕ್ರೀಡಾಂಗಣದಲ್ಲಿ ನ. 01ರ ಶುಕ್ರವಾರಆಯೋಜಿಸಲಾಗಿದ್ದ 69ನೇ ಕನ್ನಡರಾಜ್ಯೋತ್ಸವ ಸಮಾರಂಭದಲ್ಲಿ ಸಾರಿಗೆ, ಮುಜರಾಯಿ ಹಾಗೂ ರಾಮನಗರಜಿಲ್ಲಾಉಸ್ತುವಾರಿ ಸಚಿವರಾದರಾಮಲಿಂಗಾರೆಡ್ಡಿಅವರುರಾಷ್ಟ್ರಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿ, ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಸಂದೇಶ ನೀಡಿದರು.

**ಸಂದೇಶದ ಸಾರಇಂತಿದೆ:** ನಾಡಿನ 'ಸಮಸ್ತ ರಾಮನಗರಜಿಲ್ಲೆಯನಾಗರಿಕಬಂಧುಗಳೇತಮ್ಮೆಲ್ಲರಿಗೂ 69ನೇಕನ್ನಡರಾಜ್ಯೋತ್ಸವದಶುಭಾಶಯಗಳು. ಕನ್ನಡರಾಜ್ಯೋತ್ಸವಆಚರಣೆಯ ಈ ಸುಸಂದರ್ಭದಲ್ಲಿ ರಾಷ್ಟ್ರಧ್ವಜಾರೋಹಣನೆರವೇರಿಸಿತಮ್ಮನ್ನು ಸಂತೋಷವಾಗುತ್ತಿದೆ. ಉದ್ದೇಶಿಸಿ ಮಾತನಾಡಲು ನನಗೆ ಅತೀವ ಸಂತೋಷವಾಗುತ್ತಿದೆ. ಇಂದುಅಖಂಡಕರ್ನಾಟಕ ಅಸ್ತಿತ್ವಕ್ಕೆಬಂದದಿನ. 1956ಕ್ಕೂಮೊದಲುಕರ್ನಾಟಕವಿವಿಧಪ್ರಾಂತ್ಯಗಳಲ್ಲಿಹರಿದುಹಂಚಿಹೋಗಿತ್ತು. ದಕ್ಷಿಣದ ಕೆಲವು ಜಿಲೆಗಳುಮೈಸೂರುಸಂಸ್ಥಾನದಲ್ಲಿದ್ದರೆ, ಕಲಬುರಗಿ, ಬೀದರ, ರಾಯಚೂರು ಜಿಲ್ಲೆಗಳು ಹೈದ್ರಾಬಾದ್ ನಿಜಾಮರ ಆಳ್ವಿಕೆಗೆ ಒಳಪಟ್ಟಿದ್ದವು. ರಾಜ್ಯದ ವಾಯುವ್ಯ ಭಾಗ ಮುಂಬೈ ಪ್ರಾಂತ್ಯಕ್ಕೆ ಸೇರಿದ್ದರೆ, ದಕ್ಷಿಣಕನ್ನಡ, ಕೊಳ್ಳೇಗಾಲ, ಬಳ್ಳಾರಿ ಮುಂತಾದ ಪ್ರದೇಶಗಳು ಮದ್ರಾಸ್ ಪ್ರಾಂತ್ಯಕ್ಕೆ ಸೇರಿದ್ದವು. ಕೊಡಗುಜಿಲ್ಲೆ ಬ್ರಿಟಿಷರಒಂದುಅಧೀನರಾಜ್ಯವಾಗಿ ಉಳಿದಿತ್ತು. ಸ್ವಾತಂತ್ರ್ಯದನಂತರಪ್ರತ್ಯೇಕರಾಜ್ಯದ ಕೂಗು ಕೇಳಿಸಿದಾಗಆಂಧ್ರಪ್ರದೇಶದಲ್ಲಿತೆಲುಗುವ ಮಾತನಾಡುವವರುಶ್ರೀಪೊಟ್ಟಿಶ್ರೀರಾಮುಲುರವರನೇತೃತ್ವದಲ್ಲಿಒಂದುದೊಡ್ಡಪ್ರಮಾಣದಲ್ಲಿಅಮರಣಾಂತರ ಉಪವಾಸಸತ್ಯಾಗ್ರಹವನ್ನುಕೈಗೊಂಡುಮಡಿಯುತ್ತಾರೆ. ಆಗಿನ ಮದ್ರಾಸ್ ಮುಖ್ಯಮಂತ್ರಿಯಾಗಿದ್ದ ಶ್ರೀ ರಾಜಗೋಪಾಲಚಾರಿರವರುತೆಲುಗು ಮಾತನಾಡುವವರನ್ನುಆಂಧ್ರ ಪ್ರದೇಶವೆಂದು ಪ್ರತ್ಯೇಕರಾಜ್ಯ ಮಾಡುವುದು ಸೂಕ್ತವೆಂದು ಪ್ರಧಾನ ಮಂತ್ರಿಜವಾಹರಲಾಲ್ ನೆಹರುರವರಿಗೆ ಪತ್ರ ಬರೆಯುತ್ತಾರೆ. ನೆಹರುರವರುಒಂದು ಸಮಿತಿಯನ್ನು ರಚಿಸಿ ವರದಿಯನ್ನು ಪಡೆದು ಭಾಷೆಯಆಧಾರಿತ ರಾಜ್ಯಗಳನ್ನು ರಚಿಸಲುಅನುಮೋದನೆ ನೀಡುತ್ತಾರೆ. ಸ್ವಾತಂತ್ರ್ಯ ಬಂದು 9 ವರ್ಷಗಳ ನಂತರ ಹುಯಿಲಗೋಳ ನಾರಾಯಣರಾವ್ ರವರು ಬರೆದಂತೆ : ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು .....ಸದಭಿಮಾನದಗೂಡು'' ನವೆಂಬರ್ 1 1956 ರಂದು ಮೈಸೂರುರಾಜ್ಯವೆಂದು ನಾಮಕರಣಗೊಂಡುಉದಯವಾಯಿತು. ಭಾರತದಇತರ ಭಾಗಗಳಲ್ಲಿಯೂ ಸಹ ಭಾಷಾವಾರು ವಿಂಗಡಣೆ ಮಾಡಿ 1960ರಲ್ಲಿ ಬಾಂಬೆ ರಾಜ್ಯವನ್ನು ವಿಭಜಿಸಿ ಮಹಾರಾಷ್ಟ್ರ ಮತ್ತುಗುಜರಾತ್ ಎಂದುಎರಡುರಾಜ್ಯವನ್ನಾಗಿ ವಿಂಗಡಿಸಲಾಯಿತು. 1969ರಲ್ಲಿ ಮದ್ರಾಸ್‌ರಾಜ್ಯವನ್ನು ತಮಿಳುನಾಡು ಎಂದು ಮರುನಾಮಕರಣ ಮಾಡಲಾಯಿತು. ಆನಂತರ ಮೈಸೂರುರಾಜ್ಯವನ್ನು ನವೆಂಬರ್ 1 1973 ರಂದು ಅಂದಿನ ಮುಖ್ಯಮಂತ್ರಿಗಳಾದ ದಿವಂಗತಡಿ. ದೇವರಾಜಅರಸರವರು ವಿಶಾಲಾರ್ಥದಲ್ಲಿ 'ಕರ್ನಾಟಕ' ಎಂದು ಮರು ನಾಮಕರಣ ಮಾಡಿ ಇಂದಿಗೆ 51 ವರ್ಷ ಪೂರ್ಣಗೊಂಡಿರುತ್ತದೆ. ಕರ್ನಾಟಕಏಕೀಕರಣಕ್ಕಾಗಿ ಹೋರಾಡಿದ ಸ್ಮರಣೀಯರ ಸಂಖ್ಯೆ ಬಹುದೊಡ್ಡದು. ಡೆಪ್ಯೂಟಿಚನ್ನಬಸಪ್ಪ, ಹುಯಿಲಗೋಳ ನಾರಾಯಣರಾವ್, ಅನಕೃ, ಪಾಟೀಲ ಪುಟ್ಟಪ್ಪ ಸೇರಿದಂತೆ ಹಲವು ಮಹನೀಯರು ಹಾಗೂ ಅಸಂಖ್ಯಾತ ಸಾಹಿತಿಗಳನ್ನು, ಲೇಖಕರನ್ನು, ಸಂಘ ಸಂಸ್ಥೆಗಳನ್ನು ಹಾಗೂ ಹೋರಾಟಗಾರರನ್ನು ನೆನೆಯಬೇಕು.

ಮೈಸೂರಿನಒಡೆಯರು ಸೇರಿದಂತೆ ಹತ್ತಾರು ರಾಜಮನೆತನಗಳು, ನಾಡಿನ ಸಾಂಸ್ಕೃತಿಕರಾಯಭಾರಿ ಜಗಜ್ಯೋತಿ ಬಸವಣ್ಣನಂತರ ಶರಣರು, ಪುರಂದರದಾಸರು, ಕನಕದಾಸರುದಾಸರಂತಹದಾಸ ಶ್ರೇಷ್ಠರು, ವಿಚಾರವಾದಿಗಳು ನಾಡಿನಲ್ಲಿ ಹುಟ್ಟಿ, ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿ, ಸಂಗೀತವನ್ನು ಶ್ರೀಮಂತಗೊಳಿಸಿರುವುದು ಹೆಮ್ಮೆಯ ಸಂಗತಿ.

ಕುವೆಂಪು, ದ.ರಾ.ಬೇಂದ್ರೆಯವರು, ಮಾಸ್ತಿ ವೆಂಕಟೇಶಅಯ್ಯಂಗಾರ್, ಗೋಕಾಕ್, ಶಿವರಾಮ ಕಾರಂತ, ಡಾ. ಯು.ಆರ್. ಅನಂತಮೂರ್ತಿ, ಗಿರೀಶ್‌ಕಾರ್ನಾಡ್ ಮತ್ತುಚಂದ್ರಶೇಖರಕಂಬಾರರುಜ್ಞಾನಪೀಠ ಪ್ರಶಸ್ತಿಗೆ ಭಾಜನರಾಗಿ ನಮ್ಮ ಭಾಷೆ ಮತ್ತು ಸಾಹಿತ್ಯವನ್ನುರಾಷ್ಟ್ರಮಟ್ಟದಲ್ಲಿಕೀರ್ತಿಯನ್ನುತಂದಿದ್ದಾರೆ. ರಾಮನಗರಎಂದೊಡನೆ ನಮಗೆ ನೆನಪಾಗುವುದುರೇಷ್ಮೆ, ವಿಶ್ವಮಟ್ಟದ ಕೈಗಾರಿಕೆಗಳು, ರಾಜ್ಯದ ಗಮನ ಸೆಳೆಯುತ್ತಿದೆ. ರಾಮನಗರಜಿಲ್ಲೆ ಗೊಂಬೆಗಳ ನಾಡು, ಜಾನಪದ ಕಲೆಗಳ ತವರು. ಗ್ರಾಮೀಣಸಂಸ್ಕೃತಿಯನ್ನು ಪ್ರತಿಬಿಂಬಿಸುವ ಜಾನಪದ ವಸ್ತು ಸಂಗ್ರಹಾಲಯಜಾನಪದ ಲೋಕ. ಎಚ್. ಎಲ್.ನಾಗೇಗೌಡರ ಕನಸಿನ ಕೂಸಾದಜಾನಪದ ಲೋಕಕ್ಕೆ ಜಾಗತಿಕ ಮನ್ನಣೆದೊರೆತಿದ್ದು, ಯುನೆಸ್ಕೋದಅಮೂರ್ತಸಾಂಸ್ಕೃತಿಕ ಪರಂಪರೆಯ ಪಟ್ಟಿಯಲ್ಲಿ ಸ್ಥಾನ ಪಡೆಯುವ ಮೂಲಕ ರಾಮನಗರಜಿಲ್ಲೆಗೆ ಹೆಮ್ಮೆತಂದಿದೆ ಎಂದರು.

# ಗ್ರಾಪಂ ಉಪ ಚುನಾವಣೆ ವೇಳಾಪಟ್ಟಿ ಪ್ರಕಟ

**ಮಂಡ್ಯ:** ಮಂಡ್ಯಜಿಲ್ಲೆಯ ವಿವಿಧಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವಗ್ರಾಮ ಪಂಚಾಯಿತಿ ಸದಸ್ಯ ಸ್ಥಾನಗಳನ್ನು ಭರ್ತಿಮಾಡಲು ಉಪ ಚುನಾವಣೆ ನಡೆಸಲು ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆಎಂದುಜಿಲ್ಲಾಧಿಕಾರಿಡಾ. ಕುಮಾರಅವರು ತಿಳಿಸಿದ್ದಾರೆ.

ನವೆಂಬರ್ 6 ರಂದು ಚುನಾವಣಾ ಅಧಿಸೂಚನೆಯನ್ನು ಹೊರಡಿಸಲಾಗುವುದು. ನಾಮಪತ್ರ ಸಲ್ಲಿಸಲು ನವೆಂಬರ್ 12 ಕೊನೆಯ ದಿನಾಂಕವಾಗಿರುತ್ತದೆ.ನವೆಂಬರ್ 13 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ನವೆಂಬರ್ 15 ರಂದುಉಮೇದುವಾರಿಕೆ ಹಿಂಪಡೆಯಲು ಕೊನೆಯ ದಿನಾಂಕವಾಗಿರುತ್ತದೆ. ಮತದಾನದಅವಶ್ಯವಿದ್ದರೆ ನವೆಂಬರ್ 23 ರಂದು ಬೆಳಿಗ್ಗೆ 7 ಗಂಟೆಯಿಂದ ಸಾಯಂಕಾಲ 5 ಗಂಟೆವರೆಗೆ ಮತದಾನ ನಡೆಸಲಾಗುವುದು. ಮತಎಣಿಕೆ ನವೆಂಬರ್ 26 ರಂದು ಬೆಳಿಗ್ಗೆ 8 ಗಂಟೆಯಿಂದ ಆಯಾತಾಲ್ಲೂಕು ಕೇಂದ್ರಗಳಲ್ಲಿ ನಡೆಯಲಿದೆ. ಉಪ ಚುನಾವಣೆ ನಡೆಯಲಿರುವಗ್ರಾಮ ಪಂಚಾಯಿತಿ ಹಾಗೂ ಕ್ಷೇತ್ರದ ಸಂಖ್ಯೆಯ ವಿವರಇಂತಿದೆ: ಮಂಡ್ಯತಾಲ್ಲೂಕಿನ 3-ಕೆರಗೋಡು-3, 5-ಕೀಲಾರ-5, 1-ಹುಲಿವಾನ-1, 1-ಯಲಿಯೂರು-1, ಮದ್ದೂರುತಾಲೂಕಿನ 5-ಅಡಗನಹಳ್ಳಿ-1, 5-ಅಡಗನಹಳ್ಳಿ-1, 6-ಅಡಗನಹಳ್ಳಿ-2, 1-ವಳಗೆರೆಹಳ್ಳಿ-1, 3-ವಳಗೆರೆಹಳ್ಳಿ-3, 5-ತೈಲೂರು-1, 5-ತೈಲೂರು-1, 2-ಗೊರವನಹಳ್ಳಿ-2, 3-ಶಿಂಘಟಗೆರೆ, 2-ಕೆ.ಶೆಟ್ಟಿಹಳ್ಳಿ-2, ಮಳವಳ್ಳಿ ತಾಲೂಕಿನಲ್ಲಿ 5-ಅಂಕನಹಳ್ಳಿ, 3-ಹೊಸಹಳ್ಳಿ-3, 5-ರಾಮನಾಥ ಮೋಳೆ, 4-ಬೆಳಕವಾಡಿ-4 ಸ್ಥಾನಗಳಲ್ಲಿ ಚುನಾವಣೆ ನಡೆಯುತ್ತದೆ.

ಪಾಂಡವಪುರ ತಾಲೂಕಿನಲ್ಲಿ 3-ಬೆಳ್ಳಾಳೆ, 2-ವಳಗೆರೆದೇವರಹಳ್ಳಿ, 3-ಹೊಸಹಳ್ಳಿ, 5-ಕುರಹಟ್ಟಿ, 3-ಬಸವನಗುಡಿ ಕೊಪ್ಪಲು, 6-ಹೊಸಸಾಯಪ್ಪನಹಳ್ಳಿ, ಶ್ರೀರಂಗಪಟ್ಟಣ ತಾಲೂಕಿನಲ್ಲಿ 04-ಬೆಳಗೊಳ-4, 2-ಗಾಮನಹಳ್ಳಿ, 4-ನೀಲನ ಕೊಪ್ಪಲು, 06-ಮರಳಗಾಲ, ನಾಗಮಂಗಲ ತಾಲೂಕಿನಲ್ಲಿ 5-ಹೊನ್ನೇನಹಳ್ಳಿ, 4-ಶಿಖರನಹಳ್ಳಿ, 8-ಅಲ್ಪಹಳ್ಳಿ, ಕೆ.ಆರ್ ಪೇಟೆತಾಲ್ಲೂಕಿನ 07-ಚಿಕ್ಕೋನಹಳ್ಳಿ, 05-ಕಾಮನಹಳ್ಳಿ, 10-ಪೂವನಹಳ್ಳಿ, 02-ಪುರಜಿಲ್ಲೆಯಲ್ಲಿಒಟ್ಟು 35 ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಚುನಾವಣೆ ನಡೆಸಲು 30 ಚುನಾವಣಾಧಿಕಾರಿಗಳು ಹಾಗೂ 30 ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಚುನಾವಣಾ ನೀತಿ ಸಂಹಿತೆಯು ಚುನಾವಣೆ ನಡೆಯುವಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನವೆಂಬರ್ 6 ರಿಂದ 26 ವರೆಗೆಜಾರಿಯಲ್ಲಿರುತ್ತದೆ. ಗ್ರಾಮ ಪಂಚಾಯಿತಿಯಎಲ್ಲಾ ಸ್ಥಾನಗಳಿಗೆ ಚುನಾವಣೆ ನಡೆಯದ ಸಂದರ್ಭದಲ್ಲಿಅಥವಾ ಅವಿರೋಧ ಆಯ್ಕೆಯಾಗಿ ಚುನಾವಣಾಧಿಕಾರಿಗಳು ಫಲಿತಾಂಶ ಘೋಷಿಸಿದಲ್ಲಿ ನೀತಿ ಸಂಹಿತೆ ಜಾರಿಯಲ್ಲಿರುವುದು ನಿಂತುಹೋಗುತ್ತದೆ.

ನೀತಿ ಸಂಹಿತೆಯು ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ನಗರ ಪಾಲಿಕೆ ಹಾಗೂ ಮಹಾನಗರ ಪಾಲಿಕೆ ಪ್ರದೇಶಗಳಿಗೆ ಅನ್ವಯವಾಗುವುದಿಲ್ಲ. ಗ್ರಾಮ ಪಂಚಾಯಿತಿಚುನಾವಣೆ ಪಕ್ಷರಹಿತಚುನಾವಣೆಯಾಗಿದೆ.

# ಸಂಭ್ರಮದ ದೀಪಾವಳಿ

**ವಿಜಯಪುರ:**ಪಟ್ಟಣದೆಲ್ಲೆಡೆ ದೀಪಾವಳಿ ಹಬ್ಬವನ್ನು ಸಡಗರ-ಸಂಭ್ರಮಗಳಿಂದ, ಭಕ್ತಿಯಿಂದ ಆಚರಿಸಲಾಗುತ್ತಿದ್ದು,

ಹಬ್ಬದ ಪ್ರಯುಕ್ತ ಎಲ್ಲಾ ವರ್ಗದ ಜನತೆ ಕುಟುಂಬ ವರ್ಗದವರೊಂದಿಗೆ ನೂತನ ವಸ್ತ್ರಗಳನ್ನು ಧರಿಸಿ, ದೇವಾಲಯಗಳಿಗೆ ತೆರಳಿ, ದೇವರಿಗೆ ಕಜ್ಜಾಯ, ಬಾಳೇಹಣ್ಣು, ಎಲೆ ಅಡಿಕೆ ನೋಮುವುದರ ಮೂಲಕ ಹಬ್ಬವನ್ನು ಸಾಂಪ್ರದಾಯಿಕವಾಗಿ ಆಚರಿಸಿದರು.

ಜೈನ್ ಸಮುದಾಯದವರು ತಮ್ಮ ಅಂಗಡಿ-ಮುಂಗಟ್ಟುಗಳನ್ನು ಸ್ವಚ್ಛಗೊಳಿಸಿ, ಹೊಸ ಲೆಕ್ಕ ಪುಸ್ತಕಗಳನ್ನು ಜೋಡಿಸಿ, ಪೂಜಿಸಿ, ಎಲ್ಲರಿಗೂ ಸಿಹಿ ಹಂಚುವ ಮೂಲಕ ಹಬ್ಬವನ್ನು ಆಚರಿಸಿದರು.

ಪಟ್ಟಣದ ಶ್ರೀ ರುದ್ರದೇವರ ದೇವಾಲಯ, ಅಜ್ಜಂವೀರಭದ್ರಸ್ವಾಮಿ ದೇವಾಲಯ, ಶ್ರೀ ನಗರೇಶ್ವರಸ್ವಾಮಿ ದೇವಾಲಯ, ಶ್ರೀ ಸೋಮೇಶ್ವರಸ್ವಾಮಿ ದೇವಾಲಯ ಶ್ರೀ ಕೇದಾರೇಶ್ವರ ಗೌರಿ ತಾಯಿಯನ್ನು ಪ್ರತಿಷ್ಠಾಪಿಸಿ, ಎಲ್ಲರೂ ಅದಕ್ಕೆ ಪೂಜೆಗಳನ್ನು ಸಲ್ಲಿಸುತ್ತಿದ್ದರು.

ದೀಪಾವಳಿ ಹಬ್ಬದ ಹಿನ್ನೆಲೆ: ದೀಪಗಳ ಹಬ್ಬವೆಂದೇ ಖ್ಯಾತಿ ಹೊಂದಿರುವ ದೀಪಾವಳಿ



ಹಬ್ಬ ಅಜ್ಞಾನವೆನ್ನುವ ಅಂಧಕಾರದಲ್ಲಿ ಮುಳುಗಿದ ಜನರಿಗೆ ಜ್ಞಾನೋದಯ ಉಂಟು ಮಾಡುವ ಹಬ್ಬವಾಗಿದ್ದು, ಕತ್ತಲೆಯಿಂದ ಬೆಳಕಿನೆಡೆಗೆ ಸಾಗುವುದಾಗಿದೆ.

ಎಲ್ಲಿ ಸ್ತ್ರೀ ಗೌರವಿಸಲ್ಪಡುತ್ತಾಳೋ ಅಲ್ಲಿ ದೇವತೆಗಳು ವಾಸಿಸುತ್ತಾರೆ ಎಂಬ ಸೂಕ್ತಿ ಇದ್ದು, ಇದರಲ್ಲಿ ನಂಬಿಕೆ ಇರುವವರಿಗೆ ದೀಪಾವಳಿ ಹಬ್ಬವು ಶ್ರೇಷ್ಠವಾದುದೆಂದು, ಆನೇಕಲ್ ಛತ್ರದ ಭಕ್ತಾಂಜನೇಯಸ್ವಾಮಿ ದೇವಾಲಯದ ಅರ್ಚಕ ಅನಂತಕುಮಾರ್ ತಿಳಿಸಿದರು.

# ನಾಡಿನ ಜ್ವಲಂತ ಸಮಸ್ಯೆಗಳ ನಿವಾರಣೆಗೆ ಕಸಾಪ ಶ್ರಮ; ಬೇಕರಿ ಶಿವಣ್ಣ

**ವಿಜಯಪುರ:** ಕನ್ನಡ ಸಾಹಿತ್ಯ ಪರಿಷತ್ ನಿರಂತರವಾಗಿ ಕನ್ನಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಜೊತೆಗೆ ನಾಡಿನ ಜ್ವಲಂತ ಸಮಸ್ಯೆಗಳ ನಿವಾರಣೆಗಾಗಿಯೂ ಶ್ರಮಿಸುತ್ತಿದೆ ಎಂದು ರಾಷ್ಟ್ರೀಯ ಬಸವದಳದ ಪ್ರಧಾನ ಕಾರ್ಯದರ್ಶಿ ಬೇಕರಿ ಶಿವಣ್ಣ ತಿಳಿಸಿದರು.

ಅವರು ಪಟ್ಟಣದ ಗಾಂಧೀ ಚೌಕದಲ್ಲಿ ಟೌನ್ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ 69ನೇ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ನಿಜಲಿಂಗಪ್ಪ ರವರ ಪುತ್ತಳಿಗೆ ಪುಷ್ಪಮಾಲೆ ಸಲ್ಲಿಸಿ ಕನ್ನಡ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡುತ್ತಿದ್ದರು.

ಕನ್ನಡ ಸಾಹಿತ್ಯ ಪರಿಷತ್ ಟೌನ್ ಅಧ್ಯಕ್ಷ ಜೆಎನ್ ಶ್ರೀನಿವಾಸ್ ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ ಸಮಾಜದ ಏಳಿಗೆಗಾಗಿ ಹಗಲಿರುಳು ಶ್ರಮಿಸುತ್ತಿರುವ ಕಾರ್ಮಿಕ ವರ್ಗದಿಂದ ಹಿಡಿದು, ಮಹಿಳೆಯರು, ಮಕ್ಕಳು, ಎಲ್ಲರಿಗೂ ಕನ್ನಡ ಭಾಷೆಯ ಹಿರಿಮೆ-ಗರಿಮೆಗಳ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಶರಣ ಸಾಹಿತ್ಯ ಪರಿಷತ್ತಿನ ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಚಂದ್ರಶೇಖರ್ ಬಿ ಹಡಪದ್, ಜೆ ಸಿ ಐ ಸಂಸ್ಥೆಯ ಮಾಜಿ ಅಧ್ಯಕ್ಷ ಕೋರಮಂಗಲ ಬೈರೇಗೌಡ, ಮಹಾಂತಿನ ಮಠದ ಪ್ರಧಾನ ಕಾರ್ಯದರ್ಶಿ ವಿ ವಿಶ್ವನಾಥ್, ನಿವೃತ್ತ ಮುಖ್ಯ ಶಿಕ್ಷಕ ಕೆಎಚ್ ಚಂದ್ರಶೇಖರ್, ಎ.ಎಂ. ನಾರಾಯಣಸ್ವಾಮಿ, ಜೆ.ಆರ್.ಮುನಿವೀರಣ್ಣ,ಹಮಾಲಿಗಳಾದ ಸುರೇಶ್, ಮುನಿರಾಮಪ್ಪ,ಮತ್ತಿತರರು ಉಪಸ್ಥಿತರಿದ್ದರು.



# ಕನ್ನಡನಾಡು ಬೆಳೆಯಲು ಸಾಧು, ಸಂತರ ಕೊಡುಗೆಯು ಬಹಳಷ್ಟು ಇದೆ: ಜಿಲ್ಲಾಧ್ಯಕ್ಷ

**ಚಾಮರಾಜನಗರ:** ಕನ್ನಡನಾಡು ಬೆಳೆಯಲು ಸಾಧು, ಸಂತರ ಕೊಡುಗೆಯು ಬಹಳಷ್ಟು ಇದೆ, ಕನ್ನಡಭಾಷೆಯು ಸಾವಿರಾರು ವರ್ಷಗಳ ಇತಿಹಾಸವಿರುವ ಭಾಷೆಯಾಗಿದೆ. ಎಂದು ಕನ್ನಡ ಯುವಕರ ಕಲಾ ಸಂಘದ ಜಿಲ್ಲಾಧ್ಯಕ್ಷ ಚಾ.ಸಿ.ಮಂಜುನಾಥ್ ತಿಳಿಸಿದರು.



ನಗರದ ಜೋಡಿರಸ್ತೆಗೆ ಸೇರಿದ ಶ್ರೀಬಸವೇಶ್ವರ ವೃತ್ತದಲ್ಲಿ ಕನ್ನಡ ಯುವಕರ ಕಲಾ ಸಂಘದ ವತಿಯಿಂದ ಎರಡನೇ ವರ್ಷದ ವಾರ್ಷಿಕೋತ್ಸವ ಹಾಗೂ ಸುವರ್ಣ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಅವರು ಮಾತನಾಡಿದರು. ನಾಡು, ನುಡಿಯ ಬಗ್ಗೆ ಪ್ರತಿಯೊಬ್ಬರು ಗೌರವ ನೀಡಬೇಕು. ಕನ್ನಡ ಭಾಷೆಯಲ್ಲಿ ಹಲವಾರು ಗ್ರಂಥಗಳಿದೆ. ನವಂಬರ್ ತಿಂಗಳು ಮಾತ್ರ ಕನ್ನಡ ಮಾಸವಲ್ಲ ವರ್ಷದ ಎಲ್ಲಾ ದಿನಗಳು ಕನ್ನಡ ನಮ್ಮ ಭಾಷೆ ಎಂದು ಗೌರವಿಸಬೇಕು ಎಂದು ಹೇಳಿದರು. ಕನ್ನಡ ಹೋರಾಟಗಾರ ಹಾಗೂ ಸಮಾಜಸೇವಕ ವಾಜ್‌ಪೇಯಿ ಸುರೇಶ್ ರವರು ಕನ್ನಡ ಭಾವುಟ ಧ್ವಜಾರೋಹಣ ನೆರವೇರಿಸಿ ಭುವನೇಶ್ವರಿ ಭಾಚಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ ಕರ್ನಾಟಕ ಅಭಿವೃದ್ದಿಗೆ ಪ್ರತಿಯೊಬ್ಬರೂ ಪಣತೊಡಬೇಕು. ಮೊದಲು ನಮ್ಮ ಕನ್ನಡ ಭಾಷೆ ನಂತರ ಬೇರೆ ಭಾಷೆಗಳನ್ನು ಮಾತನಾಡುವುದರಿಂದ ಕನ್ನಡ ಭಾಷೆಗೆ ಗೌರವ ನೀಡಿದಂತೆ, ನಮ್ಮ ಜಿಲ್ಲೆ ಗಡಿ ಪ್ರದೇಶ ಎರಡು ರಾಜ್ಯಗಳು ಹೊಂದಿಕೊಂಡಿದೆ, ತಮೀಳುನಾಡು, ಕೇರಳ. ಅಲ್ಲಿನ ಸುತ್ತಮತ್ತಲು ಕನ್ನಡ ಭಾಷೆಯವರೇ ಇರುವುದು ರಾಜ್ಯ ಸರ್ಕಾರ ಗಡಿ ಭಾಗಗಳಲ್ಲಿ ಕನ್ನಡ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಸಹಕಾರ ನೀಡಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕನ್ನಡಪರ ಹೋರಾಟಗಾರ ನಮ್ಮನೇ ಪ್ರಶಾಂತ್ ಮತ್ತು ಅರುಣ್ ಗೌಡ ಹಾಗೂ ಬಿಳಿಗಿರಿ ಗ್ರಾನೇಟ್ ಮ್ಯಾನೇಜರ್ ರಂಗಸ್ವಾಮಿ ಅವರು ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್‌ಪುಸ್ತಕ ಹಾಗೂ ಲೇಖನಿಯನ್ನು ಸಂಘದ ವತಿಯಿಂದ ವಿತರಿಸಲಾಯಿತು. ನಂತರ ಡಾ. ಪುನೀತ್‌ರಾಜ್‌ಕುಮಾರ್ ಅವರಿಗೆ ನಮನ ಸಲ್ಲಿಸಲಾಯಿತು. ಉಪಾಧ್ಯಕ್ಷ ಆರ್.ಆಕಾಶ್, ಗಿರೀಪ್ರಕಾಶ್, ಡ್ಯಾನ್ಸ್ ಬಸವರಾಜು, ಸತೀಶ್, ಪ್ರಭು, ಪ್ರದೀಪ್‌ಕುಮಾರ್, ನಾಗರಾಜು, ಗುರುಸ್ವಾಮಿ, ಪ್ರಶಾಂತ್, ಅರುಣ ಅಭಿಷೇಕ್, ಕುಮಾರ್, ಇನ್ನು ಮುಂತಾದವರು ಇದ್ದರು,

# ನವೆಂಬರ್ ಒಂದರ ಕನ್ನಡಿಗರಾಗದಿರಿ

**ಮೈಸೂರು:** 'ನಮ್ಮ ಕನ್ನಡ ಭಾಷೆ ಪ್ರತಿಶತ 99.99ರಷ್ಟು ತಾರ್ಕಿಕ, ವೈಜ್ಞಾನಿಕ ಹಾಗೂ ಪರಿಪೂರ್ಣವಾದ ಭಾಷೆ. ಅಷ್ಟೇ ಅಲ್ಲ ಜಗತ್ತಿನ ಪ್ರಾಚೀನ ಭಾಷೆಗಳಲ್ಲೇ ಮೂರನೆಯ ಭಾಷೆ. ಮೊದಲು ಸಂಸ್ಕೃತ, ಎರಡನೆಯದು ಗ್ರೀಸ್ ಹಾಗೂ ಮೂರನೆಯದೇ ನಮ್ಮ ಕನ್ನಡ ಭಾಷೆ. ನಮ್ಮ ಪೂರ್ವಸೂರಿಗಳಾದ ಅಮೋಘವರ್ಷ ಕವಿರಾಜ ಮಾರ್ಗ ಬರೆದಾಗ, ಪಂಪ ಸರ್ವಶ್ರೇಷ್ಠ ಮಹಾಕಾವ್ಯ ಬರೆದಾಗ, ಆಂಗ್ಲ ಭಾಷೆ ತೊಟ್ಟಿಲಲ್ಲಿದ್ದರೆ, ಹಿಂದಿ ಹುಟ್ಟಿಯೇ ಇರಲಿಲ್ಲ. ಅಷ್ಟೇ ಏಕೆ, ಅಂತರರಾಷ್ಟ್ರೀಯ ಭಾಷೆಯಾದ ಆಂಗ್ಲಕ್ಕೆ ನಮ್ಮ ಕನ್ನಡದ ಹಾಗೆ ಸ್ವಂತ ಲಿಪಿಯೇ ಇಲ್ಲ. ಅದನ್ನು ರೋಮನ್ ಲಿಪಿಯಲ್ಲಿ ಬರೆಯಲಾಗುತ್ತಿದೆ. ರಾಷ್ಟ್ರೀಯ ಭಾಷೆಯಾದ ಹಿಂದಿಗೂ ಸ್ವಂತ ಲಿಪಿಯಿಲ್ಲ. ಅದನ್ನು ದೇವನಾಗರಿ ಲಿಪಿಯಲ್ಲಿ ಬರೆಯಲಾಗುತ್ತಿದೆ. ಅಂದ ಮೇಲೆ ಸ್ವಂತ ಲಿಪಿ ಹಾಗೂ ಅಂಕಿಗಳನ್ನು ಹೊಂದಿರುವ ಕನ್ನಡದ ಶ್ರೀಮಂತಿಕೆ ಎಂತಹದ್ದೆಂದು ಯಾರಾದರೂ ತಿಳಿಯಬಹುದು. ಕನ್ನಡಿಗರಾದ ನಾವಿದಕ್ಕೆ ಹೆಮ್ಮೆ ಪಡಬೇಕು' ಎಂದು ಖ್ಯಾತ ಕವಿ ಡಾ.ಜಯಪ್ಪ ಹೊನ್ನಾಳಿ ಅಭಿಪ್ರಾಯಿಸಿದರು.



ಅವರು ಇಂದು ಡಿ.ಎಸ್.ಎಂ. ಶಿಕ್ಷಣ ಸಂಸ್ಥೆಯ ಶ್ರೀ ಸಿದ್ದೇಶ್ವರ ಪ್ರೌಢಶಾಲಾ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. 'ಕನ್ನಡಿಗರಾದ ನಾವುಗಳು ಕೇವಲ ನವೆಂಬರ್ ಒಂದರ ಕನ್ನಡಿಗರಾಗದೇ ನಂಬರ್ ಒಂದು ಕನ್ನಡಿಗರಾಗುವ ಮೂಲಕ ಜಗತ್ತಿನ ಕೆಲವೇ ಶ್ರೇಷ್ಠ ಭಾಷೆಗಳಲ್ಲೊಂದಾದ ನಮ್ಮ ಕನ್ನಡವನ್ನು ವಿಶ್ವದಾದ್ಯಂತ ಪಸರಿಸುವಲ್ಲಿ ಕಂಕಣಬದ್ಧರಾಗಬೇಕು' ಎಂದರು. ನಮ್ಮ ಧ್ವಜದ ಹಳದಿಯು ಶಾಂತಿಯನ್ನು ಸೂಚಿಸಿದರೆ, ಕೆಂಪು ಕ್ರಾಂತಿಯನ್ನು ಸೂಚಿಸುತ್ತೆ. ಕನ್ನಡಿಗರು ಸ್ನೇಹಕ್ಕೂ ಬದ್ಧ ಯುದ್ಧಕ್ಕೂ ಸಿದ್ಧ ಎಂಬುದರ ಸಂಕೇತವಿದಾಗಿದೆ ಎಂದ ಅವರು, ಕನ್ನಡಕ್ಕೆ ಜಗತ್ತಿನ ಎಲ್ಲ ಭಾಷೆಗಳನ್ನೂ ಜೀರ್ಣಿಸಿಕೊಳ್ಳುವ ಅದ್ಭುತವಾದ ಹಾಗೂ ಅನನ್ಯವಾದ ಶಕ್ತಿಯಿದ್ದು, ಜಗತ್ತಿನ ಅತಿಹೆಚ್ಚು ಜನ ಬಳಸುವ ಭಾಷೆಗಳಲ್ಲಿ 29ನೇ ಸ್ಥಾನವನ್ನೂ, ಭಾರತದಲ್ಲಿ 4ನೇ ಸ್ಥಾನವನ್ನೂ ಪಡೆದುದಾಗಿದೆ. ಇದರ ಸೊಬಗು ಹಾಗೂ ಶ್ರೀಮಂತಿಕೆಗೆ ಮಾರುಹೋಗಿ ವಿದೇಶಿಗ ಫರ್ಡಿನೆಂಡ್ ಕಿಟೆಲ್ ಶಬ್ದಕೋಶ ರಚಿಸಿದ್ದಾನೆ. ಹದಿನಾಲ್ಕು ಭಾಷೆ ಬಲ್ಲವರಾಗಿದ್ದ ವಿನೋಭಾ ಭಾವೆ ನಮ್ಮೀ ಕನ್ನಡವನ್ನು ವಿಶ್ವ ಲಿಪಿಗಳ ರಾಣಿ ಎಂದಿದ್ದಾರೆ. ಭಾರತದ ಯಾವುದೇ ರಾಜ್ಯ ಭಾಷೆಗಳಿಗೂ ಸಿಗದಷ್ಟು ಜ್ಞಾನಪೀಠ ಪ್ರಶಸ್ತಿಗಳು ಸಂದಿರುವುದೇ ಈ ಭಾಷೆಯ ಶ್ರೀಮಂತಿಕೆಗೆ ಹಾಗೂ ಸಮೃದ್ಧತೆಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ಮುಂದುವರೆದು ಮಾತನಾಡುತ್ತಾ ಪಂಪ, ಕುಮಾರವ್ಯಾಸ, ಬಸವಣ್ಣ ಹಾಗೂ ಕುವೆಂಪು ಈ ನಾಲ್ವರನ್ನಿಟ್ಟುಕೊಂಡೇ ನಾವು ವಿಶ್ವದ ನಾಲ್ಕೂ ದಿಕ್ಕಿನಲ್ಲೂ ಭಾಷಾ ಅಶ್ವಮೇಧ ಯಾಗ ಮಾಡಿ ವಿಜಯಿಗಳಾಗಿ, ವಿಜಯಧ್ವಜದೊಡನೆ ಹಿಂದಿರುಗಬಹುದು. ಬಸವಾದಿ ಪ್ರಮಥರಂತೂ ತಾವು ಬರುವವರೆಗೆ ದೇವರೊಂದಿಗೆ ಮಾತನಾಡುವ ಭಾಷೆಯಾಗಿದ್ದ ಸಂಸ್ಕೃತವನ್ನು ಪಕ್ಕಕ್ಕಿರಿಸಿ, ನಮ್ಮೀ ಕನ್ನಡವನ್ನು ದೇವರ ಭಾಷೆಯಾಗಿಸಿದರು. ಅಂದರೆ ಕನ್ನಡದಲ್ಲೇ ಪರಮಾತ್ಮನೊಂದಿಗೆ ಆತ್ಮಾನುಸಂಧಾನ ಮಾಡಿ, ಆ ಮೂಲಕ ಕನ್ನಡವನ್ನೂ ದೇವಭಾಷೆಯಾಗಿಸಿದರು. ಹಾಗಾಗಿ ಇದೊಂದು ಸತ್ವ ತತ್ವ ಮಹತ್ವಗಳಿಂದೊಡಗೂಡಿದ ಅಕ್ಷಯವೂ ಅಮೃತಮಯವೂ ಆದ ಭಾಷೆಯಾಗಿದೆ. ಇದನ್ನು ನಾವೀಗ ಬಳಸುವ ಮೂಲಕ ಉಳಿಸಿ, ಬೆಳೆಸಬೇಕಾಗಿದೆ. ನವೆಂಬರ್ ಅಭಿಮಾನದ ಮಳೆ-ಹೊಳೆಗಳ ತಡೆದು, ಎದೆಯಲ್ಲೇ ಕನ್ನಡದ ಕನ್ನಂಬಾಡಿ ಕಟ್ಟಿ, ಅದನ್ನು ಸಂಪೂರ್ಣ ತುಂಬಿಕೊಂಡು, ವರ್ಷ ಪೂರ್ತಿ ನಮ್ಮ ಸುತ್ತಮುತ್ತಲೂ ಕನ್ನಡದ ಉಜ್ವಲ ಬೆಳೆ ಬೆಳೆಯಬೇಕಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮು.ಶಿ.ಮುರುಳೀಧರರಾವ್ ವಹಿಸಿದ್ದರು. ಶಿಕ್ಷಕರಾದ ಶಿವಮೂರ್ತಿ ಸ್ವಾಗತಿಸಿದರೆ, ಶಿಕ್ಷಕ ಶ್ರೀನಿವಾಸ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಿಕ್ಷಕ ಹರೀಶ್ ನಿರೂಪಿಸಿದರೆ, ಮಹದೇವಸ್ವಾಮಿ ವಂದಿಸಿದರು. ಈ ಸಂದರ್ಭದಲ್ಲಿ ಇತರ ಶಿಕ್ಷಕ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನಮ್ಮ ನಡೆ- ನುಡಿ ಮತ್ತು ಜೀವನ ಶೈಲಿಯಲ್ಲಿ ಕನ್ನಡತನ ಇರಲಿ

**ಹುಳಿಯಾರು:** ನಮ್ಮ ನಡೆ ನುಡಿ ಮತ್ತು ಜೀವನ ಶೈಲಿಯಲ್ಲಿ ಕನ್ನಡತನ ಇರಲಿ ಎಂದು ಚಿಕ್ಕನಾಯಕನಹಳ್ಳಿ ತಾಲೂಕು ದಲಿತ ಸಹಾಯವಾಣಿ ಅಧ್ಯಕ್ಷ ಹನುಮಂತಯ್ಯ ತಿಳಿಸಿದರು.

ಹುಳಿಯಾರು ಸ್ಪೋರ್ಟ್ಸ್ ಅಂಡ್ ರಿಕ್ರಿಯೇಷನ್ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನಾವೆಲ್ಲರೂ ಸರ್ಕಾರಿ ಶಾಲೆಗಳಲ್ಲಿ ಕನ್ನಡ ಅಕ್ಷರಗಳನ್ನು ತಿದ್ದಿ ಬರೆದು ಕಲಿತವರು. ಆದರೆ, ಇಂದು ದುಬಾರಿ ಶಿಕ್ಷಣ ವ್ಯವಸ್ಥೆಯಲ್ಲಿ ಓದುತ್ತಿರುವ ಮಕ್ಕಳಿಗೆ ನಮ್ಮ ಭಾಷೆ ಮತ್ತು ಸಂಸ್ಕೃತಿಯ ಪರಿಚಯವೇ ಇಲ್ಲದಂತಾಗಿದೆ. ಈಗ ಎಲ್ಲವೂ ಹೊರಗಿವರ ಅನುಕರಣೆಯಾಗಿದೆ. ದೃಶ್ಯ



ಮಾಧ್ಯಮಗಳೂ ಕೂಡ ಕನ್ನಡ ಪದ ಬಳಕೆಯನ್ನು ಕಡಿಮೆ ಮಾಡಿವೆ ಎಂದು ಆತಂಕ ವ್ಯಕ್ತಪಡಿಸಿದರು.

ತಾಪಂ ಮಾಜಿ ಉಪಾಧ್ಯಕ್ಷ ದಬ್ಬಗುಂಟೆ ರುದ್ರಣ್ಣ ಅವರು ಮಾತನಾಡಿ ಕನ್ನಡ ನಾಡಿನ ಭಾಷೆ ಮತ್ತು ಸಂಸ್ಕೃತಿಯ ಹಿರಿಮೆಯನ್ನು ಸಾರುವ ಕಾರ್ಯಕ್ರಮಗಳು ಹೆಚ್ಚು ನಡೆಯಬೇಕು. ಆ ಮೂಲಕವಾದರೂ ಹೊಸ ತಲೆಮಾರಿನವರಲ್ಲಿ ನಾಡು?ನುಡಿ?ಸಂಸ್ಕೃತಿ ಬಗ್ಗೆ ಜಾಗೃತಿ ಮೂಡಿಸಬೇಕು. ಇಲ್ಲದಿದ್ದರೆ, ಮುಂದೊಂದು ದಿನ ಕರ್ನಾಟಕದಲ್ಲಿ ಕನ್ನಡಿಗರೇ ಅಲ್ಪಸಂಖ್ಯಾತರಾಗುವ ಕಾಲ ಬರುತ್ತದೆ ಎಂದರು.

ಜಯಕರ್ನಾಟಕ ಸಂಘಟನೆಯ ಅಧ್ಯಕ್ಷ ಮೋಹನ್‌ಕುಮಾರ್ ರೈ ಮಾತನಾಡಿ ಕನ್ನಡ ರಾಜ್ಯೋತ್ಸವ ಸಂಭ್ರಮಾಚರಣೆ ಒಂದು ದಿನಕ್ಕೆ ಸೀಮಿತವಾಗದೆ, ಕನ್ನಡ ನಿತ್ಯೋತ್ಸವದ ಆಚರಣೆಯಾಗಬೇಕು. ಕನ್ನಡ ನಾಡಿನ ಜನ ವಿಶಾಲ ಹೃದಯಿಗಳು. ಹೊರ ದೇಶ, ಹೊರ ರಾಜ್ಯದ ಜನರಿಗೆ ಇಲ್ಲಿ ಎಲ್ಲಾ ಸವಲತ್ತು ನೀಡಿ ಬದುಕಲು ಅವಕಾಶ ನೀಡುತ್ತೇವೆ. ಇಂದು ಹೆಚ್ಚಾಗಿರುವ ವಲಸಿಗರು ಅವರ ಭಾಷೆ, ಸಂಸ್ಕೃತಿಯನ್ನು ಇಲ್ಲಿ ಹೇರುತ್ತಾರೆ. ನಮ್ಮ ಯುವಜನ ಕೂಡಾ ಆಧುನಿಕರಣದ ನೆಪದಲ್ಲಿ ನಮ್ಮ ಭಾಷೆ ಮತ್ತು ಸಂಸ್ಕೃತಿಯನ್ನು ಮರೆಯುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಹುಳಿಯಾರು ಸ್ಪೋರ್ಟ್ಸ್ ಅಂಡ್ ರಿಕ್ರಿಯೇಷನ್ ಅಸೋಸಿಯೇಷನ್ ಕಾರ್ಯದರ್ಶಿ ಕಾರ್ಗಿಲ್ ಸತೀಶ್, ನಿರ್ದೇಶಕರುಗಳಾದ ಭವಾನಿರಮೇಶಣ್ಣ, ಬಾಲರಾಜು, ಮೋಹನ್, ಎನ್.ಬಿ.ದೇವರಾಜು, ಪ್ರಕಾಶ್, ಬಾಲಣ್ಣ, ಕರಿಯಣ್ಣ, ಮಹೇಶ್ ಸೇರಿದಂತೆ ಸದಸ್ಯರು ಇದ್ದರು.

## ಪತ್ರಕರ್ತರಿಂದ ಲೇಖನ ಆಹ್ವಾನ

**ಬೆಂಗಳೂರು:** ಕರ್ನಾಟಕ ಮಾಧ್ಯಮ ಅಕಾಡೆಮಿಯು 2023 ಮತ್ತು 2024 ನೇ ಸಾಲಿನ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗಾಗಿ ಪತ್ರಕರ್ತರಿಂದ ಲೇಖನಗಳನ್ನು ಆಹ್ವಾನಿಸಿದೆ. ಬೆಂಗಳೂರಿನ ''ಅಭಿಮಾನಿ ಪ್ರಕಾಶನ'' ಸಂಸ್ಥೆಯು ರಾಜ್ಯ ಮತ್ತು ಜಿಲ್ಲಾಮಟ್ಟದ ಕನ್ನಡ ಪತ್ರಿಕೆಗಳಲ್ಲಿ ''ಸಾಮಾಜಿಕ ಸಮಸ್ಯೆ''ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ-ವರದಿಗಳಿಗೆ ''ಅಭಿಮಾನಿ ಪ್ರಶಸ್ತಿ'' ಮೈಸೂರಿನ ''ಮೈಸೂರು ದಿಗಂತ'' ಪತ್ರಿಕಾ ಸಂಸ್ಥೆಯು ''ಮಾನವೀಯ ಸಮಸ್ಯೆ'' ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ-ವರದಿಗಳಿಗೆ ''ಮೈಸೂರು ದಿಗಂತ ಪ್ರಶಸ್ತಿ'', ಬೆಂಗಳೂರಿನ ಅಭಿಮನ್ಯು ಪತ್ರಿಕಾ ಸಂಸ್ಥೆಯು ''ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ ಅಂಕಣ/ ಸಂಪಾದಕೀಯ/ ಪರಿಣಾಮಕಾರಿ ವರದಿಗೆ ಅಭಿಮನ್ಯು ಪ್ರಶಸ್ತಿ, ಬೆಂಗಳೂರಿನ ''ಪ್ರಜಾ ಸಂದೇಶ'' ಪತ್ರಿಕಾ ಸಂಸ್ಥೆಯು ಶೋ?ಣೆಯನ್ನು ಪರಿಣಾಮ ಕಾರಿಯಾಗಿ ಬಿಂಬಿಸುವ ಲೇಖನಕ್ಕೆ ''ಪ್ರಜಾ ಸಂದೇಶ ದತ್ತಿ ಪ್ರಶಸ್ತಿ'' ಈ ದತ್ತಿ ಪ್ರಶಸ್ತಿಗಳು ತಲಾ ಹತ್ತು ಸಾವಿರ ರೂ. ನಗದು ಬಹುಮಾನ ಒಳಗೊಂಡಿದೆ. ಸಂಸ್ಥೆಗಳು ದತ್ತಿಯನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಸ್ಥಾಪಿಸಿವೆ.

**2023 ನೇ ಸಾಲಿನ ಪ್ರಶಸ್ತಿಗಳು:** 2023 ಜನವರಿ ಯಿಂದ ಡಿಸೆಂಬರ್-2023 ರವರೆಗೆ, ಪ್ರಕಟವಾಗಿರುವ ''ಸಾಮಾಜಿಕ ಸಮಸ್ಯೆ'' ಗಳನ್ನು ಪ್ರತಿಬಿಂಬಿಸುವ ಲೇಖನ ವರದಿಗಳಿಗೆ ''ಅಭಿಮಾನಿ ಪ್ರಶಸ್ತಿ-2023'', ''ಮಾನವೀಯ ಸಮಸ್ಯೆ''ಗಳನ್ನು ಪ್ರತಿಬಿಂಬಿಸುವ ಲೇಖನ ವರದಿಗಳಿಗೆ ''ಮೈಸೂರು ದಿಗಂತ ಪ್ರಶಸ್ತಿ-2023'' ಶೋ?ಣೆಯನ್ನು ಪರಿಣಾಮ ಕಾರಿಯಾಗಿ ಬಿಂಬಿಸುವ ಲೇಖನಕ್ಕೆ ''ಪ್ರಜಾ ಸಂದೇಶ ಪ್ರಶಸ್ತಿ-2023'' ಹಾಗೂ ''ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ ಅಂಕಣ/ ಸಂಪಾದಕೀಯ/ ಪರಿಣಾಮಕಾರಿ ವರದಿಗೆ ''ಅಭಿಮನ್ಯು ದತ್ತಿ ಪ್ರಶಸ್ತಿ -2023'' ಎಂದು ದಾಖಲಿಸಿ ಪ್ರತ್ಯೇಕವಾಗಿ ಕಳುಹಿಸಬೇಕು.

**2024 ನೇ ಸಾಲಿನ ಪ್ರಶಸ್ತಿಗಳು :** 2024 ಜನವರಿ ಯಿಂದ ಸೆಪ್ಟೆಂಬರ್ 2024 ರವರೆಗೆ ಪ್ರಕಟವಾಗಿರುವ ''ಸಾಮಾಜಿಕ ಸಮಸ್ಯೆ'' ಗಳನ್ನು ಪ್ರತಿಬಿಂಬಿಸುವ ಲೇಖನ ವರದಿಗಳಿಗೆ ''ಅಭಿಮಾನಿ ಪ್ರಶಸ್ತಿ-2024'', ''ಮಾನವೀಯ ಸಮಸ್ಯೆ''ಗಳನ್ನು ಪ್ರತಿಬಿಂಬಿಸುವ ಲೇಖನ ವರದಿಗಳಿಗೆ ''ಮೈಸೂರು ದಿಗಂತ ಪ್ರಶಸ್ತಿ-2024'' ಶೋಷಣೆಯನ್ನು ಪರಿಣಾಮ ಕಾರಿಯಾಗಿ ಬಿಂಬಿಸುವ ಲೇಖನಕ್ಕೆ '' ಪ್ರಜಾ ಸಂದೇಶ ಪ್ರಶಸ್ತಿ-2024 ಹಾಗೂ ''ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ ಅಂಕಣ/ ಸಂಪಾದಕೀಯ/ ಪರಿಣಾಮಕಾರಿಯಾದ ವರದಿಗೆ ''ಅಭಿಮನ್ಯು ಪ್ರಶಸ್ತಿ -2024 ಎಂದು ದಾಖಲಿಸಿ ಪ್ರತ್ಯೇಕವಾಗಿ ಕಳುಹಿಸಬೇಕು. ಕನ್ನಡ ದೈನಿಕ ಟಿವಿ-ವಾಹಿನಿ, ವಾರ ಪತ್ರಿಕೆಗಳಲ್ಲಿ ಕಾ ರ್ಯ ನಿ ರ್ವ ಹಿ ಸು ತ್ತಿ ರು ವ ಪರ್ತಕರ್ತರು ಹೆಸರು (ಬೈಲೈನ್) ಬರೆದಿರುವ ವರದಿ ಲೇಖನಗಳಿಗೆ ಮಾತ್ರ ಪ್ರಶಸ್ತಿಗೆ ಅವಕಾಶ, ಲೇಖನ ವರದಿಗಳಲ್ಲಿ ಹೆಸರು (ಬೈಲೈನ್) ಪ್ರಕಟವಾಗದಿದ್ದಲ್ಲಿ ಸಂಬಂಧಿಸಿದ ಪತ್ರಿಕೆಯ ಸಂಪಾದಕರಿಂದ ದೃಢೀಕರಣ ಪತ್ರವನ್ನು ಪಡೆದು ಕಳುಹಿಸಬೇಕು. ಲೇಖನ-ವರದಿಗಳನ್ನು ನವೆಂಬರ್ 20ರ ಒಳಗಾಗಿ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ ''ಮೈಸೂರು ದಿಗಂತ ಪ್ರಶಸ್ತಿ-2023'' ''ಅಭಿಮನ್ಯು ಪ್ರಶಸ್ತಿ -2023'', ''ಅಭಿಮನ್ಯು ಪ್ರಶಸ್ತಿ-2024'' ಎಂದು ಸ್ಪಷ್ಟವಾಗಿ ಬರೆದು ಲೇಖನಗಳನ್ನು ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ. ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-560001. ಇವರಿಗೆ ಕಳುಹಿಸಲು ಅಥವಾ kmaprashast@gmail.comಗೆ ಇ-ಮೇಲ್ ಮೂಲಕ ಕಳುಹಿಸಬೇಕು.

# ಐರಾವತ ಕ್ಲಬ್ ಕ್ಲಾಸ್-2.0 20 ವೋಲ್ವೋ ಬಸ್ಸುಗಳಿಗೆ ಚಾಲನೆ ನೀಡಿದ ಸಿದ್ದರಾಮಯ್ಯ

**ಬೆಂಗಳೂರು:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ''ಐರಾವತ ಕ್ಲಬ್ ಕ್ಲಾಸ್ 2.0'' 20 ವೋಲ್ವೋ ಬಸ್ ಗಳಿಗೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಮುಂಭಾಗ ಹಸಿರು ಧ್ವಜ ತೋರಿಸುವುದರ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಸೇವೆಯಲ್ಲಿದ್ದಾಗಲೇ ಮೃತರಾದ ಕುಟುಂಬದವರ ಮಕ್ಕಳಿಗೆ ಹಾಗೂ ಕುಟುಂಬದ ಅವಲಂಬಿತರಿಗೆ ರೂ 1.00 ಕೋಟಿ ಚೆಕ್ ನ್ನು ವಿತರಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕರ್ನಾಟಕ ರಾಜ್ಯವು ದೇಶದ ರಸ್ತೆ ಸಾರಿಗೆ ಸಂಸ್ಥೆಗಳಲ್ಲಿಯೇ ಮಂಚೂಣಿಯಲ್ಲಿದ್ದು, 24282 ರಾಜ್ಯ ಸಾರಿಗೆ ಬಸ್ಸುಗಳನ್ನು ಹೊಂದಿದ್ದು ಪ್ರಥಮ ಸ್ಥಾನದಲ್ಲಿದೆ ಎಂದು ತಿಳಿಸಿದರು.

ಸರ್ಕಾರವು ರಾಜ್ಯ ರಸ್ತೆ ಸಾರಿಗೆ ನಿಗಮಗಳಿಗೆ 5800 ಹೊಸ ಬಸ್ಸುಗಳ ಸೇರ್ಪಡೆಗೆ ಅನುಮೋದನೆ ನೀಡಿದ್ದು, ಈ ಪೈಕಿ ನಾಲ್ಕು ನಿಗಮಗಳಲ್ಲಿ ಕಳೆದ ಒಂದು ವರ್ಷದಲ್ಲಿ 3417 ಬಸ್ಸುಗಳನ್ನು ಸೇರ್ಪಡೆಗೊಳಿಸಲಾಗಿದೆ. ನಾಲ್ಕು ನಿಗಮಗಳಲ್ಲಿ 9000 ಹುದ್ದೆಗಳ ನೇಮಕಾತಿಗೆ ಸರ್ಕಾರವು ಅನುಮತಿ ನೀಡಿದ್ದು, ಈ ಪೈಕಿ 1833, ಚಾಲಕ ಕಂ ನಿರ್ವಾಹಕ ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ ನೇಮಕಾತಿ ಆದೇಶ ನೀಡಲಾಗಿದೆ. 6500 ಹುದ್ದೆಗಳ ನೇಮಕಾತಿಗೆ ಪ್ರಕ್ರಿಯೆ ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ಕಳೆದ ಒಂದು ವರ್ಷದ ಅವಧಿಯಲ್ಲಿ ನಾಲ್ಕು



ನಿಗಮಗಳಲ್ಲಿ 1000 ಮೃತ ಸಿಬ್ಬಂದಿಗಳ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಆದೇಶ ನೀಡಲಾಗಿದೆ. ಸಾರಿಗೆ ಇಲಾಖೆಯ ಸಚಿವರಾದ ರಾಮಲಿಂಗಾ ರೆಡ್ಡಿ ಅವರು ಸಾರಿಗೆ ಇಲಾಖೆಯಲ್ಲಿ ಹೊಸ ಕ್ರಾಂತಿಯನ್ನೇ ಮಾಡಿದ್ದಾರೆ ಎಂದು ಶ್ಲಾಘಿಸಿದರು.

ಕೆಲವು ಮಹಿಳೆಯ ನಾವು ಹಣ ನೀಡಿ ಪ್ರಯಾಣ ಮಾಡಲು ಸಿದ್ದರಿದ್ದೇವೆ ಎಂದು ಟ್ವೀಟ್ ಮಾಡಿದ್ದಾರೆ. ಈ ವಿಷಯದ ಕುರಿತು ಸಭೆ ಕರೆದು ಚರ್ಚೆ ಮಾಡಿ ನಿರ್ಧರಿಸಲಾಗುವುದು. ಉಪಮುಖ್ಯಮಂತ್ರಿಗಳು ಐರಾವತ ಬಸ್ಸಿನಲ್ಲಿ ಸಂಚಾರ ಮಾಡಲು ವ್ಯಕ್ತ ಪಡಿಸಿದಾಗ ಸಾರಿಗೆ ಸಚಿವರು ಬೆಳಗಾಂ ಅಧಿವೇಶನದಲ್ಲಿ ಅವಕಾಶ ನೀಡಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಅಪಘಾತಕ್ಕೆ ಒಳಪಟ್ಟು ಮೃತಪಟ್ಟ ಇಬ್ಬರು ಸಿಬ್ಬಂದಿಗಳ ಅವಲಂಬಿತರಿಗೆ ತಲಾ ರೂ.1 ಕೋಟಿ ಚೆಕ್ ನೀಡಲಾಯಿತು.

ಕಾರ್ಯಕ್ರಮದಲ್ಲಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ ಸುಧಾಕರ್, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಎಸ್.ಆರ್.ಶ್ರೀನಿವಾಸ್, ಉಪಾಧ್ಯಕ್ಷ ಮೊಹಮ್ಮದ್ ರಿಜ್ವಾನ್ ನವಾಬ್, ಸಾರಿಗೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ ಎನ್.ವಿ ಪ್ರಸಾದ್ ಸೇರಿದಂತೆ ಹಿರಿಯ ಗಣ್ಯರು ಸಾರಿಗೆ ನಿಗಮದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಶೋರ್ ಕುಮಾರ್ ಪುತ್ತೂರು ಪ್ರಮಾಣ ವಚನ ಸ್ವೀಕಾರ

**ಬೆಂಗಳೂರು:** ವಿಧಾನಪರಿಷತ್ತಿನ ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ಕ್ಷೇತ್ರಕ್ಕೆ ನಡೆದ ಉಪಚುನಾವಣೆಯಲ್ಲಿ ಆಯ್ಕೆಯಾದ ಕಿಶೋರ್ ಕುಮಾರ್ ಪುತ್ತೂರು ಅವರು ಇಂದು ವಿಧಾನಪರಿಷತ್‌ನ ನೂತನ ಸದಸ್ಯರಾಗಿ ಭಗವಂತ ಹಾಗೂ ತಾಯಿ ಭಾರತಾಂಬೆಯ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ವಿಧಾನಪರಿಷತ್ತಿನ ಮಾನ್ಯ ಸಭಾಪತಿಗಳಾದ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಅವರು ನೂತನ ಸದಸ್ಯರಿಗೆ ಪ್ರಮಾಣವಚನ ಬೋಧಿಸಿದರು.

ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಡಿ.ವಿ.ಸದಾನಂದಗೌಡ, ವಿಧಾನಪರಿಷತ್‌ನ ಕಾರ್ಯದರ್ಶಿಗಳಾದ ಕೆ.ಆರ್.ಮಹಾಲಕ್ಷ್ಮಿ ಸೇರಿದಂತೆ ಶಾಸಕರು, ವಿಧಾನಪರಿಷತ್‌ನ ಸದಸ್ಯರು ಉಪಸ್ಥಿತರಿದ್ದರು.





## ರಾಷ್ಟ್ರೀಯ ಏಕತಾ ದಿವಸ

**ಬೆಂಗಳೂರು:** ರಾಷ್ಟ್ರೀಯ ಏಕತಾ ದಿವಸ ಅಂಗವಾಗಿ ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಚಿವಾಲಯದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಷ್ಟ್ರೀಯ ಏಕತಾ ದಿವಸದ ಪ್ರತಿಜ್ಞೆಯನ್ನು ಬೋಧಿಸಿದರು. ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೇರಿದಂತೆ, ಸಚಿವಾಲಯದ ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ರಸ್ತೆ ಅಗಲಿಕರಣದ ಸಮಯದಲ್ಲಿ ಲಘು ವಾಹನಗಳಿಗಾಗಿ ಪರ್ಯಾಯ ರಸ್ತೆ ಬಳಕೆಗೆ ಅನುಮತಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ-ಗೌರಿಬಿದನೂರು ರಾಷ್ಟ್ರೀಯ ಹೆದ್ದಾರಿ-69 ರ ರಸ್ತೆಯ ಅಭಿವೃದ್ಧಿಗಾಗಿ ಭಾರತ ಸರ್ಕಾರದ ಮಂತ್ರಾಲಯದಿಂದ ಅನುಮೋದನೆಗೊಂಡು ರಸ್ತೆ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಸದರಿ ರಸ್ತೆಯ ಸರಪಳಿ ಕಿ.ಮೀ. 391.785 ರಿಂದ ಕಿ.ಮೀ.393.600 ರ ವರೆಗೂ ಅಂದರೆ ನರಸಿಂಹದೇವರ ಬೆಟ್ಟ ಕಣಿವೆಯಲ್ಲಿ ಹಾಲಿ ರಸ್ತೆಯ ಬಲಭಾಗದಲ್ಲಿ ದೊಡ್ಡದೊಡ್ಡ ಕಲ್ಲು ಬಂಡೆಗಳಿದ್ದು, ಅದನ್ನು ಕಂಟ್ರೋಲ ಬ್ಲಾಸ್ಟಿಂಗ ಮೂಲಕ ತೆಗೆಯುವುದು ಅನಿವಾರ್ಯವಾಗಿರುತ್ತದೆ. ಈ ಕುರಿತು ಮಾನ್ಯ ಜಿಲ್ಲಾಧಿಕಾರಿಗಳಿಗೆ ಅಗಲಿಕರಣದ ಸಮಯದಲ್ಲಿ ಪರ್ಯಾಯ ರಸ್ತೆಯ ಮುಖಾಂತರ ಸಾರ್ವಜನಿಕರು/ ಪ್ರಯಾಣಿಕರು ಸಂಚರಿಸಲು ಅನುಕೂಲವಾಗುವಂತೆ ಗುತ್ತಿಗೆದಾರರು ಪತ್ರದ ಮುಖೇನ ಅನುಮತಿ ನೀಡುವಂತೆ ಕೋರಿರುತ್ತಾರೆ. ಅದರಂತೆ ಮಾನ್ಯ ಜಿಲ್ಲಾಧಿಕಾರಿಗಳು ಪರ್ಯಾಯ ಮಾರ್ಗದ ಬಳಕೆಗಾಗಿ ಅನುಮತಿ ನೀಡಿರುತ್ತಾರೆ.



ಸದರಿ ರಸ್ತೆ ಕಾಮಗಾರಿಯ ಅಗಲಿಕರಣ (ಕಲ್ಲು ಬಂಡೆಗಳನ್ನು ತೆಗೆಯುವ) ಸಂದರ್ಭದಲ್ಲಿ ಸಾರ್ವಜನಿಕರ ಮತ್ತು ಪ್ರಯಾಣಿಕರ ಹಿತದೃಷ್ಟಿಯಿಂದ ಯಾವುದೇ ಅಹಿತಕರ ಘಟನೆ ನಡೆಯಬಾರದೆಂದು ಮುನ್ನೆಚ್ಚರಿಕೆಯ ಹಿನ್ನಲೆಯಲ್ಲಿ ತಾತ್ಕಾಲಿಕವಾಗಿ ಬದಲಿ ರಸ್ತೆಯನ್ನು ದಿನಾಂಕ 02.11.2024 ರಿಂದ 31/12/2024 ರವರೆಗೆ ಅಪರಾಹ್ನ 12.30 ರಿಂದ 3.30 ಗಂಟೆಯವರೆಗೆ ಪರ್ಯಾಯ ಮಾರ್ಗವಾಗಿ (ಪೊಶೆಟ್ಟಿಹಳ್ಳಿ-ಬಾಲಕುಂಟಹಳ್ಳಿ, ಬಾಳೇನಹಳ್ಳಿ ಕ್ರಾಸ್ ಗುಂಗಿರ್ಲಹಳ್ಳಿ- ನರಸಿಂಹನಹಳ್ಳಿ- ನರಸಿಂಹನಹಳ್ಳಿಕ್ರಾಸ್ ತೂಬುಗೆರೆ ಮಳಕೋಟೆ -ಚಿಕ್ಕರಾಯಪ್ಪನಹಳ್ಳಿ-ಕಣಿವೆ-ನಾರಾಯಣಪುರ- ಚಿಗಟೇನಹಳ್ಳಿ-ಮುದ್ದೇನಹಳ್ಳಿ- ಬಂಡ್ಲಹಳ್ಳಿ- ತಿರ್ನಹಳ್ಳಿ ಕ್ರಾಸ್ -ಜಡಲತಿಮ್ಮನಹಳ್ಳಿ ಕ್ರಾಸ್ - ಜಡಲತಿಮ್ಮನಹಳ್ಳಿ- ಬಿ.ಬಿ. ರಸ್ತೆ, ಚಿಕ್ಕಬಳ್ಳಾಪುರ) ಸಂಚರಿಸುವಂತೆ ಸಾರ್ವಜನಿಕರ ಹಾಗೂ ಪ್ರಯಾಣಿಕರಲ್ಲಿ ಮನವಿ ಮಾಡಲಾಗಿದೆ ಎಂದು ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಎಂ. ಮಲ್ಲಿಕಾರ್ಜುನ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಾಲಕ-ಕಂ-ನಿರ್ವಾಹಕ ಹುದ್ದೆಯ ಚಾಲನಾ ವೃತ್ತಿ ಪರೀಕ್ಷೆ : ಗೈರು ಹಾಜರಾದ ಅಭ್ಯರ್ಥಿಗಳಿಗೆ ಅವಕಾಶ

**ಬೆಂಗಳೂರು:** ಚಾಲಕ-ಕಂ-ನಿರ್ವಾಹಕ ಹುದ್ದೆಗೆ ಅರ್ಜಿ ಸಲ್ಲಿಸಿ ಹುಮ್ನಾಬಾದ್ ತರಬೇತಿ ಕೇಂದ್ರದಲ್ಲಿ ಚಾಲನಾ ವೃತ್ತಿ ಪರೀಕ್ಷೆ ಪಡೆಯಲು ಆಯ್ಕೆ ಮಾಡಿಕೊಂಡಿದ್ದ ಕೆಲವೊಂದು ಅಭ್ಯರ್ಥಿಗಳು ನಿಗದಿತ ದಿನಾಂಕಗಳಂದು ಚಾಲನಾ ವೃತ್ತಿ ಪರೀಕ್ಷೆಗೆ ಹಾಜರಾಗಿರುವುದಿಲ್ಲ. ಈ ಹಿನ್ನಲೆಯಲ್ಲಿ ಅಂತಿಮವಾಗಿ ಗೈರುಹಾಜರಾದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶ ಕಲ್ಪಿಸಲು ನವೆಂಬರ್ 7 ರಿಂದ 11 ರವರೆಗೆ ಭಾನುವಾರ ಹೊರತುಪಡಿಸಿ ಚಾಲನಾ ವೃತ್ತಿ ಪರೀಕ್ಷೆ ನಡೆಸಲಾಗುತ್ತದೆ. ಚಾಲಕ-ಕಂ-ನಿರ್ವಾಹಕ ಹುದ್ದೆಗೆ ಅರ್ಜಿ ಸಲ್ಲಿಸಿ ಹುಮ್ನಾಬಾದ್ ತರಬೇತಿ ಕೇಂದ್ರದಲ್ಲಿ ಚಾಲನಾ ವೃತ್ತಿ ಪರೀಕ್ಷೆ ಪಡೆಯಲು ಆಯ್ಕೆ ಮಾಡಿಕೊಂಡಿದ್ದ ಅಭ್ಯರ್ಥಿಗಳಿಗೆ ಚಾಲನಾ ವೃತ್ತಿ ಪರೀಕ್ಷೆಯನ್ನು ದಿನಾಂಕ: 18-09-2024 ರಿಂದ ನಡೆಸಲಾಗುತ್ತಿದೆ. ಈ ಸಂಬಂಧ ಎಲ್ಲಾ ಅಭ್ಯರ್ಥಿಗಳಿಗೆ ಕರೆಪತ್ರ, ಡೌನ್-ಲೋಡ್ ಮಾಡಿಕೊಂಡು ನಿಗದಿತ ದಿನಾಂಕದಂದು ಹಾಜರಾಗಲು ಎಸ್. ಎಂ.ಎಸ್ ಸಂದೇಶ / ಪತ್ರಿಕಾ ಪ್ರಕಟಣೆ ಹಾಗೂ ನಿಗಮದ ಅಧಿಕೃತ ವೆಬ್-ಸೈಟ್‌ನಲ್ಲಿ ಪ್ರಕಟಣೆ ನೀಡುವ ಮೂಲಕ ಮಾಹಿತಿ ನೀಡಲಾಗಿತ್ತು. ಸದರಿ ಅಭ್ಯರ್ಥಿಗಳು ನಿಗಮದ ಅಧಿಕೃತ ವೆಬ್-ಸೈಟ್ ಮೂಲಕ ಕರೆಪತ್ರ ಡೌನ್ ಲೋಡ್ ಮಾಡಿಕೊಂಡು ತಮಗೆ ನಿಗಧಿಪಡಿಸಿರುವ ದಿನಾಂಕದಂದು ದಾಖಲೆಗಳೊಂದಿಗೆ ಹಾಜರಾಗುವ ಮೂಲಕ ಸದರಿ ಅವಕಾಶವನ್ನು ಉಪಯೋಗಿಸಿಕೊಳ್ಳಲು ಸೂಚಿಸಲಾಗಿದೆ. ಹುಮ್ನಾಬಾದ್ ಚಾಲನಾ ಪಥವನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳಿಗೆ ಈ ಅವಕಾಶವು ಅಂತಿಮ ಅವಕಾಶವಾಗಿದ್ದು, ತದನಂತರದಲ್ಲಿ ಹುಮ್ನಾಬಾದ್ ಚಾಲನಾ ಪಥದಲ್ಲಿ ಚಾಲನಾ ವೃತ್ತಿ ಪರೀಕ್ಷೆಗೆ ಅವಕಾಶವಿರುವುದಿಲ್ಲ ಎಂಬುದನ್ನು ಕರ್ನಾಟಕ ರಾಜ್ಯ ಸಾರಿಗೆ ನಿಗಮದ ಆಯ್ಕೆ ಸಮಿತಿ ನಿರ್ದೇಶಕರು ಹಾಗೂ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾವಯವ ಕೃಷಿ/ತೋಟಗಾರಿಕೆ ಉತನ್ನಗಳಿಗೆ ಬ್ರ್ಯಾಂಡ್ ಹೆಸರನ್ನು ಸೂಚಿಸಲು ಅಹ್ವಾನ

**ಬೆಂಗಳೂರು:** ಕರ್ನಾಟಕ ರಾಜ್ಯದಲ್ಲಿ ಉತ್ಪಾದನೆಯಾಗುವ ಸಾವಯವ ಕೃಷಿ / ತೋಟಗಾರಿಕೆ ಉತ್ಪನ್ನಗಳಿಗೆ ತೋಟಗಾರಿಕೆ ಇಲಾಖೆಯ ವತಿಯಿಂದ ಬ್ರಾಂಡ್ ಅಭಿವೃದ್ಧಿಪಡಿಸಲಾಗುತ್ತಿದೆ. ಸೂಕ್ತ ಬ್ರಾಂಡ್ ಹೆಸರನ್ನು ಸೂಚಿಸಲು ಆಸಕ್ತ ರೈತರು / ಸಾರ್ವಜನಿಕರು / ವಿದ್ಯಾರ್ಥಿಗಳಿಂದ ಅಭಿವ್ಯಕ್ತಿಯನ್ನು ಆಹ್ವಾನಿಸಲಾಗಿದೆ. ಬ್ಯಾಂಡ್ ಹೆಸರನ್ನು ಸೂಚಿಸಲು ಇಚ್ಛಿಸುವವರು ನವೆಂಬರ್ 8ರ ಒಳಗಾಗಿ ಇಲಾಖೆಯ ಇ-ಮೇಲ್ organicbrandcontest.kar@gmail.comವಿಳಾಸಕ್ಕೆ ತಮ್ಮ ವಿವರಗಳೊಂದಿಗೆ ಬ್ರಾಂಡ್ ಹೆಸರನ್ನು ಕಳುಹಿಸಬಹುದಾಗಿದೆ. ಆಯ್ಕೆಯಾದ ಅತ್ಯುತ್ತಮ ಐದು ಬ್ರಾಂಡ್ ಹೆಸರುಗಳನ್ನು ಸೂಚಿಸಿದವರಲ್ಲಿ ಪ್ರಥಮ ವಿಜೇತರಿಗೆ ರೂ.25,000/- ಗಳ ಬಹುಮಾನ ಹಾಗೂ ಉಳಿದ ನಾಲ್ಕು ವಿಜೇತರಿಗೆ ಮೆಚ್ಚುಗೆ ಪ್ರಮಾಣ ಪತ್ರವನ್ನು ನೀಡಲಾಗುವುದು. ಬ್ರಾಂಡ್ ಹೆಸರು ಸೂಚಿಸಲು ಲಿಂಕ್: https://forms.gle/L2aEojWKpAf6Xf6Q9ನ್ನು ಬಳಸಬಹುದಾಗಿದೆ ಎಂದು ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2024-25ನೇ ಸಾಲಿನ ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬೆಂಗಳೂರು:** 2024-25ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಭಾಗವಹಿಸಲಿಚ್ಛಿಸುವ ರೈತ ಮತ್ತು ರೈತ ಮಹಿಳೆಯರಿಂದ ಪ್ರತ್ಯೇಕವಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎಲ್ಲಾ ಮಟ್ಟಗಳಿಗೂ ರಾಜ್ಯ / ಜಿಲ್ಲಾ / ತಾಲ್ಲೂಕು ಮಟ್ಟದ ಕೃಷಿ ಪ್ರಶಸ್ತಿಗೆ ಅನ್ವಯಿಸುವಂತೆ ನಿಗದಿತ ನಮೂನೆಯಲ್ಲಿ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಅಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಕೃಷಿ ಇಲಾಖೆಯ K-KISAN Portal ನಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ FIDಸಂಖ್ಯೆಯನ್ನು ಬಳಸಿಕೊಂಡು ಹತ್ತಿರದ ರೈತ ಸಂಪರ್ಕ ಕೇಂದ್ರ / ಸಾರ್ವಜನಿಕ ಸೇವಾ ಕೇಂದ್ರದ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. 2024-25ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕ ಆಗಿರುತ್ತದೆ. ಸ್ಪರ್ಧಿಸಬಹುದಾದ ಬೆಳೆಗಳ ವಿವರಗಳು, ಅರ್ಜಿ ನಮೂನೆ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ದತ್ತು ಮಾಸಾಚರಣೆ ಆಚರಣೆ

**ಬೆಂಗಳೂರು:** ಕಾನೂನು ಬದ್ಧ ದತ್ತು ತೆಗೆದುಕೊಳ್ಳುವುದನ್ನು ಪ್ರೋತ್ಸಾಹಿಸುವ ಸಲುವಾಗಿ ನವೆಂಬರ್-2024ರ ಮಾಹೆಯಾದ್ಯಂತ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ದತ್ತು ಮಾಸಾಚರಣೆಯನ್ನು ಆಚರಿಸಲಾಗುತ್ತಿದೆ. Foster Care and Foster Care leading to Adoption ಈ ಬಾರಿಯ ಘೋಷವಾಕ್ಯಆಗಿದ್ದು, ಮಕ್ಕಳನ್ನು ದತ್ತು ಪಡೆಯ ಬಯಸುವ, ಪೋಷಕತ್ವ ತೆಗೆದುಕೊಳ್ಳಲು ಇಚ್ಛಿಸುವ ಪೋಷಕರು ಈ ಕುರಿತು ಹೆಚ್ಚಿನ ಮಾಹಿತಿಗಾಗಿ ರಾಜ್ಯ ದತ್ತು ಸಂಪನ್ಮೂಲ ಕೇಂದ್ರ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ವಿಶ್ವೇಶ್ವರಯ್ಯ ಕೇಂದ್ರ, ಚಿಕ್ಕಗೋಪುರ, 03ನೇ ಮಹಡಿ, ಡಾ.ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು-560 001 ಹಾಗೂ ಆಯಾ ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಅಥವಾ ವಿಶೇಷ ದತ್ತು ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಮಕ್ಕಳ ರಕ್ಷಣಾ ನಿರ್ದೇಶನಾಲಯದ ಯೋಜನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರಡು ಮತದಾರರ ಪಟ್ಟಿ ಪ್ರಕಟ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಿ

**ಮಂಡ್ಯ:** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ದಿನಾಂಕ 01-01-2025 ನ್ನುಅರ್ಹತಾ ದಿನಾಂಕವನ್ನಾಗಿಟ್ಟುಕೊಂಡು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಸಂಬಂಧ ಮಂಡ್ಯಜಿಲ್ಲೆಯ 7 ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ ದಿನಾಂಕ 29-10-2024ರಂದು ಕರಡು ಮತದಾರರ ಪಟ್ಟಿಯನ್ನು ಹಾಗೂ ಸೇವಾ ಮತದಾರರಕರಡು ಪಟ್ಟಿಯನ್ನು ಪ್ರಕಟಿಸಲಾಗಿದೆಎಂದು ಅಪರಜಿಲ್ಲಾಧಿಕಾರಿಡಾ ಹೆಚ್‌ಎಲ್ ನಾಗರಾಜುಅವರು ತಿಳಿಸಿದರು. ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧರಾಜಕೀಯ ಪಕ್ಷಗಳ ಮುಖಂಡರುಗಳ ಜೊತೆ ಸಭೆ ನಡೆಸಿ ಮಾತನಾಡಿದರು.

**ಕರಡು ಮತದಾರರ ಪಟ್ಟಿಯಂತೆ ಮತದಾರರ ವಿವರ:** ಮಳವಳ್ಳಿ ವಿಧಾನಸಭಾಕ್ಷೇತ್ರದ ವ್ಯಾಪ್ತಿಯಲ್ಲಿಒಟ್ಟು 272 ಮತಗಟ್ಟೆಗಳಿದ್ದು, ಪುರುಷರು-126686, ಮಹಿಳೆಯರು-128487, ತೃತೀಯ ಲಿಂಗಿ-10, ಒಟ್ಟು 255183 ಮತದಾರರಿದ್ದಾರೆ.

ಮದ್ದೂರು ಒಟ್ಟು 254 ಮತಗಟ್ಟೆಗಳಿದ್ದು, ಪುರು?ರು-104071, ಮಹಿಳೆಯರು-111727, ತೃತೀಯ ಲಿಂಗಿ-20, ಒಟ್ಟು 215818 ಮತದಾರರಿದ್ದಾರೆ.

ಮೇಲುಕೋಟೆಒಟ್ಟು 264 ಮತಗಟ್ಟೆಗಳಿದ್ದು, ಪುರುಷರು-100535, ಮಹಿಳೆಯರು-103449, ತೃತೀಯ ಲಿಂಗಿ-10, ಒಟ್ಟು 203994 ಮತದಾರರಿದ್ದಾರೆ.

ಮಂಡ್ಯಒಟ್ಟು 263 ಮತಗಟ್ಟೆಗಳಿದ್ದು, ಪುರುಷರು-112324, ಮಹಿಳೆಯರು-118580, ತೃತೀಯ ಲಿಂಗಿ-43, ಒಟ್ಟು 230947 ಮತದಾರರಿದ್ದಾರೆ.

ಶ್ರೀರಂಗಪಟ್ಟಣ ಒಟ್ಟು 249 ಮತಗಟ್ಟೆಗಳಿದ್ದು,



ಪುರಷರು-106018, ಮಹಿಳೆಯರು-111581, ತೃತೀಯ ಲಿಂಗಿ-44, ಒಟ್ಟು 217643 ಮತದಾರರಿದ್ದಾರೆ.

ನಾಗಮಂಗಲ ಒಟ್ಟು 260 ಮತಗಟ್ಟೆಗಳಿದ್ದು, ಪುರುಷರು-107188, ಮಹಿಳೆಯರು-108564, ತೃತೀಯ ಲಿಂಗಿ-10, ಒಟ್ಟು 215762 ಮತದಾರರಿದ್ದಾರೆ.

ಕೆ.ಆರ್ ಪೇಟೆಒಟ್ಟು 261 ಮತಗಟ್ಟೆಗಳಿದ್ದು, ಪುರುಷರು-111432, ಮಹಿಳೆಯರು-112542, ತೃತೀಯ ಲಿಂಗಿ-10, ಒಟ್ಟು 223984 ಮತದಾರರಿದ್ದಾರೆ.

ಜಿಲ್ಲೆಯಲ್ಲಿಒಟ್ಟು 1823 ಮತಗಟ್ಟೆಗಳಿದ್ದು, ಪುರುಷರು-768254, ಮಹಿಳೆಯರು-794930, ತೃತೀಯ ಲಿಂಗಿ-147, ಒಟ್ಟು 1563331 ಮತದಾರರಿದ್ದಾರೆ.

**ಸೇವಾ ಮತದಾರರ ವಿವರಇಂತಿದೆ:** ಮಳವಳ್ಳಿ ಕ್ಷೇತ್ರದಲ್ಲಿ ಪುರುಷ-76, ಮಹಿಳೆ-5 ಒಟ್ಟು 81, ಮದ್ದೂರುಕ್ಷೇತ್ರದಲ್ಲಿ ಪುರುಷ-140, ಮಹಿಳೆ-2 ಒಟ್ಟು 142, ಮೇಲುಕೋಟೆ ಪುರುಷ-62, ಮಹಿಳೆ-0 ಒಟ್ಟು 62, ಮಂಡ್ಯ ಪುರುಷ-116, ಮಹಿಳೆ-5, ಒಟ್ಟು 121, ಶ್ರೀರಂಗಪಟ್ಟಣ ಪುರುಷ-53, ಮಹಿಳೆ-2, ಒಟ್ಟು 55, ನಾಗಮಂಗಲ ಪುರುಷ-61, ಮಹಿಳೆ-5 ಒಟ್ಟು- 66, ಕೆ ಆರ್ ಪೇಟೆ ಪುರುಷ-92, ಮಹಿಳೆ-3 ಒಟ್ಟು- 95, ಜಿಲ್ಲೆಯಲ್ಲಿಒಟ್ಟು ಪುರುಷ-600, ಮಹಿಳೆ-22 ಒಟ್ಟು 622 ಸೇವಾ ಮತದಾರರಿದ್ದಾರೆ.

ಮತದಾರರ ಪಟ್ಟಿ ಪರಿಷ್ಕರಣಅವಧಿಯಲ್ಲಿ ಮಂಡ್ಯಜಿಲ್ಲೆಯಎಲ್ಲಾ ಮತಗಟ್ಟೆ ವ್ಯಾಪ್ತಿಯಲ್ಲಿ ಮನೆ ಮನೆ ಸಮೀಕ್ಷೆ ನಡೆಸಿ 01-01-2025 ಕ್ಕೆ ಅರ್ಹರಿರುವ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲುಕ್ರಮವಹಿಸಲಾಗಿದೆ. ಹಾಗೂ ಸ್ವೀಕೃತವಾದ ನಮೂನೆಗಳನ್ನು ನಿಯಮಾನುಸಾರ ನಿಗಧಿತಅವಧಿಯಲ್ಲಿ ವಿಲೇವಾರಿಗೊಳಿಸಲಾಗಿರುತ್ತದೆ ಎಂದರು.

ಕರಡು ಮತದಾರರ ಪಟ್ಟಿಯು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ, ಮತದಾರರ ನೋಂದಣಾಧಿಕಾರಿಗಳ ಕಛೇರಿ, ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಮತ್ತುಜಿಲ್ಲೆಯಎಲ್ಲಾ ಮತಗಟ್ಟೆಗಳಲ್ಲಿ ಪ್ರಕಟ ಪಡಿಸಲಾಗಿದೆ. ಮತದಾರರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆಗಳಿದ್ದಲ್ಲಿ ನವೆಂಬರ್ 28 ರವರೆಗೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.ಮತ್ತು 06-01-2025 ರಂದುಅಂತಿಮ ಮತದಾರರ ಪಟ್ಟಿಯನ್ನು ಪ್ರಕಟ ಪಡಿಸಲಾಗುತ್ತದೆಎಂದರು.

## ವಿಶ್ವವಿದ್ಯಾನಿಲಯದಲ್ಲಿ ರಾಜ್ಯೋತ್ಸವ ಸಮಾರಂಭ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜಿನ ಆವರಣದ ಗಡಿಯಾರ ಗೋಪುರದಲ್ಲಿ ಕುಲಪತಿಗಳಾದ ಪ್ರೊ.ಲಿಂಗರಾಜ ಗಾಂಧಿಯವರು ಧ್ವಜಾರೋಹಣ ನೆರವೇರಿಸಿ 69ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭಕ್ಕೆ ಚಾಲನೆ ನೀಡಿದರು.

ತದನಂತರ ರಾಜಾಜಿ ಹಾಲ್‌ನಲ್ಲಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು ಕರ್ನಾಟಕ ಏಕೀಕರಣದ ಪ್ರಥಮ ರಾಜ್ಯೋತ್ಸವ ಆಚರಣೆ ಸೆಂಟ್ರಲ್ ಕಾಲೇಜಿನ ಮೈದಾನದಲ್ಲಿಯೇ ನಡೆದಿದ್ದನ್ನು ಉಲ್ಲೇಖಿಸಿದರು. ವಿಶಾಲ ಮೈಸೂರು ರಾಜ್ಯಕ್ಕೆ 'ಕರ್ನಾಟಕ' ಎಂದು ನಾಮಕರಣವಾಗಿ ಐವತ್ತು ವರ್ಷ ತುಂಬಿದ ಸುವರ್ಣ ಮಹೋತ್ಸವ ಆಚರಣೆಯ ಸಂದರ್ಭ ವಿಶೇಷ ಮಹತ್ವ ತಂದಿದೆ ಎಂದು ಅವರು ನುಡಿದರು.

ರಾಷ್ಟ್ರಕವಿ ಕುವೆಂಪು, ಜಿ.ಪಿ. ರಾಜರತ್ನಂ, ಕನ್ನಡದ ಕಣ್ವ ಬಿ.ಎಂ.ಶ್ರೀಕಂಠಯ್ಯ ಮುಂತಾದ ಅನೇಕ ಮೇರು ಸಾಹಿತಿಗಳು ಕನ್ನಡದ ದೀವಿಗೆಯನ್ನು ಬೆಳಗಿದ ಹಾಗೂ ರಾಜಗೋಪಾಲಾಚಾರಿ, ಸರ್.ಎಂ. ವಿಶ್ವೇಶ್ವರಯ್ಯ ಅವರಂತಹ ಖ್ಯಾತನಾಮರು ಕಲಿತ ಸೆಂಟ್ರಲ್ ಕಾಲೇಜು ಚಾರಿತ್ರಿಕ ಮಹತ್ವದ ವಿದ್ಯಾಮಂದಿರವಾಗಿದೆ ಎಂದು ಪ್ರೊ. ಗಾಂಧಿ ವಿವರಿಸಿದರು.




ಮೌಲ್ಯಮಾಪನ ಕುಲಸಚಿವರಾದ ಡಾ. ಸಿ.ಎಸ್. ಆನಂದ ಕುಮಾರ್, ಹಿರಿಯ ಪ್ರಾಧ್ಯಾಪಕರಾದ ಜ್ಯೋತಿ ವೆಂಕಟೇಶ್, ತಾಂಡವಗೌಡ, ರಮೇಶ್ ಕುಡೇನಟ್ಟಿ, ಶಿವಶಂಕರ್, ಎನ್.ಎಸ್.ಎಸ್. ಸಂಯೋಜಕರಾದ ಡಾ. ಗೋವಿಂದೇಗೌಡ ಹಾಗೂ ಬೋಧಕ-ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾನಿಲಯದ ಕುಲಸಚಿವರು (ಮೌಲ್ಯಮಾಪನ) ಡಾ. ಆನಂದ ಕುಮಾರ್, ಕಲಾ ನಿಕಾಯದ ಡೀನ್ ಡಾ. ಜ್ಯೋತಿ ವೆಂಕಟೇಶ್, ರಾಷ್ಟ್ರೀಯ ಹಬ್ಬದ ಸಂಚಾಲಕರಾದ ಪ್ರೊ. ಶಿವಶಂಕರ್, ಭೋದಕ ಹಾಗೂ ಭೋದಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಕೋರಮಂಗಲದಲ್ಲಿ ಕಾಯ ಕ್ಲಿನಿಕ್ ನಿಂದ ಎಐ-ಸನ್ನದ್ಧ ಚರ್ಮದ ಆರೈಕೆ ಕ್ರಾಂತಿ ಅನಾವರಣ

ಭಾರತದ ಮುಂಚೂಣಿಯ ಚರ್ಮದ ಆರೋಗ್ಯ ಮತ್ತು ಚರ್ಮಶಾಸ್ತ್ರದ ಬ್ರಾಂಡ್ ಕಾಯ ಕೋರಮಂಗಲದ ಹೃದಯಭಾಗದಲ್ಲಿ ತನ್ನ ಸಂಪೂರ್ಣ ನವೀಕೃತ ಕ್ಲಿನಿಕ್ ಅನ್ನು ಅದ್ದೂರಿಯಾಗಿ ಮರು ಪ್ರಾರಂಭಿಸಿದೆ. ವಿಶ್ವಮಟ್ಟದ, ವೈಯಕ್ತಿಕಗೊಳಿಸಿದ ಚರ್ಮದ ಆರೈಕೆ ನೀಡುವಲ್ಲಿ ಕಾಯದ ಬದ್ಧತೆಯ ಭಾಗವಾಗಿ ಈ ಅಪ್ಡೇಟ್ ಆದ ಕ್ಲಿನಿಕ್ ಅತ್ಯಾಧುನಿಕ ಚರ್ಮಶಾಸ್ತ್ರೀಯ ಆವಿಷ್ಕಾರದೊಂದಿಗೆ ಗ್ರಾಹಕರ ಅನುಭವ ಮರು ವ್ಯಾಖ್ಯಾನಿಸಲು ಸಜ್ಜಾಗಿದೆ. ಬೆಂಗಳೂರಿನಾದ್ಯಂತ 10 ಕ್ಲಿನಿಕ್ ಗಳು ಈಗಾಗಲೇ ಪ್ರಾರಂಭಗೊಂಡಿದ್ದು ಈ ಕೋರಮಂಗಲದ ತಾಣವು ನಗರದ ಪ್ರೀಮಿಯಂ ಆರೋಗ್ಯಸೇವಾ ವಲಯದಲ್ಲಿ ಕಾಯದ ನಾಯಕತ್ವವನ್ನು ಒಗ್ಗೂಡಿಸುವ ಗುರಿ ಹೊಂದಿದೆ. ಈ ಕ್ಲಿನಿಕ್ ಮರು ರೂಪಿಸುವಲ್ಲಿ ಪ್ರಮುಖ ಅಂಶವಾಗಿರುವುದು ಅತ್ಯಾಧುನಿಕ ಕೃತಕ ಬುದ್ಧಿಮತ್ತೆ ಪ್ಲಾಟ್ ಫಾರಂ ಕ್ಲಿಯರ್ ಎಐ ಅತ್ಯಂತ ವೈಯಕ್ತಿಕಗೊಳಿಸಿದ ಚರ್ಮದ ಆರೈಕೆ ರೋಗಪರೀಕ್ಷೆ ನೀಡುತ್ತದೆ. ಕ್ಲಿಯರ್ ಎಐ ಚರ್ಮದ ಪರಿಸ್ಥಿತಿಗಳನ್ನು ಆಳವಾಗಿ ವಿಶ್ಲೇಷಿಸುತ್ತದೆ ಮತ್ತು ವಿಶೇಷವಾಗಿ ರೂಪಿಸಿದ ಚಿಕಿತ್ಸೆಗಳನ್ನು ನೀಡುವ ಮೂಲಕ ಪ್ರತಿ ಗ್ರಾಹಕರೂ ಅವರ ವೈಯಕ್ತಿಕ ಅಗತ್ಯಗಳಿಗೆ ಹೊಂದುವ ಬೆಸ್ಪೋಕ್ ರೆಜಿಮನ್ ಸ್ವೀಕರಿಸುವುದನ್ನು ದೃಢಪಡಿಸುತ್ತದೆ.

ಈ ತಂತ್ರಜ್ಞಾನವು ಕೋರಮಂಗಲ ಕ್ಲಿನಿಕ್ ಅನ್ನು ಸುಧಾರಿತ ಚರ್ಮಶಾಸ್ತ್ರೀಯ ಆರೈಕೆಯ ಮುಂಚೂಣಿಯಲ್ಲಿದ್ದು ಚರ್ಮದ ಆರೈಕೆಯಲ್ಲಿ ಹೊಸ ಮಾನದಂಡ ನಿಗದಿಪಡಿಸುತ್ತದೆ. ಚರ್ಮದ ಆರೈಕೆಯ ಆದ್ಯತೆಯೊಂದಿಗೆ ಈ ನವೀಕೃತ ಕ್ಲಿನಿಕ್ ಈಗ ವಿಸ್ತರಿಸಿದ ಶ್ರೇಣಿಯ ಬಾಡಿ ಕೇರ್ ಚಿಕಿತ್ಸೆಗಳನ್ನು ನೀಡುತ್ತಿದ್ದು ಅದರಲ್ಲಿ ಪಿಗ್ಮೆಂಟೇಷನ್ ರಿಡಕ್ಷನ್, ಪಿ.ಆರ್.ಪಿ. ಹೇರ್ ಥೆರಪಿ ಮತ್ತು ಕೂಲ್ ಸ್ಕಲ್ಪ್ಟಿಂಗ್ ನಂತಹ ನಾನ್-ಇನ್ವೇಸಿವ್ ಕೊಬ್ಬು ಇಳಿಸುವಿಕೆಯ ಪರಿಹಾರಗಳನ್ನು ಒಳಗೊಂಡಿದೆ. ಆರು ಪೂರ್ಣ ಸೇವೆಯ ಕೋಣೆಗಳನ್ನು ಹೊಂದಿರುವ ಈ ಕ್ಲಿನಿಕ್ ಬಾಡಿ ಕೊಂಟೂರಿಂಗ್ ಚಿಕಿತ್ಸೆಗಳಾದ ಸಿ.ಎಂ. ಕ್ಲಿನಿಕ್ ಕೂಡಾ ಪ್ರಾರಂಭಿಸಿದ್ದು ಅದು ಒಟ್ಟಾರೆ ಸ್ವಾಸ್ಥ್ಯ ಸುಧಾರಣೆಯ ಸೌಂದರ್ಯಪ್ರಜ್ಞೆಯ ಗುರಿಗಳನ್ನು ಸಂಯೋಜಿಸುತ್ತದೆ. ಕಾಯದ ಕೋರಮಂಗಲ ಕ್ಲಿನಿಕ್ ಹೈಡ್ರಾಫೇಷಿಯಲ್ ಮತ್ತು ಡರ್ಮಾಫ್ರಾಕ್ ರೀತಿಯ ಜನಪ್ರಿಯ ಚರ್ಮದ ಆರೈಕೆ ಚಿಕಿತ್ಸೆಗಳನ್ನು ಮುಂದುವರಿಸುತ್ತಿದೆ. ಈ ಕ್ಲಿನಿಕ್ ನ ಚರ್ಮ, ಕೂದಲು ಮತ್ತು ದೇಹದ ಚಿಕಿತ್ಸೆಗಳು ಪ್ರತಿ ಗ್ರಾಹಕರಿಗೂ ನಿರ್ದಿಷ್ಟ ಅಗತ್ಯಕ್ಕೆ ಬೇಕಾದ ಸಮಗ್ರ, ಉನ್ನತ ಗುಣಮಟ್ಟದ ಅನುಭವ ನೀಡುತ್ತದೆ.

## ನಿಪ್ಪಟ್ಟು ಮಸಾಲಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ನಿಪ್ಪಟ್ಟು, ಓಂ ಪುಡಿ, ಹಸಿ ಮೆಣಸಿನಕಾಯಿ, ಟೊಮೆಟೋ ಸಾಸ್, ಉಪ್ಪು, ಪುದೀನಾ, ಗರಂ ಮಸಾಲಾ, ಕೊತ್ತಂಬರಿ ಸೊಪ್ಪು, ಟೊಮೆಟೋ, ಈರುಳ್ಳಿ, ಕ್ಯಾರೆಟ್, ಬೆಲ್ಲ ಮತ್ತು ಹುಣಸೆ ಹಣ್ಣಿನ ಪೇಸ್ಟ್.

### ಮಾಡುವ ವಿಧಾನ

ಮೊದಲು ಒಂದು ನಿಪ್ಪಟ್ಟು ತೆಗೆದುಕೊಂಡು ಚೆನ್ನಾಗಿ ಅದಕ್ಕೆ ಟೊಮೆಟೋ ಸಾಸ್ ಹಚ್ಚಿ, ನಂತರ ಪುದೀನಾ ಮತ್ತು ಹಸಿ ಮೆಣಸಿನಕಾಯಿ ಪೇಸ್ಟ್, ಉಪ್ಪು, ಗರಂ ಮಸಾಲಾ, ಟೊಮೆಟೋ, ಈರುಳ್ಳಿ, ಕ್ಯಾರೆಟ್, ಕೊತ್ತಂಬರಿ ಸೊಪ್ಪು, ಹುಣಸೆ ಮತ್ತು ಬೆಲ್ಲದ ಪೇಸ್ಟ್ ಹಾಕಿ ಅದರ ಮೇಲೆ ಓಂ ಪುಡಿ ಹಾಕಿದರೆ ನಿಪ್ಪಟ್ ಮಸಾಲಾ ಸವಿಯಲು ಸಿದ್ಧ.

## ನಟಿ ಶ್ರೀಲೀಲಾ ಮದುವೆ ಗಾಸಿಪ್?



ಹಿರಿಯ ನಿರ್ದೇಶಕ ರಾಘವೇಂದ್ರ ರಾವ್ ಅವರ ನಿರ್ದೇಶನದಲ್ಲಿ ಪೆಲ್ಲಿ ಸನದ್ ಚಿತ್ರದ ಮೂಲಕ ನಾಯಕಿಯಾಗಿ ಶ್ರೀಲೀಲಾ ಪಾದಾರ್ಪಣೆ ಮಾಡಿದರು. ಶ್ರೀಕಾಂತ್ ಪುತ್ರ ರೋಷನ್ ಈ ಚಿತ್ರದಲ್ಲಿ ನಾಯಕನಾಗಿ ಗುರುತಿಸಿಕೊಂಡರು.

ಪೆಲ್ಲಿ ಸಂದದ್ ಚಿತ್ರ ಗಲ್ಲಾಪೆಟ್ಟಿಗೆಯಲ್ಲಿ ಉತ್ತಮ ಯಶಸ್ಸನ್ನು ದಾಖಲಿಸಿತು.

ಈ ಸಿನಿಮಾದ ನಂತರ ಶ್ರೀಲೀಲಾ ನಾಯಕ ರವಿತೇಜ ಜೊತೆ ಧಮಾಕಾ ಸಿನಿಮಾದಲ್ಲಿ ನಟಿಸಿದ್ದು ಬಾಕ್ಸ್ ಆಫೀಸ್ ನಲ್ಲಿ ಸೂಪರ್ ಹಿಟ್ ಆಯಿತು. ಇದರೊಂದಿಗೆ ಶ್ರೀಲಿಗೆ ಸರಣಿ ಆಫರ್ಗಳು ಬಂದವು... ಈ ಹಿನ್ನಲೆಯಲ್ಲಿ ಶ್ರೀಲೀಲಾ ಅವರು ಸ್ಕಂದ, ಭಗವಂತ ಕೇಸರಿ, ಗುಂಟೂರು ಕರಂ, ಎಕ್ಸ್ಟ್ರಾ-ಆರ್ಡಿನರಿ ಮ್ಯಾನ್ ಚಿತ್ರಗಳಲ್ಲಿ ನಟಿಸಿದ್ದಾರೆ. ಪವನ್ ಕಲ್ಯಾಣ್ ಅವರ 'ಉಸ್ತಾದ್ ಭಗತ್ ಸಿಂಗ್' ಮತ್ತು ವಿಜಯ್ ದೇವರಕೊಂಡ ಅವರ ಹೊಸ ಚಿತ್ರದೊಂದಿಗೆ ಶ್ರೀಲೀಲಾ ತೆಲುಗಿನಲ್ಲಿ ಬ್ಯುಸಿ ನಾಯಕಿಯಾಗಿದ್ದಾರೆ.

ಆದರೆ ಸದ್ಯಕ್ಕೆ ಶ್ರೀಲೀಲಾ ಹವಾ ಕಡಿಮೆಯಾಗಿದೆ ಎಂದೇ ಹೇಳಬಹುದು... ಆಕೆಯ ಚಿತ್ರಗಳು ಬಾಕ್ಸಾಫಿಸ್ನಲ್ಲಿ ಯಶಸ್ಸು ದಾಖಲಿಸದೇ ಇದ್ದಿದ್ದರಿಂದ, ತೆಲುಗಿನಲ್ಲಿ ನಟಿಗೆ ಆಫರ್ಗಳು ಕಡಿಮೆಯಾದವು. ಈ ಮಧ್ಯೆ ಶ್ರೀಲೀಲಾಗೆ ಸಂಬಂಧಿಸಿದ ಇತ್ತೀಚಿನ ಸುದ್ದಿಯೊಂದು ವೈರಲ್ ಆಗಿದೆ. ನಟಿಗೆ ಮೆಗಾ ಹೀರೋ ದೀಪಾವಳಿ ಗಿಫ್ಟ್ ಕಳುಹಿಸಿದ್ದಾರೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಸೆನ್ಸೇಷನಲ್ ಗಾಸಿಪ್ವೊಂದು ಹರಿದಾಡುತ್ತಿದೆ. ಆ ನಾಯಕ ಬೇರೆ ಯಾರೂ ಅಲ್ಲ, ಮೊದಲ ಸಿನಿಮಾದಲ್ಲೇ ಸೂಪರ್ ಹಿಟ್ ಪಡೆದ ವೈಷ್ಣವ್ ತೇಜ್..

ಹೌದು ಇತ್ತೀಚೆಗಷ್ಟೇ ವೈಷ್ಣವ್ ತೇಜ್ ಶ್ರೀಲೀಲಾಗೆ ದೀಪಾವಳಿ ಉಡುಗೊರೆಯನ್ನು ಕಳುಹಿಸಿದ್ದಾರೆ. 'ಆದಿಕೇಶವ' ಚಿತ್ರದಲ್ಲಿ ವೈಷ್ಣವ್ ತೇಜ್ ಹಾಗೂ ಶ್ರೀಲೀಲಾ ನಟಿಸಿದ್ದರು. ಈ ಚಿತ್ರ ಬಾಕ್ಸ್ ಆಫೀಸ್ನಲ್ಲಿ ಫ್ಲಾಪ್ ಆಗಿತ್ತು. ಸಿನಿಮಾ ಫೇಲ್ ಆದ್ರೂ ಅವರ ಕೆಮಿಸ್ಟ್ರಿಗೆ ಒಳ್ಳೆ ಮಾರ್ಕ್ಸ್ ಸಿಕ್ಕಿದೆ. ವೈಷ್ಣವ್ ತೇಜ್ ಆ ಪರಿಚಿತತೆಯೊಂದಿಗೆ ಶ್ರೀಲೀಲಾ ಅವರಿಗೆ ದೀಪಾವಳಿ ಉಡುಗೊರೆಯನ್ನು ಕಳುಹಿಸಿದ್ದಾರೆ ಎಂದು ಹೇಳಲಾಗುತ್ತಿದೆ.. ಕೇವಲ ಸ್ನೇಹದ ಕಾರಣದಿಂದ ಕಳುಹಿಸಿದ್ದಾರಾ? ಅಥವಾ ಇದರ ಹಿಂದೆ ಏನಾದರೂ ಇದೆಯೇ..? ಎಂದು ನೆಟ್ಟಿಗರು ಯೋಚಿಸುತ್ತಿದ್ದಾರೆ..

ತಾನು ಯಾರನ್ನೋ ಪ್ರೀತಿಸುತ್ತಿದ್ದೇನೆ ಎಂದು ಶ್ರೀಲೀಲಾ ಈ ಹಿಂದೆ ಸಂದರ್ಶನವೊಂದರಲ್ಲಿ ಹೇಳಿದ್ದರು. ಅವರು ವೈಷ್ಣವ್ ತೇಜ್ ಇರಬಹುದು ಎಂದು ನೆಟಿಜನ್ಗಳು ಪ್ರತಿಕ್ರಿಯಿಸುತ್ತಿದ್ದಾರೆ. ಇದು ನಿಜವೇ ಆಗಿದ್ದರೆ ಶ್ರೀಲೀಲಾ ಮೇಘಾ ಮನೆಗೆ ಸೊಸೆಯಾಗಿ ಹೋಗುವುದು ಖಚಿತ ಎಂದು ಅವರು ಭಾವಿಸಿದ್ದಾರೆ. ಆದರೆ ಈ ವದಂತಿಗಳಿಗೆ ಇವರಿಬ್ಬರು ಯಾವುದೇ ಪ್ರತಿಕ್ರಿಯೆ ನೀಡದ ಕಾರಣ ಇದರಲ್ಲಿ ಎಷ್ಟು ಸತ್ಯಾಂಶವಿದೆ ಎಂಬುದನ್ನು ಕಾದು ನೋಡಬೇಕಿದೆ.

## ಆರೋಗ್ಯಕರ ಬೆಂಡೆಕಾಯಿ



### ಹೆಲ್ತ್ ಟಿಪ್ಸ್

ಪಲ್ಲೆ, ಸೂಪ್, ಸಲಾಡ್ ಹೀಗೆ ನಾನಾ ಬಗೆಯ ಆಹಾರದ ರೂಪದಲ್ಲಿ ಬೆಂಡೆಕಾಯಿ ನಿಮ್ಮ ಹೊಟ್ಟೆ ಸೇರುತ್ತೆ. ಜಿಡ್ಡಿನ ಅಂಶವಿರುವ ಬೆಂಡೆಕಾಯಿ ಬಾಯಿಗಷ್ಟೇ ರುಚಿಯಲ್ಲ, ಆರೋಗ್ಯಕ್ಕೂ ತುಂಬಾ ಒಳ್ಳೆಯದು. ದೊಡ್ಡ ಕರುಳಿನ ಕ್ಯಾನ್ಸರ್ ದೂರ ಮಾಡಲು ಬೆಂಡೆಕಾಯಿ ಬಹಳ ಒಳ್ಳೆಯದು. ಕರುಳಿನಲ್ಲಿರುವ ಟಾಕ್ಸಿಕ್ ಅಂಶವನ್ನು ಹೊಡೆದೋಡಿಸಿ ಕರುಳಿನ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಮಲಬದ್ಧತೆಯನ್ನು ದೂರ ಮಾಡಲು ಬೆಂಡೆಕಾಯಿ ಉತ್ತಮ ಔಷಧ. ಫೈಬರ್ ಅಂಶ ಇದರಲ್ಲಿ ಹೇರಳವಾಗಿದ್ದು, ಜೀರ್ಣಕ್ರಿಯೆಯನ್ನು ಸುಲಭ ಮಾಡುತ್ತದೆ. ರಕ್ತಹೀನತೆಯಿಂದ ದೇಹವನ್ನು ರಕ್ಷಿಸುತ್ತದೆ. ಬೆಂಡೆಕಾಯಿಯಲ್ಲಿರುವ ಕಬ್ಬಿಣದ ಅಂಶ ನಮ್ಮ ದೇಹಕ್ಕೆ ಬಹಳ ಪ್ರಯೋಜನಕಾರಿ. ಇದು ಹಿಮೋಗ್ಲೋಬಿನ್ ಅಂಶವನ್ನು ಹೆಚ್ಚಿಸಿ ರಕ್ತಹೀನತೆಯನ್ನು ತಡೆಗಟ್ಟುತ್ತದೆ.

ತೂಕ ಇಳಿಸಿಕೊಳ್ಳುವವರು ನಿಶ್ಚಿಂತೆಯಿಂದ ಬೆಂಡೆಕಾಯಿ ಸೇವನೆ ಮಾಡಬಹುದು. ಇದರಲ್ಲಿ ಕ್ಯಾಲೋರಿ ಇರುವುದಿಲ್ಲ. ಹಾಗೆ ಫೈಬರ್ ಜಾಸ್ತಿ ಇರುವುದರಿಂದ ತೂಕ ಇಳಿಸಿಕೊಳ್ಳಲು ನೆರವಾಗುತ್ತದೆ.

ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿರುವವರಿಗೆ ಬೆಂಡೆಕಾಯಿ ಹೇಳಿ ಮಾಡಿಸಿದ ತರಕಾರಿ. ಫೈಬರ್ ಅಂಶ ಜಾಸ್ತಿ ಇರುವುದರಿಂದ ರಕ್ತದಲ್ಲಿರುವ ಕೊಲೆಸ್ಟ್ರಾಲ್ ಅಂಶವನ್ನು ಅದು ಕಡಿಮೆ ಮಾಡುತ್ತದೆ. ಹಾಗಾಗಿ ಹೃದಯಾಘಾತವಾಗುವ ಸಂಭವ ಕಡಿಮೆ ಇರುತ್ತದೆ. ದಟ್ಟ ಹಾಗೂ ಕಪ್ಪನೆಯ ಕೂದಲನ್ನು ಬಯಸುವವರು ಬೆಂಡೆಕಾಯಿ ಸೇವನೆ ಮಾಡಬೇಕು. ಹಾಗೆ ಬೆಂಡೆಕಾಯಿಯನ್ನು ಸಣ್ಣದಾಗಿ ಕತ್ತರಿಸಿ ಅದಕ್ಕೆ ನಿಂಬೆ ರಸವನ್ನು ಸೇರಿಸಿ, ಆ ರಸದಲ್ಲಿ ತಲೆ ತೊಳೆದ್ರೆ ಕೂದಲುದುರುವುದು ಕಡಿಮೆಯಾಗುತ್ತದೆ.

## 16ನೇ ಆವೃತ್ತಿಯ ವಿವಾ ಕಾರ್ಯಕ್ರಮ ಆಯೋಜಿಸಿದ ವಿಬ್‌ಗಯಾರ್



ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್ಸ್ ವಿದ್ಯಾರ್ಥಿಗಳ ಸೃಜನಶೀಲತೆ, ಪ್ರತಿಭೆ ಮತ್ತು ಶ್ರೇಷ್ಠತೆಯನ್ನು ಸಂಭ್ರಮಿಸುವ ತನ್ನ ಪ್ರತಿಷ್ಠಿತ ಕಾರ್ಯಕ್ರಮವಾದ ವಿಬ್‌ಗಯಾರ್ ವಿವಾ ಕಾರ್ಯಕ್ರಮದ 16ನೇ ಆವೃತ್ತಿಯನ್ನು ಆಯೋಜಿಸಿದೆ. 2024ರ ಅಕ್ಟೋಬರ್ 5ರಂದು ಆರಂಭವಾಗಿರುವ ಈ ಕಾರ್ಯಕ್ರಮವು ದೇಶದ ಅನೇಕ ಭಾಗಗಳಲ್ಲಿ ನಡೆಯಲಿದೆ. 'ದಿ ಸ್ಟಾರ್ಸ್ ಎನ್ಸೆಂಬಲ್' ಎಂಬ ಘೋಷವಾಕ್ಯ ಹೊಂದಿರುವ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ತಮ್ಮ ಪ್ರತಿಭಾ ಪ್ರದರ್ಶನ ನೀಡಲಿದ್ದಾರೆ. ಈ ಬಾರಿ ಜಾಗತಿಕ ಮಟ್ಟದಲ್ಲಿ ಕಾರ್ಯಕ್ರಮ ನಡೆಯಲಿದೆ. ಈ ಬಹು ನಿರೀಕ್ಷಿತ ವಿಬ್ ಗಯಾರ್ ವಿವಾ ಕಾರ್ಯಕ್ರಮದ ಗ್ರ್ಯಾಂಡ್ ಫಿನಾಲೆ ಡಿಸೆಂಬರ್ 15ರಂದು ಬೆಂಗಳೂರಿನಲ್ಲಿ ನಡೆಯಲಿದ್ದು, ಅಂತಿಮ ಹಂತಕ್ಕೆ ಪ್ರವೇಶಿಸಿದ ವಿದ್ಯಾರ್ಥಿಗಳು ಗ್ರ್ಯಾಂಡ್ ಫಿನಾಲೆಯಲ್ಲಿ ಪ್ರಶಸ್ತಿಗಾಗಿ ಸೆಣೆಸಲಿದ್ದಾರೆ. ವಿಜೇತರು ?2,25,000 ನಗದು ಬಹುಮಾನ ಗಳಿಸಲಿದ್ದಾರೆ.

ಜಗತ್ತಿನಾದ್ಯಂತ ಇರುವ ಆಸಕ್ತರು ಆನ್‌ಲೈನ್ ಮತ್ತು ಆಫ್‌ಲೈನ್‌ನಲ್ಲಿ ಹೆಸರು ನೋಂದಾಯಿಸಬಹುದು ಮತ್ತು ಭಾಗವಹಿಸಬಹುದಾಗಿದೆ. ಜಾಗತಿಕ ಮಟ್ಟದಲ್ಲಿ ಕಾರ್ಯಕ್ರಮ ನಡೆಯುತ್ತಿರುವುದರಿಂದ ವಿದ್ಯಾರ್ಥಿಗಳು ಅಂತರಾಷ್ಟ್ರೀಯ ವೇದಿಕೆಯಲ್ಲಿ ತಮ್ಮ ಪ್ರತಿಭೆ ಮತ್ತು ಸೃಜನಶೀಲತೆಯನ್ನು ಪ್ರದರ್ಶಿಸಬಹುದಾಗಿದೆ. ಆಸಕ್ತ ವಿದ್ಯಾರ್ಥಿಗಳು ಅಧಿಕೃತ ವೆಬ್‌ಸೈಟ್: ತಿತಿತಿ.ತಿಭರಥಿಣಾತತಚಿ.ಛಿಂಟ ನಲ್ಲಿ ಹೆಸರು ನೋಂದಾಯಿಸಿಕೊಳ್ಳಬಹುದು.

ವಿಬ್‌ಗಯಾರ್ ವಿವಾ ಪ್ರಾರಂಭವಾದಂದಿನಿಂದ ಇಲ್ಲಿಯವರೆಗೆ 200,000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು 5000+ ಶಾಲೆಗಳಿಗೆ ಪ್ರಯೋಜನವನ್ನು ಒದಗಿಸಿ ಪ್ರತಿಷ್ಠಿತ ವೇದಿಕೆಯಾಗಿ ಬೆಳೆದು ಬಂದಿದೆ. ತಮ್ಮ ವಿಭಿನ್ನ ಪ್ರತಿಭೆಗಳನ್ನು ಪ್ರದರ್ಶಿಸಲು ವಿದ್ಯಾರ್ಥಿಗಳಿಗೆ ಅವಕಾಶ ಒದಗಿಸುವ ವಿಬ್‌ಗಯಾರ್ ಸಂಸ್ಥೆಯ ಬದ್ಧತೆಗೆ ಈ ಉತ್ಸವ ಸಾಕ್ಷಿಯಾಗಿದೆ. ಸೃಜನಶೀಲ ಕಲೆಗಳು, ಕ್ರೀಡೆ, ಸ್ಪರ್ಧೆಗಳು ಮತ್ತು ವ್ಯಕ್ತಿತ್ವ ಆಧರಿತ ಕಾರ್ಯಾಗಾರಗಳಂತಹ ವಿವಿಧ ಪ್ರಕಾರಗಳ ವ್ಯಾಪಕ ಶ್ರೇಣಿಯ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ವಿದ್ಯಾರ್ಥಿಗಳು ಕೌಶಲಗಳನ್ನು ಬೆಳೆಸಿಕೊಳ್ಳಬಹುದು, ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳಬಹುದು ಮತ್ತು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಸಾಧನೆ ಮಾಡಬಹುದು. ಈ ಕಾರ್ಯಕ್ರಮದ ಮೂಲಕ ಶಾಲೆಗಳಿಗೆ ಮನ್ನಣೆ ದೊರಕರೆ, ವಿದ್ಯಾರ್ಥಿಗಳನ್ನು ಭವಿಷ್ಯದಲ್ಲಿ ಯಶಸ್ಸು ಸಾಧಿಸಲು ಸಿದ್ಧಗೊಳಿಸಲಾಗಿದೆ.

ಈ ಕುರಿತು ಮಾತನಾಡಿರುವ ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್ಸ್ ನ ವೈಸ್ ಚೇರ್ ಪರ್ಸನ್ ಕವಿತಾ ಕೆರವಾಲ ಅವರು, ವಿವಾ ಮೂಲಕ ನಾವು ಕ್ರಿಯಾಶೀಲ ಪರಿಸರ ನಿರ್ಮಿಸುವ ಮತ್ತು ಪ್ರತಿಭೆಗಳನ್ನು ಪೋಷಿಸುವ ಕಡೆಗೆ ದೃಷ್ಟಿ ಹರಿಸುತ್ತೇವೆ. ವಿವಾ ಕೇವಲ ಸ್ಪರ್ಧೆ ಮಾತ್ರವೇ ಅಲ್ಲ, ಅದಕ್ಕೂ ಮೀರಿದ್ದು. ಈ ಕಾರ್ಯಕ್ರಮ ಪ್ರತೀ ಮಗುವಿನಲ್ಲಿರುವ ಅದ್ಭುತ ಸಾಮರ್ಥ್ಯದ ಸಂಭ್ರಮಾಚರಣೆಯಾಗಿದೆ. ವಿವಾ ವಿದ್ಯಾರ್ಥಿಗಳಿಗೆ ಮುಂದಿನ ಜೀವನದಲ್ಲಿ ಅಭಿವೃದ್ಧಿ ಹೊಂದಲು ಮತ್ತು ಯಶಸ್ಸು ಸಾಧಿಸಲು ನೆರವಾಗುತ್ತಿದ್ದು, ಈ ಕಾರ್ಯಕ್ರಮದ ಕುರಿತು ನಮಗೆ ಹೆಮ್ಮೆ ಇದೆ. ಈ ವರ್ಷದ ಆವೃತ್ತಿಯು 'ದಿ ಸ್ಟಾರ್ಸ್ ಎನ್ಸೆಂಬಲ್' ಎಂಬ ಘೋಷವಾಕ್ಯ ಹೊಂದಿದ್ದು, ಈ ವರ್ಷದ ಕಾರ್ಯಕ್ರಮದ ಮೂಲಕ 16 ವರ್ಷಗಳ ಸಾಧನೆಯನ್ನು ಸಂಭ್ರಮಿಸುತ್ತಿದ್ದೇವೆ'' ಎಂದು ಹೇಳಿದರು.

ಈ ವರ್ಷದ ವಿವಾದಲ್ಲಿ ವಿವಿಧ ಹಿನ್ನೆಲೆಯ ವಿದ್ಯಾರ್ಥಿಗಳು ಪಾಲ್ಗೊಳ್ಳಲು ಹಲವು ಆಕರ್ಷಕ ಕಾರ್ಯಕ್ರಮಗಳು ಮತ್ತು ವಿಭಿನ್ನ ಕಾರ್ಯಾಗಾರಗಳನ್ನು ವಿನ್ಯಾಸ ಮಾಡಲಾಗಿದೆ. ಕಾರ್ಯಕ್ರಮದಲ್ಲಿ ಆರಿಗಾಮಿ, ಬೀಟ್ ಬಾಕ್ಸಿಂಗ್, ಪಪೆಟ್ ಮೇಕಿಂಗ್, ಚಾಕೊಲೇಟ್ ತಯಾರಿಕೆ ಮತ್ತು ಟಿ-ಶರ್ಟ್ ಡಿಸೈನಿಂಗ್ ಮುಂತಾದ ಚಟುವಟಿಕೆಗಳಲ್ಲಿ ಭಾಗವಹಿಸುವವರು ಭಾಗವಹಿಸಬಹುದು. ಈ ವರ್ಷದ ಕಾರ್ಯಕ್ರಮ ಈ ಕೆಳಗಿನ ಐದು ಹಂತಗಳಲ್ಲಿ ನಡೆಯಲಿದೆ:

ರೇಡಿಯೇಟ್ (ಹಂತ 1): ಇದು ರಾಪಿಡ್ ಫೈರ್ ರೌಂಡ್ ಆಗಿದ್ದು, ಇಲ್ಲಿ ಭಾಗವಹಿಸುವವರು ಸಮಯದ ಚೌಕಟ್ಟಿನಲ್ಲಿ ತೀರ್ಪುಗಾರರ ಮೆಚ್ಚುಗೆ ಗಳಿಸಬೇಕು.

ಎಲಿವೇಟ್ (ಹಂತ 2): ಈ ಹಂತದಲ್ಲಿ ಭಾಗವಹಿಸುವವರು ಸ್ವಸಾಮರ್ಥ್ಯ, ಪ್ರತಿಭೆ ಪ್ರದರ್ಶನ ಮಾಡಲಿದ್ದು, ಹೆಚ್ಚು ಮೆಚ್ಚುಗೆ ಗಳಿಸುವ ಕಡೆಗೆ ಗಮನ ಹರಿಸಲಿದ್ದಾರೆ.

ಆಕ್ಸಲರೇಟ್ (ನಾಕೌಟ್ ಹಂತ): ಇಲ್ಲಿ ಶಾಶ್ವತ ಪ್ರಭಾವ ಬೀರುವ ಇಲ್ಲಿ ವಿಶಿಷ್ಟ ಪ್ರದರ್ಶನವನ್ನು ವಿದ್ಯಾರ್ಥಿಗಳು ನೀಡಲಿದ್ದಾರೆ.

ಸೆಮಿ-ಫೈನಲ್: ಆಯ್ದ ಸ್ಪರ್ಧಿಗಳು ತಮ್ಮ ಅನನ್ಯತೆಯನ್ನು ಪ್ರದರ್ಶಿಸುವ ಮೂಲಕ ತೀರ್ಪುಗಾರರ ಮೆಚ್ಚುಗೆ ಗಳಿಸುವ ಅವಕಾಶವನ್ನು ಹೊಂದಿರುತ್ತಾರೆ. ಗ್ರ್ಯಾಂಡ್ ಫಿನಾಲೆ: ಟಾಪ್ ಫೈನಲಿಸ್ಟ್‌ಗಳು ಸೆಲೆಬ್ರಿಟಿಗಳು ಹಾಗೂ ತೀರ್ಪುಗಾರರ ಸಮ್ಮುಖದಲ್ಲಿ ಪ್ರದರ್ಶನ ನೀಡಲಿದ್ದಾರೆ. ಬಹುಮಾನಕ್ಕಾಗಿ ಸ್ಪರ್ಧಿಸುತ್ತಾರೆ. ಅಂತಿಮವಾಗಿ ವಿಜೇತರು 2,25,000 ನಗದು ಬಹುಮಾನವನ್ನು ಪಡೆಯುತ್ತಾರೆ.

ವಿಬ್‌ಗಯಾರ್ ವಿವಾ ಮಿನಿಥಾನ್ 2024 ಕಾರ್ಯಕ್ರಮವು 2024ರ ಅಕ್ಟೋಬರ್ 6ರಂದು ಮುಂಬೈನ ಮಲಾಡ್ ವೆಸ್ಟ್ ನ ವಿಬ್‌ಗಯಾರ್ ರೈಸ್ ನಲ್ಲಿ ನಡೆಯಿತು. ಈ ವರ್ಷದ ಕಾರ್ಯಕ್ರಮವು ವಿವಾ ಮಿನಿ-ಮ್ಯಾರಥಾನ್, ಕ್ಲೈಮೇಟ್ ಅಕಾಡೆಮಿ ಮತ್ತು ಕಟ್‌ಎಕ್ಸ್ ಪರ್ಸೆಂಟ್ ನಡುವಿನ ಸಹಯೋಗದಲ್ಲಿ ನಡೆಯಲಿದೆ. ವಿಬ್‌ಗಯಾರ್ ಸಂಸ್ಥೆ ಈ ಕಾರ್ಯಕ್ರಮದ ಮೂಲಕ ಪರಿಸರದಲ್ಲಿ ಸುಸ್ಥಿರತೆ ಅಳವಡಿಸಿಕೊಳ್ಳುವ ಮತ್ತು ಉತ್ತೇಜಿಸುವ ತನ್ನ ಶ್ರೇಷ್ಠತಾ ಪರಂಪರೆಯನ್ನು ಮುಂದುವರೆಸಿತು. ಭಾಗವಹಿಸುವವರು ಮತ್ತು ಅವರ ಕುಟುಂಬಗಳು ಆಸಕ್ತಿಯಿಂದ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಈ ಕಾರ್ಯಕ್ರಮವು ಆರೋಗ್ಯಕರ ಜಗತ್ತನ್ನು ರೂಪಿಸುವ ನಿಟ್ಟಿನಲ್ಲಿ ಕೊಡುಗೆ ನೀಡಿತು.

ವಿವಾ ಯಶಸ್ವಿಯಾಗಿ 16ನೇ ವರ್ಷಕ್ಕೆ ಕಾಲಿಟ್ಟಿದ್ದು, ಈ ಮೂಲಕ ನಾವು ನಮ್ಮ ಶ್ರೇಷ್ಠತೆಯ ಸಂಪ್ರದಾಯವನ್ನು ಮುಂದುವರಿಸಲು ಉತ್ಸುಕರಾಗಿದ್ದೇವೆ. ಸೃಜನಶೀಲತೆ, ಪ್ರತಿಭೆ ಪ್ರದರ್ಶಿಸಲು ವಿದ್ಯಾರ್ಥಿಗಳಿಗೆ ಸೂಕ್ತ ವೇದಿಕೆ ಕಲ್ಪಿಸಲಾಗುತ್ತಿದೆ. ವಿಬ್‌ಗಯಾರ್ ವಿವಾ ಕೇವಲ ಸ್ಪರ್ಧೆಯಷ್ಟೇ ಅಲ್ಲ, ಅದನ್ನು ಮೀರಿದ್ದು. ಉತ್ಸಾಹ, ಕಠಿಣ ಪರಿಶ್ರಮದ ಸಂಭ್ರಮಾಚರಣೆಯಾಗಿದೆ ಮತ್ತು ನಾಳಿನ ಯುವ ತಾರೆಯರಿಗಾಗಿ ಅಪರಿಮಿತ ಅವಕಾಶ ಒದಗಿಸುತ್ತದೆ.

## ಮೆಹಂದಿ ಹೀಗೆ ಬಳಸಿ

### ಬ್ಯೂಟಿ ಟಿಪ್ಸ್



ಕೂದಲು ಬಿಳಿಯಾಗುವುದು ಅಥವಾ ತೆಳ್ಳಗಾಗಲು ಪ್ರಾರಂಭವಾದ ತಕ್ಷಣ ಎಲ್ಲರೂ ನೈಸರ್ಗಿಕವಾದ ಮೆಹಂದಿಯ ಮೊರೆ ಹೋಗುತ್ತಾರೆ. ಮೆಹಂದಿ ಕೇವಲ ಕೂದಲಿನ ಬಣ್ಣಕ್ಕಷ್ಟೇ ಅಲ್ಲದೆ ತಲೆ ಹೊಟ್ಟು ಮತ್ತು ಕೂದಲು ಉದುರುವುದನ್ನು ಸಹ ಕಡಿಮೆ ಮಾಡುತ್ತದೆ. ಕೂದಲಿಗೆ ಮೆಹಂದಿ ಪೇಸ್ಟ್ ಮಾಡುವಾಗ ಈ 5 ವಸ್ತುಗಳನ್ನು ಸೇರಿಸಿ ಹಚ್ಚಿದರೆ ಕೂದಲು ಹೆಚ್ಚು ಕಾಂತಿಯುತ ಮತ್ತು ಬಲಿಷ್ಠವಾಗಿರುತ್ತದೆ. ಚಹಾದ ಎಲೆಗಳು ಸಹ ಕೂದಲಿಗೆ ಬಣ್ಣವನ್ನು ನೀಡುತ್ತವೆ. ಇದಕ್ಕಾಗಿ ಚಹಾದ ಎಲೆಗಳನ್ನು ನೀರಿನಲ್ಲಿ ಕುದಿಸಿ ಗೋರಂಟಿ ಪುಡಿಯೊಂದಿಗೆ ಚೆನ್ನಾಗಿ ಮಿಕ್ಸ್ ಮಾಡಿ ರಾತ್ರಿಯಿಡೀ ಹಾಗೆಯೇ ಇಡಿ. ಇದರ ಬಳಕೆಯು ಕೂದಲನ್ನು ಒಣಗಿಸುವುದಿಲ್ಲ. ಕೂದಲು ಮೃದುವಾಗಲು ಕಾರಣವಾಗುತ್ತದೆ. ಚಹಾದಲ್ಲಿ ಟ್ಯಾನಿನ್ ಅಂಶವಿದ್ದು ಅದು ಕೂದಲಿನ ಹೊಳಪು ಹೆಚ್ಚುವಂತೆ ಮಾಡುತ್ತದೆ. ಕಾಫಿ ಪುಡಿಯನ್ನು ಅಥವ ಕಾಫಿ ದ್ರಾವಣವನ್ನು ಮೆಹಂದಿ ಪುಡಿಯೊಂದಿಗೆ ಸೇರಿಸಿ. ಇದು ಕೂದಲಿಗೆ ಗಾಢ ಬಣ್ಣವನ್ನು ನೀಡುತ್ತದೆ. ಸ್ವಲ್ಪ ನೀರಿಗೆ ಕಾಫಿ ಪುಡಿ ಸೇರಿಸಿ ಚೆನ್ನಾಗಿ ಕುದಿಸಿ. ತಣ್ಣಗಾದ ನಂತರ ಬಳಸಿ. ನಿಂಬೆ ರಸವು ಕೂದಲಿನ ತಲೆಹೊಟ್ಟಿನಿಂದ ಪರಿಹಾರ ಪಡೆಯಲು ಮತ್ತು ಶಿಲೀಂಧ್ರಗಳ ಸೋಂಕನ್ನು ನಿವಾರಿಸಲು ಸಹಾಯ ಮಾಡುತ್ತದೆ. ಮೆಹಂದಿಯೊಂದಿಗೆ ಒಂದು ಚಮಚ ನಿಂಬೆ ರಸ ಬೆರೆಸಿ ಕೂದಲಿಗೆ ಹಚ್ಚಿ. ಮೊಟ್ಟೆ ಸ್ವಲ್ಪ ವಾಸನೆ ಇದ್ದರೂ ಸಹ ಕೂದಲಿನ ಆರೋಗ್ಯಕ್ಕೆ ಅತ್ಯುತ್ತಮ. ಮೊಟ್ಟೆಯಲ್ಲಿ ಪ್ರೋಟೀನ್, ಸಿಲಿಕಾನ್, ಸಲ್ಫರ್, ವಿಟಮಿನ್ ಡಿ ಮತ್ತು ಇ ಇದ್ದು ಕೂದಲನ್ನು ಪೋಷಿಸುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಮಾತಿನಿಂದ ಸಮಸ್ಯೆ, ದಾಂಪತ್ಯದಲ್ಲಿ ವಿರಸ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ವೃಷಭ:** ಅನಗತ್ಯ ಪ್ರಯಾಣ, ಸಾಲದ ಚಿಂತೆ, ಶತ್ರು ಕಾಟಗಳು, ಬಂಧುಗಳು ದೂರ.

**ಮಿಥುನ:** ಪ್ರೀತಿ ಪ್ರೇಮದ ಒತ್ತಡ, ಆರ್ಥಿಕ ಅನುಕೂಲ, ಕುಟುಂಬದ ದುಸ್ಥಿತಿಯಿಂದ ಬೇಸರ, ಮಕ್ಕಳಿಂದ ತೊಂದರೆ.

**ಕಟಕ:** ವ್ಯಾಪಾರ ವ್ಯವಹಾರದಲ್ಲಿ ಲಾಭ, ಸ್ಥಿರಾಸ್ತಿ ವಾಹನ ಯೋಗ, ಸರ್ಕಾರಿ ಅಧಿಕಾರಿಗಳಿಂದ ಅನುಕೂಲ, ಉದ್ಯೋಗ ಲಾಭ.

**ಸಿಂಹ:** ಖರ್ಚುಗಳು ಅಧಿಕ, ಕೃಷಿ ಚಟುವಟಿಕೆಯಿಂದ ನಷ್ಟ, ಅಧಿಕಾರಿಗಳಿಂದ ತೊಂದರೆ, ಭೂ ವ್ಯವಹಾರದಿಂದ ಅನುಕೂಲ.

**ಕನ್ಯಾ:** ಅನಿರೀಕ್ಷಿತ ಧನಾಗಮನ, ಮಿತ್ರರೊಂದಿಗೆ ಕಿರಿಕಿರಿ, ಮಾತಿನಿಂದ ತೊಂದರೆ, ದೂರ ಪ್ರಯಾಣದ ಯೋಜನೆ.

**ತುಲಾ:** ಸಂಗಾತಿಯಿಂದ ಆರ್ಥಿಕ ಸಹಾಯ, ದಾಂಪತ್ಯ ಕಲಹಗಳು, ಉದ್ಯೋಗ ಸ್ಥಳದಲ್ಲಿ ತೊಂದರೆ, ಗುಪ್ತ ಧನಾಗಮನ.

**ವೃಶ್ಚಿಕ:** ಉದ್ಯೋಗ ನಷ್ಟಗಳು, ಸಾಲದ ಚಿಂತೆ ಮತ್ತು ಶತ್ರು ಕಾಟ, ದಾಂಪತ್ಯ ಸಂಶಯಗಳು, ಪಾಲುದಾರಿಕೆಯಲ್ಲಿ ಅನುಕೂಲ.

**ಧನಸ್ಸು:** ಉದ್ಯೋಗ ಅನುಕೂಲ, ಪ್ರೀತಿ ಪ್ರೇಮದಲ್ಲಿ ಯಶಸ್ಸು, ಮಕ್ಕಳಿಂದ ಯೋಗ, ವಿದ್ಯಾಭ್ಯಾಸದಲ್ಲಿ ಆಸಕ್ತಿ.

**ಮಕರ:** ಭಾವನಾತ್ಮಕ ಸೋಲು, ಮಕ್ಕಳ ಜೀವನದ ಚಿಂತೆ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ಉದ್ಯೋಗದಲ್ಲಿ ಒತ್ತಡಗಳು.

**ಕುಂಭ:** ಸ್ಥಿರಾಸ್ತಿ ವಾಹನ ನಷ್ಟ, ದೂರ ಪ್ರಯಾಣದ ತಯಾರಿ, ಉದ್ಯೋಗ ನಷ್ಟ, ಕೆಲಸಗಾರರಿಂದ ತೊಂದರೆ.

**ಮೀನ:** ಪ್ರಯಾಣದಲ್ಲಿ ಯಶಸ್ಸು, ಸರ್ಕಾರಿ ಕಾರ್ಯ ಜಯ, ರಾಜಕೀಯ ವ್ಯಕ್ತಿಗಳಿಂದ ಅನುಕೂಲ, ಭಾವನಾತ್ಮಕ ಹಿನ್ನಡೆಗಳು

## ವಿಶ್ವ ಬ್ಯಾಲೆ ದಿನ



ವಿಶ್ವ ಬ್ಯಾಲೆಟ್ ದಿನ ನವೆಂಬರ್ 2 ರಂದು ನಡೆಯುತ್ತದೆ. 15 ನೇ ಶತಮಾನದ ಹಿಂದೆ ಗುರುತಿಸಬಹುದಾದ ಬ್ಯಾಲೆ, ಒಂದು ಸಂಕೀರ್ಣವಾದ ಮತ್ತು ಕಲಾತ್ಮಕ ನೃತ್ಯ ಪ್ರಕಾರವಾಗಿದ್ದು, ಇದು ಸಂಗೀತಕ್ಕೆ ಪ್ರದರ್ಶಿಸಲಾದ ನಿಖರವಾದ, ಬೆಳಕು ಮತ್ತು ಆಕರ್ಷಕವಾದ ಚಲನೆಗಳು ಮತ್ತು ಸನ್ನೆಗಳನ್ನು ಒಳಗೊಂಡಿರುತ್ತದೆ. ವಿಶ್ವ ಬ್ಯಾಲೆ ದಿನವು ಸುತ್ತಮುತ್ತಲಿನ ಜನರು ಈ ಚೆನ್ನಾಗಿ ಪ್ರೀತಿಸುವ ಕಲೆಯನ್ನು ಆಚರಿಸಲು ವಿಶೇಷ ಸಂದರ್ಭವಾಗಿದೆ. ವಿಶ್ವ ಬ್ಯಾಲೆಟ್ ದಿನವನ್ನು ಮೊದಲು ಅಕ್ಟೋಬರ್ 1, 2014 ರಂದು ಆಚರಿಸಲಾಯಿತು. ಈ ವಿಶೇಷ ದಿನದಂದು, ಪ್ರಪಂಚದಾದ್ಯಂತದ ಉನ್ನತ ಬ್ಯಾಲೆ ಕಂಪನಿಗಳು ಆರು ಖಂಡಗಳಲ್ಲಿ ಲೈವ್ ವೀಡಿಯೊಗಳನ್ನು ಸ್ಟ್ರೀಮ್ ಮಾಡುತ್ತವೆ, ತಮ್ಮ ತೆರೆಮರೆಯ ಸಿದ್ಧತೆಗಳು, ಪೂರ್ವಾಭ್ಯಾಸಗಳು ಮತ್ತು ನೃತ್ಯ ತರಗತಿಗಳನ್ನು ಪ್ರದರ್ಶಿಸುತ್ತವೆ. ಈವೆಂಟ್ಗೆ ಕೊಡುಗೆ ನೀಡುವ ಪ್ರಮುಖ ಕಂಪನಿಗಳೆಂದರೆ ಆಸ್ಟ್ರೇಲಿಯನ್ ಬ್ಯಾಲೆಟ್, ಬೊಲ್ಶೊಯ್ ಬ್ಯಾಲೆಟ್, ದಿ ರಾಯಲ್ ಬ್ಯಾಲೆಟ್, ನ್ಯಾಷನಲ್ ಬ್ಯಾಲೆಟ್ ಆಫ್ ಕೆನಡಾ, ಸ್ಯಾನ್ ಫ್ರಾನ್ಸಿಸ್ಕೋ ಬ್ಯಾಲೆಟ್ ಮತ್ತು ರಾಯಲ್ ಸ್ವೀಡಿಷ್ ಬ್ಯಾಲೆಟ್. ಬ್ಯಾಲೆ ಇತಿಹಾಸವು ಇಟಲಿ ಮತ್ತು ಫ್ರಾನ್ಸ್ನಲ್ಲಿ 15 ನೇ ಶತಮಾನದಷ್ಟು ಹಿಂದಿನದು. ಈ ನೃತ್ಯವನ್ನು ರಾಜಮನೆತನದ ನ್ಯಾಯಾಲಯಗಳಲ್ಲಿ ಕುಲೀನರು ಮತ್ತು ಮಹಿಳೆಯರು ಹೆಚ್ಚಾಗಿ ಪ್ರದರ್ಶಿಸಿದರು. ಆದಾಗ್ಯೂ, ಬ್ಯಾಲೆಯ ಆರಂಭಿಕ ರೂಪವು ನೃತ್ಯವನ್ನು ಮಾತ್ರವಲ್ಲದೆ ಸಂಗೀತ, ಕವನ, ಅಲಂಕಾರ ಮತ್ತು ವೇಷಭೂಷಣವನ್ನು ಒಳಗೊಂಡಿತ್ತು, ಇದನ್ನು 'ಬ್ಯಾಲೆಟ್ ಡಿ ಕೋರ್' ಎಂದು ಕರೆಯಲಾಗುತ್ತದೆ. ಬ್ಯಾಲೆಯ ಈ ವಿಸ್ತಾರವಾದ ರೂಪದ ಅಭಿವೃದ್ಧಿಯನ್ನು ಫ್ರಾನ್ಸ್ನ ರಾಜ ಹೆನ್ರಿ ಖಖ ರ ಪತ್ನಿ ಕ್ಯಾಥರೀನ್ ಡಿ ಮೆಡಿಸಿ ಅಭಿವೃದ್ಧಿಪಡಿಸಿದರು. 1681 ರ ವರ್ಷವು ರಾಯಲ್ ಕೋರ್ಟ್ಗಳಿಂದ ವೇದಿಕೆಗೆ ಬ್ಯಾಲೆ ಪರಿವರ್ತನೆಗೆ ಸಾಕ್ಷಿಯಾಯಿತು, ಅಲ್ಲಿ ಅದನ್ನು ಒಪೆರಾಗಳೊಂದಿಗೆ ಸಂಯೋಜಿಸಲಾಯಿತು, ವಿಶೇಷವಾಗಿ ಫ್ರಾನ್ಸ್ನಲ್ಲಿ. 1700 ರ ದಶಕದಲ್ಲಿ, ಫ್ರೆಂಚ್-ಬ್ಯಾಲೆ ಮಾಸ್ಟರ್ ಈ ಬ್ಯಾಲೆ-ಒಪೆರಾ ಪ್ರವೃತ್ತಿಯನ್ನು ಕ್ರಾಂತಿಗೊಳಿಸಿದರು, ಬ್ಯಾಲೆ ತನ್ನದೇ ಆದ ಮಾನ್ಯತೆ ಪಡೆದ ಪ್ರಕಾರವಾಗಿ ನಿಲ್ಲಲು ಅರ್ಹವಾಗಿದೆ ಎಂದು ಪ್ರತಿಪಾದಿಸಿದರು. ಇದು 'ಬ್ಯಾಲೆಟ್ ಡಿ'ಆಕ್ಷನ್' ಎಂದು ಕರೆಯಲ್ಪಡುವ ಬ್ಯಾಲೆಟ್ನ ಮತ್ತೊಂದು ರೂಪವನ್ನು ಸೃಷ್ಟಿಸಲು ಕಾರಣವಾಯಿತು. ಈ ರೂಪವು ಅಭಿವ್ಯಕ್ತಿಶೀಲ ಮತ್ತು ನಾಟಕೀಯ ಚಲನೆಗಳನ್ನು ಒಳಗೊಂಡಿತ್ತು, ಇದನ್ನು ನೃತ್ಯದ ಮೂಲಕ ಕಥೆಗಳನ್ನು ಹೇಳಲು ಬಳಸಲಾಗುತ್ತಿತ್ತು. 19 ನೇ ಶತಮಾನದಲ್ಲಿ, ಬ್ಯಾಲೆ ಕ್ರಮೇಣ ವಿಕಸನಗೊಂಡಿತು, ರಶಿಯಾದಲ್ಲಿ ಪಾಯಿಂಟ್ ವರ್ಕ್, ಚಲನೆಯ ನಿಖರತೆ ಮತ್ತು ಟರ್ನ್-ಔಟ್ ಮುಂತಾದ ಶಾಸ್ತ್ರೀಯ ತಂತ್ರಗಳು ಅಭಿವೃದ್ಧಿಗೊಂಡವು. ಈ ಅವಧಿಯಲ್ಲಿ ಶಾಸ್ತ್ರೀಯ ಸ್ವಾನ್ ಲೇಕ್, ಸ್ಲೀಪಿಂಗ್ ಬ್ಯೂಟಿ, ಮತ್ತು ದ ನಟ್ಕ್ರಾಕರ್ ಅನ್ನು ರಚಿಸಲಾಯಿತು.

# ದೇಶ-ವಿದೇಶ



## ಕಾಂಗ್ರೆಸ್ ಬಣ್ಣ ಬಹಿರಂಗವಾಗಿದೆ: ಪ್ರಧಾನಿ ನರೇಂದ್ರ ಮೋದಿ ಟೀಕೆ



**ನವದೆಹಲಿ:** ಕಾಂಗ್ರೆಸ್ ತನ್ನ ಭರವಸೆಗಳನ್ನು ಈಡೇರಿಸದ ಕಾರಣ ಜನರ ಮುಂದೆ ಅದರ ಬಣ್ಣ ಬಹಿರಂಗವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಟೀಕಿಸಿದ್ದಾರೆ.

ಇತ್ತೀಚೆಗೆ ಕರ್ನಾಟಕದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ರಾಜ್ಯದ ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣದ ಸೌಲಭ್ಯ ನೀಡುವ ಶಕ್ತಿ ಯೋಜನೆಯನ್ನು ಮರುಪರಿಶೀಲನೆ ಮಾಡುವ ಬಗ್ಗೆ ಮಾತನಾಡಿದ ಬಳಿಕ ಪ್ರಧಾನಿ ಮೋದಿ ಈ ಹೇಳಿಕೆ ನೀಡಿದ್ದಾರೆ.

ಕಾಂಗ್ರೆಸ್‌ಅನ್ನು ತರಾಟೆಗೆತೆಗೆದುಕೊಂಡಿರುವ ಮೋದಿ, ಅವಾಸ್ತವಿಕ ಭರವಸೆಗಳನ್ನು ನೀಡುವುದು ಸುಲಭ ಆದರೆ ಅವುಗಳನ್ನ ಸರಿಯಾಗಿ ಕಾರ್ಯಗತಗೊಳಿಸುವುದು ಕಠಿಣ. ಈ ವಿಚಾರವನ್ನು ಕಾಂಗ್ರೆಸ್ ಈಗ ಅರಿತುಕೊಳ್ಳುತ್ತಿದೆ. ಮತಗಳಿಗಾಗಿ ಕಾಂಗ್ರೆಸ್ ಜನರಿಗೆ ಭರವಸೆಗಳನ್ನು ನೀಡಿದೆ. ಆದರೆ ಅದನ್ನು ಜನರಿಗೆ ತಲುಪಿಸುವುದು ಕಷ್ಟಸಾಧ್ಯ ಎಂದು ಅವರಿಗೆ ತಿಳಿದಿದೆ. ಇದೀಗ ಕಾಂಗ್ರೆಸ್ ಬಂಡವಾಳ ಜನರ ಮುಂದೆ ಬಯಲಾಗುತ್ತಿದೆ ಎಂದು ಹೇಳಿದರು.

## ವಿಮಾನ ನಿಲ್ದಾಣದಲ್ಲಿ ಕುಸಿದು ಬಿದ್ದು ಕಾಲು ಮುರಿದುಕೊಂಡ ಪಾಕಿಸ್ತಾನ ಅಧ್ಯಕ್ಷ

**ದುಬೈ:** ಪಾಕಿಸ್ತಾನದ ಅಧ್ಯಕ್ಷ ಆಸಿಫ್ ಅಲಿ ಜರ್ದಾರಿ ಬುಧವಾರ ರಾತ್ರಿ ದುಬೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಮಾನದಿಂದ ಇಳಿಯುವಾಗ ಕುಸಿದುಬಿದ್ದಿದ್ದಾರೆ. ಇದರಿಂದ ಅವರ ಕಾಲು ಮುರಿದಿದೆ. ಪಾಕಿಸ್ತಾನ್ ರಾಷ್ಟ್ರಪತಿ ಭವನದ ಮಾಹಿತಿಯ ಪ್ರಕಾರ, ಬಿದ್ದ ನಂತರ, ತಕ್ಷಣ ಅವರನ್ನು ಚಿಕಿತ್ಸೆಗಾಗಿ ಆಸ್ಪತ್ರೆ ಗೆ ಸಾಗಿಸಲಾಯಿತು.ವೈದ್ಯರು ನಾಲ್ಕು ವಾರಗಳ ಕಾಲ ವಿಶ್ರಾಂತಿ ತೆಗೆದುಕೊಳ್ಳಬೇಕು ಎಂದು ಹೇಳಿದ್ದಾರೆ ಎನ್ನಲಾಗಿದೆ.

ಅಧ್ಯಕ್ಷ ಆಸಿಫ್ ಅಲಿ ಜರ್ದಾರಿ ಅವರನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಿ ಮನೆಗೆ ಕಳುಹಿಸಲಾಗಿದೆಯಂತೆ. ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳುವಂತೆ ವೈದ್ಯರು ಸೂಚಿಸಿದ್ದಾರೆ. 69 ವರ್ಷ ವಯಸ್ಸಿನ ಅಧ್ಯಕ್ಷ ಆಸಿಫ್ ಅಲಿ ಕಳೆದ ಕೆಲವು ವರ್ಷಗಳಿಂದ ಹಲವಾರು ಆರೋಗ್ಯ ಸಮಸ್ಯೆ ಗಳನ್ನು ಎದುರಿಸುತ್ತಿದ್ದಾರೆ. ಅವರು ಮಾರ್ಚ್ 2023ರಲ್ಲಿ ಯುನೈಟೆಡ್ ಅರಬ್ ಎಮಿರೇಟ್ಸ್‌ನಲ್ಲಿ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ಮಾಡಿಕೊಂಡಿದ್ದರು. 2022 ರಲ್ಲಿ ಒಂದು ವಾರ ಡಾಕಾದ ಜಿಯಾವುದ್ದೀನ್ ಆಸ್ಪತ್ರೆಯಲ್ಲಿ ಎದೆಯನೋವಿಗೆ ಚಿಕಿತ್ಸೆ ಪಡೆದುಕೊಂಡಿದ್ದರು. 2022 ರಲ್ಲಿ ಜರ್ದಾರಿ ಅವರಿಗೆ ಕೋವಿಡ್-19 ಲಕ್ಷಣಗಳು ಕಂಡುಬಂದಿದ್ದು, ಬಹಳ ಪ್ರವಾಸ ಮಾಡುತ್ತಿದ್ದ ಕಾರಣ ಅವರಿಗೆ ಒಂದು ವರ್ಷದ ಹಿಂದೆ ಅನಾರೋಗ್ಯದ ಸಮಸ್ಯೆ ಉಂಟಾಗಿತ್ತು ಎಂದು ಅವರ ಪುತ್ರ ಮತ್ತು ಅಧ್ಯಕ್ಷ ಬಿಲಾವಲ್ ಭುಟ್ಟೋ ಹೇಳಿದ್ದಾರೆ.




## ಮ್ಯಾಂಚೆಸ್ಟರ್ ಯುನೈಟೆಡ್ ತಂಡದ ಮುಖ್ಯ ಕೋಚ್ ಆಗಿ 'ರುಬೆನ್ ಅಮೋರಿಮ್' ನೇಮಕ

**ನವದೆಹಲಿ:** ಮ್ಯಾಂಚೆಸ್ಟರ್ ಯುನೈಟೆಡ್ ತಂಡದ ಮುಖ್ಯ ಕೋಚ್ ಆಗಿ ರುಬೆನ್ ಅಮೋರಿಮ್ ನೇಮಕಗೊಂಡಿದ್ದಾರೆ. 39 ವರ್ಷದ ಪೋರ್ಚುಗೀಸ್ ಮ್ಯಾನೇಜರ್ ನವೆಂಬರ್ 11 ರಂದು ಸ್ಪೋರ್ಟಿಂಗ್ ಲಿಸ್ಬನ್ನಿಂದ ಸೇರಲಿದ್ದು, ಜೂನ್ 2027 ರವರೆಗೆ ಓಲ್ಡ್ ಟ್ರಾಫರ್ಡ್‌ನಲ್ಲಿ ಉಳಿಯುವ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ. ಎರಿಕ್ ಟೆನ್ ಹ್ಯಾಗ್ ಸೋಮವಾರ ವಜಾಗೊಂಡ ನಂತರ ಮಧ್ಯಂತರ ಕೋಚಿಂಗ್ ಕರ್ತವ್ಯಗಳನ್ನು ವಹಿಸಿಕೊಂಡ ಮಾಜಿ ಯುನೈಟೆಡ್ ಸ್ಟ್ರೈಕರ್ ರುಡ್ ವ್ಯಾನ್ ನಿಸ್ಟೆಲ್ರೂಯ್ ಯುನೈಟೆಡ್‌ನ ಮುಂದಿನ ಮೂರು ಪಂದ್ಯಗಳಲ್ಲಿ ತಮ್ಮ ಪಾತ್ರದಲ್ಲಿ ಮುಂದುವರಿಯಲಿದ್ದಾರೆ. ಸರ್ ಅಲೆಕ್ಸ್ ಫರ್ಗುಸನ್ ಅವರ 26 ವರ್ಷಗಳ ಅಪ್ರತಿಮ ಅಧಿಕಾರಾವಧಿ 2013 ರ ನಿವೃತ್ತಿಯೊಂದಿಗೆ ಕೊನೆಗೊಂಡ ನಂತರ ಅಮೋರಿಮ್ ಈ ಪಾತ್ರಕ್ಕೆ ಕಾಲಿಟ್ಟ ಆರನೇ ಖಾಯಂ ವ್ಯವಸ್ಥಾಪಕರಾಗಿದ್ದಾರೆ. ಯುನೈಟೆಡ್‌ನ ಅಧಿಕೃತ ಹೇಳಿಕೆಯು ಅಮೋರಿಮ್ ಅವರನ್ನು ಯುರೋಪಿಯನ್ ಫುಟ್ಬಾಲ್‌ನಲ್ಲಿ ಅತ್ಯಂತ ರೋಮಾಂಚಕಾರಿ ಮತ್ತು ಹೆಚ್ಚು ಗೌರವಾನ್ವಿತ ಯುವ ತರಬೇತುದಾರರಲ್ಲಿ ಒಬ್ಬರು ಎಂದು ಶ್ಲಾಘಿಸಿದೆ.



## ಉಚಿತ ಗ್ಯಾಸ್ ಸಿಲಿಂಡರ್ 'ದೀಪಂ-2 ಯೋಜನೆ'ಗೆ ಸಿಎಂ ನಾಯ್ಡು ಚಾಲನೆ



**ಆಂಧ್ರಪ್ರದೇಶ:** ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ಆಡಳಿತಾರೂಢ ಎನ್ಡಿಎ ಸರ್ಕಾರದ ಸೂಪರ್ ಸಿಕ್ಸ್ ಭರವಸೆಗಳ ಭಾಗವಾಗಿ ಮೂರು ಅಡುಗೆ ಅನಿಲ ಸಿಲಿಂಡರ್‌ಗಳ ಪೂರೈಕೆಗೆ ಶುಕ್ರವಾರ ಔಪಚಾರಿಕವಾಗಿ ಚಾಲನೆ ನೀಡಿದ್ದಾರೆ.

ಆಂಧ್ರಪ್ರದೇಶದ ಶ್ರೀಕಾಕುಲಂ ಜಿಲ್ಲೆಯ ಈದುಪುರಂನಲ್ಲಿ ಇಂದು ದೀಪಂ 2 ರ ಅಡಿಯಲ್ಲಿ ಔಪಚಾರಿಕವಾಗಿ ಪ್ರಾರಂಭಿಸಲಾದ ಯೋಜನೆಯಡಿಯಲ್ಲಿ ವರ್ಷಕ್ಕೆ ಮೂರು ಎಲ್ಪಿಜಿ ಸಿಲಿಂಡರ್‌ಗಳನ್ನು ಉಚಿತವಾಗಿ ಸರಬರಾಜು ಮಾಡಲಾಗುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಉಚಿತ ಸಿಲಿಂಡರ್ ಪೂರೈಕೆ ಕುರಿತು ಚುನಾವಣಾ ಪ್ರಣಾಳಿಕೆಯಲ್ಲಿ ಮಹಿಳೆಯರಿಗೆ ನೀಡಿದ್ದ ಭರವಸೆಯನ್ನು ಎನ್ಡಿಎ ಸರ್ಕಾರ ಈಡೇರಿಸಿದೆ. ಸ್ವಸಹಾಯ ಗುಂಪುಗಳನ್ನು (ಎಸ್‌ಎಚ್ಜಿ) ಮತ್ತಷ್ಟು ಬಲಪಡಿಸಲಾಗುವುದು, ಹೆಚ್ಚಿನ ಸಂಖ್ಯೆಯ ಮಹಿಳೆಯರನ್ನು ಉದ್ಯಮಿಗಳಾಗಿ ಪರಿವರ್ತಿಸಲು ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಹೇಳಿದರು.

ರಾಜ್ಯ ಸರ್ಕಾರವು ಈಗಾಗಲೇ ಕಲ್ಯಾಣ ಪಿಂಚಣಿಗಳ ಹೆಚ್ಚಳದ ಭರವಸೆಯನ್ನು ಈಡೇರಿಸಿದೆ. ಸುಮಾರು 64 ಲಕ್ಷ ಜನರು ತಮ್ಮ ಮಾಸಿಕ ಪಿಂಚಣಿಯನ್ನು ಪ್ರತಿ ತಿಂಗಳ ಮೊದಲನೆಯ ದಿನದಲ್ಲಿ ತ್ವರಿತವಾಗಿ ಪಡೆಯುತ್ತಿದ್ದಾರೆ. ಪಿಂಚಣಿದಾರರು ಯಾವುದೇ ಭಯವಿಲ್ಲದೆ ಮೂರು ತಿಂಗಳಿಗೊಮ್ಮೆ ಪಿಂಚಣಿ ಪಡೆಯುವ ಆಯ್ಕೆಗಳನ್ನು ಸಹ ಪಡೆಯಬಹುದು ಎಂದು ಅವರು ಹೇಳಿದರು.

ಯೋಜನೆ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರವು ಈಗಾಗಲೇ ರಾಜ್ಯ ಸಚಿವಾಲಯದ ಮೊದಲ ಬ್ಲಾಕ್‌ನಲ್ಲಿರುವ ಭಾರತ್ ಪೆಟ್ರೋಲಿಯಂ, ಹಿಂದೂಸ್ತಾನ್ ಪೆಟ್ರೋಲಿಯಂ ಮತ್ತು ಇಂಡಿಯನ್ ಆಯಿಲ್ ಕಾರ್ಪೊರೇಷನ್ ಪ್ರತಿನಿಧಿಗಳಿಗೆ ಸಬ್ಸಿಡಿ ಮೊತ್ತವನ್ನು ಹಸ್ತಾಂತರಿಸಿತ್ತು. ಯೋಜನೆಯ ಒಟ್ಟು ವೆಚ್ಚವನ್ನು ವಾರ್ಷಿಕ 2,684 ಕೋಟಿ ರೂ. ಎಂದು ನಿಗದಿಪಡಿಸಲಾಗಿದೆ.

## ಉತ್ತರ ಇಸ್ರೇಲ್ ಮೇಲೆ ಹಿಜ್ಬುಲ್ಲಾ ರಾಕೆಟ್ ದಾಳಿ: 7 ಮಂದಿ ಸಾವು



**ಉತ್ತರ ಇಸ್ರೇಲ್:** ಉತ್ತರ ಇಸ್ರೇಲ್ ಮೇಲೆ ಹಿಜ್ಬುಲ್ಲಾ ರಾಕೆಟ್ ದಾಳಿ ನಡೆಸಿದೆ. ಮೆಟುಲಾ ಮತ್ತು ಹೈಫಾ ಗುರಿಯಾಗಿಸಿಕೊಂಡು ನಡೆಸಿದ ದಾಳಿಯಲ್ಲಿ ಏಳು ಸಜನು, ಸಾವನ್ನಪ್ಪಿದ್ದಾರೆ.

ಇದು ಇತ್ತೀಚಿನ ದಿನಗಳಲ್ಲಿ ಇಸ್ರೇಲ್ ಗುರಿಯಾಗಿಸಿಕೊಂಡ ದಾಳಿಯಲ್ಲಿ ಒಂದಾಗಿದ್ದು, ನಾಗರಿಕರು ಬಲಿಯಾಗಿದ್ದಾರೆ ಎಂದು ಟೈಮ್ಸ್ ಆಫ್ ಇಸ್ರೇಲ್ ವರದಿ ಮಾಡಿದೆ. ಗುರುವಾರ ಬೆಳಗ್ಗೆ ಗಡಿ ಪಟ್ಟಣವಾದ ಮೆಟುಲಾ ಬಳಿ ಈ ರಾಕೆಟ್ ದಾಳಿ ನಡೆದಿದೆ. ಲೆಬನಾನ್ನಿಂದ ಹಾರಿಸಲಾದ ರಾಕೆಟ್ ಇಸ್ರೇಲ್‌ನ ಸೇಬಿನ ತೋಟಕ್ಕೆ ಅಪ್ಪಳಿಸಿದೆ ಪರಿಣಾಮ ತೋಟದಲ್ಲಿ ಕೆಲಸ ಮಾಡುತ್ತಿದ್ದ ಐವರು ಪ್ರಾಣ ಕಳೆದುಕೊಂಡಿದ್ದಾರೆ. ಇದಾಗಿ ಕೆಲವು ಗಂಟೆಗಳ ನಂತರ ಹೈಫಾ ಉಪನಗರವಾದ ಕಿರಿಯಾತ್ ಅಟಾದ ಹೊರಗಿನ ಆಲಿವ್ ತೋಪಿನ ಮೇಲೆ ದಾಳಿ ನಡೆದಿದೆ. ಈ ಘಟನೆಯಲ್ಲಿ ಮತ್ತಿಬ್ಬರು ಕೊಲ್ಲಲ್ಪಟ್ಟಿದ್ದಾರೆ. ಇಸ್ರೇಲ್ ರಕ್ಷಣಾ ಪಡೆ ಕೂಡ ತನ್ನ ಹೇಳಿಕೆಯಲ್ಲಿ ಹಿಜ್ಬುಲ್ಲಾ ದಾಳಿಯನ್ನು ದೃಢಪಡಿಸಿದೆ. ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ, ಹಿಜ್ಬುಲ್ಲಾ ರಾಕೆಟ್‌ಗಳು ಇಸ್ರೇಲ್‌ನಲ್ಲಿ 7 ಮುಗ್ಧ ನಾಗರಿಕರನ್ನು ಬಲಿ ಪಡೆದುಕೊಂಡಿವೆ. ನಾವು ಹಿಜ್ಬುಲ್ಲಾದ ಮಾರಣಾಂತಿಕ ದಾಳಿಗಳಿಗೆ ಉತ್ತರಿಸದೇ ಬಿಡುವುದಿಲ್ಲ ಎಂದು ಎಚ್ಚರಿಕೆ ಸಂದೇಶ ರವಾನಿಸಿದೆ. ಮೃತಪಟ್ಟವರೆಲ್ಲರೂ ರಾಕೆಟ್ ದಾಳಿ ವೇಳೆ ತೋಟದಲ್ಲಿ ಕೆಲಸ ಮಾಡುತ್ತಿದ್ದರು. ಅವರಲ್ಲಿ ಒಬ್ಬರು ಇಸ್ರೇಲಿ ಪ್ರಜೆಯಾಗಿದ್ದರೆ, ಇತರರು ವಿದೇಶಿ ಪ್ರಜೆಗಳು ಎಂದು ತಿಳಿದು ಬಂದಿದೆ. ಏತನ್ಮಧ್ಯೆ, ಗುರುವಾರ ಇಸ್ರೇಲ್ ಶಸ್ತ್ರಾಸ್ತ್ರ ಸಂಗ್ರಹಣಾ ಸೌಲಭ್ಯಗಳು ಮತ್ತು ಕಮಾಂಡ್ ಸೆಂಟರ್‌ಗಳನ್ನು ಗುರಿಯಾಗಿಟ್ಟುಕೊಂಡು ಹೆಜ್ಬುಲ್ಲಾದ ರಾದ್ವಾನ್ ಪಡೆಗಳು ದಾಳಿ ನಡೆಸಿವೆ.

ಇರಾನ್ನಿಂದ ಸಿರಿಯಾ ಮೂಲಕ ಲೆಬನಾನ್ಗೆ ಅಕ್ರಮ ಶಸ್ತ್ರಾಸ್ತ್ರ ಕಳ್ಳಸಾಗಣೆಗೆ ಕಾರಣವಾದ ಹೆಜ್ಬುಲ್ಲಾ ಘಟಕದ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಶಸ್ತ್ರಾಸ್ತ್ರ ಸಂಗ್ರಹಾಗಾರ ಮೇಲೆ ದಾಳಿ ಆರಂಭಿಸಲಾಗಿದೆ ಎಂದು IDFಹೇಳಿದೆ.

## ಕಾರ್ಮಿಕರ ಮೇಲೆ ಉಗ್ರರಿಂದ ಗುಂಡಿನ ದಾಳಿ

**ಶ್ರೀನಗರ:** ಕಾಶ್ಮೀರದ ಬುದ್ಗಾಮ್ ಜಿಲ್ಲೆಯ ಮಗಮ್ ಪ್ರದೇಶದಲ್ಲಿ ಇಬ್ಬರು ವಲಸೆ ಕಾರ್ಮಿಕರ ಮೇಲೆ ಭಯೋತ್ಪಾದಕರು ಗುಂಡಿನ ದಾಳಿ ನಡೆಸಿದ್ದಾರೆ.

ಗಾಯಗೊಂಡ ವಲಸೆ ಕಾರ್ಮಿಕರನ್ನು ಉತ್ತರ ಪ್ರದೇಶ ಮೂಲದ ಸಂಜಯ್ ಮತ್ತು ಉಸ್ಮಾನ್ ಎಂದು ಗುರುತಿಸಲಾಗಿದೆ. ಅವರನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಉಗ್ರರ ದಾಳಿಯ ಮಾಹಿತಿ ಪಡೆದ ಭದ್ರತಾ ಪಡೆಗಳು ಸ್ಥಳಕ್ಕೆ ಧಾವಿಸಿ, ಉಗ್ರರಿಗಾಗಿ ಶೋಧ ಕಾರ್ಯಾಚರಣೆ ಆರಂಭಿಸಿದೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಸ್ಥಳೀಯರಲ್ಲದವರ ಮೇಲೆ ಇತ್ತೀಚೆಗೆ ಉಗ್ರರು ದಾಳಿ ನಡೆಸುತ್ತಿದ್ದಾರೆ. ಇತ್ತೀಚೆಗೆ ಗಂದರ್‌ಬಾಲ್ ಜಿಲ್ಲೆಯ ಸೋನಾಮಾರ್ಗ್ ಪ್ರದೇಶದಲ್ಲಿ ಭಯೋತ್ಪಾದಕರು ನಡೆಸಿದ ಗುಂಡಿನ ದಾಳಿಯಲ್ಲಿ ಒಬ್ಬ ವೈದ್ಯ ಮತ್ತು ಆರು ವಲಸೆ ಕಾರ್ಮಿಕರು ಸಾವನ್ನಪ್ಪಿದ್ದರು. ಇದಾದ 12 ದಿನಗಳ ನಂತರ ಇಂದು ದಾಳಿ ಸಂಭವಿಸಿದೆ.

ದಾಳಿಗೊಳಗಾದ ವೈದ್ಯ ಮತ್ತು ಕಾರ್ಮಿಕರು ಸೆಂಟ್ರಲ್ ಕಾಶ್ಮೀರದ ಗಂದರ್‌ಬಾಲ್‌ನಲ್ಲಿರುವ ಗಗನೀರ್‌ನಿಂದ ಸೋನಾಮಾರ್ಗ್‌ಗೆ ಸಂಪರ್ಕ ಕಲ್ಪಿಸುವ ಜ-ಮೋರ್ಹ್ ಸುರಂಗದಲ್ಲಿ ಕೆಲಸ ಮಾಡುವ ತಂಡದಲ್ಲಿದ್ದವರಾಗಿದ್ದರು.



## ಕೇಂದ್ರ ಸರ್ಕಾರದ ವಿರುದ್ಧ ಪಿಣರಾಯಿ ವಾಗ್ದಾಳಿ

**ಕೇರಳ:** 200 ಕ್ಕೂ ಅಧಿಕ ಮಂದಿಯ ಪ್ರಾಣಹಾನಿಯಾದ ವಯನಾಡ್ ಭೂಕುಸಿತದ ಬಗ್ಗೆ ಕೇಂದ್ರ ಸರ್ಕಾರ ತೋರಿರುವ ನಿರ್ಲಕ್ಷ್ಯಕ್ಕೆ ಕೇರಳ ಸಿಎಂ ಪಿಣರಾಯಿ ವಿಜಯನ್ ತೀವ್ರ ವಾಗ್ದಾಳಿ ನಡೆಸಿದ್ದಾರೆ. ವಯನಾಡಿನ ವಿನಾಶಕಾರಿ ಭೂಕುಸಿತದಿಂದ ಸಂತ್ರಸ್ತರಾದವರ ಪುನರ್ವಸತಿಗೆ ಆರ್ಥಿಕ ನೆರವು ನೀಡಲು ನರೇಂದ್ರ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ ಅವರು, ಕೇಂದ್ರ ಸರ್ಕಾರ ಕೇರಳದ ವಿರುದ್ಧ ಪಕ್ಷಪಾತ ಮಾಡುತ್ತಿದೆ ಎಂದು ಆರೋಪಿಸಿದರು. ಕೇರಳ ರಾಜ್ಯೋತ್ಸವದ ಅಂಗವಾಗಿ ರಾಜ್ಯದ ಜನತೆಗೆ ನೀಡಿದ ಸಂದೇಶದಲ್ಲಿ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡ ಸಿಎಂ ಪಿಣರಾಯಿ ವಿಜಯನ್, ಕೋಮುವಾದಿ ರಾಜಕೀಯ ಶಕ್ತಿಗಳು ರಾಜ್ಯವನ್ನು ದುರ್ಬಲಗೊಳಿಸಲು ಪ್ರಯತ್ನಿಸುತ್ತಿದೆ. ಇಂತಹ ಸಂದರ್ಭದಲ್ಲಿ ಕೇರಳ ರಚನೆಯ ದಿನಾಚರಣೆಯ ಪ್ರಸ್ತುತತೆಯನ್ನು ಹೆಚ್ಚಿಸುತ್ತದೆ ಎಂದು ಹೇಳಿದರು. ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಬಿಜೆಪಿ ನೇತೃತ್ವದ ಕೇಂದ್ರ ಮತ್ತು ಕಾಂಗ್ರೆಸ್ ನೇತೃತ್ವದ ಯುಡಿಎಫ್ ಪ್ರತಿಪಕ್ಷಗಳು ರಾಜ್ಯದ ಪ್ರಗತಿಯನ್ನು ತಡೆಯುತ್ತಿವೆ. ವಯನಾಡ್ ದುರಂತ ಸಂಭವಿಸಿ ಮೂರು ತಿಂಗಳಿಗಿಂತ ಹೆಚ್ಚು ಸಮಯ ಕಳೆದರೂ ಕೇಂದ್ರ ಸರ್ಕಾರ ಯಾವುದೇ ಆರ್ಥಿಕ ನೆರವು ನೀಡಿಲ್ಲ ಎಂದು ಆಕ್ರೋಶ ಹೊರ ಹಾಕಿದ್ದಾರೆ. ಕೇಂದ್ರ ಸರ್ಕಾರವು ಪಕ್ಷಪಾತದಿಂದ ಕೂಡಿದೆ ಎಂದು ಆರೋಪಿಸಿದ ಅವರು, ನೈಸರ್ಗಿಕ ವಿಕೋಪಗಳಿಂದ ಹಾನಿಗೊಳಗಾದ ಇತರ ರಾಜ್ಯಗಳು ತಕ್ಷಣವೇ ಸಹಾಯವನ್ನು ಪಡೆಯುತ್ತವೆ, ಆದರೆ ಕೇರಳ ಔಪಚಾರಿಕವಾಗಿ ಮನವಿಗಳನ್ನು ವಿನಂತಿಸುವ ಮೊದಲೇ ನಿರ್ಲಕ್ಷಿಸಲಾಗುತ್ತಿದೆ ಎಂದು ಹೇಳಿದರು. ಕಾಂಗ್ರೆಸ್ ಪಕ್ಷದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಪ್ರತಿಪಕ್ಷಗಳು ಕೇರಳದ ಅಗತ್ಯಗಳಿಗಾಗಿ ವಕಾಲತ್ತು ವಹಿಸುವ ಬದಲು ಈ ನಿರ್ಲಕ್ಷ್ಯದ ಬಗ್ಗೆ ಮೌನವಾಗಿರುವುದನ್ನು ಆರಿಸಿಕೊಂಡಿವೆ ಎಂದು ಆರೋಪಿಸಿದರು.

## ಪಾಕಿಸ್ತಾನ ಏರ್‌ಲೈನ್ಸ್ ಮಾರಾಟ ಪ್ರಕ್ರಿಯೆ

**ಇಸ್ಲಮಾಬಾದ್:** ಸಾಲದ ಸುಳಿಯಲ್ಲಿ ಸಿಲುಕಿರುವ ಪಾಕಿಸ್ತಾನ್ ಏರ್ಲೈನ್ಸ್ ಖಾಸಗೀಕರಣಗೊಳಿಸುವ ಪ್ರಕ್ರಿಯೆಗೆ ಶುಕ್ರವಾರ ತೀವ್ರ ಹಿನ್ನಡೆಯಾಗಿದೆ. ಖರೀದಿಗಾರರು ಅತ್ಯಂತ ಕಡಿಮೆ ಮೊತ್ತಕ್ಕೆ ಬಿಡ್ ಸಲ್ಲಿಸಿರುವುದಾಗಿ ವರದಿಯಾಗಿದೆ. 85 ಶತಕೋಟಿ ರೂಪಾಯಿ(ಪಾಕಿಸ್ತಾನದ ಕರೆನ್ಸಿ) ಕನಿಷ್ಟ ಬಿಡ್ ಎಂದು ಪಾಕ್ ಸರಕಾರ ನಿಗದಿಗೊಳಿಸಿತ್ತು. ಆದರೆ ಅಂತಿಮ ಹಂತದ ಹರಾಜು ಪ್ರಕ್ರಿಯೆಯಲ್ಲಿದ್ದ ಏಕೈಕ ಸಂಸ್ಥೆ ಕೇವಲ 10 ಶತಕೋಟಿ ರೂ.(ಪಾಕ್ ಕರೆನ್ಸಿ)ಗೆ ಬಿಡ್ ಸಲ್ಲಿಸಿದೆ ಎಂದು ಪಿಟಿಐ ವರದಿ ಮಾಡಿದೆ. ಅಂತಿಮ ಹಂತದ ಹರಾಜು ಪ್ರಕ್ರಿಯೆಗೆ 6 ಸಂಸ್ಥೆಗಳನ್ನು ಜೂನ್‌ನಲ್ಲಿ ಪಾಕ್ ಸರಕಾರ ಅಂತಿಮಗೊಳಿಸಿತ್ತು. ಆದರೆ 'ಬ್ಲೂವರ್ಡ್ ಸಿಟಿ' ರಿಯಲ್ ಎಸ್ಟೇಟ್ ಸಂಸ್ಥೆ ಮಾತ್ರ ಹರಾಜಿನಲ್ಲಿ ಪಾಲ್ಗೊಂಡಿದ್ದು 10 ಶತಕೋಟಿ ಡಾಲರ್ಗೆ ಬಿಡ್ ಸಲ್ಲಿಸಿದೆ.




## ಉಪಚುನಾವಣೆಯ ಮಹಿಳಾ ಅಭ್ಯರ್ಥಿಯನ್ನು ಮಾಲ್ ಎಂದು ಕರೆದ ಸಂಸದ!




**ಮಹಾರಾಷ್ಟ್ರ:** ವಿಧಾನಸಭಾ ಚುನಾವಣೆಯ ಪ್ರಚಾರದ ವೇಳೆ ಮುಂಬೈ ದಕ್ಷಿಣ ಕ್ಷೇತ್ರದ ಸಂಸದ ಶಿವಸೇನೆಯ ಉದ್ಧವ್ ಬಾಳಾಸಾಹೇಬ್ ಠಾಕ್ರೆ ಬಣದ ನಾಯಕ ಅರವಿಂದ್ ಸಾವಂತ್ ಮಹಿಳಾ ಅಭ್ಯರ್ಥಿ ವಿರುದ್ಧ ಕೀಳುಮಟ್ಟದ ಹೇಳಿಕೆ ನೀಡಿ ಟೀಕೆಗೆ ಗುರಿಯಾಗಿದ್ದಾರೆ.

ಇಲ್ಲಿನ ಮುಂಬಾದೇವಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ನ ಅಮೀನ್ ಪಟೇಲ್ ವಿರುದ್ಧ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ಅಭ್ಯರ್ಥಿಯಾಗಿ ಶೈನಾ ಕಣಕ್ಕಿಳಿದಿದ್ದಾರೆ.

ಅವರಿಬ್ಬರಲ್ಲಿ ಯಾರು ಗೆಲ್ಲುತ್ತಾರೆ ಎಂಬ ಪ್ರಶ್ನೆಗೆ ಕೀಳು ಮಟ್ಟದ ಪದಗಳನ್ನು ಉಪಯೋಗಿಸಿದ್ದಾರೆ. ಅಮೀನ್ ಪಟೇಲ್ ಇಲ್ಲಿಯವರು, ಆದ್ರೆ ಶೈನಾ ಇಂಪೋರ್ಟೆಡ್ ಮಾಲು, ಅಂದ್ರೆ ಹೊರಗಿನ ಸರಕುಹೀಗಾಗಿ ಇಲ್ಲಿ ಅವರ ಆಟ ನಡೆಯಲ್ಲ ಎಂಬ ಅರ್ಥದಲ್ಲಿ ಮಾತನಾಡಿದ್ದಾರೆ.

ಹೀಗಾಗಿ ಸದ್ಯ ಅರವಿಂದ್ ಸಾವಂತ್ ಈ ಸರಕು ಎಂಬ ಹೇಳಿಕೆಯ ವಿಡಿಯೊ ಸಾಮಾಜಿಕ ಜಾಲತಾಣದಲ್ಲಿ ಭಾರೀ ವೈರಲ್ ಆಗಿದ್ದು, ಸಂಸದ ಅರವಿಂದ್ ಸಾವಂತ್ ಅವರ ಹೇಳಿಕೆಗೆ ಭಾರೀ ಆಕ್ರೋಶ ವ್ಯಕ್ತವಾಗುತ್ತಿದೆ. ಈ ಬಗ್ಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ಶೈನಾ ಎನ್.ಸಿ. ಮುಂಬರುವ ಚುನಾವಣೆಯಲ್ಲಿ ಮತದಾರರು ಇದಕ್ಕೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದ್ದಾರೆ. ಈ ವಿವಾದದ ಕುರಿತು ಪ್ರತಿಕ್ರಿಯಿಸಿರುವ ಶಿವಸೇನೆಯ ಏಕನಾಥ್ ಶಿಂಧೆ ಬಣದ ನಾಯಕಿ ಶೈನಾ ಎನ್ಸಿ. ನಾನು ಮುಂಬೈಯ ಮಗಳು. ಇಲ್ಲಿನ ಜನರಿಗಾಗಿ ಕೆಲಸ ಮಾಡುತ್ತಿದ್ದೇನೆ. ನನಗೆ ಸಾವಂತ್ ಅಥವಾ ಎಸ್‌ಎಸ್ (ಯುಬಿಟಿ)ನಿಂದ ಪ್ರಮಾಣಪತ್ರದ ಅಗತ್ಯವಿಲ್ಲ ಎಂದಿದ್ದಾರೆ.

## ಸ್ಪೇನ್‌ನಲ್ಲಿ ಪ್ರವಾಹ 205 ಸಾವು



**ಮ್ಯಾಡ್ರಿಡ್:** ಈ ವಾರ ಸ್ಪೇನ್‌ನಲ್ಲಿನ ಸಂಭವಿಸಿದ ಭಯಾನಕ ಪ್ರವಾಹದಿಂದ ಮೃತಪಟ್ಟವರ ಸಂಖ್ಯೆ 205ಕ್ಕೆ ಏರಿದೆ.

ಸ್ಪೇನ್‌ನ ವೇಲೆನ್ಸಿಯಾ ಪ್ರದೇಶದಲ್ಲಿ ಈ ದುರಂತ ಸಂಭಿಸಿದ್ದು, ರಕ್ಷಣಾ ಕಾರ್ಯಾಚರಣೆಗೆ ಹೆಚ್ಚುವರಿ 500 ಸೈನಿಕರನ್ನು ನಿಯೋಜಿಸಲಾಗಿದೆ. ವೇಲೆನ್ಸಿಯಾದಲ್ಲಿನ ಅಧಿಕಾರಿಗಳು ಶುಕ್ರವಾರ ಮಧ್ಯಾಹ್ನದ ವರೆಗೆ ಸಾವಿನ ಸಂಖ್ಯೆ 205 ಕ್ಕೆ ಏರಿಕೆಯಾಗಿರುವುದಾಗಿ ತಿಳಿಸಿದ್ದಾರೆ. ಮಳೆ ಮತ್ತು ಚಂಡಮಾರುತದ ಅಪಾಯದ ಕಾರಣದಿಂದಾಗಿ ವೇಲೆನ್ಸಿಯಾ ಸೇರಿದಂತೆ ನಾಲ್ಕು ಪ್ರದೇಶಗಳಲ್ಲಿ ಪ್ರವಾಹದ ಅಪಾಯಗಳಿವೆ ಎಂದು ರಾಜ್ಯ ಹವಾಮಾನ ಸಂಸ್ಥೆ ಎಮೆಟ್ ಹೇಳಿದೆ. ಪ್ರತಿಕೂಲ ಹವಾಮಾನ ಪರಿಸ್ಥಿತಿಗಳು ಮುಂದಿನ ದಿನಗಳಲ್ಲಿ ಮುಂದುವರಿಯುವ ನಿರೀಕ್ಷೆಯಿದೆ ಎಂದು ಎಚ್ಚರಿಕೆ ನೀಡಲಾಗಿದೆ. ದೇಶದ ಕೆಲವು ಭಾಗಗಳಲ್ಲಿ ಹಠಾತ್ ಪ್ರವಾಹಗಳು ಸಂಭವಿಸಿದ್ದು, ಇದರಿಂದಾಗಿ ಸೇತುವೆಗಳು, ಕಾರುಗಳು ಮತ್ತು ಬೀದಿ ದೀಪಗಳು ಪ್ರವಾಹದಲ್ಲಿ ಕೊಚ್ಚಿ ಹೋಗಿದೆ. ನಾಪತ್ತೆಯಾದವರ ಸಂಖ್ಯೆ ಇನ್ನೂ ಸ್ಪಷ್ಟವಾಗಿಲ್ಲ. ಸಾವನ್ನಪ್ಪಿದವರಲ್ಲಿ ಹೆಚ್ಚಿನವರು ವೇಲೆನ್ಸಿಯಾ ಪ್ರದೇಶದವರೇ ಆಗಿದ್ದಾರೆ. ಈ ವಾರದ ಆರಂಭದಲ್ಲಿ ಸ್ಪೇನ್‌ನ ತುರ್ತು ಪ್ರತಿಕ್ರಿಯೆ ಘಟಕದಿಂದ 1,000 ಕ್ಕೂ ಹೆಚ್ಚು ಸೈನಿಕರನ್ನು ರಕ್ಷಣಾ ಕಾರುಗಳಿಗೆ ನಿಯೋಜಿಸಲಾಗಿತ್ತು.

## ಕಮಲಾ, ನಿನ್ನನ್ನು ವಜಾ ಮಾಡಲಾಗಿದೆ: ಟ್ರಂಪ್!



**ಅಮೆರಿಕ:** ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಇನ್ನು ಮೂರು ದಿನ ಮಾತ್ರ ಬಾಕಿ ಉಳಿದಿವೆ. ಕೊನೆಯ ಹಂತದ ರಾಜಕೀಯ ಕಸರತ್ತು ನಡೆದಿದ್ದು, ಡೆಮಾಕ್ರಟಿಕ್ ಮತ್ತು ರಿಪಬ್ಲಿಕನ್ ಪಕ್ಷದ ಸ್ಪರ್ಧಿಗಳಾಗಿರುವ ಕಮಲಾ ಹ್ಯಾರಿಸ್ ಮತ್ತು ಡೊನಾಲ್ಡ್ ಟ್ರಂಪ್ ನಡುವೆ ವಾಕ್ಸಮರ ಮುಂದುವರಿದಿದೆ.

ಈ ಬಾರಿ ಅಧ್ಯಕ್ಷೀಯ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಅವರಿಗಿಂತ ಕಮಲಾ ಹ್ಯಾರಿಸ್ ಸ್ವಲ್ಪ ಮುಂಚೂಣಿಯಲ್ಲಿ ಇದ್ದಾರೆ ಎನ್ನಲಾಗುತ್ತಿದೆ. ಇದು ಡೊನಾಲ್ಡ್ ಟ್ರಂಪ್ ಎದೆಬಡಿತ ಹೆಚ್ಚಿಸಿದೆ.

ನವೆಂಬರ್ 5ಕ್ಕೆ ಅಮೆರಿಕ ಅಧ್ಯಕ್ಷೀಯ ಚುನಾವಣೆ ನಡೆಯಲಿದೆ. ಅಮೆರಿಕ ವಿಶ್ವದ ದೊಡ್ಡಣ್ಣ ಅಂತಲೇ ಫೇಮಸ್. ಹೀಗಾಗಿ, ಅಮೆರಿಕದ ಚುನಾವಣೆ ಇಡೀ ವಿಶ್ವದ ವಿವಿಧ ರಾಷ್ಟ್ರಗಳಿಗೂ ಇಂಪಾರ್ಟೆಂಟ್. ಇಲ್ಲಿ ಯಾರು ಅಧ್ಯಕ್ಷರಾಗಿ ಆಯ್ಕೆಯಾಗಲಿದ್ದಾರೆ ಎನ್ನುವುದರ ಮೇಲೆಯೇ ವಿಶ್ವದ ವಿವಿಧ ವಿದ್ಯಾಮಾನ್ಯಗಳು ನಿರ್ಧರಿತವಾಗುತ್ತವೆ. ಇದೀಗ ಅಂತಿಮ ಹಂತದ ಚುನಾವಣೆ ಪ್ರಚಾರದ ಸಮಯದಲ್ಲಿ ಡೊನಾಲ್ಡ್ ಟ್ರಂಪ್ ಅವರು ಕಮಲಾ ಹ್ಯಾರಿಸ್ ಅವರಿಗೆ ಕ್ಲಾಸ್ ತೆಗೆದುಕೊಂಡಿದ್ದು, ಕಮಲಾ ನಿಮ್ಮನ್ನು ವಜಾ ಮಾಡಲಾಗಿದೆ ಎಂದಿದ್ದಾರೆ.

ಟ್ರಂಪ್ ಮಾತು ವ್ಯಂಗ್ಯ ಭರಿತವಾಗಿ ಅಮೆರಿಕಾದಲ್ಲಿ ಟ್ರೋಲ್ ಸೃಷ್ಟಿ ಮಾಡಿದೆ. ಸಾಮಾನ್ಯವಾಗಿ ಕೆಲಸದಿಂದ ತೆಗೆದು ಹಾಕುವ ಸಂದರ್ಭದಲ್ಲಿ ಬಾಸ್‌ಗಳು ಅವರ ಉದ್ಯೋಗಿಗಳಿಗೆ ಬಳಸುವ ಪದವಿದು. ಯಾರಾದರು ಸರಿಯಾಗಿ ಕೆಲಸ ಮಾಡದೆ ಇದ್ದರೆ, ಇಲ್ಲ ದೊಡ್ಡ ತಪ್ಪು ಮಾಡಿದರೆ ಥಿಠಣ ಚಿಡಿಜ ಜಿಡಿಜಜ ಅಂತ ಬಳಸಲಾಗುತ್ತೆ. ನಿನ್ನನ್ನು ಕೆಲಸದಿಂದ ತೆಗೆದು ಹಾಕಲಾಗಿದೆ ಎಂಬರ್ಥದಲ್ಲಿ ಇದೇ ಮಾತನ್ನು ಟ್ರಂಪ್ ಉಪಯೋಗಿಸಿದ್ದಾರೆ.



## ಪಟಾಕಿ ಸಿಡಿಸಿ ದೀಪಾವಳಿ ಹಬ್ಬ ಆಚರಿಸಿದ ಕಮಲಾ ಹ್ಯಾರಿಸ್!

**ವಾಷಿಂಗ್ಟನ್:** ದೀಪಗಳ ಹಬ್ಬ ದೀಪಾವಳಿಯನ್ನು ಈ ಬಾರಿ ವಿದೇಶಗಳಲ್ಲಿಯೂ ಗಣ್ಯರು ಅತ್ಯಂತ ಉತ್ಸಾಹದಿಂದ ಆಚರಿಸುತ್ತಿದ್ದಾರೆ. ಅಮೆರಿಕದ ಅಧ್ಯಕ್ಷ ಜೋ ಬೈಡನ್ ಮತ್ತು ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಕೂಡಾ ಈ ಬಾರಿ ಹಬ್ಬಗಳನ್ನು ಅದ್ದೂರಿಯಾಗಿ ಮುನ್ನಡೆಸಿದ್ದಾರೆ. ನವೆಂಬರ್ 5 ರಂದು ಅಮೆರಿಕದ ಅಧ್ಯಕ್ಷೀಯ ಚುನಾವಣೆಗೆ ಮುಂಚಿತವಾಗಿ ಕಮಲಾ ಹ್ಯಾರಿಸ್ ಅವರು ದೀಪಾವಳಿಯನ್ನು ಆಚರಿಸುವ ವೀಡಿಯೊವನ್ನು ಹಂಚಿಕೊಂಡಿದ್ದಾರೆ. ವಿಡಿಯೋದಲ್ಲಿ ಹ್ಯಾರಿಸ್ ದೀಪಗಳನ್ನು ಹಚ್ಚಿ ಪಟಾಕಿಗಳನ್ನು ಸಿಡಿಸಿ, ಸಂಭ್ರಮಿಸುತ್ತಿರುವುದನ್ನು ಕಾಣಬಹುದು.

ಈ ಬಗ್ಗೆ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿರುವ ಅವರು, ಇಂದು ರಾತ್ರಿ ನಾವು ಅಮೆರಿಕದಾದ್ಯಂತ ಮತ್ತು ಪ್ರಪಂಚದಾದ್ಯಂತ 1 ಶತಕೋಟಿಗೂ ಹೆಚ್ಚು ಜನರೊಂದಿಗೆ ದೀಪಗಳನ್ನು ಬೆಳಗಿಸಿದ್ದೇವೆ. ಕೆಟ್ಟದ್ದರ ಮೇಲೆ ಒಳ್ಳೆಯದಕ್ಕಾಗಿ, ಅಜ್ಞಾನದ ಮೇಲೆ ಜ್ಞಾನಕ್ಕಾಗಿ ಮತ್ತು ಕತ್ತಲೆಯ ಮೇಲೆ ಬೆಳಕಿಗಾಗಿ ಈ ಮೂಲಕ ಹೋರಾಟವನ್ನು ಆಚರಿಸುತ್ತೇವೆ. ಬೆಳಕಿನ ಹಬ್ಬವನ್ನು ಆಚರಿಸುತ್ತಿರುವ ಎಲ್ಲರಿಗೂ ದೀಪಾವಳಿಯ ಶುಭಾಶಯಗಳು! ದೀಪಾವಳಿಯ ಆಚರಣೆಯಲ್ಲಿ ನಾವು ಉಪಾಧ್ಯಕ್ಷರ ನಿವಾಸವನ್ನು ಬೆಳಗಿಸಿದ್ದೇವೆ. ನಮ್ಮ ಜಗತ್ತಿನಲ್ಲಿ, ಪರಸ್ಪರ ಮತ್ತು ನಮ್ಮಲ್ಲಿ ಬೆಳಕನ್ನು ನೋಡಲು ಮರೆಯದಿರಿ ಎಂದು ಅವರು ಬರೆದಿದ್ದಾರೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮಗಳ ಜೊತೆ ದೀಪಾವಳಿ ಆಚರಿಸಿದ ಅದಿತಿ ಪ್ರಭುದೇವ



'ಬಜಾರ್' ನಟಿ ಅದಿತಿ ಪ್ರಭುದೇವ ಮನೆಯಲ್ಲಿ ದೀಪಾವಳಿ ಹಬ್ಬದ ಸಂಭ್ರಮ ಜೋರಾಗಿದೆ. ಇದೀಗ ಕುಟುಂಬದ ಜೊತೆ ದೀಪಾವಳಿ ಹಬ್ಬ ಆಚರಿಸಿರುವ ಫೋಟೋವನ್ನು ನಟಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಮುದ್ದಿನ ಮಗಳು ನೇಸರ, ಪತಿ ಯಶಸ್ ಜೊತೆ ಕುಳಿತು ಕ್ಯಾಮರಾಗೆ ನಟಿ ಪೋಸ್ ಕೊಟ್ಟಿದ್ದಾರೆ. ಅದಿತಿ ಪುತ್ರಿ ನೇಸರ ಪಿಂಕ್ ಬಣ್ಣ ಡ್ರೆಸ್ ತೊಟ್ಟು ಮುದ್ದಾಗಿ ಕಾಣಿಸಿಕೊಂಡಿದ್ದಾಳೆ. ಕನ್ನಡ ರಾಜ್ಯೋತ್ಸವ ಮತ್ತು ದೀಪಾವಳಿ ಹಬ್ಬದ ಶುಭಾಶಯಗಳನ್ನು ಅಭಿಮಾನಿಗಳಿಗೆ ನಟಿ ತಿಳಿಸಿದ್ದಾರೆ.

ಇನ್ನೂ ಉದ್ಯಮಿ ಯಶಸ್ ಜೊತೆ 2022ರಲ್ಲಿ ನಟಿ ಮದುವೆಯಾದರು. ಬೆಂಗಳೂರಿನ ಪ್ಯಾಲೆಸ್ ಗ್ರೌಂಡ್‌ನಲ್ಲಿ ನವೆಂಬರ್ 22ರಂದು ಹಸೆಮಣೆ ಏರಿದರು. ಅಂದಹಾಗೆ, ಬಜಾರ್, ಟ್ರಿಪಲ್ ರೈಡಿಂಗ್, ಬ್ರಹ್ಮಚಾರಿ, ಧೈರ್ಯಂ, ತೋತಾಪುರಿ, ತೋತಾಪುರಿ 2 ಸೇರಿದಂತೆ ಹಲವು ಸಿನಿಮಾಗಳಲ್ಲಿ ಅದಿತಿ ನಟಿಸಿದ್ದಾರೆ.

# 'ಕರಾವಳಿ' ಚಿತ್ರದ ಪೋಸ್ಟರ್ ಔಟ್



ಪ್ರಜ್ವಲ್ ದೇವರಾಜ್ ನಟನೆಯ ಬಹುನಿರೀಕ್ಷಿತ 'ಕರಾವಳಿ' ಸಿನಿಮಾದಲ್ಲಿ ರಮೇಶ್ ಇಂದಿರಾ ಖಳನಟನಾಗಿ ಅಬ್ಬರಿಸಿದ್ದಾರೆ. ಖಡಕ್ ಲುಕ್‌ನಲ್ಲಿ ಕಾಣಿಸಿಕೊಂಡಿರುವ ನಟನ ಪೋಸ್ಟರ್ ಅನ್ನು ಚಿತ್ರತಂಡ ರಿವೀಲ್ ಮಾಡಿದೆ.

ಸಪ್ತಸಾಗರದಾಚೆ ಎಲ್ಲೋ ಎ ಮತ್ತು ಬಿ ಪಾರ್ಟ್‌ನಲ್ಲಿ ಹೀರೋ ರಕ್ಷಿತ್ ಶೆಟ್ಟಿ ಮುಂದೆ ರಮೇಶ್ ಇಂದಿರಾ ವಿಲನ್ ಆಗಿ ಗೆದ್ದು ಬೀಗಿದ್ದರು. ಇದೀಗ ಮತ್ತೆ ವಿಲನ್ ಪಾತ್ರದಲ್ಲಿ ಮಿಂಚಲು ರೆಡಿಯಾಗಿದ್ದಾರೆ. ಪ್ರಜ್ವಲ್ ದೇವರಾಜ್ ಮುಂದೆ ಅಬ್ಬರಿಸಲಿದ್ದಾರೆ. ಕಾರಿನ ಮೇಲೆ ಕುಳಿತಿರುವ ರಮೇಶ್ ಇಂದಿರಾ ಬಂದೂಕು ಹಿಡಿದು ಖಡಕ್ ಆಗಿ ಪೋಸ್ ನೀಡಿರುವ ಪೋಸ್ಟರ್ ಅನ್ನು ಚಿತ್ರತಂಡ ರಿಲೀಸ್ ಮಾಡಿದೆ. ಈ ಸಿನಿಮಾದ ಪೋಸ್ಟರ್ ಲುಕ್ ನೋಡಿ ಅಭಿಮಾನಿಗಳಿಗೆ ಸಿನಿಮಾ ಮೇಲಿನ ನಿರೀಕ್ಷೆ ಹೆಚ್ಚಾಗಿದೆ.

'ಕರಾವಳಿ' ಚಿತ್ರದಲ್ಲಿ ಕರಾವಳಿ ಭಾಗದ ಕಥೆಯನ್ನು ಒಳಗೊಂಡಿದೆ. ಪ್ರಜ್ವಲ್ ದೇವರಾಜ್ ವಿಭಿನ್ನ ಪಾತ್ರದಲ್ಲಿ ನಟಿಸಿದ್ದಾರೆ. ಈ ಚಿತ್ರವನ್ನು ಗುರುದತ್ ಗಾಣಿಗ ನಿರ್ದೇಶನ ಮಾಡಿದ್ದಾರೆ.



# ವಿಜಯ್ ದೇವರಕೊಂಡ ಮನೆಯಲ್ಲಿ ದೀಪಾವಳಿ ಹಬ್ಬ ಆಚರಿಸಿದ ರಶ್ಮಿಕಾ

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಈ ಬಾರಿ ದೀಪಾವಳಿ ಹಬ್ಬವನ್ನು ವಿಜಯ್ ದೇವರಕೊಂಡ ಮನೆಯಲ್ಲಿ ಆಚರಿಸಿದ್ದಾರೆ. ಹಬ್ಬದ ಸೆಲೆಬ್ರೇಷನ್ ಫೋಟೋಗಳನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ವಿಜಯ್ ದೇವರಕೊಂಡ ಜೊತೆ ರಶ್ಮಿಕಾ ಎರಡು ಸಿನಿಮಾಗಳಲ್ಲಿ ನಟಿಸಿದ್ದಾರೆ. ಅವರೊಂದಿಗೆ ಮತ್ತು ಅವರ ಫ್ಯಾಮಿಲಿ ಜೊತೆ ಉತ್ತಮ ಒಡನಾಟವಿದೆ. ಇಬ್ಬರ ಬಗ್ಗೆ ಆಗಾಗ ಡೇಟಿಂಗ್ ವದಂತಿ ಹರಿದಾಡುತ್ತಲೇ ಇರುತ್ತದೆ. ಇದರ ಬಗ್ಗೆ ಈ ಜೋಡಿ ರಿಯಾಕ್ಟ್ ಮಾಡಿರಲಿಲ್ಲ. ಈಗ ಅವರಿಬ್ಬರ ಡೇಟಿಂಗ್ ವಿಚಾರದಲ್ಲಿ ನೆಟ್ಟಿಗರಿಗೆ ಸಾಕ್ಷಿ ಸಿಕ್ಕಿದೆ.

ಈ ಬಾರಿ ಬೆಳಕಿನ ಹಬ್ಬವನ್ನು ವಿಜಯ್ ಮನೆಯಲ್ಲಿ ಆಚರಿಸಿದ್ದಾರೆ. ಹಬ್ಬದ ಕೆಲ ಫೋಟೋಗಳನ್ನು ನಟಿ ಇನ್ಸ್ಟಾಗ್ರಾಂ ಖಾತೆಯಲ್ಲಿ ಶೇರ್ ಮಾಡಿದ್ದಾರೆ. ದೀಪಾವಳಿ ಹಬ್ಬವನ್ನು ವಿಜಯ್ ಕುಟುಂಬದ ಜೊತೆ ಆಚರಿಸಿಕೊಂಡಿರುವ ಕುರಿತು ನಟಿ ಎಲ್ಲವೂ ರಿವೀಲ್ ಮಾಡಿಲ್ಲ. ಆದರೆ ಅವರು ಶೇರ್ ಮಾಡಿರುವ ಪೋಸ್ಟ್‌ಗೆ ಫೋಟೋ ಕ್ರೆಡಿಟ್ ಅನ್ನು ವಿಜಯ್ ಸಹೋದರ ಆನಂದ ದೇವರಕೊಂಡಗೆ ನೀಡಿದ್ದಾರೆ. ಥ್ಯಾಂಕ್ಯೂ ಆನಂದ ಎಂದು ತಿಳಿಸಿದ್ದಾರೆ. ಇದರಿಂದ ವಿಜಯ್ ಮನೆಯಲ್ಲಿ ರಶ್ಮಿಕಾ ದೀಪಾವಳಿ ಹಬ್ಬ ಆಚರಿಸಿರೋದು ಪಕ್ಕಾ ಆಗಿದೆ. ಡೇಟಿಂಗ್ ಸುದ್ದಿಗೆ ಮತ್ತೆ ಪುಷ್ಟಿ ಸಿಕ್ಕಂತಾಗಿದೆ.

ಇನ್ನೂ ವಿಜಯ್ ದೇವರಕೊಂಡ ಮತ್ತು ರಶ್ಮಿಕಾ ಮಂದಣ್ಣ ಬೇರೆ ಬೇರೆ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಮುಂದಿನ ದಿನಗಳಲ್ಲಿ ಈ ಜೋಡಿ ಮದುವೆ ಕುರಿತು ಸಿಹಿಸುದ್ದಿ ಕೊಡುತ್ತಾರಾ? ಎಂದು ಫ್ಯಾನ್ಸ್ ಎದುರು ನೋಡುತ್ತಿದ್ದಾರೆ.



# 235ಕ್ಕೆ ಆಲೌಟ್ ಆದ ನ್ಯೂಜಿಲೆಂಡ್

## ಮುಂದುವರೆದ ಟೀಂ ಇಂಡಿಯಾ ಬ್ಯಾಟಿಂಗ್ ವೈಫಲ್ಯ

ಇಲ್ಲಿನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೂರನೇ ಹಾಗೂ ಅಂತಿಮ ಟೆಸ್ಟ್ ಪಂದ್ಯದ ಮೊದಲ ದಿನದಾಟದಲ್ಲಿ ನ್ಯೂಜಿಲೆಂಡ್ 235 ರನ್ ಗಳಿಗೆ ಆಲೌಟ್ ಆಗಿದೆ. ಬಳಿಕ ಬ್ಯಾಟಿಂಗ್ ಆರಂಭಿಸಿರುವ ಟೀಂ ಇಂಡಿಯಾ ಮೊದಲ ದಿನದಾಟದ ಅಂತ್ಯಕ್ಕೆ 19 ಓವರ್ ಗಳಲ್ಲಿ ನಾಲ್ಕು ವಿಕೆಟ್ ನಷ್ಟಕ್ಕೆ 86 ರನ್ ಗಳಿಸಿದೆ.

ರವೀಂದ್ರ ಜಡೇಜ 65ಕ್ಕೆ 5 ವಿಕೆಟ್ ಹಾಗೂ ವಾಷಿಂಗ್ಟನ್ ಸುಂದರ್ 81ಕ್ಕೆ 4 ವಿಕೆಟ್ ಉರುಳಿಸಿ ಉತ್ತಮ ಪ್ರದರ್ಶನ ತೋರಿದರು. ಆದರೆ, ಭಾರತದ ಬ್ಯಾಟಿಂಗ್ ವೈಫಲ್ಯ ಮತ್ತೆ ಮುಂದುವರೆಯಿತು. ಯಶಸ್ವಿ ಜೈಸ್ವಾಲ್ (30), ರೋಹಿತ್ ಶರ್ಮಾ (18) ಮೊಹಮ್ಮದ್ ಸಿರಾಜ್ (0) ಹಾಗೂ ವಿರಾಟ್ ಕೊಹ್ಲಿ (4) ರನ್ ಗಳಿಸಿ ಪ್ರೇಕ್ಷಕರಿಗೆ ನಿರಾಸೆ ಉಂಟು ಮಾಡಿದರು. ಶುಭಮನ್ ಗಿಲ್ ಹಾಗೂ ರಿಷಭ್ ಪಂತ್ ಕ್ರೀಸಿನಲ್ಲಿದ್ದಾರೆ. ರವೀಂದ್ರ ಜಡೇಜಾ ಟೆಸ್ಟ್ ಕ್ರಿಕೆಟ್ ನಲ್ಲಿ 14ನೇ ಸಲ ಐದು ವಿಕೆಟ್ ಪಡೆಯುವ ಮೂಲಕ ಅತ್ಯಂತ ಹೆಚ್ಚಿನ ವಿಕೆಟ್ ಪಡೆದ ಟೀಂ ಇಂಡಿಯಾ ಆಟಗಾರರ ಪಟ್ಟಿಯಲ್ಲಿ ಐದನೇ ಸ್ಥಾನ ಪಡೆದರು. ಬೆಂಗಳೂರು ಪಂದ್ಯದಲ್ಲಿ 8 ವಿಕೆಟ್ ಹಾಗೂ ಪುಣೆ ಪಂದ್ಯದಲ್ಲಿ 113 ರನ್ ಗಳಿಂದ ಸೋತು ಸರಣಿಯಲ್ಲಿ 2–0 ಹಿನ್ನಡೆ ಅನುಭವಿಸಿರುವ ಭಾರತ ತಂಡ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ನಲ್ಲಿ ಸ್ಥಾನ ಪಡೆಯಲು ಹೆಣಗಾಡುತ್ತಿದೆ.



## ಹಾವೇರಿ ಜಿಲ್ಲೆಗೂ ಕಾಲಿಟ್ಟ ವಕ್ಫ್ ಆಸ್ತಿ ವಿವಾದ

# ಊರು ಬಿಟ್ಟ ಮುಸ್ಲಿಂ ಕುಟುಂಬಗಳು



**ಹಾವೇರಿ:** ಹಾವೇರಿ ಜಿಲ್ಲೆಯಲ್ಲಿ ವಕ್ಫ್ ಆಸ್ತಿ ವಿವಾದ ನಡೆದಿದೆ. ಉದ್ರಿಕ್ತರು ಕಲ್ಲು ತೂರಾಟ ಮಾಡಿದ್ದು, ಭಯದಿಂದ ಮುಸ್ಲಿಂ ಕುಟುಂಬಗಳು ಊರನ್ನೇ ತೊರೆದಿದ್ದಾರೆ.

ಜಿಲ್ಲೆಯ ಸವಣೂರು ತಾಲೂಕು ಕಡಕೋಳ ಗ್ರಾಮದಲ್ಲಿ ಬುಧವಾರ ರಾತ್ರಿ ಗಲಾಟೆಯೇ ನಡೆದಿದೆ. ಮಸೀದಿ ಸುತ್ತಮೂತ್ತಲಿನ 60ಕ್ಕೂ ಅಧಿಕ ಮನೆಗಳು, ಮೂರು ದೇವಾಸ್ಥಾನ ಮತ್ತು ಗರಡಿ ಮನೆಗಳು ವಕ್ಫ್ ಆಸ್ತಿಗೆ ಹೋಗುತ್ತಿವೆ ಅನ್ನು ಸುತ್ತೋಲೆಯನ್ನು ನೋಡಿದ ಜನರು ಏಕಾಏಕಿ ಗ್ರಾಮದಲ್ಲಿ ಗಲಾಟೆ ನಡೆಸಿದ್ದಾರೆ. ಈಗ ಬಂಧನ ಭೀತಿಯಿಂದ ಗಲಾಟೆ ನಡೆದ ಓಣಿಯ ಜನರು ಊರನ್ನೇ ಬಿಟ್ಟು ಓಡಿದ್ದಾರೆ. 8ಕ್ಕೂ ಅಧಿಕ ಮನೆಗಳು ಜಖಂಗೊಂಡಿದ್ದು, ಭಯದಿಂದ ಎರಡು ಸಮುದಾಯದ ಜನರು ಗ್ರಾಮವನ್ನು ಬಿಟ್ಟು ಹೋಗಿದ್ದಾರೆ

ವಕ್ಫ್ ಸಚಿವ ಜಮೀರ್ ಕಳೆದ ಸೆ.3ರಂದು ನಡೆದ ಸಭೆಯಲ್ಲಿ ನೀಡಿದ ಸೂಚನೆ ಹಿನ್ನಲೆ ಸೆ.27 ರಂದೇ ಜಿ.ಪಂ ಸಿಇಒ ಅಕ್ಷಯ್ ಶ್ರೀಧರ್ ವಕ್ಫ್ ಆಸ್ತಿ ಇಂಡೀಕರಣಕ್ಕೆ ಆದೇಶ ಮಾಡಿದ್ದರು. ಹೀಗಾಗಿ ಸರ್ಕಾರದ ನಡೆಯಿಂದ ಆಕ್ರೋಶಗೊಂಡ ಜನರು ಗಲಾಟೆ ನಡೆಸಿದರು. ಹಾವೇರಿ ಡಿಸಿ ವಿಜಯ್ ಮಹಾಂತೇಶ್, ಎಸ್‌ಪಿ ಅಂಶುಕುಮಾರ್ ಘಟನಾ ಸ್ಥಳಕ್ಕೆ ಆಗಮಿಸಿ ಪರಿಸ್ಥಿತಿ ತಿಳಿಗೊಳಿಸಿದರು. ಗ್ರಾಮಸ್ಥರ ಜೊತೆ ಮಾತುಕತೆ ನಡೆಸಿ ಮನವೊಲಿಸಿದರು. ಯಾರ ಮನೆಗಳ ದಾಖಲೆಗಳಲ್ಲೂ ವಕ್ಫ್ ಎಂದು ಸೇರಿಸುವುದಿಲ್ಲ ಎಂದು ಡಿಸಿ ಭರವಸೆ ನೀಡಿದರು.

ರಾಜ್ಯದ್ಯಂತ ಜಮೀನು ವಕ್ಫ್ ಬೋರ್ಡ್‌ಗೆ ಸೇರಿರುವ ವಿಚಾರ ಚರ್ಚೆಗೆ ಕಾರಣವಾಗಿ ರಾಜಕೀಯ ಜಟಾಪಟಿ ಕೂಡ ನಡೆಯುತ್ತಿದೆ. ಎರಡು ವರ್ಷದ ಹಿಂದೆ ಕರಾವಳಿ ಭಾಗದಲ್ಲಿ ಆರಂಭವಾಗಿ ಭಾರಿ ಜಟಾಪಟಿಗೆ ಕಾರಣವಾಗಿದ್ದ ಧರ್ಮದ ದಂಗಲ್ ಮತ್ತೆ ಚರ್ಚೆಗೆ ಬಂದಿದೆ. ದೀಪಾವಳಿ ಸಂದರ್ಭ ಶ್ರೀರಾಮ ಸೇನೆ ಸಂಘಟನೆ ಹಿಂದೂಗಳು ಹಿಂದೂಗಳಿಂದ ಮಾತ್ರ ವ್ಯಾಪಾರ ಮಾಡಿ ಅನ್ಯ ಧರ್ಮೀಯರ ಜೊತೆ ವ್ಯವಹಾರ ಮಾಡಬೇಡಿ ಎಂದು ಬಹಿಷ್ಕಾರದ ಕರೆ ಕೊಟ್ಟಿದೆ, ಜೊತೆಗೆ ಅಭಿಯಾನಕ್ಕೂ ಕರೆ ಕೊಟ್ಟಿದ್ದಾರೆ. ಪ್ರಧಾನಿ ಮೋದಿ ವಕ್ಫ್ ತಿದ್ದುಪಡಿಗೆ ಮುಂದಾಗಿದ್ದಾರೆ. ಇದು ಮುಂದಿನ ಡಿಸೆಂಬರ್‌ನ ಅಧಿವೇಶನದಲ್ಲಿ ಪ್ರಸ್ತಾಪವಾಗಲಿದೆ ಎಂದು ಸಂಘಟನೆಯ ಸಭೆಗಳಲ್ಲಿ ಪ್ರಚಾರಪಡಿಸಲಾಗುತ್ತಿದೆ.

ವಕ್ಫ್ ಆಸ್ತಿ ವಿವಾದ ಈಗ ಗ್ರಾಮದಲ್ಲಿ ಕಿಚ್ಚುಹಚ್ಚಿದ್ದು, ಸದ್ಯ ಕಡಕೋಳ ಗ್ರಾಮ ಬೂದಿ ಮುಚ್ಚಿದ ಕೆಂಡದಂತೆ ಇದೆ. ನೂರಕ್ಕೂ ಅಧಿಕ ಪೊಲೀಸರನ್ನ ನಿಯೋಜನೆ ಮಾಡಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆಗೆ ಎಚ್ಚರವಹಿಸಲಾಗಿದೆ. ಆದರೆ ಕರಾವಳಿಯಲ್ಲಿ ಇದು ಬೇರೆ ರೂಪಕ್ಕೆ ತಿರುಗಿದೆ.

# 5 ಓವರ್‌ಗಳಲ್ಲಿ 121 ರನ್

## ಭಾರತದ ವಿರುದ್ಧ ಪಾಕಿಸ್ತಾನಕ್ಕೆ ಭರ್ಜರಿ ಜಯ



ಹಾಂಗ್‌ಕಾಂಗ್‌ನಲ್ಲಿ ನಡೆಯುತ್ತಿರುವ ಹಾಂಗ್‌ಕಾಂಗ್ ಕ್ರಿಕೆಟ್ ಸಿಕ್ಸಸ್ ಮೊದಲ ಪಂದ್ಯದಲ್ಲೇ ಭಾರತ ತಂಡ ಮುಗ್ಗರಿಸಿದೆ. ಅದು ಕೂಡ ಪಾಕಿಸ್ತಾನ್ ವಿರುದ್ಧ. ಮೊಂಗ್ ಕೊಕ್‌ನಲ್ಲಿ ನಡೆದ 6 ಓವರ್‌ಗಳ ಈ ಪಂದ್ಯದಲ್ಲಿ ಟಾಸ್ ಗೆದ್ದ ಪಾಕ್ ತಂಡದ ನಾಯಕ ಫಹೀಮ್ ಅಶ್ರಫ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಟೀಮ್ ಇಂಡಿಯಾ ಪರ ಆರಂಭಿಕರಾಗಿ ರಾಬಿನ್ ಉತ್ತಪ್ಪ ಹಾಗೂ ಭರತ್ ಚಿಪ್ಲಿ ಕಣಕ್ಕಿಳಿದಿದ್ದರು.

ಸಿಡಿಲಬ್ಬರದ ಆರಂಭದೊಂದಿಗೆ ಅಬ್ಬರಿಸಿದ ರಾಬಿನ್ ಉತ್ತಮ ಕೇವಲ 8 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 3 ಫೋರ್‌ಗಳೊಂದಿಗೆ 31 ರನ್ ಬಾರಿಸಿದರು. ಇನ್ನು ಭರತ್ ಚಿಪ್ಲಿ 16 ಎಸೆತಗಳಲ್ಲಿ 4 ಭರ್ಜರಿ ಸಿಕ್ಸ್, 6 ಫೋರ್‌ಗಳೊಂದಿಗೆ 53 ರನ್ ಚಚ್ಚಿದರು. ಈ ಟೂರ್ನಿಯ ನಿಯಮದ ಪ್ರಕಾರ, ಅರ್ಧಶತಕದ ಬಳಿಕ ನಿವೃತ್ತಿಯಾಗಬೇಕು. ಅದರಂತೆ ಚಿಪ್ಲಿ ಹಾಫ್ ಸೆಂಚುರಿ ಬಳಿಕ ಇನಿಂಗ್ಸ್ ಅಂತ್ಯಗೊಳಿಸಿದರು.

ಇದಾದ ಬಳಿಕ ಬಂದ ಕೇದರ್ ಜಾಧವ್ 3 ಎಸೆತಗಳಲ್ಲಿ 8 ರನ್ ಬಾರಿಸಿದರೆ, ಮನೋಜ್ ತಿವಾರಿ 7 ಎಸೆತಗಳಲ್ಲಿ 17 ರನ್ ಕಲೆಹಾಕಿದರು. ಇನ್ನು ಸ್ಟುವರ್ಟ್ ಬಿನ್ನಿ 2 ಎಸೆತಗಳಲ್ಲಿ 4 ರನ್ ಬಾರಿಸಿದರು. ಈ ಮೂಲಕ ಭಾರತ ತಂಡವು 6 ಓವರ್‌ಗಳಲ್ಲಿ 2 ವಿಕೆಟ್ ಕಳೆದುಕೊಂಡು 119 ರನ್ ಕಲೆಹಾಕಿತು.

36 ಎಸೆತಗಳಲ್ಲಿ 120 ರನ್‌ಗಳ ಕಠಿಣ ಗುರಿ ಪಡೆದ ಪಾಕಿಸ್ತಾನ್ ತಂಡಕ್ಕೆ ಮುಹಮ್ಮದ್ ಅಖ್ಲಾಕ್ ಹಾಗೂ ಆಸಿಫ್ ಅಲಿ ವಿಸ್ಫೋಟಕ ಆರಂಭ ಒದಗಿಸಿದ್ದರು. ಮೊದಲ ಓವರ್‌ನಿಂದಲೇ ಸಿಕ್ಸ್–ಫೋರ್‌ಗಳ ಸುರಿಮಳೆಗೈದ ಈ ಜೋಡಿಯು ಭಾರತೀಯ ಬೌಲರ್‌ಗಳ ಬೆಂಡೆತ್ತಿದರು.

ಪರಿಣಾಮ ಆಸಿಫ್ ಅಲಿ ಬ್ಯಾಟ್‌ನಿಂದ 14 ಎಸೆತಗಳಲ್ಲಿ 7 ಸಿಕ್ಸ್ ಹಾಗೂ 2 ಫೋರ್‌ಗಳೊಂದಿಗೆ 55 ರನ್ ಮೂಡಿಬಂತು. ಇನ್ನು ಮುಹಮ್ಮದ್ ಅಖ್ಲಾಕ್ 12 ಎಸೆತಗಳಲ್ಲಿ 4 ಸಿಕ್ಸ್, 3 ಫೋರ್‌ಗಳೊಂದಿಗೆ 30 ರನ್ ಬಾರಿಸಿದರು. ಹಾಗೆಯೇ ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ನಾಯಕ ಫಹೀಮ್ ಅಶ್ರಫ್ 5 ಸಿಕ್ಸ್‌ಗಳಲ್ಲಿ 3 ಸಿಕ್ಸ್‌ಗಳೊಂದಿಗೆ 22 ರನ್ ಚಚ್ಚಿದರು. ಈ ಮೂಲಕ ಪಾಕಿಸ್ತಾನ್ ತಂಡವು ವಿಕೆಟ್ ಕಳೆದುಕೊಳ್ಳದೇ ಕೇವಲ 5 ಓವರ್‌ಗಳಲ್ಲಿ 121 ರನ್ ಬಾರಿಸಿ ಭರ್ಜರಿ ಜಯ ಸಾಧಿಸಿದೆ.

# ಮಂಡ್ಯದಲ್ಲಿ ದೇವಸ್ಥಾನವೇ ವಕ್ಫ್ ಆಸ್ತಿ



**ಮಂಡ್ಯ:** ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆಯುತ್ತಿರುವ ವಕ್ಫ್ ಆಸ್ತಿ ವಿವಾದ ಇದೀಗ ಸಕ್ಕರೆ ನಾಡು ಮಂಡ್ಯ ಜಿಲ್ಲೆಗೂ ಕಾಲಿಟ್ಟಿದೆ.

ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಮಹದೇವಪುರ ಎಂಬ ಗ್ರಾಮದಲ್ಲಿ 6 ಗುಂಟೆ ವ್ಯಾಪ್ತಿಯಲ್ಲಿ ಚಿಕ್ಕಮ್ಮ ದೇವಿ ಎಂಬ ದೇವಸ್ಥಾನ ಇದೆ. ಹಲವು ವರ್ಷಗಳ ಹಿಂದೆಯೇ ಈ ದೇವಸ್ಥಾನ ಕಟ್ಟಿಸಿ ಈ ಗ್ರಾಮದ ಜನರು ಚಿಕ್ಕಮ್ಮ ದೇವಿಯನ್ನು ಪೂಜಿಸುತ್ತಾ ಬರುತ್ತಿದ್ದಾರೆ. 2023 ಜುಲೈ 17ರ ವರೆಗೆ ಈ ದೇವಸ್ಥಾನದ 6 ಗುಂಟೆ ಜಾಗದ ಆರ್‌ಟಿಸಿಯಲ್ಲಿ ಬಂಜರು ಎಂದು ಉಲ್ಲೇಖವಾಗಿದೆ, ಅಂದರೆ ಇದು ಸರ್ಕಾರಿ ಜಮೀನು ಎಂದರ್ಥ. ಇನ್ನೊಂದೆಡೆ ಸಾಗುವಳಿ ಕಾಲಂನಲ್ಲಿ ಚಿಕ್ಕಮ್ಮನ ದೇವಸ್ಥಾನ ಎಂದು ಹೆಸರಿತ್ತು. ಆದರೆ ಇದೀಗ ಈ ದೇವಸ್ಥಾನ ಹಾಗೂ ಜಾಗವನ್ನು ವಕ್ಫ್ ಆಸ್ತಿ ಎಂದು ಮಾಡಲಾಗಿದೆ.

2023 ಜುಲೈ 17ರಲ್ಲಿ ಕೋರ್ಟ್ ಆದೇಶ ಎಂದು ಪಾಂಡವಪುರ ಉಪವಿಭಾಗ ಅಧಿಕಾರಿ ದೇವಸ್ಥಾನದ ಜಾಗವನ್ನು ವಕ್ಫ್ ಆಸ್ತಿ ಎಂದು ಮ್ಯುಟೇಶನ್ ಮಾಡಿದ್ದಾರೆ. ಇದೀಗ ಈ ಗ್ರಾಮಸ್ಥರು ರಾಜ್ಯದಲ್ಲಿ ನಡೆಯುತ್ತಿರುವ ವಕ್ಫ್ ಆಸ್ತಿಯ ವಿವಾದದ ನಂತರ ದೇವಸ್ಥಾನದ ಸರ್ವೆ ನಂಬರ್‌ನಲ್ಲಿ ಆರ್‌ಟಿಸಿ ನೋಡಿದಾಗ ಇದು ಬೆಳಕಿಗೆ ಬಂದಿದೆ. ಗ್ರಾಮಸ್ಥರ ಗಮನಕ್ಕೆ ಬಾರದೇ ಹಿಂದೂ ದೇವಸ್ಥಾನವನ್ನು ವಕ್ಫ್ ಆಸ್ತಿಯನ್ನಾಗಿ ಮಾಡಿರೋದು ಜನರಲ್ಲಿ ಆಕ್ರೋಶಕ್ಕೆ ಕಾರಣವಾಗುತ್ತಿದೆ.

ಹಿಂದೂ ದೇವಸ್ಥಾನವನ್ನು ವಕ್ಫ್ ಆಸ್ತಿ ಎಂದು ಮಾಡುವ ಮೂಲಕ ಅಧಿಕಾರಿಗಳು ಬಹುದೊಡ್ಡ ವಂಚನೆ ಮಾಡಿದ್ದಾರೆ. ಇದೀಗ ಮಂಡ್ಯ ಜಿಲ್ಲಾಡಳಿತ ಇದನ್ನು ಹೇಗೆ ಸರಿಪಡಿಸುತ್ತೆ? ಜನರ ಆಕ್ರೋಶವನ್ನು ಹೇಗೆ ಕಡಿಮೆ ಮಾಡುತ್ತೆ ಅನ್ನೋದನ್ನು ಕಾದು ನೋಡಬೇಕಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com